ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜನವರಿ 25 ಗುರುವಾರ 2024

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 44 | ಸಂಚಿಕೆ: 278 | ಪುಟಗಳು: 12
ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com

ಮೈಸೂರು ಮಿತ್ರ ಗುರುವಾರ 25 ಜನವರಿ 2024

ದಿ.ಪುನೀತ್ ರಾಜ್‌ಕುಮಾರ್ ಸೇವಾ ಮನೋಭಾವ ಎಲ್ಲರಿಗೂ ಆದರ್ಶ

ವಿಧಾನಪರಿಷತ್ ಮಾಜಿ ಸದಸ್ಯ ತೋಂಟದಾರ್ಯ ಅಭಿಮತ



ಮೈಸೂರಿನ ಜಿಲ್ಲಾ ಕಸಾಪ ಭವನದಲ್ಲಿ ಅಭಿನವ ಸಾಮ್ರಾಟ್ ಡಾ.ಪುನೀತ್ ಉಪ ನ್ಯಾಸ ಕಾರ್ಯಕ್ರಮವನ್ನು ವಿಧಾನಪರಿಷತ್ ಮಾಜಿ ಸದಸ್ಯ ತೋಂಟದಾರ್ಯ ಉದ್ಘಾಟಿಸಿದರು.

ಮೈಸೂರು,ಜ.24(ಎಂಟಿವೈ)–ನಟ ದಿ. ಪುನೀತ್ ರಾಜ್‌ಕುಮಾರ್ ಕೇವಲ ಚಿತ್ರ ರಂಗ ಮಾತ್ರವಲ್ಲದೆ ಸಮಾಜ ಸೇವೆಯ ಮೂಲಕ ನೊಂದವರ ಮತ್ತು ಶೋಷಿತ ಸಮುದಾಯಕ್ಕೆ ದನಿಯಾಗಿ ಕೆಲಸ ಮಾಡಿದ್ದಾರೆ ಎಂದು ವಿಧಾನಪರಿಷತ್ ಮಾಜಿ ಸದಸ್ಯ ತೋಂಟದಾರ್ಯ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ವಿಜಯನಗರದಲ್ಲಿರುವ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಬುಧವಾರ ಜಿಲ್ಲಾ ಕಸಾಪ ಮಹಿಳಾ ಘಟಕ, ಮೈಸೂರು ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಅಭಿನವ ಸಾಮ್ರಾಟ್ ಡಾ.ಪುನೀತ್ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕನ್ನಡ ಚಿತ್ರರಂಗಕ್ಕೆ ಅತ್ಯುತ್ತಮ ಚಿತ್ರಗಳನ್ನು ನೀಡಿ ಎಲ್ಲರ ಗಮನ ಸೆಳೆದಿದ್ದ ಪವರ್ ಸ್ಟಾರ್ ಪುನೀತ್ ರಾಜ್‌ಕುಮಾರ್, ತಮ್ಮ ಸೇವೆಯನ್ನು ಕೇವಲ ಚಿತ್ರರಂಗಕ್ಕೆ ಮಾತ್ರ ಸೀಮಿತಗೊಳಿಸದೆ, ಸಮಾಜ ಸೇವಾ ಕಾರ್ಯದಲ್ಲೂ ತೊಡಗಿಸಿಕೊಂಡಿದ್ದರು. ಅವರು ಮಾಡಿರುವ ಕೆಲಸವನ್ನು ಇಂದು ದೇಶವೇ ಮಾತನಾಡುತ್ತಿದೆ. ಅವರು ಬದುಕಿದ್ದಾಗ ಮಾಡಿದ್ದ ಕೆಲಸಗಳು ಅವರ ನಿಧನದ ಬಳಿಕ ಜಗತ್ತಿಗೆ ಗೊತ್ತಾಗಿದೆ. ಅವರ ಸೇವಾ ಮನೋಭಾವ ಎಲ್ಲರಿಗೂ ಆದರ್ಶವಾಗಿದೆ ಎಂದರು.

ಡಾ.ಪುನೀತ್ ನೆನಪಿನಲ್ಲಿ ಅವರ ಕುರಿತು ಚುಟುಕು ಸಾಹಿತ್ಯವನ್ನು ರಚಿಸಿದ್ದು, ಅವುಗಳನ್ನೆಲ್ಲಾ ಸಂಗ್ರಹಿಸಿ ಪುಸ್ತಕ ರೂಪದಲ್ಲಿ ಪ್ರಕಟಿಸಲಾಗಿರುವುದು ಶ್ಲಾಘನೀಯ. ಡಾ.ಪುನೀತ್ ರಾಜ್‌ಕುಮಾರ್ ಅವರ ಸೇವಾ ಕಾರ್ಯವನ್ನು ಯುವ ಪೀಳಿಗೆಗೆ ತಲುಪಿಸುವ ಹಾಗೂ ಅವರ ಸರಳತನದ ಬಗ್ಗೆ ಮಾಹಿತಿ ಒದಗಿಸುವ ನಿಟ್ಟಿನಲ್ಲಿ ಕೃತಿ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಮಾತನಾಡಿ, ಇಂದಿನ ಕಾರ್ಯಕ್ರಮದಲ್ಲಿ 253 ಚುಟುಕುಗಳಿಂದ ಸಮೃದ್ಧವಾಗಿದ್ದ ಅಭಿನವ ಸಾಮ್ರಾಟ್ ಡಾ.ಪುನೀತ್ ಚುಟುಕುಗಳ ಕೃತಿ ಲೋಕಾರ್ಪಣೆಯಾಗಬೇಕಿದ್ದು, ಅನಿವಾರ್ಯ ಕಾರಣಗಳಿಂದ ಪುಸ್ತಕ ಬಿಡುಗಡೆ ಕಾರ್ಯಕ್ರಮ ಮುಂದೂಡಲ್ಪಟ್ಟಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಡಾ.ಪುನೀತ್ ರಾಜ್‌ಕುಮಾರ್ ಅವರ ಬಗ್ಗೆ ಸಂಶೋಧನಾ ಪ್ರಬಂಧ ಸಿದ್ಧಪಡಿಸಿರುವ ಮಾನ್ಯ ಕಾರ್ಯಪ್ಪ ಅವರು ಪುನೀತ್ ಅವರ ಜೀವನ ಸಾಧನೆ ಕುರಿತಂತೆ ಮಾತನಾಡಿದರು. ಕಾರ್ಯಕ್ರಮದಲ್ಲಿ ಡಾ.ರತ್ನ ಹಾಲಪ್ಪಗೌಡ, ಚುಟುಕು ಸಾಹಿತ್ಯ ಪರಿಷತ್ ಕೇಂದ್ರ ರಾಜ್ಯ ಪ್ರಧಾನ ಸಂಚಾಲಕ ಡಾ.ಎಂ.ಜಿ.ಆರ್. ಅರಸ್, ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಪ್ರಧಾನ ಕಾರ್ಯದರ್ಶಿ ಡಾ.ಎಚ್.ಎನ್.ಲೋಕೇಶಪ್ಪ ಇದ್ದರು.

ಹೆಣ್ಣು ಮಕ್ಕಳು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುವತ್ತ ಗಮನಹರಿಸಿ

'ರಾಷ್ಟ್ರೀಯ ಹೆಣ್ಣು ಮಕ್ಕಳ' ದಿನಾಚರಣೆ ಕಾರ್ಯಕ್ರಮದಲ್ಲಿ ಮಾಜಿ ಮೇಯರ್ ಪುಷ್ಪಲತಾ ಜಗನ್ನಾಥ್ ಸಲಹೆ





ಮೈಸೂರಿನ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ಸಭಾಂಗಣದಲ್ಲಿ ಬುಧವಾರ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ರೋಟರಿ ಪಂಚಶೀಲ ಅಧ್ಯಕ್ಷೆ ಡಾ.ರಚನಾ ನಾಗೇಶ್ ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಪಾಲ್ಗೊಂಡಿರುವ ವಿವಿಧ ಶಾಲಾ–ಕಾಲೇಜುಗಳ ವಿದ್ಯಾರ್ಥಿನಿಯರು(ಬಲಚಿತ್ರ).

ಮೈಸೂರು,ಜ.24(ಎಂಟಿವೈ)– ಹೆಣ್ಣು ಮಕ್ಕಳು ಅವಕಾಶಗಳನ್ನು ಸೃಷ್ಟಿಸಿಕೊಂಡು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುವತ್ತ ಗಮನ ಹರಿಸುವಂತೆ ಮಾಜಿ ಮೇಯರ್ ಪುಷ್ಪಲತಾ ಜಗನ್ನಾಥ್ ಸಲಹೆ ನೀಡಿದ್ದಾರೆ.

ಮೈಸೂರಿನ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ಸಭಾಂಗಣದಲ್ಲಿ ಬುಧವಾರ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಮಹಿಳೆಯರು ಎದುರಿಸುತ್ತಿರುವ ಅಸಮಾನತೆ ಹಾಗೂ ಸವಾಲುಗಳ ಬಗ್ಗೆ ಜಾಗೃತಿ ಮೂಡಿಸಲು 2008ರಿಂದ 'ರಾಷ್ಟ್ರೀಯ ಹೆಣ್ಣು ಮಕ್ಕಳ' ದಿನವನ್ನು ಆಚರಿಸಲಾಗುತ್ತಿದೆ. ಈಗಾಗಲೇ ಎಲ್ಲೆಡೆ ಹೆಣ್ಣು ಮಕ್ಕಳಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ ನಡೆಯುತ್ತಿದೆ. ಹೆಣ್ಣು ಮಕ್ಕಳು ತಮ್ಮಲ್ಲಿರುವ ಪ್ರತಿಭೆಯನ್ನು ಅನಾವರಣಗೊಳಿಸಿ ತಮ್ಮ ತಮ್ಮ ಕ್ಷೇತ್ರಗಳಲ್ಲಿ ಸಾಧನೆ ಮಾಡಬೇಕು. ಮಹಿಳೆಯರಿಗೆ ಎದುರಾಗುತ್ತಿರುವ ಸಮಸ್ಯೆ, ಸವಾಲುಗಳು ಹೆಚ್ಚಾಗಿವೆ. ಇಂತಹ ಸಂದರ್ಭದಲ್ಲಿ ಸಿಕ್ಕ ಅವಕಾಶಗಳನ್ನು ಬಳಕೆ ಮಾಡಿಕೊಂಡು ಸಾಧನೆ ಮಾಡಬೇಕು ಎಂದರು.

> ಇತ್ತೀಚಿನ ದಿನಗಳಲ್ಲಿ ಬಹುತೇಕ ವಿದ್ಯಾರ್ಥಿಗಳು ಮೊಬೈಲ್‌ಗೆ ದಾಸರಾಗುತ್ತಿದ್ದಾರೆ. ಮೊಬೈಲ್ ಬಳಕೆಯಲ್ಲಿ ಹೆಣ್ಣು ಮಕ್ಕಳ ಸಂಖ್ಯೆಯೂ ಹೆಚ್ಚಾಗಿದೆ. ಮೊಬೈಲ್‌ನಲ್ಲಿ ಒಳ್ಳೆಯ ವಿಚಾರ ಹಾಗೂ ಕೆಟ್ಟ ವಿಚಾರವೂ ಇರುತ್ತದೆ. ಮಕ್ಕಳು ಒಳ್ಳೆಯ ವಿಚಾರಗಳಿಗೆ ಮಾತ್ರ ಮೊಬೈಲ್ ಬಳಕೆ ಮಾಡಿಕೊಳ್ಳಬೇಕು. ಇದು ಶೈಕ್ಷಣಿಕ ಹಾಗೂ ಇತರೆ ಕ್ಷೇತ್ರದ ಸಾಧನೆಗೆ ಮಾರಕವಾಗದಂತೆ ಕಟ್ಟೆಚ್ಚರ ವಹಿಸಬೇಕು. **–ಪುಷ್ಪಲತಾ ಜಗನ್ನಾಥ್, ಮಾಜಿ ಮೇಯರ್**

ಸಮಾಜದಲ್ಲಿ ಈಗಾಗಲೇ ಸಾಧನೆ ಮಾಡಿರುವ ಸಾಧಕ ಮಹಿಳೆಯರನ್ನು ಪ್ರೇರಣೆಯಾಗಿ ಸ್ವೀಕರಿಸಿ ಮುಂದಿನ ಸಾಧನೆಗೆ ಸೋಪಾನ ಮಾಡಿಕೊಳ್ಳಬೇಕು. ಮಹಿಳೆಯರು ಈಗಾಗಲೇ ಬಾಹ್ಯಾಕಾಶ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ಛಾಪು ಮೂಡಿಸಿದ್ದಾರೆ. ಈ ಕ್ಷೇತ್ರಗಳಲ್ಲಿ ಮತ್ತಷ್ಟು ಸಾಧಕ ಮಹಿಳೆಯರು ಹೆಚ್ಚಾಗಬೇಕು ಎಂದರು.

ಇದಕ್ಕೂ ಮುನ್ನ ರೋಟರಿ ಪಂಚಶೀಲ ಅಧ್ಯಕ್ಷೆ ಡಾ.ರಚನಾ ನಾಗೇಶ್ ಗಿಡಕ್ಕೆ ನೀರೆರೆಯುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಹೆಣ್ಣು ಮಕ್ಕಳಲ್ಲಿ ಅರಿವು ಮೂಡಿಸಲು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನ ಆಚರಿಸಲಾಗುತ್ತಿದೆ. ಆ ಮೂಲಕ ಹೆಣ್ಣು ಮಕ್ಕಳಿಗೆ ಶಿಕ್ಷಣ ಸೇರಿದಂತೆ ವಿವಿಧ ಹಕ್ಕುಗಳ ಬಗ್ಗೆ ಮಾಹಿತಿ ಒದಗಿಸಲಾಗುತ್ತದೆ. ಅಲ್ಲದೆ, ಬೇರೆ ಬೇರೆ ಕ್ಷೇತ್ರಗಳಲ್ಲಿ ಸಾಧನೆ ಮಾಡುವುದಕ್ಕೆ ಪ್ರೋತ್ಸಾಹಿಸಲಾಗುತ್ತದೆ ಎಂದು ವಿವರಿಸಿದರಲ್ಲದೆ, ಯೋಗ, ಧ್ಯಾನ, ಪೌಷ್ಟಿಕ ಆಹಾರ ಸೇವನೆ ಕುರಿತಂತೆ ವಿಶೇಷ ಉಪನ್ಯಾಸ ನೀಡಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಯೋಗೇಶ್ ಮಾತನಾಡಿ, ಸರ್ಕಾರದ ಯೋಜನೆಗಳಾದ 'ಬೇಟಿ ಬಚಾವೋ ಬೇಟಿ ಪಡಾವೋ', 'ಹೆಣ್ಣು ಮಗುವನ್ನು ಉಳಿಸಿ', 'ಸುಕನ್ಯಾ ಸಮೃದ್ಧಿ ಯೋಜನೆ' ಕುರಿತಂತೆ ಮಾಹಿತಿ ನೀಡಿದರು. ಅಲ್ಲದೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಹೆಣ್ಣು ಮಕ್ಕಳ ರಕ್ಷಣೆಗೆ ಕೈಗೊಂಡಿರುವ ಕ್ರಮ, ಶಿಕ್ಷಣ, ಆರೋಗ್ಯ ಕ್ಷೇತ್ರದಲ್ಲಿ ಜಾರಿಗೊಳಿಸಿರುವ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಜಿಲ್ಲಾ ಆಯುಕ್ತೆ ಪುಷ್ಪವಲ್ಲಿ, ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಯ ಅಮೃತಮ್ಮ, ಅನಿತಾ, ಜಿಲ್ಲಾ ಕಾರ್ಯದರ್ಶಿ ಅಬ್ದುಲ್ ಜಮೀಲ್ ಇತರರು ಇದ್ದರು.



ಮೈಸೂರು ಜಿಲ್ಲಾ ಬಿಸಿಎಂ ವಿದ್ಯಾರ್ಥಿನಿಲಯಗಳ ಹಿರಿಯ ವಿದ್ಯಾರ್ಥಿಗಳ ಒಕ್ಕೂಟದ ಸಭೆಯನ್ನು ಮುಖ್ಯಮಂತ್ರಿಗಳ ಜಂಟಿ ಕಾರ್ಯದರ್ಶಿ ಎಂ.ರಾಮಯ್ಯ ಉದ್ಘಾಟಿಸಿದರು. ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿ ಆರ್.ಮಹಾದೇವ್, ಹಿರಿಯ ಕೆಎಎಸ್. ಅಧಿಕಾರಿ ಬಸವರಾಜು, ಹಳೆಯ ವಿದ್ಯಾರ್ಥಿಗಳಾದ ಪ್ರಕಾಶ್, ಡಾ.ಮಾಲೇಗೌಡ, ಶ್ರೀನಿವಾಸ್, ಮುತ್ತ, ರಮೇಶ್‌ಗೌಡ, ರುಕ್ಮಾಂಗದ, ಡಾ.ಲೋಹಿತ್ ಹುಣಸೂರು, ತಹಸೀಲ್ದಾರ್ ಮಂಜುನಾಥ್, ರೇವಣ್ಣ, ಅಹಿಂದ ಜವರಪ್ಪ ಇತರರು ಉಪಸ್ಥಿತರಿದ್ದರು.

ಕರ್ಪೂರಿ ಠಾಕೂರ್‌ಗೆ ಭಾರತ ರತ್ನ ನೀಡಿದ ನಿರ್ಧಾರಕ್ಕೆ ಸಿಎಂ ಸಿದ್ದರಾಮಯ್ಯ ಸಂತಸ

ಬೆಂಗಳೂರು: ಬಿಹಾರದ ಮಾಜಿ ಸಿಎಂ ದಿ. ಕರ್ಪೂರಿ ಠಾಕೂರ್ ಅವರಿಗೆ ಭಾರತ ರತ್ನ ನೀಡಿರುವ ನಿರ್ಧಾರದ ಬಗ್ಗೆ ಸಿಎಂ ಸಿದ್ದರಾಮಯ್ಯ ಸಂತಸ ವ್ಯಕ್ತಪಡಿಸಿದ್ದು, ಸ್ವಾಗತಿಸಿದ್ದಾರೆ. ಕರ್ಪೂರಿ ಠಾಕೂರ್ ಅವರನ್ನು ಬಿಹಾರದ ದೇವರಾಜ ಅರಸು ಎನ್ನುತ್ತಿದ್ದರು ಎಂಬುದನ್ನು ಸಿದ್ದರಾಮಯ್ಯ ಸ್ಮರಿಸಿದ್ದಾರೆ. ಟ್ವೀಟ್ ಮಾಡಿರುವ ಸಿದ್ದರಾಮಯ್ಯ ಕರ್ಪೂರಿ ಠಾಕೂರ್ ಅವರು ಸಾಮಾಜಿಕ ನ್ಯಾಯದ ಪ್ರಬಲ ಬೆಂಬಲಿಗರಾಗಿದ್ದರು ಎಂದು ಹೇಳಿದ್ದಾರೆ.

ಸಾಮಾಜಿಕ ನ್ಯಾಯದ ಪ್ರಬಲ ಪ್ರತಿಪಾದಿಯಾಗಿದ್ದವರಿಗೆ ಭಾರತ ರತ್ನದ ಗೌರವ ದೊರೆತಿರುವುದು ಅತ್ಯಂತ ಸಂತಸದ ವಿಷಯವಾಗಿದೆ ಎಂದು ಸಿದ್ದರಾಮಯ್ಯ ಟ್ವೀಟ್‌ನಲ್ಲಿ ಹೇಳಿದ್ದಾರೆ.

ಎಪ್ಪತ್ತರ ದಶಕದಲ್ಲಿ ಕರ್ನಾಟಕದ ಮಾದರಿಯಲ್ಲಿ ಬಿಹಾರದಲ್ಲಿ ಹಿಂದುಳಿದ ಜಾತಿಗಳಿಗೆ ಮೀಸಲಾತಿ ಕಲ್ಪಿಸಿದ ಕರ್ಪೂರಿ ಠಾಕೂರ್ ಅವರನ್ನು 'ಬಿಹಾರದ ದೇವರಾಜ್ ಅರಸು' ಎಂದು ಬಣ್ಣಿಸಲಾಗಿದೆ ಎಂದು ಸಿಎಂ ಹೇಳಿದ್ದಾರೆ.

ವಿವಿಧ ಬೇಡಿಕೆ ಮುಂದಿಟ್ಟು ಸಿಐಟಿಯು ಪ್ರತಿಭಟನೆ



ಶ್ರಮಜೀವಿಗಳ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಮೈಸೂರಿನ ಹಳೆ ಡಿಸಿ ಕಚೇರಿ ಬಳಿ ಸಿಐಟಿಯು ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಮೈಸೂರು,ಜ.24(ಜಿಎ)–ದುಡಿಯುವ, ಶ್ರಮಜೀವಿಗಳ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್ (ಸಿಐಟಿಯು) ವತಿಯಿಂದ ಹಳೆ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ರಾಜ್ಯ ಹಾಗೂ ದೇಶದ ದುಡಿಯುವ ಜನರ ಬದುಕು ಸಂರಕ್ಷಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕು. ಅಗತ್ಯ ವಸ್ತುಗಳ ಬೆಲೆ ಏರಿಕೆ ನಿಯಂತ್ರಿಸಬೇಕು. ಶ್ರೀಮಂತರ ಮೇಲಿನ ತೆರಿಗೆ ಪ್ರಮಾಣ ಹೆಚ್ಚಿಸಿ ಸಾಮಾಜಿಕ ಭದ್ರತೆಗೆ ಹೆಚ್ಚಿನ ಹಣ ವಿನಿಯೋಗಿಸಬೇಕು. ದೇಶದ ಐಕ್ಯತೆ, ಸೌಹಾರ್ದತೆ ಹಾಳು ಮಾಡುವ ಶಕ್ತಿಗಳನ್ನು ನಿಯಂತ್ರಿಸಿ, ಸಂವಿಧಾನ ಸಂರಕ್ಷಿಸಬೇಕು. ರೈಲ್ವೆ, ವಿದ್ಯುತ್, ಹಣಕಾಸು ವಲಯದ ಖಾಸಗೀಕರಣ ನಿಲ್ಲಿಸಿ ಸಾರ್ವಜನಿಕ ವಲಯ ಬಲಪಡಿಸಬೇಕು. ಕನಿಷ್ಠ ಕೂಲಿಯನ್ನು 31 ಸಾವಿರ ರೂ ನಿಗದಿಪಡಿಸ ಬೇಕು. ಕೆಲಸದ ಅವಧಿಯನ್ನು ವಾರಕ್ಕೆ 36 ಗಂಟೆಗಳಿಗೆ ನಿಗದಿಪಡಿಸಬೇಕು. ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು. ಗುತ್ತಿಗೆ, ಹೊರಗುತ್ತಿಗೆ ಕಾರ್ಮಿಕರ ಶೋಷಣೆ ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಪ್ರತಿ ಜಿಲ್ಲೆಯಲ್ಲೂ ಕಾರ್ಮಿಕ ನ್ಯಾಯಾಲಯ ಸ್ಥಾಪಿಸಬೇಕು. ಕೇಂದ್ರ ಸರ್ಕಾರ ಜಾರಿಗೊಳಿಸಿರುವ 4 ಕಾರ್ಮಿಕ ಕಾನೂನುಗಳನ್ನು ಹಿಂಪಡೆಯಬೇಕು. ಇಎಸ್‌ಐ, ಇಪಿಎಫ್, ಗ್ರಾಚ್ಯುಯಿಟಿ, ಬೋನಸ್ ಕಾಯಿದೆ ಮಿತಿ ರದ್ದುಪಡಿಸಬೇಕು. ಕಾರ್ಮಿಕ ಸಂಘಟನೆಗಳಿಗೆ ಕಡ್ಡಾಯ ಮಾನ್ಯತೆ ನೀಡುವ ಕಾನೂನು ಜಾರಿಗೆ ಬರಬೇಕು. ಮೈಸೂರು ಜಿಲ್ಲೆಯಲ್ಲಿ ಬಹಳಷ್ಟು ಕಾರ್ಖಾನೆಗಳಲ್ಲಿ ಕನಿಷ್ಠ ಕೂಲಿ ಜಾರಿಯಾಗಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕು. ಕೆಲಸದ ಸ್ಥಳಗಳಲ್ಲಿ ಲೈಂಗಿಕ ಕಿರುಕುಳ ತಪ್ಪಿಸಲು ಅನುಷ್ಠಾನ ಸಮಿತಿ ಸ್ಥಾಪಿಸಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಅಧ್ಯಕ್ಷ ಜಿ. ಜಯರಾಂ, ಕಾರ್ಯಾಧ್ಯಕ್ಷ ಎಚ್.ಎಸ್. ಜಗದೀಶ್, ಪ್ರಧಾನ ಕಾರ್ಯದರ್ಶಿ ಎನ್.ಕೆ.ಬಾಲಾಜಿರಾವ್ ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.



ಮೈಸೂರಿನ ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿ ವತಿಯಿಂದ ಬಾಲರಾಮನ ಪ್ರಾಣ ಪ್ರತಿಷ್ಠಾಪನೆ ಪ್ರಯುಕ್ತ ಗಂಗೋತ್ರಿ ಬಡಾವಣೆಯ ಮಾರುತಿ ದೇವಸ್ಥಾನದ ಆವರಣದಲ್ಲಿ ಅಗ್ನಿ ಹೋತ್ರ, ಸಾಮೂಹಿಕ ಹನುಮಾನ್ ನಮಸ್ಕಾರ ಹಾಗೂ ಸಾಮೂಹಿಕ ವಿಷ್ಣು ನಮಸ್ಕಾರ ನಡೆಯಿತು. ಈ ವೇಳೆ ಕಾವೇರಿ ವಲಯ ಸಂಚಾಲಕರಾದ ಕಾಳಾಜಿ, ಉಪನಗರದ ಸಂಚಾಲಕ ಗಿರೀಶ, ಪ್ರಮುಖರಾದ ಭದ್ರೇಗೌಡ, ರವೀಂದ್ರ ಕುಮಾರ್, ಸಿದ್ದರಾಜು, ಸವಿತಾ ಹಾಗೂ ನೂರಾರು ಯೋಗಪಟುಗಳು ಇದ್ದರು.



ಬೆಂಗಳೂರಿನ ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಕಚೇರಿಯಲ್ಲಿ ಮೈಸೂರು ಜಿಲ್ಲಾ ಗ್ರಾಮಾಂತರ ಯುವ ಕಾಂಗ್ರೆಸ್ ಸಮಿತಿ ಕಾರ್ಯಾಧ್ಯಕ್ಷರಾಗಿ ನೇಮಕಗೊಂಡ ಹಿನಕಲ್ ಮಂಜು ಅವರಿಗೆ ರಾಜ್ಯಾಧ್ಯಕ್ಷ ಮಹಮ್ಮದ್ ನಲಪಾಡ್ ಹ್ಯಾರಿಸ್ ಆದೇಶ ಪ್ರತಿ ನೀಡಿದರು. ಇದೇ ವೇಳೆ ಹ್ಯಾರಿಸ್ ಅವರನ್ನು ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಅಭಿನಂದಿಸಲಾಯಿತು. ಮೈಸೂರು ಜಿಲ್ಲಾ ಗ್ರಾಮಾಂತರ ಯುವ ಕಾಂಗ್ರೆಸ್ ಸಮಿತಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಧನಗಳ್ಳಿ ಪ್ರವೀಣ್, ಪೈಲ್ವಾನ್ ನವೀನ್‌ಕುಮಾರ್, ನಂಜನಗೂಡು ಬ್ಲಾಕ್ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ದೇಬೂರು ಅಶೋಕ್, ಹುಲ್ಲಹಳ್ಳಿ ಬ್ಲಾಕ್ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಜಯ್ ಉಪಸ್ಥಿತರಿದ್ದರು.

ಮುಸ್ಲಿಂ ರಾಷ್ಟ್ರ ಅಬುಧಾಬಿಯಲ್ಲಿ ಹಿಂದೂ ದೇಗುಲ; ಫೆ.14ಕ್ಕೆ ಪ್ರಧಾನಿ ನರೇಂದ್ರ ಮೋದಿ ಲೋಕಾರ್ಪಣೆ!

ಅಬುಧಾಬಿ: ಮುಸ್ಲಿಂ ರಾಷ್ಟ್ರ ಅಬುಧಾಬಿಯಲ್ಲಿ ಭವ್ಯ ನಾರಾಯಣಸ್ವಾಮಿ ದೇಗುಲ ಸಂಪೂರ್ಣಗೊಂಡಿದೆ. ದೇಗುಲ ನಿರ್ಮಾಣಕ್ಕೆ ಅಬುಧಾಬಿ ಸರ್ಕಾರ 17 ಎಕರೆ ಭೂಮಿ ನೀಡಿತ್ತು. 2017ರಲ್ಲಿ ಮೋದಿ ಈ ದೇಗುಲಕ್ಕೆ ಶಂಕುಸ್ಥಾಪನೆ ಮಾಡಿದ್ದರು. 700 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ ದೇಗುಲವನ್ನು ಫೆ.14ರಂದು ಮೋದಿ ಲೋಕಾರ್ಪಣೆಗೊಳಿಸಲಿದ್ದಾರೆ. ದೇಗುಲ ನಿರ್ಮಾಣದಲ್ಲಿ 50 ಸಾವಿರ ಕಾರ್ಮಿಕರು ಶ್ರಮ ವಹಿಸಿದ್ದಾರೆ.

ಜ.30, ಮೈಸೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಮಾಂಸ ಮಾರಾಟ ನಿಷಿದ್ಧ

ಮೈಸೂರು.ಜ.24– ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಸೇರಿದ ಕುರಿ,



ಮೇಕೆಗಳ ಕಸಾಯಿಖಾನೆ ಮತ್ತು ಇತರೆ ಎಲ್ಲಾ ಮಾಂಸದ ಅಂಗಡಿಗಳನ್ನು ಜ.30 ರಂದು ಮಂಗಳವಾರ ಸರ್ವೋದಯ ದಿನದ ಪ್ರಯುಕ್ತ ಮುಚ್ಚಲಾಗುತ್ತದೆ. ಅಂದು ಕುರಿ/ಮೇಕೆ, ಕೋಳಿ ಮಾಂಸ, ಹಂದಿ ಮಾಂಸ ಮತ್ತು ಮೀನು) ವ್ಯಾಪಾರವನ್ನು ಮೈಸೂರು ನಗರದಲ್ಲಿ ಕಡ್ಡಾಯವಾಗಿ ನಿಷೇಧಿಸಲಾಗಿದೆ ಎಂದು ಮೈಸೂರು ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ನಿಧನ



ಡಿ.ಟಿ.ನಯನ

ಪಿರಿಯಾಪಟ್ಟಣ,ಜ.24–ತಾಲೂಕಿನ ದೊಡ್ಡಹರವೆ ಗ್ರಾಮದ ನಿವಾಸಿ ತಮ್ಮಯ್ಯ ಅವರ ಪುತ್ರಿ ಡಿ.ಟಿ.ನಯನ(24) ಅನಾರೋಗ್ಯದಿಂದ ಬುಧವಾರ ನಿಧನರಾದರು. ಮೃತರು ತಾಯಿ ಅನುಸೂಯ, ಸಹೋದರ ನವೀನ್ ಸೇರಿದಂತೆ ಅಪಾರ ಬಂಧು–ವರ್ಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಜ.25ರ ಮಧ್ಯಾಹ್ನ ಸ್ವಗ್ರಾಮದಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ನಯನ ಅವರ ನಿಧನಕ್ಕೆ ಮೈಸೂರು ಜಿಲ್ಲಾ ಕುಳುವ ಮಹಾ ಸಂಘದ ಅಧ್ಯಕ್ಷ ಮುತ್ತುರಾಜ್ ಸೇರಿದಂತೆ ಹಲವರು ಸಂತಾಪ ಸೂಚಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

25.1.2024 ಗುರುವಾರ, ಮಳೆ ನಕ್ಷತ್ರ: ಶ್ರವಣ 24.1.2024ರಿಂದ 05.02.2024
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯನ, ಹೇಮಂತ ಋತು, ಪುಷ್ಯ ಮಾಸ, ಶುಕ್ಲ ಪಕ್ಷ, ತಿಥಿ: ಹುಣ್ಣಿಮೆ, ನಕ್ಷತ್ರ: ಪುನರ್ವಸು, ರಾಹುಕಾಲ: ಮಧ್ಯಾಹ್ನ 1.30ರಿಂದ 3ರವರೆಗೆ

■ **ನವಕರ್ನಾಟಕ ಪ್ರಕಾಶನ :** ಪುಸ್ತಕ ಪ್ರದರ್ಶನ, ಸ್ಥಳ: ನವಕರ್ನಾಟಕ ಪ್ರಕಾಶನ, ರಾಮಸ್ವಾಮಿ ಸರ್ಕಲ್ ಬಳಿ, ಬೆಳಗ್ಗೆ 9.30 ರಿಂದ.

■ **ರಾಮ್‌ಸನ್ಸ್ ಬೊಂಬೆ ಮನೆ :** ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10ರಿಂದ ಸಂಜೆ 7 ಗಂಟೆವರೆಗೆ.

■ **ಜ್ಯೋತಿರ್ಗಮಯ ಸೇವಾ ಟ್ರಸ್ಟ್ :** ಹೆಣ್ಣು ಮಕ್ಕಳ ಉಚಿತ ವಿದ್ಯಾರ್ಥಿ ನಿಲಯದ ನೂತನ ಕಟ್ಟಡದ ಭೂಮಿಪೂಜೆ ಕಾರ್ಯಕ್ರಮ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸಮ್ಮುಖ : ಕುದೇರು ಮಠದ ಶ್ರೀ ಗುರುಶಾಂತ ಸ್ವಾಮೀಜಿ, ಉದ್ಘಾಟನೆ : ಶಾಸಕ ಟಿ.ಎಸ್. ಶ್ರೀವತ್ಸ, ಮುಖ್ಯ ಅತಿಥಿಗಳು : ಶಾಸಕ ಹೆಚ್.ಎಂ. ಗಣೇಶ್ ಪ್ರಸಾದ್, ಧರ್ಮಪ್ರಸಾದ್, ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಅಧ್ಯಕ್ಷತೆ : ಬಸವ ಬಳಗಗಳ ಒಕ್ಕೂಟದ ಅಧ್ಯಕ್ಷ ಎಂ. ಪ್ರದೀಪ್ ಕುಮಾರ್, ಉಪಸ್ಥಿತರು : ಬಿ.ವಿ. ಮಂಜುನಾಥ್, ಶಿವಮೂರ್ತಿ, ಟಿ.ಎಸ್. ಲೋಕೇಶ್, ಜಯಪ್ರಕಾಶ್, ಬಸವರಾಜು ಹೆಚ್.ವಿ. ಹಿನಕಲ್, ರವಿಶಂಕರ್, ಬಂಗಾರಪ್ಪ, ಸ್ಥಳ: ರಾಮಾನುಜ ರಸ್ತೆ, 7ನೇ ಕ್ರಾಸ್, ಬೆ. 10ಕ್ಕೆ.

■ **ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್ :** ಯೂತ್ ರೆಡ್ ಕ್ರಾಸ್ ಯೂನಿಟ್ ಉದ್ಘಾಟನಾ ಸಮಾರಂಭ, ಮುಖ್ಯ ಅತಿಥಿಗಳು : ಇಂಡಿಯನ್ ರೆಡ್ ಕ್ರಾಸ್ ಸೊಸೈಟಿ ಕಾರ್ಯದರ್ಶಿ ಎಸ್.ಎಸ್.ವೈದ್ಯನಾಥ್, ಅಧ್ಯಕ್ಷತೆ : ಎನ್‌ಐಇ ಪ್ರಿನ್ಸಿಪಾಲ್ ಡಾ. ರೋಹಿಣಿ ನಾಗಪದ್ಮ, ಸ್ಥಳ: ಡೈಮಂಡ್ ಜ್ಯೂಬಿಲಿ ಕಾಂಪ್ಲೆಕ್ಸ್, ಎನ್‌ಐಇ, ಬೆಳಗ್ಗೆ 10ಕ್ಕೆ.

■ **ಶ್ರೀ ನಟರಾಜ ಪ್ರೌಢಶಾಲೆ:** ವಾರ್ಷಿಕೋತ್ಸವ ಸಮಾರಂಭ, ಸಾನ್ನಿಧ್ಯ: ಶ್ರೀ ಚಿದಾನಂದ ಸ್ವಾಮೀಜಿ, ಮುಖ್ಯ ಅತಿಥಿಗಳು: ಶಾಸಕ ಕೆ.ಹರೀಶ್‌ಗೌಡ, ಅಧ್ಯಕ್ಷತೆ: ಶ್ರೀ ನಟರಾಜ ಪ್ರತಿಷ್ಠಾನ ವಿಶೇಷ ಅಧಿಕಾರಿ ಪ್ರೊ.ಶಿವರಾಜಪ್ಪ, ಬಹುಮಾನ ವಿತರಣೆ: ಎಂ.ಕೆ.ಸ್ವಾಮಿ, ಸ್ಥಳ: ಶ್ರೀ ನಟರಾಜ ಚೌಲ್ಟ್ರಿ, ಬೆಳಗ್ಗೆ 10.30ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರ, ಮಾನಸ ಗಂಗೋತ್ರಿ:** 74ನೇ ಸಂವಿಧಾನ ದಿನಾಚರಣೆ ಅಂಗವಾಗಿ ವಿಶೇಷ ಉಪನ್ಯಾಸಗಳ ಮಾಲಿಕೆ, ಮೈಸೂರು ವಿವಿ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ. ಕೃಷ್ಣ ಆರ್.ಹೊಂಬಾಳ್ ಅವರಿಂದ ಭಾರತದ ಸಂವಿಧಾನ ಮತ್ತು ಶಿಕ್ಷಕರ ಪಾತ್ರ ಕುರಿತು ಉಪನ್ಯಾಸ, ಅಧ್ಯಕ್ಷತೆ: ಬಿಜಿಎಸ್ ಬಿ.ಇಡಿ ಕಾಲೇಜು ಪ್ರಿನ್ಸಿಪಾಲ್ ಡಾ.ನಾಗರಾಜು, ಸ್ಥಳ: ಬಿಜಿಎಸ್ ಬಿ.ಇಡಿ ಕಾಲೇಜು, ಕುವೆಂಪುನಗರ, ಬೆಳಗ್ಗೆ 11ಕ್ಕೆ.

■ **ಮೈಸೂರು ತಾಲೂಕು ಮಹಿಳಾ ಹಾಲು ಉತ್ಪಾದಕರ ಸಹಕಾರ ಸಂಘಗಳ ನೌಕರರ ಕ್ಷೇಮಾಭಿವೃದ್ಧಿ ಸಂಘ :** ನೂತನ ಸಂಘದ ಉದ್ಘಾಟನಾ ಸಮಾರಂಭ, ಉದ್ಘಾಟನೆ : ಶಾಸಕ ಜಿ.ಟಿ. ದೇವೇಗೌಡ, ಉಪಸ್ಥಿತರು : ಮೈಸೂರು ಜಿಲ್ಲಾ ಹಾಲು ಒಕ್ಕೂಟ ನಿರ್ದೇಶಕರಾದ ಕೆ. ಉಮಾಶಂಕರ, ಶ್ರೀಮತಿ ಲೀಲಾ ನಾಗರಾಜು, ಬಿ. ಗುರುಸ್ವಾಮಿ, ಮೈಮುಲ್ ವ್ಯವಸ್ಥಾಪಕ ನಿರ್ದೇಶಕ ಬಿ.ಎನ್. ವಿಜಯ್‌ಕುಮಾರ್, ಪ್ರಭಾರ ವ್ಯವಸ್ಥಾಪಕ ಡಾ. ಸಿ. ದಿವಾಕರ್, ಅಧ್ಯಕ್ಷತೆ : ಸಂಘದ ಅಧ್ಯಕ್ಷೆ ಶ್ರೀಮತಿ ಆರ್. ಮಂಗಳ, ಸ್ಥಳ: ಸಹಕಾರ ಭವನ, ಚಾಮರಾಜ ಜೋಡಿ ರಸ್ತೆ, ಬೆಳಗ್ಗೆ 11ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ ಇಂಟರ್‌ನ್ಯಾಷನಲ್ ಸೆಂಟರ್ :** ಯುಎಸ್‌ಎಯಲ್ಲಿ ಉನ್ನತ ಶಿಕ್ಷಣ ಕುರಿತು ಪುನಶ್ಚೇತನ ಕಾರ್ಯಕ್ರಮ, ಉದ್ಘಾಟನೆ : ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಮುಖ್ಯ ಭಾಷಣ : ಯುಎಸ್‌ಎ ಶಿಕ್ಷಣ ಸಲಹೆಗಾರ ಎನ್. ಅರವಿಂದ್ ಶಿವಮಣಿ, ಉಪಸ್ಥಿತರು : ಮೈಸೂರು ವಿವಿ ಬಿಐಎಂಎಸ್ ಅಧ್ಯಕ್ಷ ಪ್ರೊ. ಎಸ್.ಜೆ. ಮಂಜುನಾಥ್, ಸ್ಥಳ: ರಾಣಿ ಬಹದ್ದೂರ್ ಸಭಾಂಗಣ, ಮಾನಸಗಂಗೋತ್ರಿ, ಮಧ್ಯಾಹ್ನ 3ಕ್ಕೆ.

■ **ನೃತ್ಯಾಲಯ ಟ್ರಸ್ಟ್, ಪ್ರದರ್ಶಕ ಕಲೆಗಳ ಅಕಾಡೆಮಿ :** ನಲಿವಿನ ಪಯಣ–45, ಹರಿದಾಸ ಸಾಹಿತ್ಯ ಸಂಗೀತ ನೃತ್ಯ ಸಂಭ್ರಮ, ಸಂಜೆ 5ರಿಂದ ನೃತ್ಯಾಲಯ ತಂಡದವರಿಂದ ಶ್ರೀಹರಿಭಜನೆ, ಸಂಜೆ 5.30 ರಿಂದ ಹಿರಿಯ ವಿದ್ಯಾರ್ಥಿಗಳಿಂದ ಮುಖಚಾಲಿ ನೃತ್ಯ ಪ್ರದರ್ಶನ, ಸಂಜೆ 5.40ಕ್ಕೆ ಸಭಾ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯ ಕುಲಪತಿ ಪ್ರೊ. ನಾಗೇಶ್ ವಿ. ಬೆಟ್ಟಕೋಟೆ, ಅಧ್ಯಕ್ಷತೆ : ನೃತ್ಯಾಲಯ ಟ್ರಸ್ಟ್ ಅಧ್ಯಕ್ಷ ಡಾ. ತುಳಸೀ ರಾಮಚಂದ್ರ, ಸನ್ಮಾನಿತರು : ಪ್ರೊ. ನಾಗೇಶ್ ವಿ. ಬೆಟ್ಟಕೋಟೆ (ನಾಟಕ ಕ್ಷೇತ್ರ), ಕರ್ನಾಟಕ ಕಲಾಶ್ರೀ ಸತ್ಯನಾರಾಯಣರಾಜು (ನೃತ್ಯ ಕ್ಷೇತ್ರ), ಡಾ. ಪ್ರತಿಭಾ ಪೆರೇರಾ (ವೈದ್ಯಕೀಯ ಸೇವಾ ಕ್ಷೇತ್ರ), ಸಂಜೆ 6.50 ರಿಂದ ನೃತ್ಯಾಲಯ ಟ್ರಸ್ಟ್‌ನ ಕಿರಿಯ ಮತ್ತು ಹಿರಿಯ ವಿದ್ಯಾರ್ಥಿಗಳಿಂದ ನರ್ತನ ನಿನಾದ, ಸಂಜೆ 7.30ಕ್ಕೆ ಶ್ರೀರಾಮಕಥಾ ವಿಷಯಾಧಾರಿತ ಏಕವ್ಯಕ್ತಿ ಭರತನಾಟ್ಯ ಪ್ರದರ್ಶನ, ನೃತ್ಯ ಸಂಯೋಜನೆ : ಕರ್ನಾಟಕ ಕಲಾಶ್ರೀ ಸತ್ಯನಾರಾಯಣರಾಜು, ಪರಿಕಲ್ಪನೆ : ಡಾ. ಶ್ರೀಮತಿ ಆರ್.ಕೆ. ಉಷಾ, ಹಾಡುಗಾರಿಕೆ ಮತ್ತು ನಟುವಾಂಗ : ವಿದ್ವಾನ್ ಡಿ.ಎಸ್. ಶ್ರೀವತ್ಸ, ವಿದ್ವಾನ್ ವಿದ್ಯಾಶಂಕರ್–ಮೃದಂಗ, ವಿದ್ವಾನ್ ರಘುನಂದನ್ ರಾಮಕೃಷ್ಣ–ಕೊಳಲು, ವಿದ್ವಾನ್ ಎಂ.ಜೆ. ನವೀನ್–ಬೆಳಕು ವಿನ್ಯಾಸ, ಸ್ಥಳ: ವಾಸುದೇವಾಚಾರ್ಯ ಭವನ, ನಾದಬ್ರಹ್ಮ ಸಂಗೀತಾ ಸಭಾ, ಜೆಎಲ್‌ಬಿ ರಸ್ತೆ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಶ್ರೀ ಮದ್ಭಗವದ್ಗೀತಾ ಕುರಿತು ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಚಿನ್ಮಯ ಮಿಷನ್ :** ವಿದ್ವಾನ್ ಕೃಷ್ಣರಾವ್ ಪ್ರಕಾಶ್ ಅವರಿಂದ ಶ್ರೀಮದ್ ಭಾಗವತ–11ನೇ ಸ್ಕಂದ ಕುರಿತು ಉಪನ್ಯಾಸ, ಸ್ಥಳ: ಮೈಸೂರು ಆಶ್ರಮದ ದತ್ತ ಸನ್ನಿಧಿ, ಯಜ್ಞಶಾಲೆ, ಶ್ರೀ ಚಿನ್ಮಯ ಮಿಷನ್, ಗೋಕುಲಂ, ಸಂಜೆ 6ಕ್ಕೆ.

■ **ಶ್ರೀ ಸುಬ್ರಹ್ಮಣ್ಯಸ್ವಾಮಿ ದೇವಸ್ಥಾನ :** 58ನೇ ವರ್ಷದ ತೈಪೂಜಾ ಮಹೋತ್ಸವ, ರುದ್ರಾಭಿಷೇಕ, ಪಂಚಾಮೃತ ಅಭಿಷೇಕ, ವಿಶೇಷ ಅಲಂಕಾರ, ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನದ ಆವರಣ, ವಿಶ್ವೇಶ್ವರನಗರ, ಸಂಜೆ 6.30ಕ್ಕೆ.

■ **ಶ್ರೀ ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು :** ಬೆಳದಿಂಗಳ ಸಂಗೀತ–263, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ವಿದುಷಿ ಸಂಗೀತಾ ಕಟ್ಟಿ ಕುಲಕರ್ಣಿ ಅವರಿಂದ ಗಾಯನ, ಪಂಡಿತ್ ಉಮಾಕಾಂತ ಪುರಾಣಿಕ್ –ಹಾರ್ಮೋನಿಯಂ, ಪಂಡಿತ್ ವಿಶ್ವನಾಥ್ ನಾಕೋಡ –ತಬಲ, ಸ್ಥಳ: ಶ್ರೀ ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ :** ಯೋಗಾ ಫಾರ್ ಹೋಲಿಸ್ಟಿಕ್ ವೆಲ್‌ಬೀಯಿಂಗ್ ಕುರಿತು ವಿಚಾರ ಸಂಕಿರಣ, ಉದ್ಘಾಟನೆ : ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಮುಖ್ಯ ಅತಿಥಿಗಳು : ವಾಸುದೇವ ಕ್ರಿಯಾ ಯೋಗ ಸಂಸ್ಥಾಪಕ ರಾಜೇಂದ್ರ ಯೆಂಕಣ್ಣನಮೂಲೆ, ಉಪಸ್ಥಿತರು : ಮೈಸೂರು ವಿವಿ ಕುಲಸಚಿವರಾದ ಶ್ರೀಮತಿ ವಿ.ಆರ್. ಶೈಲಜಾ, ಪ್ರೊ. ಕೆ.ಎಂ. ಮಹದೇವನ್, ಹಣಕಾಸು ಅಧಿಕಾರಿ ಶ್ರೀಮತಿ ಕೆ.ಎಸ್. ರೇಖಾ, ಸ್ಥಳ: ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಕ್ರಿಕೆಟ್ ಸ್ಟೇಡಿಯಂ, ಗಂಗೋತ್ರಿ ಗ್ಲೇಡ್ಸ್, ಮಾನಸಗಂಗೋತ್ರಿ, ಸಂಜೆ 6ಕ್ಕೆ.

■ **ದೀಕ್ಷಿತ್ ಆರೋಗ್ಯ ಧಾಮ :** ಆನಂದ ಆರೋಗ್ಯ ಕಾರ್ಯಕ್ರಮ, ವಿದ್ವಾನ್ ಅಮೋಘ್ ನಡಾಘೂರ್ ಅವರಿಂದ ಪಿಟೀಲು ವಾದನ, ವಿದ್ವಾನ್ ಎ. ರಾಧೇಶ್–ಮೃದಂಗ, ವಿದ್ವಾನ್ ವಿ.ಎಸ್. ರಮೇಶ್–ಮೋರ್ಚಿಂಗ್, ಡಾ. ಸಿ.ಎಸ್. ಅನಿಲ್ ಕುಮಾರ್ ಅವರಿಂದ ಸ್ವಾಸ್ಥ್ಯ ವಿಗ್ರಹ ರಾಮ ಕುರಿತು ಉಪನ್ಯಾಸ, ಸ್ಥಳ: ದೀಕ್ಷಿತ್ ಆರೋಗ್ಯ ಧಾಮ, ವಿಜಯನಗರ 3ನೇ ಹಂತ, ಸಂಜೆ 6ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಮೊಬೈಲ್ ಬಳಸೋಣ ಬನ್ನಿ–ಪ್ರಪಂಚಕ್ಕೆ ಬೆಳಕಿನ ಕಿಂಡಿಯಾದ ಸಾಧನದ ಸದುಪಯೋಗ ಕುರಿತ ಬಾನುಲಿ ಸರಣಿ. ಪ್ರಸ್ತುತಿ–ಮೈಸೂರಿನ ಎನ್.ರವಿಶಂಕರ್, 6.40 ಪದಸಂಸ್ಕೃತಿ, ಪ್ರಸ್ತುತಿ–ಡಾ.ಹೆಚ್.ವಿ.ನಾಗರಾಜರಾವ್, 10.00 ಜಿ.ಎನ್.ಬಾಲಸುಬ್ರಹ್ಮಣ್ಯಂ–ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ **ಮಧ್ಯಾಹ್ನ:** 12.30ದೇವರನಾಮ, 1.20 ಭಾವಗೀತೆ–ಎ.ಜೆ.ದಿವ್ಯಾ, 4.00 ಹಳ್ಳಿಹಾಡು–ಬನ್ನೂರು ಹೋಬಳಿ ಬಸವನಹಳ್ಳಿ ದೊಡ್ಡರಾಚಪ್ಪ ಮತ್ತು ವರಕೋಡಿನ ನಾಗರಾಜು, 4.30 ಕನ್ನಡ ಭಾರತಿ–ಕವಿ ಪ್ರಸ್ತುತವಾಗುವ ಬಗೆ–ಮಾತನಾಡುತ್ತಾರೆ ಡಾ. ಸಂತೋಷ್ ಚೊಕ್ಕಾಡಿ, ಕಾವ್ಯಧಾರೆ–ದೊ.ಚಿ.ಗೌಡ ಅವರಿಂದ ಸ್ವರಚಿತ ಕವನಗಳ ವಾಚನ, 6.50 ಕೃಷಿರಂಗ–ದೇಶಭಕ್ತಿ ಗೀತೆಗಳು, 7.00 ಗಣರಾಜ್ಯೋತ್ಸವದ ಮುನ್ನಾದಿನದ ಅಂಗವಾಗಿ ಮಾನ್ಯ ರಾಷ್ಟ್ರಪತಿಗಳು ರಾಷ್ಟ್ರವನ್ನುದ್ದೇಶಿಸಿ ಮಾಡಲಿರುವ ಪ್ರಸಾರ ಭಾಷಣ, 8.00 ಯುವವಾಣಿ–ರಾಷ್ಟ್ರೀಯ ಹೆಣ್ಣು ಮಗುವಿನ ದಿನದ ಸಂದರ್ಭದಲ್ಲಿ "ಹೆಣ್ಣು ಮಕ್ಕಳ ಕನಸುಗಳು ಮತ್ತು ಆಕಾಂಕ್ಷೆಗಳು" ಕುರಿತು ಮಾತುಕತೆ, 10.00 ನಾಟಕ "ಮತ್ತೆ ಮಕ್ಕಳಂತಾಗಿ ಬಿಡೋಣ" ಮೂಲ ಹಿಂದಿ– ಕ್ಷಮಾ ಶರ್ಮಾಮೂರ್ತಿ, ನಿರ್ದೇಶನ ಹಾಗೂ ನಿರ್ಮಾಣ–ಪ್ರಭುಸ್ವಾಮಿ ಮಳಿಮಠ, 10.30 ಸವಿನೆನಪು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜನವರಿ 25 ಗುರುವಾರ 2024

ಸಂಪುಟ: 44 | ಸಂಚಿಕೆ: 278 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಬರ ಪರಿಹಾರದ ಮೊದಲ ಕಂತು ವಾರದಲ್ಲಿ ರೈತರಿಗೆ ಸಂದಾಯ

● ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ
● ಇದುವರೆಗೆ ಕೇಂದ್ರದಿಂದ ನಯಾಪೈಸೆ ಬಂದಿಲ್ಲ





ಬೈಲಕುಪ್ಪೆ, ಜ.24–ರೈತರಿಗೆ ಬರ ಪರಿಹಾರದ ಮೊದಲನೇ ಕಂತನ್ನು ವಾರದಲ್ಲಿ ತಲುಪಿಸಲು ಪ್ರಯತ್ನಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ತಿಳಿಸಿದ್ದಾರೆ.

ಪಿರಿಯಾಪಟ್ಟಣ ತಾಲೂಕಿನ ಕೊಪ್ಪ ಗ್ರಾಮದಲ್ಲಿ ಜಲಸಂಪನ್ಮೂಲ ಇಲಾಖೆ ವತಿಯಿಂದ 250 ಕೋಟಿ ರೂ. ವೆಚ್ಚದಲ್ಲಿ ಮುತ್ತಿನಮುಳ್ಳಸೋಗೆ ಗ್ರಾಮದ ಬಳಿ ಕಾವೇರಿ ನದಿಯಿಂದ 79 ಗ್ರಾಮಗಳ 150 ಕೆರೆ–ಕಟ್ಟೆಗಳಿಗೆ ನೀರು ತುಂಬಿಸುವ ಯೋಜನೆ ಉದ್ಘಾಟನಾ ಸಮಾರಂಭಕ್ಕೆ ಆಗಮಿಸಿದ ವೇಳೆ ಅವರು ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದರು.

ಇದುವರೆವಿಗೂ ನಮ್ಮ ಸರ್ಕಾರ ದನ–ಕರುಗಳು ಹಾಗೂ ಜನರಿಗೆ ಕುಡಿಯುವ ನೀರಿಗೆ ತೊಂದರೆಯಾಗದಂತೆ ಮತ್ತು ರೈತರು ಗುಳೇ ಹೋಗದಂತೆ ನಿಭಾಯಿಸಿದೆ. ಬರ ಪರಿಹಾರವಾಗಿ ಮೊದಲ ಹಂತದಲ್ಲಿ 550 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದ್ದು, ವಾರದಲ್ಲಿ ರೈತರಿಗೆ ಮೊದಲ ಕಂತಿನ ಹಣ ತಲುಪಿಸಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

ದೆಹಲಿಗೆ ಭೇಟಿ ನೀಡಿದ್ದ ವೇಳೆ ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರನ್ನು ಭೇಟಿ ಮಾಡಿ ರಾಜ್ಯದ ಬರ ಪರಿಸ್ಥಿತಿಯನ್ನು ವಿವರಿಸಲಾಗಿತ್ತು. ಆಗ ಅವರು ಡಿ.23ರಂದು ಸಭೆ ಕರೆದು ಚರ್ಚಿಸಿ ಬರ ಪರಿಹಾರದ ಹಣವನ್ನು ಬಿಡುಗಡೆ ಮಾಡುವುದಾಗಿ ತಿಳಿಸಿದ್ದರು. ಸಭೆಯನ್ನು ಕಾರಣಾಂತರಗಳಿಂದ ಮುಂದೂಡಿದ್ದಾರೆ. ಇದುವರೆಗೆ ಕೇಂದ್ರದಿಂದ ರಾಜ್ಯಕ್ಕೆ ಒಂದು ನಯಾಪೈಸೆಯೂ ಬಿಡುಗಡೆಯಾಗಿಲ್ಲ ಎಂದರು.

ಇತ್ತೀಚೆಗೆ ಪ್ರಧಾನಿಗಳು ಬೆಂಗಳೂರಿಗೆ ಭೇಟಿ ನೀಡಿದ್ದಾಗ ರೈತರ ಸಂಕಷ್ಟದ ಪರಿಸ್ಥಿತಿಯನ್ನು ವಿವರಿಸಿ ಶೀಘ್ರ ಬರ ಪರಿಹಾರದ ಹಣವನ್ನು ಬಿಡುಗಡೆ ಮಾಡುವಂತೆ ಕೋರಿದ್ದೇವೆ ಎಂದು ಸಿದ್ದರಾಮಯ್ಯ ತಿಳಿಸಿದರು. ಅಸ್ಸಾಂ ಮುಖ್ಯಮಂತ್ರಿ, ಕೇಂದ್ರ ಗೃಹ ಸಚಿವ ಅಮಿತ್ ಷಾ, ಪ್ರಧಾನಿ ಮೋದಿ ಮೆಚ್ಚಿಸಲು ಸಂವಿಧಾನ ವಿರೋಧಿ ● 6ನೇ ಪುಟಕ್ಕೆ

ಅಯೋಧ್ಯೆ ಬಾಲರಾಮನ ಪವಾಡ!

ರಾಜ್ಯದಲ್ಲಿರುವ ಎಲ್ಲಾ ರಾಮಮಂದಿರಗಳ ಪುನರುಜ್ಜೀವನ

● ಇದಕ್ಕಾಗಿ ಫೆ.16ರಂದು ಮಂಡಿಸಲಿರುವ ಬಜೆಟ್‌ನಲ್ಲಿ 250 ಕೋಟಿ ಯೋಜನೆ ಘೋಷಣೆ ಮಾಡಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ● ಬಿಜೆಪಿಯವರಿಗಿಂತ ನಾವೇನು ಕಮ್ಮಿ! ನಾವು ರಾಮನ ನಿಜ ಭಕ್ತರು!! ● ಮಠ–ಮಾನ್ಯಗಳಿಗೂ ಅನುದಾನ ಕಲ್ಪಿಸಲು 300 ಕೋಟಿ ಮೀಸಲು

ಬೆಂಗಳೂರು, ಜ.24(ಕೆಎಂಶಿ)–ಮುಜರಾಯಿ ಹಾಗೂ ಖಾಸಗಿ ಒಡೆತನದಲ್ಲಿರುವ ರಾಜ್ಯದ ರಾಮಮಂದಿರಗಳನ್ನು 250 ಕೋಟಿ ರೂ. ವೆಚ್ಚದಲ್ಲಿ ಪುನರುಜ್ಜೀವನಗೊಳಿಸಲು ರಾಜ್ಯ ಸರ್ಕಾರ ಮುಂದಾಗಿದೆ.

ಲೋಕಸಭಾ ಚುನಾವಣಾ ಹೊಸ್ತಿಲಲ್ಲಿ ಅಯೋಧ್ಯೆ ರಾಮಮಂದಿರ ಉದ್ಘಾಟನೆಯಾಗಿ ಬಾಲರಾಮನ ಪ್ರಾಣ ಪ್ರತಿಷ್ಠೆಯಾಗುತ್ತಿದ್ದಂತೆ ಇಡೀ ರಾಷ್ಟ್ರದ ರಾಜಕಾರಣದ ಪಥವೇ ಬದಲಾಗಿದೆ.

ಇದನ್ನರಿತ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ತಾವು ಬಿಜೆಪಿಗಿಂತ ಕಡಿಮೆ ಇಲ್ಲ ಎಂಬುದನ್ನು ತೋರ್ಪಡಿಸಲು ಮತ್ತೆ ಮೂರು ಹೊಸ ಕಾರ್ಯಕ್ರಮಗಳ ಘೋಷಣೆಗೆ ಮುಂದಾಗಿದೆ. ಮಠ–ಮಾನ್ಯಗಳಿಗೆ ದೇಣಿಗೆ ನೀಡಲು ಸದಾ ವಿರೋಧಿಸುತ್ತಿದ್ದ ಕಾಂಗ್ರೆಸ್, ಇದೀಗ ರಾಜ್ಯದ ಎಲ್ಲಾ ಮಠ–ಮಾನ್ಯಗಳಿಗೆ ಆರ್ಥಿಕವಾಗಿ ಶಕ್ತಿ ತುಂಬಲು ಯೋಜನೆ ರೂಪಿಸಿದೆ.


(ಸಂಗ್ರಹ ಚಿತ್ರ)

ಮುಜರಾಯಿ ವ್ಯಾಪ್ತಿಗೆ ಬರುವ ಎಲ್ಲಾ ರಾಮಮಂದಿರಗಳನ್ನು ನಿಗದಿತ ವೇಳೆಯಲ್ಲಿ ಜೀರ್ಣೋದ್ಧಾರಗೊಳಿಸಿ, ದಿನನಿತ್ಯ ಪೂಜೆ–ಪುನಸ್ಕಾರಗಳಿಗೆ ಒತ್ತು ನೀಡುತ್ತಿದೆ. ● 6ನೇ ಪುಟಕ್ಕೆ

ಕೋಟಿಗೂ ಹೆಚ್ಚು ಭಕ್ತರಿಂದ ಅಯೋಧ್ಯೆ ಬಾಲರಾಮನ ದರ್ಶನ

ಒಂದೇ ದಿನ 3.17 ಕೋಟಿ ರೂ. ದೇಣಿಗೆ ಸಂಗ್ರಹ



ನವದೆಹಲಿ, ಜ.24– ಅಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನೆಯಾದ ನಂತರ ಕೇವಲ ಎರಡೇ ದಿನದಲ್ಲಿ ಕೋಟಿಗೂ ಹೆಚ್ಚು ಭಕ್ತರು ಬಾಲರಾಮನ ದರ್ಶನ ಪಡೆದಿದ್ದಾರೆ ಎಂದು ಮೂಲಗಳು ತಿಳಿಸಿವೆ. ಜನವರಿ 23ರಂದು ಒಂದೇ ದಿನ 3.17 ಕೋಟಿ ರೂ. ಟ್ರಸ್ಟ್‌ನ ಬ್ಯಾಂಕ್ ಖಾತೆಗಳಿಗೆ ಭಕ್ತರಿಂದ ದೇಣಿಗೆ ಜಮೆ ಆಗಿದೆ ಎಂದು ಶ್ರೀ ರಾಮಜನ್ಮಭೂಮಿ ತೀರ್ಥ ಕ್ಷೇತ್ರದ ಸದಸ್ಯ ಅನಿಲ್ ಮಿಶ್ರಾ ಬುಧವಾರ ಮಾಹಿತಿ ನೀಡಿದ್ದಾರೆ. ಬಾಲರಾಮನ ದರ್ಶನಕ್ಕಾಗಿ ದೇಶದ ವಿವಿಧೆಡೆಯಿಂದ ಅಯೋಧ್ಯೆಗೆ ಸಾಗರೋಪಾದಿಯಲ್ಲಿ ಭಕ್ತಾದಿಗಳು ಆಗಮಿಸುತ್ತಿದ್ದಾರೆ. ವಿಮಾನ, ರೈಲು ಹಾಗೂ ಇತರ ಸಾರಿಗೆಗಳ ಮೂಲಕ ಭಕ್ತಾದಿಗಳು ಅಯೋಧ್ಯೆಗೆ ಲಗ್ಗೆಯಿಡುತ್ತಿದ್ದು, ಉತ್ತರಪ್ರದೇಶ ● 6ನೇ ಪುಟಕ್ಕೆ



ಮೇಲುಕೋಟೆ ಶಾಲೆ ಶಿಕ್ಷಕಿ ದೀಪಿಕಾ ಹತ್ಯೆ ಬಯಲು

ಅಕ್ಕಾ...ಅಕ್ಕಾ ಎಂದು ಸಲುಗೆಯಿಂದ ಇದ್ದ ಗ್ರಾಮದ ಹುಡುಗ ನಿತೀಶನೇ ಕೊಲೆಗಾರ

■ ಎರಡು ವರ್ಷದಿಂದ ಅನ್ಯೋನ್ಯವಾಗಿದ್ದು ಕೆಲ ದಿನಗಳಿಂದ ಅಂತರ ಕಾಯ್ದುಕೊಂಡದ್ದೇ ಹತ್ಯೆಗೆ ಕಾರಣವಂತೆ ■ ಹುಟ್ಟುಹಬ್ಬದ ನೆಪ ಹೇಳಿ ದೀಪಿಕಾ ಕರೆಸಿಕೊಂಡು ಹತ್ಯೆ ನಂತರ ಶವ ಹೂತು ಪರಾರಿಯಾಗಿದ್ದ


ದೀಪಿಕಾ


ಆರೋಪಿ ನಿತೀಶ್

ಮಂಡ್ಯ, ಜ.24–ಮೇಲುಕೋಟೆ ಖಾಸಗಿ ಶಾಲೆಯ ಶಿಕ್ಷಕಿ ಮಾಣಿಕ್ಯನಹಳ್ಳಿ ಗ್ರಾಮದ ದೀಪಿಕಾ(28) ಶವ ಸಿಕ್ಕ 30 ಗಂಟೆಯಲ್ಲೇ ಪ್ರಕರಣ ಭೇದಿಸಿರುವ ಶ್ರೀರಂಗಪಟ್ಟಣ ಉಪ ವಿಭಾಗದ ಪೊಲೀಸರು, ಆಕೆಯ ಊರು ಮಾಣಿಕ್ಯನಹಳ್ಳಿ ಗ್ರಾಮದ ನಿತೀಶ್(22) ಎಂಬ ಹತ್ಯೆ ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಗ್ರಾಮದಲ್ಲಿ ಎಲ್ಲರ ಮುಂದೆಯೂ ಅಕ್ಕಾ–ಅಕ್ಕಾ ಎಂದು ಬಾಯ್ತುಂಬ ಕರೆಯುತ್ತಿದ್ದ ಯುವಕನೇ ತನ್ನ ಹುಟ್ಟುಹಬ್ಬದ ದಿನದಂದು ಶಿಕ್ಷಕಿಗೆ ಕರೆ ಮಾಡಿ, ಯೋಗಾನರಸಿಂಹಸ್ವಾಮಿ ಬೆಟ್ಟದ ತಪ್ಪಲಿಗೆ ಕರೆಸಿಕೊಂಡು ಕುತ್ತಿಗೆ ಬಿಗಿದು, ಉಸಿರುಗಟ್ಟಿಸಿ ಕೊಂದು ನಂತರ ಗೋಣಿಚೀಲದಲ್ಲಿ ಶವ ಹಾಕಿ ಹೂತು ಹಾಕಿದ್ದ ಎಂಬುದು ಬಹಿರಂಗಗೊಂಡಿದೆ.

ಕಳೆದ ಸುಮಾರು 2 ವರ್ಷದಿಂದ ದೀಪಿಕಾ ಜೊತೆ ಅವರದೇ ಗ್ರಾಮದವನಾದ ನಿತೀಶ್ ಅನ್ಯೋನ್ಯವಾಗಿದ್ದ ಎಂದು ಹೇಳಲಾಗಿದ್ದು, ಕಳೆದ 10–15 ದಿನಗಳಿಂದ ದೀಪಿಕಾ ತನ್ನ ಜೊತೆ ಮಾತನಾಡುವುದನ್ನು ನಿಲ್ಲಿಸಿದ್ದರಿಂದ ಕುಪಿತಗೊಂಡ ಈತ ಆಕೆಯನ್ನು ಕೊಲೆ ಮಾಡಲು ನಿರ್ಧರಿಸಿದ್ದ. ತನ್ನ ಕರೆಗಳನ್ನು ಸ್ವೀಕರಿಸದೇ ನಿರ್ಲಕ್ಷಿಸುತ್ತಿದ್ದ ದೀಪಿಕಾ ತನ್ನ ಹುಟ್ಟುಹಬ್ಬದ ದಿನ ನಿಶ್ಚಯವಾಗಿ ಕರೆ ಸ್ವೀಕರಿಸುತ್ತಾರೆ ಎಂಬ ನಂಬಿಕೆಯಿಂದ ಅದೇ ದಿನ ಆಕೆಯನ್ನು ಹತ್ಯೆ ಮಾಡಲು ಸಂಚು ರೂಪಿಸಿದ್ದ. ಜ.20ರಂದು ಬೆಳಗ್ಗೆಯೇ ಯೋಗಾನರಸಿಂಹಸ್ವಾಮಿ ಬೆಟ್ಟದ ತಪ್ಪಲಿನಲ್ಲಿ ಸುಮಾರು 2 ಅಡಿಯಷ್ಟು ಆಳದ ಹಳ್ಳ ತೋಡಿದ್ದ. ಹಾಗೂ ಗೋಣಿಚೀಲವನ್ನು ಅದೇ ಸ್ಥಳದಲ್ಲಿ ಇಟ್ಟಿದ್ದ ಎಂಬುದು ವಿಚಾರಣೆ ವೇಳೆ ತಿಳಿದು ಬಂದಿದೆ. ಜ.20ರಂದು ಶನಿವಾರವಾಗಿದ್ದರಿಂದ ಮಧ್ಯಾಹ್ನ 12 ಗಂಟೆಗೆ ಶಾಲೆ ಬಿಡುತ್ತದೆ ಎಂಬುದು ಆತನಿಗೆ ಗೊತ್ತಿತ್ತು. ಅದೇ ಸಮಯಕ್ಕೆ ದೀಪಿಕಾಗೆ ಕರೆ ಮಾಡಿ ತನ್ನ ಹುಟ್ಟುಹಬ್ಬದ ಬಗ್ಗೆ ತಿಳಿಸಿ, ಸ್ವಲ್ಪ ಮಾತನಾಡಬೇಕು ಎಂದು ಹೇಳಿದ್ದನಂತೆ. ಅದರಂತೆ ದೀಪಿಕಾ ಮೇಲುಕೋಟೆಯಿಂದ ತನ್ನ ಗ್ರಾಮಕ್ಕೆ ತೆರಳುವ ಮಾರ್ಗ ಮಧ್ಯೆ ಯೋಗಾನರಸಿಂಹಸ್ವಾಮಿ ಬೆಟ್ಟದ ತಪ್ಪಲಿನ ರಸ್ತೆಯಲ್ಲಿ ಆತನನ್ನು ಭೇಟಿ ಮಾಡಿ ಹುಟ್ಟುಹಬ್ಬದ ಶುಭಾಶಯ ತಿಳಿಸಿದ್ದಾರೆ. ನಂತರ ತನ್ನನ್ನು ಕಳೆದ 10–15 ದಿನಗಳಿಂದ ನಿರ್ಲಕ್ಷಿಸುತ್ತಿರುವ ಬಗ್ಗೆ ಆತ ಆಕ್ಷೇಪ ವ್ಯಕ್ತಪಡಿಸಿದ್ದಲ್ಲದೇ, ಈ ವೇಳೆ ಮಾತಿಗೆ ಮಾತು ಬೆಳೆದು ಆಕೆಯನ್ನು ಎಳೆದಾಡಿ ವೇಲ್‌ನಿಂದ ಕುತ್ತಿಗೆ ಬಿಗಿದು, ● 6ನೇ ಪುಟಕ್ಕೆ

ಸಿಎಂ ಬಟನ್ ಒತ್ತಿದರೂ ಮೋಟಾರ್ ಆನ್ ಆಗಲಿಲ್ಲ; ಚೆಸ್ಕಾಂ ಎಂಡಿಗೆ ಮಾತ್ರ ಶಾಕ್!!

ಕರ್ತವ್ಯ ಲೋಪ, ಶಿಷ್ಟಾಚಾರ ಉಲ್ಲಂಘನೆಯಡಿ ಚೆಸ್ಕಾಂ ಎಂಡಿ ಸಿ.ಎನ್.ಶ್ರೀಧರ್ ಅಮಾನತು




ಶ್ರೀಧರ್

ಪಿರಿಯಾಪಟ್ಟಣ, ಜ.24– ಪಿರಿಯಾಪಟ್ಟಣ ತಾಲೂಕು ಮುತ್ತಿನಮುಳ್ಳಸೋಗೆ ಗ್ರಾಮದ ಬಳಿ ಕಾವೇರಿ ನದಿಯಿಂದ 79 ಗ್ರಾಮಗಳಲ್ಲಿರುವ 150 ಕೆರೆ–ಕಟ್ಟೆಗಳಿಗೆ ನೀರು ತುಂಬಿಸುವ ಯೋಜನೆಗೆ ಚಾಲನೆ ನೀಡುವ ಸಂದರ್ಭದಲ್ಲಿ ಎದುರಾದ ವಿಘ್ನಕ್ಕೆ ಚೆಸ್ಕಾಂ ಎಂಡಿ ಸಿ.ಎನ್.ಶ್ರೀಧರ್ ತಲೆದಂಡವಾಗಿದೆ.

ವಿವರ: ಸಾಮಾನ್ಯವಾಗಿ ಮಂತ್ರಿಗಳು ಹಾಗೂ ಮುಖ್ಯಮಂತ್ರಿಗಳು ಭಾಗವಹಿಸುವ ಕಾರ್ಯಕ್ರಮಗಳಲ್ಲಿ ಕಿಂಚಿತ್ತೂ ಲೋಪವಾಗದಂತೆ ಎಲ್ಲಾ ವ್ಯವಸ್ಥೆಗಳನ್ನೂ ಸಮರ್ಪಕವಾಗಿ ಮಾಡಲಾಗುತ್ತದೆ. ಕೆಲವೊಮ್ಮೆ ಮಂತ್ರಿಗಳಾಗಲೀ, ಮುಖ್ಯಮಂತ್ರಿಗಳಾಗಲೀ ಭಾಷಣ ಮಾಡುವ ● 6ನೇ ಪುಟಕ್ಕೆ

ತಾಯಿ, ತಂಗಿಯ ಕೆರೆಗೆ ತಳ್ಳಿ ಕೊಂದ ಸುಪುತ್ರ!

● ಅನ್ಯಕೋಮಿನ ಯುವಕನ ತಂಗಿ ಪ್ರೀತಿಸಿದ್ದೆ ತಪ್ಪಾಯ್ತು!
● ಮಗಳನ್ನು ರಕ್ಷಿಸಲು ಹೋದ ತಾಯಿಯೂ ಕೆರೆಗೆ ಹಾರ!!

ಹುಣಸೂರು, ಜ.24– ಅನ್ಯಕೋಮಿನ ಯುವಕನನ್ನು ಪ್ರೀತಿಸುತ್ತಿದ್ದ ತನ್ನ ತಂಗಿ, ಅವಳ ರಕ್ಷಣೆಗೆ ಬಂದ ತಾಯಿಯನ್ನು ಕೆರೆಗೆ ತಳ್ಳಿ ಕೊಲೆ ಮಾಡಿರುವ ಅತ್ಯಂತ ಅಮಾನವೀಯ ಘಟನೆ ತಾಲೂಕಿನ ಹಿರಿಕ್ಯಾತನಹಳ್ಳಿ (ಮರೂರು) ಗ್ರಾಮದಲ್ಲಿ ನಿನ್ನೆ ರಾತ್ರಿ ಸಂಭವಿಸಿದೆ.

ಗ್ರಾಮದ ನಿವಾಸಿ ಸತೀಶ್ ಅವರ ಪುತ್ರ ನಿತೀಶ್, ತಂಗಿ ಮತ್ತು ಜನ್ಮ ನೀಡಿದ ತಾಯಿಯನ್ನೇ ಕೊಲೆ ಮಾಡಿದ ಆರೋಪಿ. ಈತನನ್ನು ಪೊಲೀಸರು ಬಂಧಿಸಿದ್ದಾರೆ.

ಹಿರಿಕ್ಯಾತನಹಳ್ಳಿಯ ಸತೀಶ್ ಅವರ ಪತ್ನಿ ಅನಿತಾ (40) ಹಾಗೂ ಮಗಳು ಧನುಶ್ರೀ(19) ಕೊಲೆಯಾದ ದುರ್ದೈವಿಗಳು. ಧನುಶ್ರೀ, ಹುಣಸೂರು ದೇವರಾಜ ಅರಸು ಪ್ರಥಮ ದರ್ಜೆ ಕಾಲೇಜಿನಲ್ಲಿ ಅಂತಿಮ ವರ್ಷದ ಪದವಿ ಓದುತ್ತಿದ್ದಳು. ತಾಲೂಕಿನ ಹನಗೋಡು ಗ್ರಾಮದ ಅನ್ಯಕೋಮಿನ ಯುವಕನನ್ನು ಧನುಶ್ರೀ ಪ್ರೀತಿಸುತ್ತಿದ್ದಳು.


ಅನಿತಾ


ಧನುಶ್ರೀ


ಆರೋಪಿ ನಿತೀಶ್

ಈ ವಿಚಾರದಲ್ಲಿ ಅಣ್ಣ–ತಂಗಿಯರ ನಡುವೆ ವೈಮನಸ್ಸು ಉಂಟಾಗಿ ಆಗಾಗ ಗಲಾಟೆಯೂ ಆಗುತ್ತಿತ್ತು. ಹೆತ್ತವರು ಇಬ್ಬರನ್ನೂ ಸಮಾಧಾನ ಮಾಡುತ್ತಿದ್ದರು. ನಿನ್ನೆ ರಾತ್ರಿ ಹೆಮ್ಮಿಗೆ ಗ್ರಾಮದಲ್ಲಿರುವ ಮಾವನ ಮನೆಗೆ ಹೋಗುವ ನೆಪಹೇಳಿ ತಾಯಿ ಹಾಗೂ ● 6ನೇ ಪುಟಕ್ಕೆ

ಮನೆ ಮನೆಗೆ ಗ್ಯಾಸ್ ಪೈಪ್‌ಲೈನ್ ಅಳವಡಿಕೆ ಖರ್ಚು ಕಡಿತ

ಸಂಸದ ಪ್ರತಾಪ್ ಸಿಂಹ ಪ್ರಗತಿ ಪರಿಶೀಲನೆ ಕಾಮಗಾರಿ ಮುಂದುವರಿಕೆಗೆ ಸೂಚನೆ


ಗ್ಯಾಸ್ ಪೈಪ್‌ಲೈನ್ ಅಳವಡಿಸುವ ಕಾಮಗಾರಿ ಸಂಬಂಧ ಸಂಸದ ಪ್ರತಾಪ್ ಸಿಂಹ ಬುಧವಾರ ಮೈಸೂರು ಮಹಾನಗರ ಪಾಲಿಕೆ ಹಳೇ ಕೌನ್ಸಿಲ್ ಸಭಾಂಗಣದಲ್ಲಿ ಪ್ರಗತಿ ಪರಿಶೀಲನೆ ಸಭೆ ನಡೆಸಿದರು. (ಎಡದಿಂದ) ಎಜಿ ಅಂಡ್ ಪಿ ಪ್ರಥಮ್ ಸಂಸ್ಥೆಯ ಸ್ಥಳೀಯ ಮುಖ್ಯಸ್ಥ ಅರುಣ್ ನಾಯಕ, ಚೀಫ್ ಆಪರೇಟಿಂಗ್ ಮುಖ್ಯಸ್ಥ ಚಿರ್‌ದೀಪ್ ದತ್ತ, ಪಾಲಿಕೆ ಆಯುಕ್ತ ಅಶಾದ್ ಉರ್ ರೆಹಮಾನ್ ಷರೀಫ್ ಹಾಗೂ ಡೆಪ್ಯುಟಿ ಕಮಿಷನರ್ (ಅಭಿವೃದ್ಧಿ) ಕೆ.ಜೆ. ಸಿಂಧು ಅವರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ಜ.24(ಆರ್‌ಕೆ)–ಮನೆ ಮನೆಗೆ ಗ್ಯಾಸ್ ಸಂಪರ್ಕ ಕಲ್ಪಿಸಲು ಪೈಪ್‌ಲೈನ್ ಅಳವಡಿಸುವ ಖರ್ಚು ಕಡಿತಗೊಳಿಸಿ ಸರ್ಕಾರ ಅಧಿಸೂಚನೆ ಹೊರಡಿಸಿದೆ.



ಅದರನ್ವಯ ಕಾಮಗಾರಿ ಹೊಣೆ ಹೊತ್ತಿರುವ ಜಪಾನ್ ಮೂಲದ ಎಜಿ ಅಂಡ್ ಪಿ ಪ್ರಥಮ್ ಕಂಪನಿಯು ಒಂದು ಮೀಟರ್‌ಗೆ 1 ರೂ.ನಂತೆ ಮೈಸೂರು ಮಹಾನಗರ ಪಾಲಿಕೆಗೆ ರೋಡ್ ಕಟ್ಟಿಂಗ್ ಶುಲ್ಕ ಪಾವತಿಸಬೇಕೆಂದು ರಾಜ್ಯ ಸರ್ಕಾರ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಕೈಗೊಂಡು ಹೊರಡಿಸಿರುವ ಅಧಿಸೂಚನೆಯ ರಾಜ್ಯಪತ್ರದಲ್ಲಿ ಪ್ರಕಟವಾಗಿದೆ. ಈ ಹಿಂದೆ ನಿಗದಿಯಾಗಿದ್ದ ಮೀಟರ್‌ಗೆ 1956 ರೂ. ಶುಲ್ಕ ಪಾವತಿಸಿ ಕಾಮಗಾರಿ ಮಾಡಿ ಗ್ಯಾಸ್ ಸಂಪರ್ಕ ಒದಗಿಸಿ ಅಡುಗೆ ಅನಿಲ ಪೂರೈಸುವುದು ದುಬಾರಿ ವೆಚ್ಚವಾಗುತ್ತದೆ. ಅಲ್ಲದೇ, ಇತರ ರಾಜ್ಯಗಳಲ್ಲಿ ರೋಡ್ ಕಟ್ಟಿಂಗ್ ಶುಲ್ಕ ಮೀಟರ್‌ಗೆ ಒಂದು ರೂ. ನಿಗದಿಪಡಿಸಿರುವುದರಿಂದ ಅದೇ ಶುಲ್ಕವನ್ನು ಕರ್ನಾಟಕದಲ್ಲೂ ನಿಗದಿಪಡಿಸಬೇಕೆಂದು ಮನವಿ ಮಾಡಿ, ಎಜಿ ಅಂಡ್ ಪಿ ಕಂಪನಿಯು ಕಾಮಗಾರಿ ಸ್ಥಗಿತಗೊಳಿಸಿತ್ತು. ಇದೀಗ ಕಂಪನಿ ಮನವಿಯಂತೆ ಸರ್ಕಾರವು ಶುಲ್ಕವನ್ನು 1956 ರೂ.ನಿಂದ ಕೇವಲ 1 ರೂ.ಗೆ ಕಡಿತಗೊಳಿಸಿರುವುದರಿಂದ ಮೈಸೂರು ಮಹಾನಗರ ಪಾಲಿಕೆ ಹಳೇ ಕೌನ್ಸಿಲ್ ಸಭಾಂಗಣದಲ್ಲಿ ಅಧಿಕಾರಿಗಳು ಮತ್ತು ಕಂಪನಿ ಮುಖ್ಯಸ್ಥರೊಂದಿಗೆ ಸಭೆ ನಡೆಸಿ, ಸರ್ಕಾರದ ಅಧಿಸೂಚನೆಯನ್ವಯ ಶುಲ್ಕ ಪಾವತಿಸಿಕೊಂಡು ಗ್ಯಾಸ್ ಪೈಪ್‌ಲೈನ್ ಅಳವಡಿಸುವ ಕಾಮಗಾರಿ ಪುನಾರಂಭಿಸಲು ಕಂಪನಿಗೆ ಅನುಮತಿ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮೀಟರ್‌ಗೆ 1956 ರೂ. ಶುಲ್ಕ ಪಾವತಿಸಿ, ನೆಲ ಅಗೆದು ಪೈಪ್‌ಲೈನ್ ಅಳವಡಿಸಿ ಮತ್ತೆ ರಸ್ತೆ ಮುಚ್ಚುವುದು ಹಾಗೂ ಮನೆ–ಮನೆಗೆ ● 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಗಂಡ : ನಂಗೆ ಲಾಟರಿ ಹೊಡೆದ್ರೆ ಏನ್ ಮಾಡ್ತೀಯ?

ಹೆಂಡತಿ : ಲಾಟರಿ ದುಡ್ಡಲ್ಲಿ ನಂಗೆ ಅರ್ಧ ಕೊಟ್ ಬಿಡ್ರಿ, ನಾನು ಪರ್ಮನೆಂಟ್ ಆಗಿ ಅಮ್ಮನ ಮನೆಗೆ ಹೋಗಿ ಇದ್ ಬಿಡ್ತೀನಿ.

ಗಂಡ : ಹೌದಾ! ನೂರು ರೂಪಾಯಿ ಲಾಟರಿ ಹೊಡೆದಿದೆ. 50 ರೂಪಾಯಿ ತಗೊಂಡು ನಿಮ್ಮಮ್ಮನ ಮನೆಗ್ ಹೋಗು.

ಮೈಸೂರು ಮಿತ್ರ

ಗುರುವಾರ, 25 ಜನವರಿ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಇಂದಿನ ನಿನ್ನ ಕರ್ತವ್ಯಗಳನ್ನು ಪೂರೈಸು. ಅಂದರೆ ನಾಳಿನ ಕರ್ತವ್ಯ ತಾನಾಗಿಯೇ ಗೋಚರಿಸುವುದು. – ಗಂಯಟೆ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ನಿಧಿಯಿದ್ದರೂ ನಿಧಾನವಿರಬೇಕು

ನಿಮ್ಮ ಪತ್ರಗಳು

■ ಊರಿಗೊಂದು ರಾಮಮಂದಿರ; ಅನುದಿನ ರಾಮನ ಜಪ ಪಠಣೆಯಾಗಲಿ

ಮಾನ್ಯರೆ,

ನಮಗೆಲ್ಲ ತಿಳಿದ ಹಾಗೆ ನಾವೆಲ್ಲರೂ ಜನವರಿ 22 ರಿಂದ ರಾಮನ ಜಪತಪಗಳಲ್ಲಿ ನಿರತರಾಗಿದ್ದೇವೆ. ದೂರದರ್ಶನದ ಎಲ್ಲಾ ಚಾನೆಲ್‌ಗಳಲ್ಲಿಯೂ ಎಲ್ಲಾ ದೇವಾಲಯಗಳಲ್ಲಿಯೂ ರಾಮನದೆ ಜಪ. ಬೀದಿ ಬೀದಿಗಳಲ್ಲಿ ರಾಮ ರಾಮನೆಂದು ಪೂಜೆ ಹವನಗಳನ್ನು ಮಾಡಿ ಜನತೆಗೆ ಸಿಹಿ ಹಂಚಿ ಸಂಭ್ರಮಿಸಿದೆವು. ಇಡೀ ದೇಶವೇ ರಾಮನ ಭಕ್ತಿಯಲ್ಲಿ ಮಿಂದಿದೆ. ರಾಮನ ಬಗ್ಗೆ ಎಷ್ಟು ಹೇಳಿದರೂ ಪದಗಳು ಸಾಲದು. ಅವನ ಆದರ್ಶಗಳು ಎಲ್ಲರಿಗೂ ಸ್ಫೂರ್ತಿದಾಯಕ. ಮರ್ಯಾದೆ ಪುರುಷ ರಾಮ ಕಲಿಯುಗದ ಜನತೆಗೆ ಆದರ್ಶ ಗುರು ಎಂದರೆ ತಪ್ಪಾಗಲಾರದು.

ಅಯೋಧ್ಯೆಯಲ್ಲಿ ರಾಮಮಂದಿರವನ್ನು ಒಮ್ಮೆಯಾದರೂ ನೋಡಿ ನಮ್ಮ ಜೀವನವನ್ನು ಸಾರ್ಥಕಪಡಿಸಿಕೊಳ್ಳೋಣ. ಆ ಸ್ಥಳದಲ್ಲಿನ ಧನಾತ್ಮಕ ಶಕ್ತಿಯನ್ನು ನಮ್ಮೊಡನೆ ತಂದು ಅದನ್ನು ಎಲ್ಲರಿಗೂ ಸೂಸೋಣ. ನಾವು ನಿಜವಾದ ರಾಮಭಕ್ತ ಎನ್ನುವುದು ನಮ್ಮ ತನುಮನದಲ್ಲಿ ಬೇರೂರಬೇಕು. ಬಾಯಲ್ಲಿ ರಾಮ ರಾಮ ಎಂದು ಮನದಲ್ಲಿ ಕೆಟ್ಟ ಆಲೋಚನೆಯನ್ನು ಮಾಡಿದರೆ ರಾಮನ ಹೆಸರಿಗೆ ಕಳಂಕ ತಂದ ಹಾಗೆ ಆಗುತ್ತದೆ. ಇದು ಹೀಗಾಗಬಾರದು ನಮಗೆ ಆತ್ಮಶುದ್ಧಿ ಇರಬೇಕು.

ಪ್ರತಿ ಗ್ರಾಮಗಳಲ್ಲಿ ಇಂದಿಗೂ ರಾಮಮಂದಿರವಿದ್ದು, ಅವುಗಳಲ್ಲಿ ಕೆಲವು ಕಟ್ಟಡಗಳು ಶಿಥಿಲಗೊಂಡಿವೆ. ಕೆಲವು ಉತ್ತಮ ಸ್ಥಿತಿಯಲ್ಲಿ ಇದ್ದು, ಅಲ್ಲಿಗೆ ಯಾವಾಗಲೂ ಬೀಗಮುದ್ರೆಯಾಗಿರುತ್ತದೆ. ಇನ್ನೂ ಕೆಲವು ರಾಮಮಂದಿರಗಳಲ್ಲಿ ರಾಮನ ಭಾವಚಿತ್ರವೇ ಇರುವುದಿಲ್ಲ. ಇನ್ನು ಹಲವೆಡೆ ಹೆಸರಿಗೆ ಮಾತ್ರ ರಾಮಮಂದಿರದಂತೆ ಕಂಡು ಬಂದರೂ ಅದು ಜೂಜಾಡುವ ಮನೆಯಾಗಿ ಮಾರ್ಪಾಡು ಮಾಡಿಕೊಂಡಿರುತ್ತಾರೆ. ರಾಮನ ಹೆಸರಿಗೆ ನಾವು ನಿಜವಾಗಿಯೂ ಮಸಿ ಬಳಿದಂತಾಗಿಬಿಡುತ್ತದೆ. ಇವೆಲ್ಲವೂ ಸುಧಾರಿಸಬೇಕು. ರಾಮನ ಹೆಸರಿಗೆ ನಾವು ಅರ್ಥ ಕಲ್ಪಿಸಿ ಕೊಡುವುದಾದರೆ ಹಾಗೂ ರಾಮನನ್ನು ಭಕ್ತಿಯಿಂದ ಪೂಜೆಗೈಯುವಂತಾದರೆ ಮೊದಲು ಇವೆಲ್ಲವುಗಳನ್ನು ಸುಧಾರಿಸಲೇಬೇಕು. ಪ್ರತಿ ಊರಿನಲ್ಲಿ ರಾಮಮಂದಿರ ನಿರ್ಮಾಣವಾಗಬೇಕು. ಪ್ರತಿದಿನ ರಾಮನ ಪೂಜೆ ರಾಮನ ಜಪತಪಗಳ ಪಠಣೆಯಾಗಬೇಕು. ರಾಮನ ಆದರ್ಶಗಳ ಗುಣಗಾನವಾಗಬೇಕು. ಹೀಗೆ ಮಾಡಿದಾಗ ನಾವು ನಿಜವಾದ ರಾಮ ಭಕ್ತ ಎಂದು ಎದೆ ಉಬ್ಬಿಸಿ ಹೇಳಲು ಯಾವುದೋ ಅಂಜಿಕೆ ಇರುವುದಿಲ್ಲ. ಹೀಗೆ ಮಾಡಿದಾಗ ಪ್ರತಿ ಊರು ಅಯೋಧ್ಯವಾಗುವುದು. ರಾಮನು ಎಲ್ಲೆಡೆಯಲ್ಲಿಯೂ ವಿರಾಜಮಾನವಾಗಿ ವಿಜೃಂಭಿಸುವವನು. ರಾಮ ರಾಮ ಎನ್ನಿರೋ ರಾಮ ಬರುವನು ರಾಮನ ಹಿಂದೆಯೇ ಎಲ್ಲಾ ಜನತೆ ಬರುವರು ಜೈ ಶ್ರೀ ರಾಮ್??..!

–ಅನಿಲ್ ರಾಜ, ಸಹ ಶಿಕ್ಷಕರು, ಮೈಸೂರು

■ ಸಾರಿಗೆ ಅಧಿಕಾರಿಗಳಿಗೆ ಅಭಿನಂದನೆಗಳು

ಮಾನ್ಯರೆ,

ಇತ್ತೀಚೆಗೆ ಕರ್ನಾಟಕ ರಾಜ್ಯ ಸಾರಿಗೆ ಇಲಾಖೆಯು 10 ರೂ.ನಾಣ್ಯದ ಚಲಾವಣೆ ಕುರಿತು ಆದೇಶ ಹೊರಡಿಸಿ ಎಲ್ಲಾ ನಿರ್ವಾಹಕರು 10 ರೂ. ನಾಣ್ಯಗಳನ್ನು ಪ್ರಯಾಣಿಕರಿಂದ ಸ್ವೀಕರಿಸಬೇಕೆಂದು ಸೂಚನೆ ನೀಡಿರುವುದು ಸ್ವಾಗತಾರ್ಹ. ಈಗಾಗಲೇ ಮುದ್ರಿಸಲ್ಪಟ್ಟ ರೂ. 10, ರೂ. 20 ನಾಣ್ಯಗಳು ಬ್ಯಾಂಕಿನಲ್ಲಿಯೇ ಚಲಾವಣೆಯಾಗದೇ ಕೊಳೆಯುತ್ತಿದೆ. ಇದರಿಂದ ರೂ. 10 ಹಾಗೂ ರೂ. 20 ನೋಟುಗಳ ಕೊರತೆ ಕಾಣುತ್ತಿದೆ. ಈ ಆದೇಶವು ದಿನನಿತ್ಯದ ಎಲ್ಲಾ ವಹಿವಾಟುಗಳಲ್ಲಿ ಅನ್ವಯವಾಗಬೇಕು. ನಾಣ್ಯಗಳನ್ನು ತಿರಸ್ಕರಿಸುವವರಿಗೆ ಅರಿವು ಮೂಡಿಸಬೇಕು.

– ಜಿ.ಪಿ. ರಾಜೇಶ್, ವಿ.ವಿ.ಪುರಂ, ಮೈಸೂರು.

■ ರಾಮ ಮಂದಿರ ಭಕ್ತಿಯ ಕೇಂದ್ರವಾಗಿರಲಿ

ಮಾನ್ಯರೆ,

ಅಯೋಧ್ಯೆ ರಾಮ ಮಂದಿರ ನಿರ್ಮಾಣ ಏಳು ಬೀಳುಗಳನ್ನು ಕಂಡು ಒಂದು ಹಂತ ತಲುಪಿದೆ. ಎಲ್ಲರೂ ಸಂತೋಷಪಟ್ಟಿದ್ದಾರೆ. ರಾಮ, ಕೃಷ್ಣ, ಬುದ್ಧ, ಬಸವಣ್ಣ, ಅಲ್ಲಾ, ಏಸು ಈ ಮಹನೀಯರು ಯಾವ ಧರ್ಮದ ವಿರೋಧಿಗಳಲ್ಲ. ಯಾವ ಸಮುದಾಯದ ವಿರೋಧಿಗಳಲ್ಲ. ಇವರ ಆರಾಧಕರು, ಅನುಯಾಯಿಗಳು, ಭಕ್ತರು ಅವರನ್ನೆ ಅನುಸರಿಸಬೇಕಲ್ಲವೆ? ಹೇಳುವುದು ಒಂದು ಮಾಡುವುದು ಇನ್ನೊಂದು ಎನ್ನುವ ಹಾಗೆ ನಡೆದುಕೊಳ್ಳಬಾರದು. ಯಾವ ಧರ್ಮ ರಾಜಕೀಯ ಬಣ್ಣದ ಲೇಪ ಪಡೆದುಕೊಳ್ಳುತ್ತದೋ ಅದು ಹಾದಿ ತಪ್ಪುತ್ತದೆ. ರಾಜಕೀಯ ಲಾಭಕ್ಕೆ ನಾಯಕರು ಮಹನೀಯರ ಮರ್ಯಾದೆ ತೆಗೆಯಬಾರದು. ಮಂದಿರ, ಮಸೀದಿ, ಚರ್ಚಗಳು ರಾಜಕಾರಣಿಗಳ ಚಾವಡಿಯಾಗಬಾರದು. ಇದರಿಂದ ಸಂಘರ್ಷ ಏರ್ಪಡುತ್ತದೆ ಎರಡು ಸಮುದಾಯಗಳ ಸಂಘರ್ಷಕ್ಕೆ ಕಾರಣವಾಗಿದ್ದ ಈ ಕೇಂದ್ರ ಧರ್ಮ ಮತ್ತು ಮತಾಂಧತೆಯಿಂದ ದೂರವಿದ್ದು, ಭಕ್ತಿಯ ಕೇಂದ್ರವಾಗಲಿ. ಶಕ್ತಿಯ ಕೇಂದ್ರವಾಗದಿರಲಿ. ಎರಡು ಸಮುದಾಯಗಳ ಸಂಘರ್ಷ ಕೊನೆಯಾಗಲಿ, ಭಾವೈಕ್ಯತೆ ಬೆಸೆಯಲಿ.

–ದಡದಹಳ್ಳಿ ರಮೇಶ್, ಚಂದಕವಾಡಿ ಹೋಬಳಿ, ಚಾಮರಾಜನಗರ ಜಿಲ್ಲೆ.

■ ಅರುಂಧತಿ ನಾಗ್‌ಗೆ ಅಭಿನಂದನೆಗಳು

ಮಾನ್ಯರೆ,

ಹಿರಿಯ ರಂಗಭೂಮಿ ಕಲಾವಿದೆ ಹಾಗೂ ಚಲನಚಿತ್ರ ನಟಿ ಅರುಧಂತಿ ನಾಗ್ ಅವರು ಉಡುಪಿಯ ರಂಗಭೂಮಿ ಸಂಸ್ಥೆಯ 24ನೇ ವಾರ್ಷಿಕ ಪ್ರಶಸ್ತಿಗೆ ಆಯ್ಕೆಯಾಗಿರುವುದು ಸ್ವಾಗತಾರ್ಹ. ದಿವಂಗತ ಶಂಕರ್‌ನಾಗ್‌ರವರ ಧರ್ಮಪತ್ನಿಯಾದ ಶ್ರೀಮತಿ ಅರುಂಧತಿ ನಾಗ್, ಪರಮೇಶಿ ಪ್ರೇಮ ಪ್ರಸಂಗ, ಜೋಗಿ, ಶಿವ ಸೈನ್ಯ, ಗೋಲಿಬಾರ್, ಆಕ್ಸಿಡೆಂಟ್, ಅಂಜು ಮಲ್ಲಿಗೆ, ನೋಡಿ ಸ್ವಾಮಿ ನಾವಿರೋದೇ ಹೀಗೆ ಮುಂತಾದ ಕನ್ನಡ ಚಲನಚಿತ್ರಗಳಲ್ಲಿ ನಟಿಸಿದ್ದಾರೆ. ಕನ್ನಡ, ಮರಾಠಿ, ಹಿಂದಿ, ಗುಜರಾತಿ, ತಮಿಳು, ಮಲೆಯಾಳಂ ಮುಂತಾದ ಭಾಷೆಗಳ ಚಿತ್ರಗಳಲ್ಲಿ ನಟಿಸುವ ಮೂಲಕ ಬಹುಭಾಷಾ ನಟಿಯಾಗಿರುವ ಅರುಂಧತಿ, 1956ರಲ್ಲಿ ದೆಹಲಿಯಲ್ಲಿ ಜನಿಸಿದರು. 1980ರಲ್ಲಿ ಶಂಕರ್‌ನಾಗ್ ಅವರನ್ನು ವಿವಾಹವಾದ ಅರುಂಧತಿನಾಗ್, 1990ರಲ್ಲಿ ಶಂಕರ್‌ನಾಗ್ ಅಪಘಾತವೊಂದರಲ್ಲಿ ನಿಧನ ಹೊಂದಿದಾಗ ಏಕಾಂಗಿಯಾದರೂ ಸಹ ಧೃತಿಗೆಡದೆ, ಬದುಕನ್ನು ಧೈರ್ಯದಿಂದ ಎದುರಿಸಲು, ಹಲವಾರು ಸಾಧನೆಗಳನ್ನು ಮಾಡುತ್ತಾ ಬರುತ್ತಿದ್ದಾರೆ. ತಮ್ಮ ಪತಿ ದಿವಂಗತ ಶಂಕರನಾಗ್ ಸ್ಮರಣಾರ್ಥ "ರಂಗ ಶಂಕರ" ಎಂಬ ರಂಗ ಮಂದಿರವನ್ನು ನಿರ್ಮಿಸಿರುವ ಅರುಂಧತಿಯವರಿಗೆ ಪದ್ಮಶ್ರೀ ಸೇರಿದಂತೆ ದೇಶದ ಹಲವಾರು ಪ್ರಶಸ್ತಿ ಪುರಸ್ಕಾರಗಳು ಪ್ರಾಪ್ತವಾಗಿವೆ. ಎತ್ತರದ ನಿಲುವು ಅವರ ಅಭಿನಯಕ್ಕೆ ಕಳಶವಿಟ್ಟಂತಿದೆ. ಧ್ವನಿ ಸ್ವಲ್ಪ ಒರಟು ಅನಿಸಿದರೂ ಸಹ, ಇನ್ನೂ ಕೇಳಬೇಕೆಂಬ ಕಾತುರತೆ ಮೂಡಿಸುತ್ತದೆ. ದಿವಂಗತ ಶಂಕರ್‌ನಾಗ್ ಅವರನ್ನು ಪ್ರೇಮಿಸಿ, 1980ರಲ್ಲಿ ವಿವಾಹವಾದ ಅರುಂಧತಿ, ಶಂಕರನಾಗ್‌ರವರ ಎಲ್ಲಾ ಸಾಧನೆಗಳ ಹಿಂದಿನ ಪ್ರೇರಕ ಶಕ್ತಿಯಾಗಿದ್ದರು. ಅವರೋರ್ವ ಶ್ರೇಷ್ಠ ಕಲಾವಿದೆ ಎಂಬುದರಲ್ಲಿ ಎರಡನೇ ಮಾತಿಲ್ಲ. ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ನಮ್ಮ ಮೈಸೂರಿನ ಅಸಾಮಾನ್ಯರು



ಮಹಾರಾಜ ಮುಮ್ಮಡಿ ಕೃಷ್ಣರಾಜ ಒಡೆಯರಿಂದ ಹಿಡಿದು ಯದುವಂಶದ ಕೊನೆಯ ಮಹಾರಾಜರಾದ ಜಯಚಾಮರಾಜ ಒಡೆಯರ ಆಡಳಿತದ ಅವಧಿಯವರೆಗೆ ಅನೇಕ ಶ್ರೇಷ್ಠ ಮಹನೀಯರು ಮೈಸೂರು ರಾಜ್ಯದಲ್ಲಿ ಗಣನೀಯ ಸೇವೆ ಸಲ್ಲಿಸಿದ್ದಾರೆ. ಅಂತಹ ಕೆಲವರ ಹೆಸರುಗಳನ್ನು ಮೈಸೂರು ಚರಿತ್ರೆಗೆ ಸಂಬಂಧಪಟ್ಟ ಇತಿಹಾಸದ ಪುಸ್ತಕಗಳಲ್ಲಿ ಪ್ರಸ್ತಾಪಿಸಿರುವುದನ್ನು ನಾವು ಕಾಣುತ್ತೇವೆ. ಆಡಳಿತದ ಪ್ರಮುಖ ಹುದ್ದೆಯಲ್ಲಿದ್ದು ಗಣನೀಯ ಸೇವೆ ಸಲ್ಲಿಸಿದ್ದ ಕೆಲವರ ಹೆಸರುಗಳು ಅವುಗಳಲ್ಲಿ ಕಂಡು ಬಂದರೂ, ಅವರಂತೆಯೇ ಸೇವೆ ಸಲ್ಲಿಸಿರುವ ಇತರ ನೂರಾರು ಮಂದಿ ಎಲ್ಲಿಯೂ ಪ್ರಸ್ತಾಪಗೊಳ್ಳದೆ ಎಲೆ ಮರೆಕಾಯಿಯಾಗಿ ಉಳಿದು ಹೋಗಿದ್ದಾರೆ. ನೆನಪಿನ ಅಂಗಳದಿಂದ ಜಾರಿಹೋಗಿದ್ದಾರೆ. ಹಾಗೆ ಸೇವೆ ಸಲ್ಲಿಸಿದವರಲ್ಲಿ ಹಲವಾರು ಮಂದಿ ಅಂದಿಗೆ ಖ್ಯಾತನಾಮರಾಗಿದ್ದರೂ ಇಂದು ಅವರ ಬಗ್ಗೆ ನಮಗೆ ಹೆಚ್ಚು ತಿಳಿಯದೆ ಹೋಗಿದೆ. ಮೈಸೂರಿನ ಅಭಿವೃದ್ಧಿಗೆ ಶ್ರಮಿಸಿದ ಹಲವಾರು ಮಹನೀಯರು ನೆನಪಿನಿಂದ ಅಳಿಸಿಹೋಗಿದ್ದಾರೆ. ಕೆಲವರ ಸೇವೆಯನ್ನಾದರೂ ಇಲ್ಲಿ ಗುರುತಿಸುವ ಪ್ರಯತ್ನ ನನ್ನದು. ಇಂತಹ ಪ್ರಯತ್ನ ಬಹಳ ಹಿಂದೆಯೇ ಪ್ರಾರಂಭಿಸುವ ಉದ್ದೇಶ ಹೊಂದಿದ್ದರೂ, ಅದು ಈಗ ಸಾಧ್ಯವಾಗುತ್ತಿದೆ. ನೆನಪಿನಂಗಳದಿಂದ ಮರೆಯಾದ ಮಹನೀಯರ ಪರಿಚಯ ಒಂದು ಮಾಲಿಕೆಯಾಗಿ ಪ್ರಕಟಗೊಳ್ಳಲಿದೆ. ಅವು 'ಮೈಸೂರು ಮಿತ್ರ' ಓದುಗರಿಗೆ ಮೆಚ್ಚುಗೆಯಾದರೆ, ನನಗೆ ಬರೆದ ತೃಪ್ತಿ.

ಬಿ.ಪಿ. ರಾಘವಲು ನಾಯ್ಡು





ಗೌರಿ ಸತ್ಯ
ಹಿರಿಯ ಪತ್ರಕರ್ತರು
ಮೊ: 8762788685

ಮೈಸೂರಿನ ಅರಮನೆ ಕಟ್ಟಿದ್ದರ ಪ್ರಸ್ತಾಪ ಬಂದಾಗ ನಾವು ಸಾಮಾನ್ಯವಾಗಿ ಬ್ರಿಟಿಷ್ ವಾಸ್ತುಶಿಲ್ಪಿ ಹೆನ್ರಿ ಇರ್ವಿನ್ ಹೆಸರು ಹೇಳುತ್ತೇವೆ. ಅರಮನೆಯನ್ನು ಕಟ್ಟಿದ್ದು ಈ ವಾಸ್ತುಶಿಲ್ಪಿ ಎನ್ನುತ್ತೇವೆ. ಅರಮನೆ ಕಟ್ಟಿದ್ದರ ಪಟ್ಟ ಅವನಿಗೆ ಕಟ್ಟುತ್ತೇವೆ.

ನಿಜ. ಈಗಿರುವ ಅರಮನೆ ನಿರ್ಮಾಣದಲ್ಲಿ ಮದ್ರಾಸಿನ ಈ ವಾಸ್ತುಶಿಲ್ಪಿಯ ಮಹತ್ತರ ಕಾಣಿಕೆಯಿದೆ. ಆದರೆ ಅರಮನೆಯನ್ನು ನಿಜವಾಗಿ ಕಟ್ಟಿದ್ದು ನಮ್ಮ ಇಂಜಿನಿಯರುಗಳು, ಮೇಸ್ತ್ರಿಗಳು ಮತ್ತು ಅವರ ಕೈಕೆಳಗಿನ ಕೆಲಸಗಾರರು. 1897ರ ಫೆಬ್ರವರಿ ತಿಂಗಳಿನಲ್ಲಿ ಚಾಮರಾಜ ಒಡೆಯರ ಹಿರಿಯ ಪುತ್ರಿ ರಾಜಕುಮಾರಿ ಜಯಲಕ್ಷಮ್ಮಣ್ಣಿ ಅವರ ಮದುವೆಯ ಸಂದರ್ಭದಲ್ಲಿ ಮುಮ್ಮಡಿ ಕೃಷ್ಣರಾಜ ಒಡೆಯರ ಅವಧಿಯಲ್ಲಿ ಕಟ್ಟಿದ್ದ ಹಳೆಯ ಅರಮನೆ ಸುಟ್ಟುಹೋದಾಗ ಹೊಸ ಅರಮನೆಯನ್ನು ರೂಪಿಸಿದ್ದು ಮದ್ರಾಸ್ ಸರ್ಕಾರದ ವಾಸ್ತುಶಿಲ್ಪಿ ಸಲಹೆಗಾರನಾಗಿದ್ದ ಹೆನ್ರಿ ಇರ್ವಿನ್. ಅವರ ಕೊಡುಗೆ ವೈಶಿಷ್ಟವಾದದ್ದು. ಇರ್ವಿನ್ ವಿಶಿಷ್ಟವಾದ ಇಂಡೋ–ಸಾರ್ಸನಿಕ್ ಶೈಲಿಯಲ್ಲಿ ಅರಮನೆಗೆ ಬೇಕಾದ ನಕ್ಷೆಗಳನ್ನು ರಚಿಸಿಕೊಟ್ಟರು. ಭಾರತೀಯ ಮತ್ತು ಮುಸ್ಲಿಂ ಮಿಶ್ರಿತ ವಾಸ್ತುಶೈಲಿಯಲ್ಲಿ ಹೊಸ ಅರಮನೆಯನ್ನು ರೂಪಿಸಿಕೊಟ್ಟರು.

ಆದರೆ ರಾಜಮನೆತನದ ಅವಶ್ಯಕತೆಗೆ ತಕ್ಕಂತೆ ಹೆನ್ರಿ ಇರ್ವಿನ್‌ನ ವಿನ್ಯಾಸಗಳನ್ನು ಬದಲಾಯಿಸಿ, ಅಗತ್ಯ ಬದಲಾವಣೆಗಳನ್ನು ಮಾಡಿ, ಈಗಿರುವ ಸುಂದರ ಅರಮನೆ ಕಟ್ಟಿದ್ದು ನಮ್ಮವರು. ಈ ಮಾತನ್ನು ನಾವು ಹೆಮ್ಮೆಯಿಂದ ಹೇಳಬೇಕಾಗುತ್ತದೆ. ಅರಮನೆ ನಿರ್ಮಾಣ ಕಾರ್ಯದಲ್ಲಿನ ಪ್ರತಿಯೊಂದು ಘಟ್ಟದಲ್ಲಿಯೂ ನಮ್ಮ ಇಂಜಿನಿಯರುಗಳು ಆಸಕ್ತಿ ವಹಿಸಿ ಕಟ್ಟಿದ್ದಾರೆ. ಮೇಸ್ತ್ರಿಗಳು ಕಾಳಜಿಯಿಂದ ಉಸ್ತುವಾರಿ ವಹಿಸಿದ್ದಾರೆ. ಮಹಾರಾಜ ನಾಲ್ವಡಿ ಕೃಷ್ಣರಾಜರ ಸಲಹೆಗಳನ್ನು ಮನಸ್ಸಿನಲ್ಲಿಟ್ಟುಕೊಂಡು ಎಚ್ಚರ ವಹಿಸಿ ಕಟ್ಟಡ ನಿರ್ಮಿಸಿದ್ದಾರೆ.

ಇರ್ವಿನ್ ರಚಿಸಿಕೊಟ್ಟಿದ್ದ ವಿನ್ಯಾಸಗಳಲ್ಲಿ ಕೊರತೆ ಉಂಟಾದಾಗ ಅವರು ಅದನ್ನು ಅವಶ್ಯಕತೆಗೆ ತಕ್ಕಂತೆ ಬದಲಾಯಿಸಬೇಕಾಯಿತು. ಈಗಿರುವಂತೆ ಸುಂದರವಾಗಿ, ವಿಶಾಲವಾಗಿ ಅರಮನೆಯನ್ನು ಕಟ್ಟಬೇಕಾಯಿತು. ಹಾಗೆ, ಈಗಿರುವ ಆಕರ್ಷಕ ಅರಮನೆಯ ನಿರ್ಮಾಣಕ್ಕೆ ಕಾರಣರಾದವರಲ್ಲಿ ಒಬ್ಬರು ಅರಮನೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಆಗಿದ್ದ ಬಿ.ಪಿ. ರಾಘವಲು ನಾಯ್ಡು.

1852ರ ಸೆಪ್ಟೆಂಬರ್ 19ರಂದು ಜನಿಸಿದ ಇವರು ಮಾಡಿದ್ದು ಎ.ಸಿ.ಇ. ಡಿಪ್ಲೊಮಾ. ಬೆಂಗಳೂರಿನ ಇಂಜಿನಿಯರಿಂಗ್ ಮತ್ತು ನ್ಯಾಚುರಲ್ ಸೈನ್ಸ್ ಶಾಲೆಯಲ್ಲಿ ಓದಿ 1871ರಲ್ಲಿ ಎ.ಸಿ.ಇ. ಡಿಪ್ಲೊಮಾ ಗಳಿಸಿದರು. ಮೊದಲಿಗೆ ಮದ್ರಾಸ್ ಸರ್ಕಾರದ ವೈದ್ಯಕೀಯ ಸ್ಟೋರ್ಸ್ ಇಲಾಖೆಯಲ್ಲಿ ವೃತ್ತಿ ಪ್ರಾರಂಭಿಸಿದರು. ನಂತರ ಮೂರು ವರ್ಷ ರಜೆ ತೆಗೆದುಕೊಂಡು ಪರೀಕ್ಷೆಯಲ್ಲಿ ಉತ್ತೀರ್ಣರಾದ ಮೇಲೆ ತಮ್ಮ ಕೆಲಸಕ್ಕೆ ರಾಜೀನಾಮೆ ನೀಡಿದರು.

ಅಲ್ಲಿಂದ ಮುಂದೆ ಅವರ ಕಾರ್ಯಕ್ಷೇತ್ರ ಮೈಸೂರಿಗೆ ಬದಲಾಯಿತು. 1878ರ ಆಗಸ್ಟ್ ತಿಂಗಳಲ್ಲಿ ಮೈಸೂರು ಸರ್ಕಾರದಲ್ಲಿ ಕೆಲಸಕ್ಕೆ ಸೇರಿದ ಅವರು ಬೆಂಗಳೂರು ವಿಭಾಗದಲ್ಲಿ ಅಪ್ರೆಂಟಿಸ್ ಇಂಜಿನಿಯರ್ ಆಗಿ ನೇಮಕಗೊಂಡರು. ಈ ಅಭ್ಯಾಸಾವಧಿಯಲ್ಲಿ ಅವರು ಸಾಕಷ್ಟು ಪರಿಣತಿ ಪಡೆದ ಮೇಲೆ ಮೈಸೂರು ಸರ್ಕಾರ ಅವರನ್ನು 1892ರಲ್ಲಿ ಕಾರ್ಯನಿರ್ವಾಹಕ ಇಂಜಿನಿಯರ್ ಹುದ್ದೆಯಲ್ಲಿ ಬದಲಿಯಾಗಿ ಕಾರ್ಯನಿರ್ವಹಿಸಲು ನೇಮಿಸಿತು. ಆರು ವರ್ಷಗಳ ನಂತರ ಅವರನ್ನು ಈ ಹುದ್ದೆಯಲ್ಲಿ ಖಾಯಂಗೊಳಿಸಿತು. ಈ ಹುದ್ದೆಯಲ್ಲಿ ಅವರು ರಾಜ್ಯದ ಬಾರನ್ ಕಣಿವೆ, ಮಾರಿಕಣಿವೆ ಇನ್ನಿತರ ದೊಡ್ಡ ಪ್ರಮಾಣದ ವಿಶೇಷ ಯೋಜನೆಗಳ ನಿರ್ಮಾಣ ಕಾರ್ಯದಲ್ಲಿ ತೊಡಗಿದರು.

ಈ ಕಾರ್ಯದ ಜೊತೆಗೆ ಮೈಸೂರು ನಗರದ ಅಭಿವೃದ್ಧಿಯ ವಿಶೇಷ ಕಾರ್ಯದ ಹೊಣೆಗಾರಿಕೆಯನ್ನೂ ನಾಯ್ಡು ಅವರಿಗೆ ವಹಿಸಲಾಯಿತು. ಮೈಸೂರು ನಗರದಲ್ಲಿನ ಬಹುತೇಕ ಸಾರ್ವಜನಿಕ ಕಟ್ಟಡಗಳು ಮತ್ತು ಮಾರುಕಟ್ಟೆಗಳ ನಿರ್ಮಾಣ ಕಾರ್ಯವೂ ಅವರ ಮೇಲುಸ್ತುವಾರಿಗೆ ಬಂದಿತು. ಜೊತೆಗೆ ಹೊಸ ಬಡಾವಣೆಗಳು, ಉದ್ಯಾನವನಗಳು ಹಾಗೂ ವಾಸ್ತುಶಿಲ್ಪ ವಿಶೇಷದ ದೊಡ್ಡ ಕಟ್ಟಡಗಳ ನಿರ್ಮಾಣ ಕಾರ್ಯವೂ ಇವರ ಪಾಲಿಗೆ ಬಂದಿತು. ಅವುಗಳ ಯೋಜನೆ, ವಿನ್ಯಾಸ ಮತ್ತು ನಿರ್ಮಾಣ ಮಾಡುವ ಜವಾಬ್ದಾರಿಯನ್ನು ಇವರು ಕೈಗೊಂಡರು.

ಈ ಅವಧಿಯಲ್ಲಿ ಅವರು ಕೈಗೊಂಡ ಮಹತ್ವದ ಕೆಲಸ ಒಂದೆಂದರೆ ಜಗನ್ಮೋಹನ ಅರಮನೆಯ ಮುಂಭಾಗ ಕಲ್ಯಾಣ ಮಂಟಪವನ್ನು ನಿರ್ಮಿಸಿದ್ದು. 1897ರಲ್ಲಿ ಹಳೆಯ ಅರಮನೆ ಸುಟ್ಟುಹೋಗಿ ಹೊಸ ಅರಮನೆಯನ್ನು ಕಟ್ಟುವ ಕೆಲಸ ಪ್ರಾರಂಭಿಸಿದ್ದರಿಂದ ಮಹಾರಾಜರು ಅವರ ಕುಟುಂಬ ಜಗನ್ಮೋಹನ ಅರಮನೆಯಲ್ಲಿ ವಾಸಿಸಬೇಕಾಯಿತು. 1900ರಲ್ಲಿ ಮದುವೆಗಳನ್ನು ಮಾಡಬೇಕಾಗಿ ಬಂದು ಅದಕ್ಕಾಗಿ ಒಂದು ಕಲ್ಯಾಣ ಮಂಟಪವನ್ನು ಅರಮನೆಯ ಮುಂದುಗಡೆ ಕಟ್ಟಲು ನಿರ್ಧರಿಸಲಾಯಿತು. ಕಲ್ಯಾಣ ಮಂಟಪದ ನಿರ್ಮಾಣದ ಜವಾಬ್ದಾರಿಯನ್ನು ನಾಯ್ಡು ಅವರಿಗೆ ವಹಿಸಲಾಯಿತು.

ಅವರು ಈ ಕಾರ್ಯವನ್ನು ಅತ್ಯಂತ ಶ್ರದ್ಧೆಯಿಂದ ಮಾಡಿ ಮಹಾರಾಜರ ಮೆಚ್ಚುಗೆ ಗಳಿಸಿದರು. ರಾಜಯೋಗ್ಯವಾದ ಕಲಾತ್ಮಕ ಕಲ್ಯಾಣ ಮಂಟಪ ಸಿದ್ಧವಾಗಿ ಅದೇ ವರ್ಷ ಮದುವೆ ಸಮಾರಂಭಗಳಿಗೆ ಸಜ್ಜುಗೊಂಡಿತು. ಆ ವರ್ಷದ ಜೂನ್ ತಿಂಗಳಲ್ಲಿ ಕಾಥೇವಾಡದ ರಾಜಕುಮಾರಿ ಪ್ರತಾಪಕುಮಾರಿ ಅವರೊಂದಿಗೆ ನಾಲ್ವಡಿಯವರ ಮದುವೆ ಈ ಹೊಸ ಮಂಟಪದಲ್ಲಿ ಅದ್ದೂರಿಯಾಗಿ ಜರುಗಿತು. ಅವರ ಮದುವೆಗೆ ಎರಡು ದಿನ ಮುಂಚೆ ಮಹಾರಾಜರ ಸೋದರಿ, ಮೂರನೇ ರಾಜಕುಮಾರಿ ಚಲುವಾಜಮ್ಮಣ್ಣಿಯವರ ವಿವಾಹ, ಅದರ ನಂತರ ಮಹಾರಾಜರ ಸಹೋದರ ಯುವರಾಜ ಕಂಠೀರವ ನರಸಿಂಹರಾಜ ಒಡೆಯರ ವಿವಾಹಗಳು ಈ ಕಲ್ಯಾಣ ಮಂಟಪದಲ್ಲಿ ಜರುಗಿದವು. ಅಲ್ಲದೆ 1902ರಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ ಪಟ್ಟಾಭಿಷೇಕ, ದಸರ ಹಬ್ಬದ ಆಚರಣೆ, ವರ್ಧಂತಿ, ಇನ್ನಿತರ ಸಮಾರಂಭಗಳಿಗೆ ನಾಯ್ಡು ಅವರು ಕಟ್ಟಿದ ಕಲ್ಯಾಣ ಮಂಟಪ ಕೇಂದ್ರಸ್ಥಾನವಾಗಿತ್ತು ಮಹಾರಾಜರು ರಾಘವಲು ನಾಯ್ಡು ಅವರ ಕಾರ್ಯ ಸಾಧನೆಯನ್ನು ಮೆಚ್ಚಿ ತಮ್ಮ ದರ್ಬಾರಿನಲ್ಲಿ ನಗರದ ಗಣ್ಯರ ಮುಂದೆ ಅವರಿಗೆ ಚಿನ್ನದ ಗಡಿಯಾರವನ್ನು ಬಹುಮಾನವನ್ನಾಗಿ ನೀಡಿದರು. ಮೈಸೂರು ಸರ್ಕಾರ ಅವರಿಗೆ ಒಂದು ತಿಂಗಳ ವಿಶೇಷ ಬೋನಸ್ ನೀಡಿತು.

1902ರ ಆಗಸ್ಟ್ 8ರಂದು ಭಾರತದ ವೈಸ್‌ರಾಯ್ ಮತ್ತು ಗೌರ್ನರ್ ಜನರಲ್ ಲಾರ್ಡ್ ಕರ್ಜನ್ ನಾಲ್ವಡಿ ಕೃಷ್ಣರಾಜ ಒಡೆಯರ ಪಟ್ಟಾಭಿಷೇಕಕ್ಕೆ ಬಂದಾಗ ಅವರ ಸತ್ಕಾರ ಸಮಾರಂಭಕ್ಕಾಗಿ ಬೇಕಾದ ನಿರ್ಮಾಣ ಕಾರ್ಯಗಳ ಜವಾಬ್ದಾರಿಯನ್ನು ನಾಯ್ಡು ಅವರಿಗೆ ವಹಿಸಲಾಗಿತ್ತು. ಅವರು ಈ ಕಾರ್ಯವನ್ನು ಎಷ್ಟು ಉತ್ತಮವಾಗಿ ಮಾಡಿದರೆಂದರೆ ಅದು ಮಹಾರಾಜರ ಮೆಚ್ಚುಗೆ ಗಳಿಸಿತು. ಅವರ ಕಾರ್ಯಸಾಧನೆಯನ್ನು ಪರಿಗಣಿಸಿ ಮಹಾರಾಜ ನಾಲ್ವಡಿ ಕೃಷ್ಣರಾಜರು ನಾಯ್ಡು ಅವರ ವೈಯಕ್ತಿಕ ಭತ್ಯೆಯ ಗಣನೀಯ ಏರಿಕೆ ಮಾಡಿದರು. ಅಷ್ಟೇ ಅಲ್ಲದೆ ಸುಂದರವಾದ ವಜ್ರದ ಉಂಗುರವನ್ನು ನಾಯ್ಡು ಅವರಿಗೆ ದರ್ಬಾರಿನಲ್ಲಿ ನೀಡಿದರು.

ಇದರ ನಂತರ ಅವರನ್ನು ಹೊಸದಾಗಿ ನಿರ್ಮಿಸಲು ಉದ್ದೇಶಿಸಲಾಗಿದ್ದ ಅರಮನೆಯ ನಿರ್ಮಾಣ ಕಾರ್ಯಕ್ಕೆ ನೇಮಿಸಲಾಯಿತು. ಮುಂದಿನ ಭಾಗವೆಲ್ಲಾ ಸುಟ್ಟು ಹೋಗಿದ್ದ ಹಳೆಯ ಅರಮನೆಯ ಅವಶೇಷಗಳನ್ನು ಕೆಡವಿ ಆ ಜಾಗದಲ್ಲಿ ಹೊಸದಾಗಿ ಅರಮನೆಯನ್ನು ಕಟ್ಟುವ ಜವಾಬ್ದಾರಿಯನ್ನು ಅವರಿಗೆ ವಹಿಸಲಾಯಿತು.

ಈ ಕಾರ್ಯದಲ್ಲಿಯೂ ನಾಯ್ಡು ಅವರು ಮಹತ್ವದ ಸಾಧನೆ ಮಾಡಿ, ಮನ್ನಣೆ ಪಡೆದರು. ಜವಾಬ್ದಾರಿ ವಹಿಸಿಕೊಂಡ ಮೊದಲಿಗೆ ಅವರು ಹೊಸ ಅರಮನೆಯ ನಿರ್ಮಾಣಕ್ಕಾಗಿ ತಯಾರಿಸಲಾಗಿದ್ದ ನಕ್ಷೆಗಳ ಅಭ್ಯಾಸ ಮಾಡಿದರು. ಹೊಸ ಅರಮನೆ ಕಟ್ಟುವ ಕೆಲಸ ಅಕ್ಟೋಬರ್, 1897ರಲ್ಲಿ ಪ್ರಾರಂಭವಾಗಿ 1901, 1902 ಮತ್ತು 1903ರಲ್ಲಿ ಮುಂದುವರಿಯುತ್ತಿದ್ದಾಗ ಅಗತ್ಯ ಪರಿಣತಿ ಪಡೆದುಕೊಂಡು ಬರಲು ಹಾಗೂ ತಯಾರಿಸಲಾಗಿದ್ದ ವಿನ್ಯಾಸಗಳನ್ನು ಇನ್ನಷ್ಟು ಉತ್ತಮಪಡಿಸಲು ನಾಯ್ಡು ಅವರು ಉತ್ತರ ಭಾರತದ ಪ್ರಮುಖ ನಗರಗಳಿಗೆ ಭೇಟಿ ನೀಡಿದರು. ಕಲ್ಕತ್ತಾ, ದೆಹಲಿ, ಆಗ್ರಾ ಮತ್ತಿತರ ನಗರಗಳಿಗೆ ಭೇಟಿ ಕೊಟ್ಟು ಅಲ್ಲಿನ ಪ್ರಮುಖ ಕಟ್ಟಡಗಳು, ಅವುಗಳ ವಿನ್ಯಾಸಗಳನ್ನು ಅಭ್ಯಾಸ ಮಾಡಿದರು. ಈ ಕಾರ್ಯಕ್ಕಾಗಿ ಅವರು ಪ್ರತಿಯೊಂದು ಸ್ಥಳದಲ್ಲಿಯೂ ಸುಮಾರು ಒಂದು ತಿಂಗಳ ಕಾಲ ತಂಗಿದ್ದರು.

ಉತ್ತರಭಾರತದಿಂದ ಹಿಂತಿರುಗಿದ ಮೇಲೆ ಅವರು ಹೊಸ ಅರಮನೆಯ ನಿರ್ಮಾಣಕ್ಕಾಗಿ ತಯಾರಾಗಿದ್ದ ವಿನ್ಯಾಸಗಳಲ್ಲಿ ಸೂಕ್ತ ಮಾರ್ಪಾಡುಗಳನ್ನು ಮಾಡಿದರು. ಅದರಂತೆ ಹೊಸ ಅರಮನೆಯನ್ನು ಕಟ್ಟುವ ಕಾರ್ಯದ ಪೂರ್ಣ ಜವಾಬ್ದಾರಿ ವಹಿಸಿಕೊಂಡರು.

1903 ಆಗಸ್ಟ್ ತಿಂಗಳ 'ಟೈಂಸ್ ಆಫ್ ಇಂಡಿಯಾ' ಪತ್ರಿಕೆ 'ಮೈಸೂರಿನ ಹೊಸ ಅರಮನೆ – ಭಾರತೀಯ ಕಲೆಯ ದಿಗ್ವಿಜಯ' ಎಂಬ ತಲೆಬರಹದ ಲೇಖನದಲ್ಲಿ ರಾಘವಲು ನಾಯ್ಡು ಅವರ ಕಾರ್ಯದ ಬಗ್ಗೆ ಪ್ರಸ್ತಾಪ ಮಾಡುತ್ತಾ ಹೀಗೆ ಬರೆದಿದೆ: "ಕೆಲಸಗಳ ಜವಾಬ್ದಾರಿಯನ್ನು ಎಗ್ಸಿಕ್ಯುಟಿವ್ ಇಂಜಿನಿಯರ್ ಆದ ರಾಘವಲು ನಾಯ್ಡುಗೆ ವಹಿಸಿದ್ದಾರೆ ಮತ್ತು ಸಿ. ಐ. ಇ. ಎಚ್. ಇರ್ವಿನ್ ಅವರು ರಚಿಸಿರುವ ಅರಮನೆ ನಕ್ಷೆಗಳಿಗೆ ಅಲಂಕೃತ ಕೆತ್ತನೆಗಳನ್ನು ಸೇರಿಸಿರುವ ಕಾರ್ಯದ ಸಂಪೂರ್ಣ ಕೀರ್ತಿ ಅವರದಾಗಿದೆ. ಈ ಕೆಲಸವನ್ನು ನಾಯ್ಡು ಅವರು ಎಚ್ಚರಿಕೆಯಿಂದ ನೋಡಿಕೊಂಡಿದ್ದಾರಷ್ಟೇ ಅಲ್ಲ, ಇವುಗಳ ಕೆತ್ತನೆ ಮಾಡುವವರಿಗೆ ಬೇಕಾದ ಮಾದರಿಗಳನ್ನು ಯೋಚಿಸಿ, ತಯಾರು ಮಾಡಿಕೊಟ್ಟಿದ್ದಾರೆ. ತಮ್ಮ ಮಹತ್ವದ ಈ ಕಾರ್ಯದಲ್ಲಿ ಅತೀ ಸೂಕ್ಷ್ಮವಾದ ಕಲೆಗಾರಿಕೆ ಹೊರಬಂದು ಮನಸ್ಸಿನಲ್ಲಿ ಮೂಡಿದ ಕಲಾತ್ಮಕ ಸೃಷ್ಟಿ ಗರಿಷ್ಟ ಪ್ರಮಾಣದಲ್ಲಿ ಹೊರಹೊಮ್ಮುವಂತೆ ಮಾಡಿದ್ದಾರೆ," ಎಂದು ಅವರ ಕಾರ್ಯವನ್ನು ಪ್ರಶಂಸಿಸಿ ಕೆಲವು ಮರದ ಮತ್ತು ಶಿಲ್ಪದ ಕೆತ್ತನೆಗಳನ್ನು ಉದಾಹರಿಸಿದೆ.

1904ರಲ್ಲಿ ಬೊಂಬಾಯಿಯಲ್ಲಿ ಜರುಗಿದ ಭಾರತೀಯ ಕಾಂಗ್ರೆಸ್ ವಸ್ತುಪ್ರದರ್ಶನದಲ್ಲಿ ಮೈಸೂರು ಅರಮನೆ ವತಿಯಿಂದ ಪ್ರದರ್ಶಿಸಿದ್ದ ವಸ್ತುಗಳಿಗೆ ಚಿನ್ನದ ಪದಕ ಇವರಿಗೆ ಲಭ್ಯವಾಯಿತು 1908ರ ಫ್ರಾನ್ಕೋ–ಬ್ರಿಟಿಷ್ ವಸ್ತುಪ್ರದರ್ಶನದಲ್ಲಿ ವಸ್ತುಗಳ ಪ್ರದರ್ಶನಕ್ಕಾಗಿ ನಾಯ್ಡು ಅವರು ರಚಿಸಿದ್ದ ಪ್ರದರ್ಶಿಕೆ 'ಡಿಪ್ಲೊಮಾ ಆಫ್ ಆನರ್' ಗೌರವ ಗಳಿಸಿತು. ಅಲ್ಲದೆ, ಮದ್ರಾಸ್ ಕಲಾಕೌಶಲ್ಯ ಮೇಳದಲ್ಲಿ ಮೈಸೂರು ಅರಮನೆ ವಿಭಾಗದಿಂದ ಪ್ರದರ್ಶಿಸಲಾದ ವಸ್ತುಗಳಿಗೆ ಬೆಳ್ಳಿಯ ಪದಕವೂ ಇವರ ಪಾಲಾಯಿತು. ಸುಮಾರು 12 ವರ್ಷಗಳ ಗಣನೀಯ ಸೇವೆಯ ನಂತರ ರಾಘವಲು ನಾಯ್ಡು ಅವರು 1909ರಲ್ಲಿ ನಿವೃತ್ತರಾದರು.

ಇರ್ವಿನ್ ನಕ್ಷೆಗಳನ್ನು ರಚಿಸಿಕೊಟ್ಟರೂ ಅದರಲ್ಲಿ ಅಗತ್ಯ ಮಾರ್ಪಾಡುಗಳನ್ನು ಮಾಡಿಕೊಂಡು ವೈಭವದ ಅರಮನೆಯನ್ನು ನಿರ್ಮಿಸಿ ಕೊಡುವ ಮಹತ್ವದ ಕಾರ್ಯ ಮಾಡಿದ್ದಾರೆ ರಾಘವಲು ನಾಯ್ಡು ಮತ್ತಿತರ ಮೈಸೂರಿನ ಇಂಜಿನಿಯರುಗಳು. ಇವರ ಕಾರ್ಯ ಈಗಲೂ ಮುಕ್ತಕಂಠದ ಶ್ಲಾಘನೆಗೆ ಕಾರಣವಾಗಿದೆ.

ಬಾಲರಾಮನ ಶಿಲ್ಪಿ ಅರುಣ್ ಯೋಗಿರಾಜ್‌ಗೆ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅದ್ದೂರಿ ಸ್ವಾಗತ



ಮೈಸೂರು, ಜ.24(ಎಂಕೆ)– ಅಯೋಧ್ಯೆ ಶ್ರೀರಾಮ ಮಂದಿರದಲ್ಲಿ ಪ್ರತಿಷ್ಠಾಪನೆಗೊಂಡ 'ಬಾಲರಾಮ' ವಿಗ್ರಹ ರೂಪಿಸುವ ಮೂಲಕ ದೇಶದಾದ್ಯಂತ ಮನೆ ಮಾತಾಗಿರುವ ಮೈಸೂರಿನ ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್ ಅವರನ್ನು ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬುಧವಾರ ಅದ್ದೂರಿಯಾಗಿ ಸ್ವಾಗತಿಸಲಾಯಿತು.

ಕಳೆದ 6 ತಿಂಗಳಿಂದ ಕುಟುಂಬದವರಿಂದ ದೂರವಿದ್ದ ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್ ಅಯೋಧ್ಯೆಯಿಂದ ಬೆಂಗಳೂರಿನ ಏರ್‌ಪೋರ್ಟ್‌ಗೆ ಆಗಮಿಸುತ್ತಿದ್ದಂತೆ ನೂರಾರು ಮಂದಿ ರಾಮಭಕ್ತರು ಭವ್ಯ ಸ್ವಾಗತ ಕೋರಿದರು. ಏರ್‌ಪೋರ್ಟ್‌ನಲ್ಲಿಯೇ ಜೈ ಶ್ರೀರಾಮ್ ಘೋಷಣೆ ಮೊಳಗಿಸಿದರು. ಇದನ್ನು ಕಂಡ ಶಿಲ್ಪಿ ಯೋಗಿರಾಜ್ ಭಾವುಕರಾದರಲ್ಲದೆ ತಮ್ಮ ಮಗಳನ್ನು ಎತ್ತಿಕೊಂಡು ಮುದ್ದಾಡಿದರು. ಇದೇ ವೇಳೆ ಸುಂದರ 'ಬಾಲರಾಮ' ವಿಗ್ರಹ ಕೆತ್ತಿ ಕೋಟ್ಯಾಂತರ ಭಕ್ತರ ಮನಗೆದ್ದ ಶಿಲ್ಪಿಗೆ, ಶಾಲು ಹೊದಿಸಿ, ಪೇಟ ತೊಡಿಸಿ, ಹಾರ ಹಾಕಿ ಬರಮಾಡಿಕೊಳ್ಳಲಾಯಿತು. ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅರುಣ್ ಯೋಗಿರಾಜ್, ಜನರ ಪ್ರೀತಿ ನೋಡುತ್ತಿದ್ದರೆ ನಾನು ಮಾಡಿದ ಕೆಲಸ ಸಾರ್ಥಕವಾಯಿತು ಅನಿಸುತ್ತಿದೆ. ಕಲೆಗೆ ಅಪಾರ ಗೌರವವಿದೆ. ಭಾರತೀಯರಿಗೆ ರಾಮಮಂದಿರ ನಿರ್ಮಾಣವಾದದ್ದು ಎಷ್ಟು ಸಂತೋಷ ತಂದಿದೆ ಎಂಬುದನ್ನು ಹೇಳಲಾಗದು. ಹೆಚ್.ಡಿ. ಕೋಟೆ ತಾಲೂಕಿನ ರೈತರ ಜಮೀನಿನಲ್ಲಿ ಇದ್ದ ಶಿಲೆ ಇಂದು ಮೂರ್ತಿಯಾಗಿ ರೂಪುಗೊಂಡಿದ್ದು, ಪ್ರತಿಯೊಬ್ಬರು ಕಣ್ತುಂಬಿಕೊಳ್ಳಬೇಕು ಎಂಬ ಇಚ್ಛೆ ನನ್ನದು ಎಂದು ತಿಳಿಸಿದರು.

ಇಂದು ಮೈಸೂರಿಗೆ ಆಗಮನ: ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್ ನಾಳೆ(ಜ.25) ಮೈಸೂರಿಗೆ ಆಗಮಿಸಲಿದ್ದಾರೆ ಎನ್ನಲಾಗಿದೆ. ಬುಧವಾರ ಕುಟುಂಬಸ್ಥರೊಡನೆ ವಿಶ್ರಾಂತಿ ಪಡೆದು ಬೆಂಗಳೂರಿನಲ್ಲೇ ಕೆಲ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ನಂತರ ಮೈಸೂರಿಗೆ ಆಗಮಿಸುವ ಸಾಧ್ಯತೆ ಎನ್ನಲಾಗಿದೆ.

ಮಾಸಾಂತ್ಯದಲ್ಲಿ ಜಾತಿ ಜನಗಣತಿ ವರದಿ ಸರ್ಕಾರಕ್ಕೆ ಕೊಡುತ್ತೇವೆ

ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ಮಾಹಿತಿ

ಬೆಂಗಳೂರು: ಈ ತಿಂಗಳ ಅಂತ್ಯದೊಳಗೆ ಜಾತಿ ಜನಗಣತಿ ವರದಿ ಸರ್ಕಾರಕ್ಕೆ ಸಲ್ಲಿಸುವುದಾಗಿ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ನಮ್ಮ ಅವಧಿ ಮುಗಿಯುವುದರ ಒಳಗಾಗಿ ವರದಿ ನೀಡುತ್ತೇವೆ. ಸರ್ಕಾರ ಯಾವಾಗ ತೆಗೆದುಕೊಳ್ಳುತ್ತದೋ ಆಗ ಕೊಡುತ್ತೇವೆ. ವರದಿ ಫೈನಲ್ ಆಗಿದೆ ಎಂದರು. ಸರ್ಕಾರ ಮತ್ತು ನಮ್ಮ ಮಧ್ಯೆ ಚರ್ಚೆ ಆಗಿದ್ದನ್ನು ಬಹಿರಂಗಪಡಿಸಲು ಸಾಧ್ಯವಿಲ್ಲ. ಅವಧಿ ಮುಗಿಯುವುದರ ಒಳಗೆ ನಾವು ಸಲ್ಲಿಕೆ ಮಾಡುತ್ತೇವೆ. ಡೇಟಾ ವಿಶ್ಲೇಷಣೆ ಮಾಡಿ ವರದಿ ಸಿದ್ಧಪಡಿಸಬೇಕಿತ್ತು. ಅದಕ್ಕಾಗಿ ಸಮಯಾವಕಾಶ ಪಡೆದುಕೊಂಡೆವು. ವರದಿ ಮುಗಿಯುತ್ತಾ ಬಂದಿದೆ ಎಂದರು. ಇದು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಸಮೀಕ್ಷೆ ವರದಿ ಆಗಿರುತ್ತದೆ. ಕಾಂತರಾಜು ವರದಿಯೂ ಅಲ್ಲ, ಹೆಗ್ಡೆ ವರದಿಯೂ ಅಲ್ಲ. ಇಲ್ಲಿ ವ್ಯಕ್ತಿ ಮುಖ್ಯ ಅಲ್ಲ, ದತ್ತಾಂಶಗಳ ವರದಿ ಇದು. ಹಿಂದುಳಿದ ವರ್ಗಗಳ ವರದಿ. ವರದಿ ಕೊಡುವುದು ಮಾತ್ರ ನಮ್ಮ ಕೆಲಸ. ಸಮುದಾಯಗಳ ಬೇಡಿಕೆ ಈಡೇರಿಸುವುದು ಸರ್ಕಾರದ ಕೆಲಸ, ನಮ್ಮದಲ್ಲ. ಸಿಎಂ ಬಳಿ ಸಮಯ ಕೇಳಿದ್ದೇವೆ. ಬಜೆಟ್ ಸಿದ್ಧತೆಯಲ್ಲಿ ಅವರು ಬ್ಯುಸಿ ಇದ್ದಾರೆ. ವರದಿ ಕೊಡುವ ಮೊದಲೇ, ಡೇಟಾ ಕೊಡುವ ಮೊದಲೇ ಚರ್ಚೆಗಳು ನಡೆಯುತ್ತಿವೆ ಎಂದರು.

ಮುಡಾದಲ್ಲಿ ನಡೆದಿರುವ ಹಗರಣದ ತನಿಖೆ ಸಿಬಿಐಗೆ ಒಪ್ಪಿಸಿ

ಮಾಜಿ ಶಾಸಕ ಎಲ್.ನಾಗೇಂದ್ರ ಸವಾಲು



ಮೈಸೂರು,ಜ.24(ಎಂಕೆ)–ಮುಡಾದಲ್ಲಿ ನಡೆದಿರುವ ಹಗರಣದ ತನಿಖೆ ಸಿಬಿಐಗೆ ಒಪ್ಪಿಸಿ. ಆರೋಪ ಸಾಬೀತಾದರೆ ರಾಜಕೀಯ ನಿವೃತ್ತಿ ಘೋಷಣೆ ಮಾಡುತ್ತೇನೆ ಎಂದು ಮಾಜಿ ಶಾಸಕರೂ ಆದ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಸವಾಲೆಸೆದಿದ್ದಾರೆ.

ಖಾಸಗಿ ವಾಹಿನಿಯೊಂದರ ಸಂದರ್ಶನದಲ್ಲಿ ಮಾತನಾಡಿರುವ ಅವರು, ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡ, ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದಲ್ಲಿ ಬಹುಕೋಟಿ ಹಗರಣವಾಗಿದೆ ಎಂದು ಆರೋಪ ಮಾಡಿದ್ದಾರೆ. ಇದು ಯಾವ ಹಗರಣವೆಂಬುದೇ ನನಗೆ ಗೊತ್ತಿಲ್ಲ. ಹಗರಣ ನಡೆದಿದೆ ಎಂಬ ವಿಚಾರ ತೆಗೆದು ಆರೋಪ ಮಾಡಿದ್ದಾರೆ. ಅವರ ಆರೋಪ ಸಾಬೀತಾದರೆ ರಾಜಕೀಯ ನಿವೃತ್ತಿ ಘೋಷಣೆ ಮಾಡುತ್ತೇನೆ ಎಂದು ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ.

ನಾನು ಶಾಸಕನಾಗಿದ್ದ ಅವಧಿಯಲ್ಲಿ ಕಾಂಗ್ರೆಸ್‌ನ ಶಾಸಕರಾದ ತನ್ವೀರ್ ಸೇಠ್ ಇದ್ದರು. ವಿಧಾನಪರಿಷತ್ ಸದಸ್ಯ ಮರೀತಿಬ್ಬೇಗೌಡರು ಇದ್ದರು. ಅವರ ಗಮನಕ್ಕಿಲ್ಲದೆ ಹಗರಣ ನಡೆದಿದೆಯೇ. ಕೋರ್ಟ್‌ನಲ್ಲಿರುವ ವಿಚಾರವನ್ನು ತೆಗೆದು ಆರೋಪ ಮಾಡುತ್ತಿದ್ದಾರೆ ಎಂದರೆ ಅವರ ತಿಳುವಳಿಕೆಯ ಮಟ್ಟವೆಷ್ಟು? ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 8 ತಿಂಗಳಾಗಿದೆ. ಅಷ್ಟು ದಿನಗಳಿಂದ ಸುಮ್ಮನಿದ್ದು, ಈಗ ಆರೋಪ ಮಾಡುತ್ತಿರುವುದಾದರೂ ಏಕೆ? ಆರೋಪ ಮಾಡುವವರು ಸಿಬಿಐ ತನಿಖೆಯನ್ನಾದರೂ ಮಾಡಿಸಲಿ, ಎಸ್‌ಐಟಿ ತನಿಖೆಯನ್ನಾದರೂ ಮಾಡಿಸಲಿ ಎಂದಿದ್ದಾರೆ.

ಮಾಡಿರುವ ಆರೋಪ ಸತ್ಯವಾಗದಿದ್ದರೆ, ನಿಮ್ಮ ಬಗ್ಗೆ ಸಾರ್ವಜನಿಕರು ಬೇರೆ ರೀತಿಯೇ ಮಾತನಾಡಲಿದ್ದಾರೆ. ಜಿಲ್ಲಾಧಿಕಾರಿಗಳು ಇಷ್ಟು ದಿನ ಏನು ಮಾಡುತ್ತಿದ್ದರು. ಸರ್ಕಾರ ಏನು ಮಾಡುತ್ತಿದೆ. ಮುಖ್ಯಮಂತ್ರಿಗಳು ಏನೂ ಮಾಡುತ್ತಿದ್ದಾರೆ. ಇದೆಲ್ಲವನ್ನೂ ನೋಡಿದರೆ ಅವರ ಮೇಲೆಯೇ ಅನುಮಾನ ಮೂಡಿದೆ. ಏನೋ ಗೋಲ್‌ಮಾಲ್ ಮಾಡುತ್ತಿರುವಂತಿದೆ ಎಂದಿದ್ದಾರೆ. ನಾನು ಕೂಡ ಮುಡಾ ಅಧ್ಯಕ್ಷನಾಗಿ, ಒಂದೇ ಒಂದು ಆರೋಪವಿಲ್ಲದೆ ಆಡಳಿತ ಮಾಡಿದ್ದೇನೆ. ನನ್ನಿಂದ ಹಗರಣವಾಗಿದ್ದರೆ ಕ್ರಮ ತೆಗೆದುಕೊಳ್ಳಿ, ನಿಮ್ಮ ಆರೋಪಕ್ಕೂ ಒಳ್ಳೆಯದಾಗಲೀ. ನಿಮಗೆ(ಕೆ.ಹರೀಶ್‌ಗೌಡ) ತಾಕತ್ತಿದ್ದರೆ ಸಿಬಿಐಗೆ ಕೊಡಿ ಎಂದು ಸವಾಲು ಹಾಕಿದ್ದಾರೆ.

ಸಾಲಬಾಧೆ: ಯುವಕ ನೇಣಿಗೆ ಶರಣು

ಮೈಸೂರು, ಜ.24(ಎಸ್‌ಪಿಎನ್)–ತಂಗಿ ಮದುವೆಗಾಗಿ ಪಡೆದಿದ್ದ ಸಾಲ ತೀರಿಸಲಾಗದೆ ಯುವಕನೊಬ್ಬ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಮೈಸೂರಿನ ವಿದ್ಯಾರಣ್ಯಪುರಂ ಠಾಣಾ ವ್ಯಾಪ್ತಿಯಲ್ಲಿ ಮಂಗಳವಾರ ನಡೆದಿದೆ.

ಮಹದೇವಪುರ ನಿವಾಸಿ ಗೋವಿಂದರಾಜ್ ಅವರ ಪುತ್ರ ದರ್ಶನ್(24) ಮೃತ ಯುವಕ. ಈತ ಜೀವನೋಪಾಯಕ್ಕಾಗಿ ಕ್ಯಾಟರಿಂಗ್ ನಡೆಸುತ್ತಿದ್ದ. ಆದರೆ, ತಂಗಿ ಮದುವೆಗೆ ಮಾಡಿದ ಸಾಲ ತೀರಿಸಲಾಗದೆ ಆತ್ಮಹತ್ಯೆ ನಿರ್ಧಾರಕ್ಕೆ ಬಂದಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ವಿದ್ಯಾರಣ್ಯಪುರಂ ಠಾಣೆಯಲ್ಲಿ ದೂರು ದಾಖಲಾಗಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Vishveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ವಿದ್ವಾನ್ ಸತ್ಯನಾರಾಯಣ ರಾಜು ಅವರಿಂದ ಶ್ರೀ ರಾಮಕಥಾ ಪ್ರಸ್ತುತಿ

■ ನೃತ್ಯಾಲಯದಿಂದ 'ನಲಿವಿನ ಪಯಣ–45'
■ ಮೈಸೂರಿನಲ್ಲಿ ಇಂದು ಹರಿದಾಸ ಸಾಹಿತ್ಯ, ಸಂಗೀತ ನೃತ್ಯ ಸಂಭ್ರಮ ■ ವಿದುಷಿ ಡಾ. ತುಳಸೀ ರಾಮಚಂದ್ರ ನೇತೃತ್ವ


ಡಾ.ತುಳಸಿ ರಾಮಚಂದ್ರ


ಸತ್ಯನಾರಾಯಣ ರಾಜು

ಮೈಸೂರು, ಜ.24–ಸಾಂಸ್ಕೃತಿಕ ರಾಜಧಾನಿ ಮೈಸೂರಿನಲ್ಲಿ ಭರತನಾಟ್ಯ ಕ್ಷೇತ್ರದಲ್ಲಿ ನಾಲ್ಕು ದಶಕಗಳಿಂದ ಪ್ರಸಿದ್ಧವಾಗಿರುವ ನೃತ್ಯಾಲಯ ಟ್ರಸ್ಟ್ ಪ್ರದರ್ಶಕ ಕಲೆಗಳ ಅಕಾಡೆಮಿಯು 'ನಲಿವಿನ ಪಯಣ–45' ಹರಿದಾಸ ಸಾಹಿತ್ಯ, ಸಂಗೀತ ನೃತ್ಯ ಸಂಭ್ರಮ ಕಾರ್ಯಕ್ರಮವನ್ನು ಜ.25ರಂದು ಹಮ್ಮಿಕೊಂಡಿದೆ. ಮೈಸೂರಿನ ನಾದಬ್ರಹ್ಮ ಸಭಾ ಭವನದಲ್ಲಿ ಜ.25ರ ಸಂಜೆ 5ಕ್ಕೆ ನೃತ್ಯಾಲಯ ತಂಡದಿಂದ ಹರಿಭಜನೆ, 5.30ಕ್ಕೆ ಹಿರಿಯ ವಿದ್ಯಾರ್ಥಿಗಳಿಂದ ಮುಖಚಾಲಿ ನೃತ್ಯ, 5.30ಕ್ಕೆ ಸಭಾ ಕಾರ್ಯಕ್ರಮವಿದೆ. ಗಂಗೂಬಾಯಿ ಹಾನಗಲ್ ಸಂಗೀತ ವಿವಿ ಕುಲಪತಿ ಪ್ರೊ.ನಾಗೇಶ ಬೆಟ್ಟಕೋಟೆ, ಖ್ಯಾತ ಭರತನಾಟ್ಯ ಕಲಾವಿದ ಬೆಂಗಳೂರಿನ ವಿದ್ವಾನ್ ಸತ್ಯನಾರಾಯಣ ರಾಜು, ಖ್ಯಾತ ವೈದ್ಯೆ ಡಾ.ಪ್ರತಿಭಾ ಪರೇರಾ ಅವರನ್ನು ಸನ್ಮಾನಿಸಲಾಗುವುದು. ಖ್ಯಾತ ಕಲಾವಿದೆ ಮತ್ತು ನೃತ್ಯಾಲಯ ಟ್ರಸ್ಟ್ ಮುಖ್ಯಸ್ಥೆ ಡಾ. ತುಳಸೀ ರಾಮಚಂದ್ರ ಅಧ್ಯಕ್ಷತೆ ವಹಿಸಲಿದ್ದಾರೆ. ಸಂಜೆ 6.50ರಿಂದ ಸಂಸ್ಥೆಯ ವಿದ್ಯಾರ್ಥಿನಿಯರಿಂದ 'ನರ್ತನ ನಿನಾದ' ಪ್ರಸ್ತುತಿ ಇದೆ. 'ಶ್ರೀ ರಾಮಕಥಾ ಪ್ರಸ್ತುತಿ' ಸಂಜೆ 7.30ಕ್ಕೆ ಬೆಂಗಳೂರಿನ ವಿದ್ವಾನ್ ಸತ್ಯನಾರಾಯಣ ರಾಜು ಅವರಿಂದ 'ಶ್ರೀ ರಾಮಕಥಾ–ವಿಷಯಾಧಾರಿತ ಏಕವ್ಯಕ್ತಿ ಭರತನಾಟ್ಯ ಪ್ರದರ್ಶನವಿದೆ. ಡಾ.ಆರ್. ಕೆ.ಉಷಾ ಪರಿಕಲ್ಪನೆಯಲ್ಲಿ, ವಿದ್ವಾನ್ ಡಿ.ಎಸ್. ಶ್ರೀವತ್ಸ ಸಂಗೀತ ಸಂಯೋಜನೆ ಮತ್ತು ನಟುವಾಂಗ ಸಹಕಾರದಲ್ಲಿ 'ಶ್ರೀ ರಾಮ ಕಥಾ' ಮೂಡಿಬರಲಿರುವುದು ವಿಶೇಷ. ಆಸಕ್ತರು ಆಗಮಿಸಲು ನೃತ್ಯಾಲಯ ಟ್ರಸ್ಟ್ ಕೋರಿದೆ.

ತಮಿಳುನಾಡಿಗೆ ಕಾವೇರಿ ನೀರು: 79ನೇ ದಿನಕ್ಕೆ ಕಾಲಿಟ್ಟ ಕಾವೇರಿ ಕ್ರಿಯಾ ಸಮಿತಿ ಧರಣಿ



ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವುದನ್ನು ಖಂಡಿಸಿ ಮೈಸೂರಿನ ಪುರಭವನದ ಮುಂಭಾಗ ಕಾವೇರಿ ಕ್ರಿಯಾ ಸಮಿತಿ ನಡೆಸುತ್ತಿರುವ ಧರಣಿ ಬುಧವಾರ 79ನೇ ದಿನ ಪೂರೈಸಿತು. ಈ ವೇಳೆ ಸಮಿತಿ ಅಧ್ಯಕ್ಷ ಜಯಪ್ರಕಾಶ್, ಹಿರಿಯ ಕನ್ನಡ ಹೋರಾಟಗಾರ ಸ.ರ.ಸುದರ್ಶನ್, ಕದಂಬ ಸೈನ್ಯದ ಸಹ ಕಾರ್ಯದರ್ಶಿ ಕುಮಾರ್ ಬಸಪ್ಪ, ಪ್ರಧಾನ ಸಂಚಾಲಕರಾದ ಮೂಗೂರು ನಂಜುಂಡಸ್ವಾಮಿ, ಮೆಲ್ಲಹಳ್ಳಿ ಮಹದೇವಸ್ವಾಮಿ, ಉಪಾಧ್ಯಕ್ಷ ಎಂ.ಜೆ.ಸುರೇಶ್‌ಗೌಡ, ಬೋಗಾದಿ ಸಿದ್ದೇಗೌಡ, ಸಿಂಧುವಳ್ಳಿ ಶಿವಕುಮಾರ್, ಗಾಣಿಗನಕೊಪ್ಪಲು ನಾಗರಾಜು, ತೇಜಸ್ ಲೋಕೇಶ್‌ಗೌಡ, ಕೆ.ಮಂಜುಳಾ, ಬಿಳಿಕೆರೆ ಭಾಗ್ಯಮ್ಮ, ಭೈರಪ್ಪ, ಆಟೋ ಮಹಾದೇವ, ಪೈಲ್ವಾನ್ ಬಾಲಾಜಿ, ಪೈಲ್ವಾನ್ ಬಲರಾಮ್, ವಿಷ್ಣು, ಮಹಾದೇವಸ್ವಾಮಿ, ಶಿವಲಿಂಗಯ್ಯ ಇನ್ನಿತರರಿದ್ದರು.

ಸಹಕಾರ ಕ್ಷೇತ್ರ ಕುರಿತ ಚರ್ಚಾ ಸ್ಪರ್ಧೆಯ ಬಹುಮಾನ ವಿತರಣೆ

ಸರ್ಕಾರದ ಹಸ್ತಕ್ಷೇಪದಿಂದ ಸಹಕಾರ ಕ್ಷೇತ್ರದ ಬೆಳವಣಿಗೆ ಕುಂಠಿತ

ಶಾಸಕರೂ ಆದ ರಾಜ್ಯ ಸಹಕಾರ ಮಹಾಮಂಡಳ ಅಧ್ಯಕ್ಷ ಜಿ.ಟಿ.ದೇವೇಗೌಡ ಬೇಸರ


ಮೈಸೂರು ವಿವಿ ಇಎಂಆರ್‌ಸಿ ಸಭಾಂಗಣದಲ್ಲಿ ಬುಧವಾರ ಸಹಕಾರ ಕ್ಷೇತ್ರ ಕುರಿತ ಚರ್ಚಾಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಶಾಸಕ ಜಿ.ಟಿ.ದೇವೇಗೌಡ, ಮೈಸೂರು ವಿವಿ ಕುಲಪತಿ ಪ್ರೊ.ಲೋಕನಾಥ್ ಸೇರಿದಂತೆ ಇತರ ಗಣ್ಯರು ಬಹುಮಾನ ವಿತರಿಸಿದರು.

ಮೈಸೂರು,ಜ.24(ಪಿಎಂ)– ಸಹಕಾರ ಕ್ಷೇತ್ರ ಸ್ವಾಯತ್ತತೆ ಮತ್ತು ಸ್ವತಂತ್ರವಾಗಿ ಬೆಳೆಯಬೇಕು. ಆದರೆ ಸರ್ಕಾರದ ಹಸ್ತಕ್ಷೇಪದಿಂದ ಈ ಕ್ಷೇತ್ರದ ಬೆಳವಣಿಗೆ ಕುಂಠಿತವಾಗುತ್ತಿದೆ ಎಂದು ಶಾಸಕರೂ ಆದ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಅಧ್ಯಕ್ಷ ಜಿ.ಟಿ.ದೇವೇಗೌಡ ಬೇಸರ ವ್ಯಕ್ತಪಡಿಸಿದರು.

ಮೈಸೂರಿನ ಮಾನಸ ಗಂಗೋತ್ರಿಯ ಇಎಂಆರ್‌ಸಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಮೈಸೂರು ವಿವಿ ಅರ್ಥಶಾಸ್ತ್ರ ಮತ್ತು ಸಹಕಾರ ವಿಭಾಗ ಮತ್ತು ಮೈಸೂರು ಜಿಲ್ಲಾ ಸಹಕಾರ ಯೂನಿಯನ್ ಸಂಯುಕ್ತಾಶ್ರಯದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಸಹಕಾರ ಕ್ಷೇತ್ರ ಕುರಿತು ಪದವಿಪೂರ್ವ, ಪದವಿ, ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳ ರಾಜ್ಯಮಟ್ಟದ ಚರ್ಚಾಸ್ಪರ್ಧೆ ಹಾಗೂ ಪ್ರೌಢಶಾಲಾ ವಿದ್ಯಾರ್ಥಿಗಳ ಪ್ರಬಂಧ ಸ್ಪರ್ಧೆಯ ಬಹುಮಾನ ವಿತರಣಾ ಸಮಾರಂಭದ ಅಧ್ಯಕ್ಷತೆ ವಹಿಸಿ, ಅವರು ಮಾತನಾಡಿದರು.

ಸಹಕಾರ ಕ್ಷೇತ್ರ ಸ್ವಾಯತ್ತತೆ ಮತ್ತು ಸ್ವತಂತ್ರವಾಗಿ ಉಳಿದು, ಬೆಳೆಯಬೇಕು. ಆದರೆ ಸರ್ಕಾರ ಆಗಾಗ್ಗೆ ಹಸ್ತಕ್ಷೇಪ ಮಾಡುತ್ತಿರುವ ಕಾರಣ ಸಹಕಾರ ಕ್ಷೇತ್ರದ ಬೆಳವಣಿಗೆ ಕುಂಠಿತವಾಗುತ್ತಿದೆ. ಸಹಕಾರ ಕ್ಷೇತ್ರದ ಬೆಳವಣಿಗೆಯಿಂದ ಕುಟುಂಬ, ರಾಜ್ಯ, ದೇಶ ಆರ್ಥಿಕಾಭಿವೃದ್ಧಿ ಸಾಧ್ಯವಿದೆ ಎಂದು ತಿಳಿಸಿದರು.

ದೇಶದ ಪ್ರಪ್ರಥಮ ಪ್ರಧಾನಿ ನೆಹರು ಅವರು ಪಂಚವಾರ್ಷಿಕ ಯೋಜನೆಯಲ್ಲಿ ಸಹಕಾರ ಕ್ಷೇತ್ರಕ್ಕೆ ಹೆಚ್ಚಿನ ಮಹತ್ವ ನೀಡಿದ್ದರು. ಅಲ್ಲದೆ, ಭಾರತ ದೇಶಕ್ಕೆ ಸಹಕಾರ ಕ್ಷೇತ್ರವೇ ಆರ್ಥಿಕ ಹೆಬ್ಬಾಗಿಲು ಎಂದು ಅವರು ಬಣ್ಣಿಸಿದ್ದರು. ಗಾಂಧಿಯವರು ಒಂದು ಹಳ್ಳಿಯಲ್ಲಿ ಸಹಕಾರ ಸಂಘ, ಶಿಕ್ಷಣ ಸಂಸ್ಥೆ ಹಾಗೂ ಗ್ರಾಮ ಪಂಚಾಯಿತಿ ಉತ್ತಮವಾಗಿ ಸೇವೆ ಸಲ್ಲಿಸಿದರೆ ರಾಮರಾಜ್ಯವಾಗಲಿದೆ ಎಂದಿದ್ದರು. ಇಂದು ಹೈನುಗಾರಿಕೆ ಕ್ಷೇತ್ರ ಸಮಾಜದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿದೆ. ಇದು ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿಯವರ ಒಂದು ಪ್ರಯತ್ನದ ಫಲ ಎಂದು ಸ್ಮರಿಸಿದರು.

ಎಲ್ಲಾ ಹಾಲಿನ ಸಹಕಾರ ಸಂಘಗಳಲ್ಲಿ ಡಾ.ವರ್ಗೀಸ್ ಕುರಿಯನ್ ಫೋಟೋ ಇಟ್ಟುಕೊಂಡು ಅವರ ಸ್ಮರಣೆ ಮಾಡಲಾಗುತ್ತಿದೆ. ಏಕೆಂದರೆ ಅಂದು ರಾಷ್ಟ್ರೀಯ ಹೈನುಗಾರಿಕೆ ಅಭಿವೃದ್ಧಿ ಮಂಡಲಿ ಪ್ರಾರಂಭಿಸಿದಾಗ ಕುರಿಯನ್ ಅವರನ್ನು ಅಧ್ಯಕ್ಷರಾಗುವಂತೆ ಕೇಳಲಾಗುತ್ತದೆ. ಅದಕ್ಕೆ ಕುರಿಯನ್ ಸರ್ಕಾರದ ಹಸ್ತಕ್ಷೇಪ ಇಲ್ಲವಾದರೆ ಅಧ್ಯಕ್ಷರಾಗುವುದಾಗಿ ಹೇಳಿದ್ದರು. ಅದಕ್ಕೆ ಒಪ್ಪಿ ಅವರನ್ನು ಅಧ್ಯಕ್ಷರನ್ನಾಗಿ ಮಾಡಲಾಗುತ್ತದೆ. ಬಳಿಕ ಇಡೀ ದೇಶದಲ್ಲಿ ಹಾಲು ಉತ್ಪಾದನೆ ಹೆಚ್ಚಾಗುತ್ತದೆ. ಪರಿಣಾಮ ಇಂದಿಗೂ ರೈತ ಕುಟುಂಬ ಬರಗಾಲ ಸೇರಿದಂತೆ ಯಾವುದೇ ಸಂದರ್ಭದಲ್ಲೂ ಹೈನುಗಾರಿಕೆ ನೆರವಿನಿಂದ ಬದುಕು ಮಾಡಲು ಸಾಧ್ಯವಾಗಿದೆ ಎಂದರು.

ಬೆಳೆಸಿದ ಸಹಕಾರ ಕ್ಷೇತ್ರದ ಬಗ್ಗೆ ನಿರ್ಲಕ್ಷ್ಯ: ವ್ಯವಸಾಯ ಸಹಕಾರ ಸಂಘಗಳು ಕೃಷಿ ಹಾಗೂ ರೈತರ ಅಭಿವೃದ್ಧಿಗೆ ಕೊಡುಗೆ ನೀಡುತ್ತಿದ್ದು, ಸಹಕಾರ ಕ್ಷೇತ್ರ ಉತ್ತಮ ಬೆಳವಣಿಗೆ ಕಂಡರೆ ರಾಮರಾಜ್ಯ ನಿರ್ಮಾಣವಾಗಲಿದೆ. ಸಹಕಾರ ಕ್ಷೇತ್ರ ನಾಯಕತ್ವ ರೂಪಿಸುವ ಗುಣ ಹೊಂದಿದೆ. ಈ ಕ್ಷೇತ್ರದಿಂದ ಬೆಳೆದವರು ಶಾಸಕರು, ಮಂತ್ರಿಗಳೂ ಆಗಿದ್ದಾರೆ. ಆದರೆ ಅವರ ಪೈಕಿ ಅನೇಕರಿಗೆ ಈ ಕ್ಷೇತ್ರದ ಬಗ್ಗೆ ಕಾಳಜಿ ಇಲ್ಲವಾಗಿದೆ. ಪ್ರತಿಯೊಂದು ಕ್ಷೇತ್ರದಲ್ಲಿ ಸಹಕಾರ ಸಂಘಗಳಿಂದ ಬೆಳವಣಿಗೆ ಕಾಣಲು ಸಾಧ್ಯವಿದ್ದು, ಯುವಜನರು ಸಹಕಾರ ಕ್ಷೇತ್ರದಲ್ಲಿ ತೊಡಗಿಸಿಕೊಂಡು ಸ್ವಂತ ಕಾಲ ಮೇಲೆ ನಿಲ್ಲಬೇಕು ಎಂದು ಸಲಹೆ ನೀಡಿದರು.

ಚರ್ಚಾ ಸ್ಪರ್ಧೆ ಬುಧವಾರ ಬೆಳಗ್ಗೆಯಿಂದ ಸಂಜೆವರೆಗೆ ಇದೇ ಸಭಾಂಗಣದಲ್ಲಿ ನಡೆಯಿತು. ಪದವಿಪೂರ್ವ, ಪದವಿ, ಸ್ನಾತಕೋತ್ತರ ಪದವಿ ವಿಭಾಗಗಳಲ್ಲಿ ಚರ್ಚಾ ಸ್ಪರ್ಧೆ ನಡೆಯಿತು. ಸಹಕಾರ ಕ್ಷೇತ್ರ ಕುರಿತಂತೆ ಆಯಾಯ ವಿಭಾಗಕ್ಕೆ ಪ್ರತ್ಯೇಕ ವಿಷಯ ನೀಡಿ, ಪರ–ವಿರೋಧ ಚರ್ಚೆಗೆ ಅವಕಾಶ ಕಲ್ಪಿಸಲಾಗಿತ್ತು. ವಿದ್ಯಾರ್ಥಿನಿಯರೇ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು. ಪ್ರೌಢಶಾಲಾ ವಿದ್ಯಾರ್ಥಿಗಳ ಪ್ರಬಂಧ ಸ್ಪರ್ಧೆಯನ್ನು ಈ ಹಿಂದೆಯೇ ನಡೆಸಲಾಗಿತ್ತು. ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್ ಬಹುಮಾನ ವಿತರಣೆ ಮಾಡಿದರು. ರಾಜ್ಯ ಸಹಕಾರ ಮಹಾಮಂಡಳದ ವ್ಯವಸ್ಥಾಪಕ ನಿರ್ದೇಶಕ ಕೆ.ಎಸ್.ನವೀನ್, ಕಾರ್ಯದರ್ಶಿ ಲಕ್ಷ್ಮೀಪತಯ್ಯ, ಮಹಾಮಂಡಳದ ಸಲಹೆಗಾರ ಶ್ರೀನಾಥ್, ಸಹಕಾರ ಶಿಕ್ಷಣಾಧಿಕಾರಿ ಶರಣಬಸಪ್ಪ ಕಾಟ್ರಳ್ಳಿ, ಜಿಲ್ಲಾ ಸಹಕಾರ ಯೂನಿಯನ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಡಾ.ಎಂ.ವಿಶ್ವೇಶ್ವರಯ್ಯ, ಮೈಸೂರು ವಿವಿ ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯದ ಡೀನ್ ಡಾ.ಬಿ.ಎಸ್.ಚಂದ್ರಶೇಖರ್, ವಿವಿ ಅರ್ಥಶಾಸ್ತ್ರ ಮತ್ತು ಸಹಕಾರ ವಿಭಾಗದ ಮುಖ್ಯಸ್ಥ ಡಾ.ಎಂ.ಮಹೇಶ, ಮುಕ್ತ ವಿವಿ ಪ್ರಾಧ್ಯಾಪಕಿ ಡಾ.ಪವಿತ್ರ ಮತ್ತಿತರರು ಹಾಜರಿದ್ದರು.

ಧಾರವಾಡದ ಕರ್ನಾಟಕ ವಿವಿ, ಬೆಂಗಳೂರು ಜಿಕೆವಿಕೆ ವಿದ್ಯಾರ್ಥಿಗಳ ತಂಡಕ್ಕೆ ಪಾರಿತೋಷಕ

ಮೈಸೂರು: ಸಹಕಾರ ಕ್ಷೇತ್ರ ಕುರಿತ ಚರ್ಚಾ ಸ್ಪರ್ಧೆಯಲ್ಲಿ ಸ್ನಾತಕೋತ್ತರ ಪದವಿ ಕಾಲೇಜು ವಿಭಾಗದಲ್ಲಿ ಧಾರವಾಡದ ಕರ್ನಾಟಕ ವಿವಿ ಮತ್ತು ಪದವಿ ಕಾಲೇಜು ವಿಭಾಗದಲ್ಲಿ ಬೆಂಗಳೂರು ಜಿಕೆವಿಕೆ (ಗಾಂಧಿ ಕೃಷಿ ವಿಜ್ಞಾನ ಕೇಂದ್ರ) ವಿದ್ಯಾರ್ಥಿ ತಂಡಗಳು ಪಾರಿತೋಷಕ ಪಡೆದವು. ಅಂತೆಯೇ ಸ್ನಾತಕೋತ್ತರ ಪದವಿ ಕಾಲೇಜಿನ ವಿಭಾಗದಲ್ಲಿ (ವೈಯಕ್ತಿಕ) ಧಾರವಾಡದ ಮೃತ್ಯುಂಜಯ ಕಬ್ಬೂರ ಪ್ರಥಮ, ಬೆಂಗಳೂರು ಜಿಕೆವಿಕೆಯ ಬಿ.ವಿ.ಉದಯಕುಮಾರ್ ದ್ವಿತೀಯ, ಧಾರವಾಡ ಕರ್ನಾಟಕ ವಿವಿಯ ಆಕಾಶ ಹಂಸನೂರ ತೃತೀಯ ಬಹುಮಾನ ಪಡೆದರು.

ಪದವಿ ಕಾಲೇಜಿನ ವಿಭಾಗದಲ್ಲಿ ಜಿಕೆವಿಕೆಯ ಎನ್.ಕೀರ್ತಾನ ನಾಯಕ್ ಪ್ರಥಮ, ಇದೇ ಸಂಸ್ಥೆಯ ಎಂ.ಎನ್.ಸೌಮ್ಯ ದ್ವಿತೀಯ, ಧಾರವಾಡದ ಕರ್ನಾಟಕ ವಿವಿಯ ಪೂಜಾ ಚವ್ಹಾಣ ತೃತೀಯ, ಪದವಿ ಪೂರ್ವ ಕಾಲೇಜು ವಿಭಾಗದಲ್ಲಿ ಮಂಡ್ಯದ ಖಿರ್ಜಾ ಫಾತೀಮಾ ಪ್ರಥಮ, ಉಡುಪಿಯ ದಿವ್ಯ ದ್ವಿತೀಯ, ದಕ್ಷಿಣ ಕನ್ನಡದ ನಿಧಿ ದೇಸಾಯಿ ತೃತೀಯ ಬಹುಮಾನ ಪಡೆದರು. ಪ್ರೌಢಶಾಲೆಯ ಪ್ರಬಂಧ ಸ್ಪರ್ಧೆಯಲ್ಲಿ ಮಂಡ್ಯದ ಜಿ.ಚಂದನ ಪ್ರಥಮ, ರಾಮನಗರದ ಲಕ್ಷ್ಮೀಪ್ರಸನ್ನ ದ್ವಿತೀಯ, ಹಾವೇರಿಯ ಸಫೀಉಲ್ಲಾ ಅಸುಂಡಿ ತೃತೀಯ ಬಹುಮಾನ ಪಡೆದರು. ನಗದು, ಪದಕ ಹಾಗೂ ಪ್ರಮಾಣಪತ್ರಗಳನ್ನು ವಿಜೇತ ವಿದ್ಯಾರ್ಥಿಗಳಿಗೆ ನೀಡಲಾಯಿತು.

> " ಪದವಿಯ ವಿಷಯಕ್ಕೆ ಅನುಗುಣವಾಗಿ ನೌಕರಿ (ಸರ್ಕಾರಿ) ನೀಡುವ ವ್ಯವಸ್ಥೆ ಇದೆ. ವೈದ್ಯಕೀಯ ಪದವಿ ಪಡೆದವರಿಗೆ ವೈದ್ಯಕೀಯ ಕ್ಷೇತ್ರವನ್ನೇ ಕೊಡುತ್ತಾರೆ. ಆದರೆ ಸಹಕಾರ ಕ್ಷೇತ್ರದಲ್ಲಿ ಮಾತ್ರ ಅದಾಗುತ್ತಿಲ್ಲ. ಸಹಕಾರ ಕ್ಷೇತ್ರದಲ್ಲಿ ಪದವಿ ಪಡೆದವರಿಗೆ ಅದೇ ಕ್ಷೇತ್ರದಲ್ಲಿ ನೌಕರಿ ಮಾಡಲು ಅವಕಾಶ ಕಲ್ಪಿಸಬೇಕು. ಈ ನಿಟ್ಟಿನಲ್ಲಿ ನಿರಂತರವಾಗಿ ಒತ್ತಾಯ ಮಾಡಿಕೊಂಡೇ ಬಂದಿದ್ದೇವೆ. ಇದು ಈಡೇರುವ ಆಶಾವಾದ ಹೊಂದಿದ್ದೇವೆ.
>
> –ಜಿ.ಟಿ.ದೇವೇಗೌಡ, ಶಾಸಕರು.



ಮೈಸೂರು ಜಿಲ್ಲಾ ಹಾಗೂ ನಗರ ಸವಿತಾ ಸಮಾಜದ ವತಿಯಿಂದ ಬಿಹಾರದ ಮಾಜಿ ಮುಖ್ಯಮಂತ್ರಿ ಹಾಗೂ ಭಾರತರತ್ನ ಪುರಸ್ಕೃತ ದಿವಂಗತ ಕರ್ಪೂರಿ ಠಾಕೂರ್ ಅವರ 100ನೇ ಜನ್ಮ ದಿನಾಚರಣೆ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಲಾಯಿತು. ಅಲ್ಲದೆ, ಕೇಂದ್ರ ಸರ್ಕಾರ ಕರ್ಪೂರಿ ಠಾಕೂರ್ ಅವರಿಗೆ ಭಾರತರತ್ನ ಘೋಷಣೆ ಮಾಡಿದ ಹಿನ್ನೆಲೆ ಸಿಹಿ ಹಂಚಲಾಯಿತು. ಈ ವೇಳೆ ಜಿಲ್ಲಾ ಅಧ್ಯಕ್ಷ ಎನ್.ಆರ್.ನಾಗೇಶ್, ನಗರ ಅಧ್ಯಕ್ಷ ಹರೀಶ್ ರೆಡ್ಡಿ, ಪ್ರಧಾನ ಕಾರ್ಯದರ್ಶಿ ಮೈನಾ ಲೋಕೇಶ್, ಸವಿತಾ ನಾದಬ್ರಹ್ಮ ಸಂಘದ ಅಧ್ಯಕ್ಷ ಮುರಳೀಧರ, ಸಮಾಜದ ಮುಖಂಡರಾದ ರಾಜು ರೆಡ್ಡಿ, ಶ್ರೀಧರ, ಕೃಷ್ಣಪ್ಪ, ಮಹೇಶ್, ಸೂರಿ, ಕಿಶೋರ್, ರವಿ, ಮಡಿವಾಳ ಸಮಾಜದ ಜಿಲ್ಲಾ ಅಧ್ಯಕ್ಷ ರವಿನಂದನ,ವೆಂಕಟೇಶ್ ಗುಡ್ಡ, ಮಹೇಶ್, ರಘು, ರಾಮು, ಪುಟ್ಟರಾಜು ಉಪಸ್ಥಿತರಿದ್ದರು.

ರಾಜ್ಯ ರಾಜಧಾನಿಯಲ್ಲಿ ಅದ್ಧೂರಿ ಗಣರಾಜ್ಯೋತ್ಸವ



ಬೆಂಗಳೂರು, ಜ.24(ಕೆಎಂಶಿ)–ಈ ಬಾರಿಯ ಗಣರಾಜ್ಯೋತ್ಸವ ದಿನವನ್ನು ಅದ್ಧೂರಿಯಾಗಿ ಆಚರಿಸಲು ನಗರದ ಫೀಲ್ಡ್ ಮಾರ್ಷಲ್ ಮಾಣಿಕ್ ಷಾ ಪರೇಡ್ ಮೈದಾನದಲ್ಲಿ ರಾಜ್ಯಮಟ್ಟದ ಸಮಾರಂಭಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಈ ಸಂಬಂಧ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜ.26ರಂದು ಬೆಳಗ್ಗೆ 9.00 ಗಂಟೆಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ರಾಷ್ಟ್ರ ಧ್ವಜಾರೋಹಣ ನೆರವೇರಿಸಲಿದ್ದಾರೆ. ನಂತರ ರಾಜ್ಯಪಾಲರು ತೆರೆದ ಜೀಪಿನಲ್ಲಿ ಪರೇಡ್ ಪರಿವೀಕ್ಷಣೆ ಮತ್ತು ಗೌರವರಕ್ಷೆ ಸ್ವೀಕರಿಸಿ ಗಣರಾಜ್ಯೋತ್ಸವದ ಸಂದೇಶ ನೀಡಲಿದ್ದಾರೆ. ಗಣರಾಜ್ಯೋತ್ಸವ ಪಂಥ ಸಂಚಲನದಲ್ಲಿ ಪೊಲೀಸ್, ಸ್ಕೌಟ್ಸ್, ಗೈಡ್ಸ್, ಎನ್.ಸಿ.ಸಿ, ಸೇವಾದಳ ಹಾಗೂ ವಿವಿಧ ಶಾಲೆಗಳ ಮಕ್ಕಳ ತಂಡಗಳ ಕವಾಯತು ಮತ್ತು ಬ್ಯಾಂಡ್‌ನ ಒಟ್ಟು 38 ತುಕಡಿಗಳಲ್ಲಿ ಸುಮಾರು 1,150 ಮಂದಿ ಭಾಗವಹಿಸಲಿದ್ದಾರೆ. ಶಾಲಾ ಮಕ್ಕಳ ಒಟ್ಟು 9 ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಸುಮಾರು 1,500 ಮಕ್ಕಳು ಭಾಗವಹಿಸಲಿದ್ದಾರೆ. ಗಣರಾಜ್ಯೋತ್ಸವ ಕಾರ್ಯಕ್ರಮ ವೀಕ್ಷಿಸಲು ಆಗಮಿಸುವ ಅತಿಗಣ್ಯ, ಗಣ್ಯ ಹಾಗೂ ಸಾರ್ವಜನಿಕರಿಗೆ ಆಸನದ ವ್ಯವಸ್ಥೆ ಕಲ್ಪಿಸಲಾಗಿದೆ. ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ಮಾತನಾಡಿ, ಗಣರಾಜ್ಯೋತ್ಸವ ಕಾರ್ಯಕ್ರಮದ ಬಿಗಿ ಬಂದೋಬಸ್ತ್‌ಗೆ ಅಗತ್ಯ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ ಎಂದರು.

ಇಂದು ರಾಷ್ಟ್ರೀಯ ಮತದಾರರ ದಿನಾಚರಣೆ

ಮೈಸೂರು, ಜ. 24(ಆರ್‌ಕೆ)– ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ನಾಳೆ (ಜ. 25) ಮೈಸೂರಿನಲ್ಲಿ ರಾಷ್ಟ್ರೀಯ ಮತದಾರರ ದಿನಾಚರಣೆ ಆಯೋಜಿಸಲಾಗಿದೆ. ಗುರುವಾರ ಬೆಳಗ್ಗೆ 9 ಗಂಟೆಗೆ ಓವೆಲ್ ಮೈದಾನದಿಂದ ಆರಂಭವಾಗುವ ಕಾಲೇಜು ವಿದ್ಯಾರ್ಥಿಗಳ ಜಾಥಾ ಕಲಾಮಂದಿರ ತಲುಪುವುದು. ಬೆಳಗ್ಗೆ 10.30 ಗಂಟೆಗೆ ನಡೆಯುವ ಕಾರ್ಯಕ್ರಮವನ್ನು ಪ್ರಧಾನ ಜಿಲ್ಲಾ ಮತ್ತು ನ್ಯಾಯಾಧೀಶರು ಸೇರಿದಂತೆ ಗಣ್ಯರು ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

ನಾಳೆ 'ಸಮಾನತೆಯ ಕಡೆಗೆ' ಚಲನಚಿತ್ರ ಪ್ರಸಾರ

ಮೈಸೂರು,ಜ.24– ಅಸ್ಪೃಶ್ಯತೆ ನಿವಾರಣೆ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಸಲುವಾಗಿ "ಸಮಾನತೆಯ ಕಡೆಗೆ" ಕನ್ನಡ ಚಲನಚಿತ್ರವನ್ನು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪ್ರಾಯೋಜನೆ ಮಾಡಿ ಸರ್ಕಾರಿ ಟಿ.ವಿ.ಚಾನಲ್ ಆದ ಚಂದನ ವಾಹಿನಿಯಲ್ಲಿ ಜನವರಿ 26ರಂದು ಗಣರಾಜ್ಯೋತ್ಸವ ದಿನಾಚರಣೆಯಂದು ಮಧ್ಯಾಹ್ನ 2.30 ರಿಂದ 4.30 ಅವಧಿಯಲ್ಲಿ ಪ್ರಸಾರ ಮಾಡಲಾಗುವುದು. ಸಾರ್ವಜನಿಕರು ಈ ಚಲನಚಿತ್ರವನ್ನು ವೀಕ್ಷಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

660 ಪಿಎಸ್‌ಐ ನೇಮಕಾತಿಗೆ ಅಧಿಸೂಚನೆ






ಬೆಂಗಳೂರು, ಜ.24– ಪೊಲೀಸ್ ಸಬ್ ಇನ್‌ಸ್ಪೆಕ್ಟರ್ (ಪಿಎಸ್‌ಐ) 545 ಹುದ್ದೆಗಳ ನೇಮಕಾತಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಕೆಇಎ) ಮೂಲಕ ಮರು ಪರೀಕ್ಷೆ ಸುಗಮವಾಗಿ ನಡೆದಿದೆ. ಮುಂದಿನ ಹಂತದಲ್ಲಿ 403 ಹುದ್ದೆಗಳಿಗೆ ಪರೀಕ್ಷೆ ನಡೆಸಲಾಗುವುದು. ಈ ಎರಡೂ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡ ನಂತರ ಮತ್ತೆ 660 ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸಲಾಗುವುದು ಎಂದು ಗೃಹ ಸಚಿವ ಜಿ.ಪರಮೇಶ್ವರ ತಿಳಿಸಿದರು.

ಸುದ್ದಿಗಾರರ ಜೊತೆ ಮಾತನಾಡಿದ ಅವರು, 660 ಹುದ್ದೆಗಳ ನೇಮಕಾತಿಗೂ ಆರ್ಥಿಕ ಇಲಾಖೆ ಅನುಮೋದನೆ ನೀಡಿದೆ. ಮುಂದಿನ 2 ವರ್ಷಗಳ ಒಳಗೆ ಈ ಎಲ್ಲ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು ಎಂದರು. ಪಿಎಸ್‌ಐ 545 ಹುದ್ದೆಗಳಿಗೆ ನಡೆದ ಪರೀಕ್ಷೆಯ ಮೌಲ್ಯಮಾಪನವನ್ನು ಆದಷ್ಟು ಬೇಗ ಮುಗಿಸಿ ಆಯ್ಕೆ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು. 54 ಸಾವಿರ ಅಭ್ಯರ್ಥಿಗಳು ಈ ಪರೀಕ್ಷೆ ಬರೆಯಬೇಕಿತ್ತು. ಕೆಲವರು ಗೈರಾಗಿದ್ದಾರೆ. ಯಾವುದೇ ರೀತಿಯ ಪರೀಕ್ಷಾ ಅಕ್ರಮ ಘಟನೆಗಳು ನಡೆದಿಲ್ಲ ಎಂದರು.

ಮುಂದಿನ ಹಂತದಲ್ಲಿ 403 ಹುದ್ದೆಗಳ ನೇಮಕಾತಿಗೆ ಈಗಾಗಲೇ ದೈಹಿಕ ಪರೀಕ್ಷೆ ಮುಗಿದಿದೆ. ಪರೀಕ್ಷೆ ಬಾಕಿ ಇದೆ. ಇದನ್ನು ಕೂಡ ಕೆಇಎಗೆ ವಹಿಸುವ ಚಿಂತನೆಯಿದೆ. ಈ ಎರಡೂ ನೇಮಕಾತಿ ಪ್ರಕ್ರಿಯೆ ಮುಗಿದರೆ ಇಲಾಖೆಗೆ ಒಟ್ಟು 948 ಪಿಎಸ್‌ಐಗಳು ಲಭ್ಯವಾಗುತ್ತಾರೆ ಎಂದರು.

ತನಿಖೆಯಿಂದ ಸತ್ಯಾಸತ್ಯತೆ ಗೊತ್ತಾಗಲಿದೆ: ಕಲಬುರಗಿಯಲ್ಲಿ ಅಂಬೇಡ್ಕರ್ ಪುತ್ಥಳಿಗೆ ಅಪಮಾನ ಮಾಡಿದ ಪ್ರಕರಣದಲ್ಲಿ ನಾಲ್ವರನ್ನು ಬಂಧಿಸಲಾಗಿದೆ. ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದು, ಪರಿಶೀಲನೆ ನಡೆಸಲಾಗುವುದು. ಕೃತ್ಯದ ಉದ್ದೇಶ ಏನೆಂಬುದು ತನಿಖೆಯಿಂದ ಹೊರಬರಬೇಕಿದೆ. ಯಾರದ್ದಾದರೂ ಕುಮ್ಮಕ್ಕಿದೆಯಾ ಎಂಬುದೂ ತನಿಖೆಯಿಂದ ಗೊತ್ತಾಗಲಿದೆ ಎಂದರು.

ನಿಧನ



ಶ್ರೀಮತಿ ಎಂ.ಬಿ. ರಾಜೇಶ್ವರಿ

ಮೈಸೂರು: ಮೈಸೂರಿನ ಲಕ್ಷ್ಮೀಪುರಂನ ಜೆಎಲ್‌ಬಿ ರಸ್ತೆ ನಿವಾಸಿ ಹಾಗೂ ಮೈಸೂರು ಆಟೋ ಗ್ಯಾರೇಜ್‌ನ ರಾಯಲ್ ಎನ್‌ಫೀಲ್ಡ್‌ನ ಮಾಜಿ ಡೀಲರ್ ಆಗಿದ್ದ ದಿವಂಗತ ಬಿ.ಎಸ್.ಸೋಮಶೇಖರಯ್ಯ ಅವರ ಧರ್ಮಪತ್ನಿ ಎಂ.ಬಿ.ರಾಜೇಶ್ವರಿ (87) ಜನವರಿ 11ರಂದು ನಿಧನರಾದರು.

ಮೃತರು ಓರ್ವ ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ವರ್ಗ, ಮಿತ್ರರನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಜನವರಿ 11ರಂದೇ ವಿದ್ಯಾರಣ್ಯಪುರಂನ ವೀರಶೈವ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಆದಿಚುಂಚನಗಿರಿ ಕ್ಷೇತ್ರದಲ್ಲಿ 67ನೇ ರಾಷ್ಟ್ರಮಟ್ಟದ ಕಬಡ್ಡಿ ಪಂದ್ಯಾವಳಿಗೆ ಚಾಲನೆ

ಕಬಡ್ಡಿ ಕ್ರೀಡಾಪಟುಗಳು ಸಾಂಸ್ಕೃತಿಕ ರಾಯಭಾರಿ ಇದ್ದಂತೆ



ನಾಗಮಂಗಲ, ಜ.24– ದೇಶಿ ಕ್ರೀಡೆ ಕಬ್ಬಡಿ ಕ್ರೀಡಾಪಟುಗಳು ಭಾರತ ದೇಶಕ್ಕೆ ಸಾಂಸ್ಕೃತಿಕ ರಾಯಭಾರಿ ಇದ್ದಂತೆ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅಭಿಪ್ರಾಯಪಟ್ಟರು.

ತಾಲೂಕಿನ ಶ್ರೀ ಆದಿಚುಂಚನಗಿರಿ ಕ್ಷೇತ್ರದಲ್ಲಿ ಶಾಲಾ ಶಿಕ್ಷಣ ಇಲಾಖೆ ಹಾಗೂ ಆದಿಚುಂಚನಗಿರಿ ಕ್ಷೇತ್ರದ ಸಹಯೋಗದಲ್ಲಿ ನಡೆದ 67 ನೇ ರಾಷ್ಟ್ರಮಟ್ಟದ 19 ವರ್ಷದೊಳಗಿನ ವಿದ್ಯಾರ್ಥಿಗಳ ಕಬಡ್ಡಿ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ 8 ವರ್ಷದ ನಂತರ 19 ವರ್ಷದೊಳಗಿನ ರಾಷ್ಟ್ರ ಮಟ್ಟದ ಕಬಡ್ಡಿ ಕ್ರೀಡೆ ನಡೆಯುತ್ತಿದೆ. ಆದಿಚುಂಚನಗಿರಿ ಕ್ಷೇತ್ರದ ಸಹಕಾರದಲ್ಲಿ ಈ ಕ್ರೀಡೆ ಉತ್ತಮವಾಗಿ ನಡೆಯುತ್ತಿದೆ. ಇದಕ್ಕೆ ಸಹಕರಿಸಿದ ಕ್ಷೇತ್ರದ ಪೀಠಾಧ್ಯಕ್ಷರಿಗೆ ಗೌರವ ನಮನಗಳು ಎಂದರು. ಮಕ್ಕಳು ಚಿಕ್ಕವಯಸ್ಸಿನಲ್ಲಿಯೇ ಎಲ್ಲ ಕ್ರೀಡೆಯನ್ನು ಕಲಿಯಬೇಕು. ಕಬಡ್ಡಿ ಕ್ರೀಡೆಯಲ್ಲಿ ಭಾಗವಹಿಸಿರುವ ಕ್ರೀಡಾಪಟುಗಳು ರಾಜ್ಯ ಹಾಗೂ ದೇಶದ ಕೀರ್ತಿ ಹೆಚ್ಚಿಸಿ. 29 ರಾಜ್ಯದಿಂದ ಬಂದಿರುವ ಕ್ರೀಡಾಪಟುಗಳಿಗೂ ಶುಭಾಶಯಗಳು ಎಂದು ತಿಳಿಸಿದರು. ಶಿವಮೊಗ್ಗದಲ್ಲಿ ಜ.29 ರಂದು ರಾಷ್ಟ್ರಮಟ್ಟದ ವಾಲಿಬಾಲ್ ಪಂದ್ಯಾವಳಿ ನಡೆಯಲಿದೆ. ಈ ಮೂಲಕ ಕರ್ನಾಟಕ ರಾಜ್ಯ ಎರಡು ರಾಷ್ಟ್ರೀಯ ಕ್ರೀಡೆಗಳಿಗೆ ಸಾಕ್ಷಿ ಯಾಗಲಿದೆ ಎಂದರು.



ಶ್ರೀ ಆದಿಚುಂಚನಗಿರಿಯಲ್ಲಿ ಶಾಲಾ ಶಿಕ್ಷಣ ಇಲಾಖೆ ಹಾಗೂ ಆದಿಚುಂಚನಗಿರಿ ಕ್ಷೇತ್ರದ ಸಹಯೋಗದಲ್ಲಿ ನಡೆದ 67ನೇ ರಾಷ್ಟ್ರಮಟ್ಟದ ಕಬಡ್ಡಿ ಕ್ರೀಡಾಕೂಟವನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಉದ್ಘಾಟಿಸಿದರು.

ಆದಿಚುಂಚನಗಿರಿ ಕ್ಷೇತ್ರದ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರು ಮಾತನಾಡಿ, ದೇಶದ ವಿವಿಧ ರಾಜ್ಯಗಳಿಂದ ಕಬಡ್ಡಿ ಕ್ರೀಡಾಪಟುಗಳು ಭಾಗವಹಿಸಿದ್ದು, ತಮ್ಮ ರಾಜ್ಯವನ್ನು ಪ್ರತಿನಿಧಿಸುವ ಅವಕಾಶ ನಿಮಗೆ ಸಿಕ್ಕಿದೆ. ಅವಕಾಶ ಸದ್ಬಳಕೆ ಮಾಡಿಕೊಂಡು ತಮ್ಮ ರಾಜ್ಯದ ಕೀರ್ತಿ ಹೆಚ್ಚಿಸಿ ಎಂದು ಹೇಳಿದರು.

ಭಾರತ ದೇಶವು ಯುವಕರೇ ತುಂಬಿದ ದೇಶವಾಗಿದೆ. ಕ್ರೀಡೆಯಲ್ಲಿ ಹೆಚ್ಚು ಭಾಗವಹಿಸಿ ಮಾನಸಿಕ ಹಾಗೂ ದೈಹಿಕವಾಗಿ ಸದೃಢರಾಗಿ ಯುವಕರು ಉತ್ತಮ ಸಾಧನೆ ಮಾಡಿ ಎಂದರು. ನಂತರ ಕರ್ನಾಟಕ–ಮಹಾರಾಷ್ಟ್ರ ಪುರುಷ ತಂಡಗಳು ಕಬ್ಬಡಿ ಸ್ಪರ್ಧೆಗೆ ಹಾಗೂ ಗುಜರಾತ್– ತೆಲಂಗಾಣ ಮಹಿಳಾ ವಿಭಾಗದ ಸ್ಪರ್ಧೆಗಳಿಗೆ ಗಣ್ಯರು ಚಾಲನೆ ನೀಡಿದರು.

ಆಂಧ್ರಪ್ರದೇಶ, ಬಿಹಾರ್, ಸಿ.ಬಿ.ಎಸ್.ಇ ವೆಲ್‌ಫೇರ್ ಸ್ಪೋರ್ಟ್ಸ್ ಸಂಸ್ಥೆ, ಚಂಡಿಗರ್, ಛತ್ತಿಸ್ ಗಡ್, ಕೌನ್ಸಿಲ್ ಫಾರ್ ದಿ ಇಂಡಿಯಾನ್ ಸ್ಕೂಲ್, ದಾದ್ರ ಮತ್ತು ಹಾವೆಲಿ ಮತ್ತು ದಮನ್, ದವ್ ಕಾಲೇಜ್ ಮ್ಯಾನೇಜಿಂಗ್ ಕಮಿಟಿ, ದೆಹಲಿ, ಗುಜರಾತ್, ಹರಿಯಾಣ, ಹಿಮಾಚಲ ಪ್ರದೇಶ, ಜಮ್ಮು ಮತ್ತು ಕಾಶ್ಮೀರ, ಜಾರ್ಖಂಡ್, ಕರ್ನಾಟಕ, ಕೇರಳ, ಮಧ್ಯಪ್ರದೇಶ, ಮಹಾರಾಷ್ಟ್ರ, ನವೋದಯ ವಿದ್ಯಾಲಯ ಸಮಿತಿ, ಒಡಿಶ್ಶಾ, ಪುದುಚೇರಿ, ಪಂಜಾಬ್, ರಾಜಸ್ಥಾನ, ತಮಿಳುನಾಡು, ತೆಲಂಗಾಣ, ಉತ್ತರ ಪ್ರದೇಶ, ಉತ್ತರಾಖಂಡ, ವಿದ್ಯಾ ಭಾರತಿ, ಪಶ್ಚಿಮ ಬಂಗಾಳದ ಸೇರಿದಂತೆ ಒಟ್ಟು 29 ರಾಜ್ಯದ ತಂಡಗಳು ಪಂದ್ಯಾವಳಿಯಲ್ಲಿ ಭಾಗಿಯಾಗುತ್ತಿದ್ದು, 29 ಬಾಲಕರ ತಂಡ ಹಾಗೂ 28 ಬಾಲಕಿಯರ ತಂಡಗಳು ಭಾಗವಹಿಸಿದ್ದು, ಒಟ್ಟಾರೆ ಎಲ್ಲಾ ತಂಡಗಳ 346 ಬಾಲಕರು, 336 ಬಾಲಕಿಯರು ಸೇರಿದಂತೆ ಒಟ್ಟು 682 ಕಬ್ಬಡಿ ಆಟಗಾರರು ಭಾಗವಹಿಸಿದ್ದಾರೆ.

ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಠದ ಪ್ರಧಾನ ಕಾರ್ಯದರ್ಶಿ ಶ್ರೀ ಶ್ರೀ ಪ್ರಸನ್ನನಾಥಸ್ವಾಮೀಜಿ, ಪದವಿ ಪೂರ್ವ ಶಾಲಾ ಶಿಕ್ಷಣ ಇಲಾಖೆಯ ನಿರ್ದೇಶಕಿ ಸಿಂಧು. ಬಿ. ರೂಪೇಶ್, ಕ್ರೀಡಾ ವಿಭಾಗದ ಸಹಾಯಕ ನಿರ್ದೇಶಕರು ಡಾ. ಗುಬ್ಬಿಗೂಡು ರಮೇಶ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಚಲುವಯ್ಯ, ಶಾಲಾ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕ ಶಿವರಾಮೇಗೌಡ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

ಕ್ರಷರ್‌ಗೆ ನುಗ್ಗಿ ಬೆದರಿಕೆ ಆರೋಪ: ರೈತ ಮುಖಂಡರ ವಿರುದ್ಧ ಪ್ರಕರಣ ದಾಖಲು



ಶ್ರೀರಂಗಪಟ್ಟಣ, ಜ.24– ಕೆ.ಆರ್. ಸಾಗರ ಪೊಲೀಸ್ ಠಾಣಾ ವ್ಯಾಪ್ತಿಯ ಅಲ್ಲಾಳ್ಳಿ ಗ್ರಾಮದ ಬಳಿ ಪ್ರಭಾವತಿ ಸ್ಟೋನ್ ಕ್ರಷರ್‌ನ ರೈಟರ್‌ಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ, ಬೆದರಿಕೆ ಹಾಕಿದ ಆರೋಪದ ಮೇಲೆ ರಾಜ್ಯ ರೈತಸಂಘದ ಮುಖಂಡರು ಮತ್ತು ಅವರ ಸಹಚರ ವಿರುದ್ಧ ಕೆ.ಆರ್. ಸಾಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಜ.18 ರಂದು ಅಲ್ಲಾಳ್ಳಿ ಗ್ರಾಮದ ಬಳಿಯ ಪ್ರಭಾವತಿ ಸ್ಟೋನ್ ಕ್ರಷರ್‌ಗೆ ಏಕಾಏಕಿ ಹಸಿರು ದೀಪ ಇರುವ ಸ್ಕಾರ್ಪಿಯೋ ಕಾರಿನಲ್ಲಿ ನುಗ್ಗಿದ ರೈತ ಸಂಘದ ಮುಖಂಡರು, ಅವರ ಸಂಗಡಿಗರು ಕ್ರಷರ್ ಪರಿಶೀಲನೆ ಮಾಡಲು ಹೋಗುತ್ತಿದ್ದಾಗ ನಾನು ಯಾಕೆಂದು ಕೇಳಿದ ಸಂದರ್ಭದಲ್ಲಿ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿ, ಹಲ್ಲೆಗೆ ಯತ್ನಿಸಿ ನಿನ್ನ ಮಾಲೀಕನಿಗೆ ನನ್ನ ಹೆಸರು ಹೇಳು ಎಂದು ನನಗೆ ಬೆದರಿಸಿದರೆಂದು, ರೈಟರ್ ಬಿ.ಎಸ್. ಸೋಮಯ್ಯ ದೂರು ನೀಡಿದ್ದು, ಪ್ರಕರಣ ದಾಖಲು ಮಾಡಿಕೊಂಡ ಪೊಲೀಸರು ಸ್ಥಳ ಮಹಜರು ಮಾಡಿ ಹೇಳಿಕೆ ಪಡೆದಿದ್ದಾರೆ.

ಈ ರೈತ ಮುಖಂಡ ಈ ಹಿಂದೆ ಕೂಡ ನನಗೆ ಮೊಬೈಲ್ ಫೋನ್ ಮೂಲಕ ಕರೆ ಮಾಡಿ ಬೆದರಿಕೆ ಹಾಕಿದ್ದ, ನಮ್ಮ ಮಾಲೀಕರು ಇದೆಲ್ಲ ಮಾಡೋದು ಬಿಡು ಎಂದಿದ್ದರು, ಈಗ ಜನವರಿ 18 ರಂದು ಯಾರಿಗೂ ಹೇಳದೆ ಕ್ರಷರ್ ಒಳಗೆ ನುಗ್ಗಿ ಕೆಲಸ ಮಾಡುತ್ತಿದ್ದ ನೌಕರರಿಗೂ ನಿಂದನೆ ಮಾಡಿ, ವಿಡಿಯೋ ತೆಗೆದು ನನಗೆ ಅವಾಚ್ಯ ಶಬ್ದಗಳಿಂದ ನಿಂದಿಸಿ, ಬೆದರಿಸಿದ್ದಾನೆ.
-ಬಿ.ಎಸ್.ಸೋಮಯ್ಯ, ಕ್ರಷರ್ ರೈಟರ್

ಯಾವುದೇ ಅನುಮತಿ ಇಲ್ಲದೆ ಕ್ರಷರ್‌ಗೆ ಈ ಹಿಂದೆ ಕೂಡ ಬಂದಿದ್ದ ಈ ರೈತ ಮುಖಂಡ, ನಾವು ಕಾನೂನು ಚೌಕಟ್ಟಿನಲ್ಲಿ ಕ್ರಷರ್ ನಡೆಸುತ್ತಿದ್ದು, ನಮ್ಮಲ್ಲಿ ಯಾವುದೇ ಅನಧಿಕೃತ ಕೆಲಸ ಮಾಡುತ್ತಿಲ್ಲ, ನಮ್ಮ ನೌಕರರಿಗೆ ಬೆದರಿಕೆ ಹಾಕಿರುವ ಕುರಿತು ಜಿಲ್ಲೆಯ ಹಿರಿಯ ಪೊಲೀಸ್ ಅಧಿಕಾರಿಗಳಿಗೆ ಕೂಡ ಮಾಹಿತಿ ನೀಡಿದ್ದು, ಸೂಕ್ತ ದಾಖಲೆ ಸಮೇತ ಪೊಲೀಸರಿಗೆ ಮಾಹಿತಿ ನೀಡಿದ್ದೇವೆ.
-ರಮೇಶ್, ಕ್ರಷರ್ ಮಾಲೀಕ

ದೇವಸ್ಥಾನದ ಬೀಗ ಮುರಿದು ನಗ–ನಾಣ್ಯ ಕಳವು



ಶ್ರೀ ಬನ್ನೂರಮ್ಮ ದೇವಸ್ಥಾನ.

ಮದ್ದೂರು, ಜ.24– ತಾಲೂಕಿನ ಕೆ. ಕೋಡಿಹಳ್ಳಿಯಲ್ಲಿ ಗ್ರಾಮದಲ್ಲಿ ತಡರಾತ್ರಿ ಶ್ರೀ ಬನ್ನೂರಮ್ಮ ದೇವಸ್ಥಾನದಲ್ಲಿ ಬೀಗ ಹೊಡೆದು ಒಳನುಗ್ಗಿರುವ ಕಳ್ಳರು ಚಿನ್ನಾಭರಣ ದೋಚಿ ಪರಾರಿಯಾಗಿದ್ದಾರೆ.

ಸುಮಾರು 20 ಸಾವಿರ ಹುಂಡಿ ಹಣ, 80 ಸಾವಿರ ಮೌಲ್ಯದ ಚಿನ್ನಾಭರಣಗಳೊಂದಿಗೆ ಕಳ್ಳರು ಪರಾರಿಯಾಗಿದ್ದಾರೆ. 2019 ರಲ್ಲಿ ಉದ್ಘಾಟನೆಗೊಂಡ ದೇವಾಲಯದಲ್ಲಿ ಈವರೆಗೆ 6 ಬಾರಿ ಕಳ್ಳತನ ನಡೆದು ಹುಂಡಿ ಹಣ ದೋಚಿ ಪರಾರಿಯಾಗಿದ್ದರು. ಪೊಲೀಸರು ಕಳ್ಳರನ್ನು ಹಿಡಿಯಲು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಗ್ರಾಮಸ್ಥರು ಪೊಲೀಸರ ವಿರುದ್ಧ ಬೇಸರ ವ್ಯಕ್ತಪಡಿಸಿದ್ದು, ಮುಂದೆ ದೇಗುಲದಲ್ಲಿ ಕಳ್ಳತನ ನಡೆಯದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ. ದೇಗುಲದಲ್ಲಿ ಕಳ್ಳತನ ಮಾಡಿರುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಪಟ್ಟಣದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸರ್ಕಾರದ ಗುಂಪು ಮನೆ ನೆಲಸಮಗೊಳಿಸಲು ಯತ್ನ ಆರೋಪ

ನಂದಿಪುರ ಗ್ರಾಮದಲ್ಲಿ ನಿವಾಸಿಗಳು ಪ್ರತಿಭಟನೆ, ಕ್ರಮಕ್ಕೆ ಆಗ್ರಹ

ಕೆ.ಆರ್.ಪೇಟೆ, ಜ.24– ತಾಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ನಂದಿಪುರ ಗ್ರಾಮದಲ್ಲಿ ಕಳೆದ 30 ವರ್ಷಗಳ ಹಿಂದೆ ಸರ್ಕಾರ ಮಂಜೂರು ಮಾಡಿದ್ದ ಗುಂಪು ವಸತಿ ಯೋಜನೆಯ ಮನೆಗಳನ್ನು ಬೀರುವಳ್ಳಿ ಗ್ರಾಮದ ಪಟೇಲ್ ತಿಮ್ಮೇಗೌಡರ ಕುಟುಂಬದವರು ಜೆಸಿಬಿ ಯಂತ್ರದಿಂದ ಮನೆಗಳನ್ನು ಒಡೆದು ಹಾಕಿ ಬಡ ನಿವಾಸಿಗಳನ್ನು ಒಕ್ಕಲೆಬ್ಬಿಸಲು ಪ್ರಯತ್ನಿಸುತ್ತಿದ್ದು, ಕೂಡಲೇ ಜಿಲ್ಲಾಡಳಿತ ಹಾಗೂ ತಾಲೂಕು ಆಡಳಿತವು ಗಮನ ಹರಿಸಿ ಬಡವರಿಗೆ ನ್ಯಾಯ ಕೊಡಿಸುವಂತೆ ನಂದಿಪುರ ನಿವಾಸಿಗಳು ಒತ್ತಾಯಿಸಿದ್ದಾರೆ.



ಪ್ರತಿಭಟನೆಯಲ್ಲಿ ಭಾಗವಹಿಸಿರುವ ನಂದಿಪುರ ಗ್ರಾಮದ ನಿವಾಸಿಗಳು.

ನಂದಿಪುರ ಗ್ರಾಮದಲ್ಲಿ ಪಟೇಲ್ ತಿಮ್ಮೇಗೌಡ ಅವರ ಕುಟುಂಬದವರು ಒಡೆದು ಹಾಕಿರುವ ಮನೆಯ ತಳಪಾಯದ ಬಳಿ ಪ್ರತಿಭಟನೆ ನಡೆಸಿದ ಮಹಿಳೆಯರು ಮತ್ತು ಆಶ್ರಯ ಮನೆ ನಿವಾಸಿಗಳು ಪಟೇಲ್ ತಿಮ್ಮೇಗೌಡರ ಕುಟುಂಬದ ದೌರ್ಜನ್ಯದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಕೂಡಲೇ ತಾಲೂಕು ತಹಶೀಲ್ದಾರ್ ಹಾಗೂ ಜಿಲ್ಲಾಧಿಕಾರಿಗಳು ಮಧ್ಯ ಪ್ರವೇಶ ಮಾಡಿ ನ್ಯಾಯ ಕೊಡಿಸಬೇಕು ಎಂದು ಆಗ್ರಹಿಸಿದರು. ಮುಖಂಡರಾದ ನರಸಿಂಹ ಮೂರ್ತಿ ಮಾತನಾಡಿ, ನಂದಿಪುರ ಗ್ರಾಮದ ಸರ್ವೆ ನಂ.27 ಮತ್ತು 28ರಲ್ಲಿದ್ದ ಸರ್ಕಾರಿ ಬೀಳು ಭೂಮಿಯನ್ನು 1995ರಲ್ಲಿ ಅಂದಿನ ತಾಲೂಕು ಆಡಳಿತವು ವಸತಿ ರಹಿತ ಬಡವರಿಗೆ 126 ನಿವೇಶನಗಳನ್ನು ಹಂಚಿಕೆ ಮಾಡಿ ಹಕ್ಕು ಪತ್ರಗಳನ್ನು ವಿತರಣೆ ಮಾಡಿತ್ತು. ಆದರೆ ಸದರಿ ಸರ್ಕಾರಿ ಬೀಳು ಭೂಮಿಯನ್ನು 1998ರಲ್ಲಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿಕೊಂಡು ದಬ್ಬಾಳಿಕೆ ನಡೆಸುತ್ತಿದ್ದಾರೆ ಎಂದರು.

ಸದರಿ 126 ನಿವೇಶನಗಳ ಪೈಕಿ ಸುಮಾರು 70ಮಂದಿ ಬಡವರು ಕಳೆದ 30ವರ್ಷಗಳಿಂದ ಮನೆ ಕಟ್ಟಿಕೊಂಡು ವಾಸ ಮಾಡುತ್ತಿದ್ದಾರೆ. ಉಳಿಕೆ ನಿವೇಶನದಾರರಿಗೆ ಮನೆ ಕಟ್ಟದಂತೆ ತಿಮ್ಮೇಗೌಡ ಕುಟುಂಬದವರು ಬೆದರಿಕೆ ಹಾಕುತ್ತಾ ಬಂದಿದ್ದಾರೆ. ಇದರಿಂದ ಉಳಿದವರು ಮನೆ ನಿರ್ಮಿಸಿಕೊಳ್ಳಲು ಸಾಧ್ಯವಾಗಿರುವುದಿಲ್ಲ. ಈಗ ಅಳತೆ ಮಾಡಿಸಿ ಇಡೀ ನಂದೀಪುರ ಗ್ರಾಮ ನಮಗೆ ಸೇರಿದ ಕೂಡಲೆ ಮನೆ ಖಾಲಿ ಮಾಡಬೇಕು ಎಂದು ಬೆದರಿಕೆ ಹಾಕುತ್ತಿದ್ದಾರೆ ಎಂದು ದೂರಿದರು.

ಸಣ್ಣಮ್ಮ ನಿಧನ



ಕೆ.ಆರ್.ಪೇಟೆ, ಜ.24– ತಾಲೂಕಿನ ಕಾಡುಮೆಣಸು ಗ್ರಾಮದ ಅಂಗಡಿ ದೊಡ್ಡೇಗೌಡರ ಧರ್ಮಪತ್ನಿ ಶ್ರೀಮತಿ ಸಣ್ಣನಿಂಗಮ್ಮ (78) ಇಂದು ನಿಧನರಾಗಿದ್ದಾರೆ.

ಮೃತರು ಪತಿ ದೊಡ್ಡೇಗೌಡ, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಲಕ್ಷ್ಮೀಪತಿ ಸೇರಿದಂತೆ ಮೂವರು ಪುತ್ರರು, ಮೂವರು ಪುತ್ರಿಯರು ಹಾಗೂ ಅಪಾರ ಬಂಧು ಬಳಗವನ್ನು ಅಗಲಿ ದ್ದಾರೆ. ಅಂತ್ಯಕ್ರಿಯೆ ನಾಳೆ (ಜ.25) ಬೆಳಗ್ಗೆ 11.30ಕ್ಕೆ ಸ್ವಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೂರನೇ ಪುಟದಿಂದ

ರಾಮಮಂದಿರಗಳ ಪುನರುಜ್ಜೀವನ

ಖಾಸಗಿಯವರು ರಾಮಮಂದಿರ ನಿರ್ಮಾಣ ಮಾಡಿ ಅವುಗಳನ್ನು ನಿರ್ಲಕ್ಷ್ಯ ಮಾಡಿದ್ದರೆ ಅಂತಹ ಮಂದಿರಗಳ ಮಾಹಿತಿಯನ್ನು ತಹಸೀಲ್ದಾರ್ ಅವರಿಂದ ಪಡೆದು ಅವುಗಳಿಗೂ ಅನುದಾನ ನೀಡಲಿದೆ. ಈಗಾಗಲೇ ಯಾವ ಮಂದಿರಕ್ಕೆ ಎಷ್ಟು ಎಂಬ ಕ್ರಿಯಾ ಯೋಜನೆ ಸಿದ್ಧಗೊಂಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಫೆಬ್ರವರಿ 16 ರಂದು ಮಂಡಿಸಲಿರುವ 2024–25ರ ಮುಂಗಡಪತ್ರದಲ್ಲಿ ಘೋಷಣೆ ಮಾಡಲಿದ್ದಾರೆ.

ಇದೇ ಸಂದರ್ಭದಲ್ಲಿ ಮಠ–ಮಾನ್ಯಗಳಿಗೂ ಆರ್ಥಿಕ ನೆರವು ನೀಡುವುದನ್ನು ಘೋಷಿಸಿ, ಮತದಾರರ ಮನ ಗೆಲ್ಲಲು ಸಿದ್ದರಾಮಯ್ಯ ಹೊರಟಿದ್ದಾರೆ.

ಭಗವಾನ್ ಶ್ರೀರಾಮ್ ಎಲ್ಲರ ಆರಾಧ್ಯ ದೈವ, ಈತ ಯಾವುದೇ ಪಕ್ಷ ಅಥವಾ ಸಂಘಟನೆಗೆ ಸೀಮಿತವಲ್ಲ ಎಂದು ಕಾಂಗ್ರೆಸ್ ನಾಯಕರು ಪ್ರತಿಪಾದಿಸುತ್ತಿರುವ ಬೆನ್ನಲ್ಲೇ ಸರ್ಕಾರ ರಾಮನ ಕುರಿತು ತನ್ನ ಪ್ರೀತಿಯನ್ನು ತೋರ್ಪಡಿಸಲು ಮುಂದಾಗಿದೆ.

ಬಾಲರಾಮ ದೇವಾಲಯ ಉದ್ಘಾಟನಾ ಕಾರ್ಯಕ್ರಮಕ್ಕೆ ಆಹ್ವಾನವಿದ್ದರೂ ಅಯೋಧ್ಯೆಗೆ ಹೋಗದಿರುವುದು, ಜೊತೆಗೆ ಅಂದು ಸರ್ಕಾರಿ ರಜೆ ಘೋಷಣೆ ಮಾಡದಿರುವುದಕ್ಕೆ ಜನರಿಂದ ವಿರೋಧ ವ್ಯಕ್ತವಾಗಿದೆ. ರಾಜ್ಯದ ಎಲ್ಲಾ ಮಠಗಳ ಅಭಿವೃದ್ಧಿ, ಶೈಕ್ಷಣಿಕ, ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ವಿಶೇಷ ಅನುದಾನವಾಗಿ ಸುಮಾರು 300 ಕೋಟಿ ರೂ. ನೀಡಲು ಸಿದ್ಧತೆ ಮಾಡಿದೆ.

ರಾಜ್ಯದ ವಿವಿಧ ಸಮುದಾಯಗಳ ಮಠಗಳಿಗೆ ಜಾತಿವಾರು ಜನಸಂಖ್ಯೆ ಆಧರಿಸಿ ಆರ್ಥಿಕ ನೆರವು ನೀಡಲು ರೂಪರೇಷೆ ಸಿದ್ಧಪಡಿಸಲಾಗಿದೆ. ಯಡಿಯೂರಪ್ಪ ಅವರು ಮುಖ್ಯಮಂತ್ರಿ ಆಗಿದ್ದ ವೇಳೆ ವಿವಿಧ ಮಠಗಳಿಗೆ ಆರ್ಥಿಕ ನೆರವು ಘೋಷಿಸಿದ್ದರು, ಇದು ಅವರಿಗೆ ರಾಜಕೀಯವಾಗಿ ಸಾಕಷ್ಟು ಬಲ ತಂದು ಕೊಟ್ಟಿತ್ತು. ತದನಂತರ ಮಠ–ಮಾನ್ಯಗಳಿಗೆ ಹೇಳಿಕೊಳ್ಳುವಂತಹ ಅನುದಾನ ಸರ್ಕಾರದಿಂದ ದೊರೆಯಲಿಲ್ಲ.

ಅಯೋಧ್ಯೆಯ ಬಿರುಗಾಳಿ ಹೊಡೆತದಿಂದ ತಪ್ಪಿಸಿಕೊಂಡು, ಲೋಕಸಭಾ ಚುನಾವಣೆ ಎದುರಿಸಲು ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಮಠ ಮತ್ತು ರಾಮ ಜಪಕ್ಕೆ ಮುಂದಾಗಿದೆ.

ವಾರದಲ್ಲಿ ರೈತರಿಗೆ ಸಂದಾಯ

ನಡೆ ಅನುಸರಿಸಿದ್ದಾರೆ ಎಂದು ಮುಖ್ಯಮಂತ್ರಿಗಳು ಇದೇ ಸಂದರ್ಭದಲ್ಲಿ ಆಪಾದಿಸಿದರು. ಕೇಂದ್ರ ಸರ್ಕಾರದ ವಿರುದ್ಧ ಮಾಡುವ ಪ್ರತಿಭಟನೆ, ಪಾದಯಾತ್ರೆಯನ್ನು ಬಿಜೆಪಿ ಸಹಿಸುತ್ತಿಲ್ಲ. ದೇಶದ ಸಮಸ್ಯೆಗಳನ್ನು ತಿಳಿದುಕೊಳ್ಳಲು, ಅವುಗಳಿಗೆ ಪರಿಹಾರ ಕಂಡುಕೊಳ್ಳಲು ರಾಹುಲ್ ಗಾಂಧಿ ಪಾದಯಾತ್ರೆ ಮಾಡುತ್ತಿದ್ದಾರೆ. ಪಾದಯಾತ್ರೆಗೆ ಅಗತ್ಯ ಭದ್ರತೆ ನೀಡಬೇಕಿರುವುದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಕರ್ತವ್ಯ. ನೆಹರು ಕುಟುಂಬಕ್ಕೆ ಬೆದರಿಕೆ ಇದೆ. ಉದ್ದೇಶ ಪೂರ್ವಕವಾಗಿ ಭದ್ರತಾ ಲೋಪ ಮಾಡುತ್ತಿರುವುದು ಸರಿಯಲ್ಲ ಎಂದು ಅವರು ವಾಗ್ದಾಳಿ ನಡೆಸಿದರು.

ಅಸ್ಸಾಂ ಮುಖ್ಯಮಂತ್ರಿ ಮೊದಲು ಕಾಂಗ್ರೆಸ್‌ನಲ್ಲಿ ಇದ್ದರು. ಬಿಜೆಪಿಗೆ ಹೋಗಿ ಸಿಎಂ ಆಗಿದ್ದಾರೆ. ಮುಖ್ಯಮಂತ್ರಿ ಸ್ಥಾನದಲ್ಲಿ ಇದ್ದುಕೊಂಡು ಪಾದಯಾತ್ರೆ ತಡೆಯಲು ಪ್ರಚೋದನೆ ನೀಡುವ ಮೂಲಕ ರಾಹುಲ್ ಗಾಂಧಿಗೆ ತೊಂದರೆ ನೀಡುತ್ತಿದ್ದಾರೆ ಎಂದ ಅವರು, ಪ್ರಚೋದನೆ ನೀಡುವುದು ಸಂವಿಧಾನಬಾಹಿರ ಎಂದರು.

ಜಗದೀಶ್ ಶೆಟ್ಟರ್ ಕಾಂಗ್ರೆಸ್ ತೊರೆಯುವುದಿಲ್ಲ: ಜಗದೀಶ್ ಶೆಟ್ಟರ್ ಅವರು ಪುನ: ಬಿಜೆಪಿಗೆ ಹಿಂತಿರುಗುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಅವರೇ ನಾನು ಪುನಃ ಬಿಜೆಪಿಗೆ ಮರಳುವುದಿಲ್ಲ ಎಂದು ಹೇಳಿದ್ದಾರೆ. ಪದೇ ಪದೆ ಉದ್ದೇಶಪೂರ್ವಕವಾಗಿ ಬಿಜೆಪಿ ಈ ಮಾತನ್ನು ಹರಿಯಬಿಡುತ್ತಿದೆ. ಯಾವುದೇ ಕಾರಣಕ್ಕೂ ಕಾಂಗ್ರೆಸ್ ಪಕ್ಷವನ್ನು ಅವರು ಬಿಡುವುದಿಲ್ಲ ಎಂದು ಹೇಳಿದ್ದಾರೆ ಎಂದರು. ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ, ಸಚಿವರಾದ ಕೆ.ವೆಂಕಟೇಶ್, ಭೋಸರಾಜ್, ವಿಧಾನಪರಿಷತ್ ಸದಸ್ಯ ಡಾ. ಡಿ.ತಿಮ್ಮಯ್ಯ, ಶಾಸಕರಾದ ರವಿಶಂಕರ್, ಹರೀಶ್‌ಗೌಡ, ಮಂತರ್ ಗೌಡ, ಜಿಲ್ಲಾಧಿಕಾರಿ ರಾಜೇಂದ್ರ, ನೀರಾವರಿ ಇಲಾಖೆ ಅಧಿಕಾರಿಗಳು, ಕೆಪಿಸಿಸಿ ಸದಸ್ಯ ನಿತಿನ್ ವೆಂಕಟೇಶ್, ಮೈಸೂರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಿ.ಜೆ.ವಿಜಯ್ ಕುಮಾರ್ ಸೇರಿದಂತೆ ಇತರರು ಇದ್ದರು.

ತಾಯಿ, ತಂಗಿಯ ಕೆರೆಗೆ ತಳ್ಳಿ ಕೊಂದ ಸುಪುತ್ರ!

ತಂಗಿಯನ್ನು ನಿತಿನ್ ತನ್ನ ಬೈಕ್‌ನಲ್ಲಿ ಕರೆದೊಯ್ದಿದ್ದಾನೆ. ಹೋಗುವ ದಾರಿಯಲ್ಲಿ ಮರೂರು ಕೆರೆ ಬಳಿ ಬೈಕ್ ನಿಲ್ಲಿಸಿ ಮೊದಲು ತಂಗಿಯನ್ನು ಕೆರೆಗೆ ತಳ್ಳಿದ್ದಾನೆ. ಈ ವೇಳೆ ಮಗಳನ್ನು ರಕ್ಷಿಸಲು ಬಂದ ತಾಯಿಯನ್ನೂ ಕೆರೆಗೆ ತಳ್ಳಿದ್ದಾನೆ. ಕೂಡಲೇ ತನ್ನ ತಪ್ಪಿನ ಅರಿವಾಗಿ ತಾಯಿಯನ್ನು ರಕ್ಷಿಸಿಕೊಳ್ಳಲು ನಿತಿನ್ ಕೆರೆಗೆ ಹಾರಿದ್ದಾನೆ. ಆದರೆ ಆ ವೇಳೆಗಾಗಲೇ ಇಬ್ಬರೂ ನೀರಿನಲ್ಲಿ ಮುಳುಗಿದ್ದಾರೆ. ಒದ್ದೆ ಬಟ್ಟೆಯಲ್ಲೇ ಮನೆಗೆ ಹಿಂದಿರುಗಿ ಬಂದು, ತಂದೆ ಸತೀಶ್ ಬಳಿ ನಡೆದಿದ್ದೆಲ್ಲವನ್ನು ನಿತೀಶ್ ಹೇಳಿದ್ದಾನೆ. ಆರೋಪಿ ನಿತೀಶ್‌ನನ್ನು ಹುಣಸೂರು ಗ್ರಾಮಾಂತರ ಪೊಲೀಸರು ಬಂಧಿಸಿದ್ದಾರೆ. ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಮೃತದೇಹಗಳನ್ನು ಕೆರೆ ನೀರಿಂದ ಹೊರತೆಗೆದು ಮರಣೋತ್ತರ ಪರೀಕ್ಷೆ ನಂತರ, ದೇಹಗಳನ್ನು ವಾರಸುದಾರರಿಗೆ ಒಪ್ಪಿಸಿದ್ದಾರೆ.

ಗ್ರಾಮದ ಹುಡುಗ ನಿತೀಶನೇ ಕೊಲೆಗಾರ

ಉಸಿರುಗಟ್ಟಿಸಿ ಕೊಂದ ನಂತರ ಶವವನ್ನು ಗೋಣಿಚೀಲದಲ್ಲಿ ಹಾಕಿ, ಅದಾಗಲೇ ತೋಡಿದ್ದ ಹಳ್ಳದಲ್ಲಿ ಹೂತು ಹಾಕಿ ಸ್ಥಳದಿಂದ ಪರಾರಿಯಾಗಿದ್ದಾನೆ. ದೀಪಿಕಾ ಮತ್ತು ಈತನ ನಡುವೆ ಗಲಾಟೆ, ಎಳೆದಾಡುವುದನ್ನು ಬೆಟ್ಟದ ಮೇಲಿಂದ ಗಮನಿಸಿದ್ದ ಪ್ರವಾಸಿಗರೊಬ್ಬರು ತಮ್ಮ ಮೊಬೈಲ್‌ನಲ್ಲಿ ವೀಡಿಯೋ ಚಿತ್ರೀಕರಣ ಮಾಡಿ ಅದನ್ನು ಮೇಲುಕೋಟೆ ಪೊಲೀಸರಿಗೆ ತಲುಪಿಸಿದ್ದರು. ವೀಡಿಯೋ ಚಿತ್ರೀಕರಣ ಮಾಡಿದ ಸ್ಥಳ ಹಾಗೂ ಘಟನೆ ನಡೆದ ಸ್ಥಳಕ್ಕೂ ನಡುವೆ ಅಂತರ ಹೆಚ್ಚಾಗಿದ್ದುದರಿಂದ ವೀಡಿಯೋ ಅಸ್ಪಷ್ಟವಾಗಿತ್ತು. ಆದರೆ ವ್ಯಕ್ತಿಯೋರ್ವ ಮಹಿಳೆಯೊಂದಿಗೆ ಘರ್ಷಣೆಗಿಳಿದಿರುವುದು ಗೋಚರಿಸುತ್ತಿತ್ತು. ಈ ಹಿನ್ನೆಲೆಯಲ್ಲಿ ಘಟನಾ ಸ್ಥಳಕ್ಕೆ ಪೊಲೀಸರು ತೆರಳಿ ಪರಿಶೀಲಿಸಿದಾಗ ಡಿಯೋ ಸ್ಕೂಟರ್ ಪತ್ತೆಯಾಗಿದೆ. ಅದರ ನೋಂದಣಿ ಸಂಖ್ಯೆ ಪರಿಶೀಲಿಸಿದಾಗ ಅದು ಮಾಣಿಕ್ಯನಹಳ್ಳಿಯ ವೆಂಕಟೇಶ್ ಎಂಬುವರಿಗೆ ಸೇರಿದ್ದು ಎಂಬುದು ಗೊತ್ತಾಗಿದೆ. ತಕ್ಷಣ ಅವರನ್ನು ಠಾಣೆಗೆ ಕರೆಸಿದ ಪೊಲೀಸರು, ಸ್ಕೂಟರ್ ಅನ್ನು ತೋರಿಸಿದಾಗ ಅದು ತಮ್ಮದೇ ಸ್ಕೂಟರ್ ಆಗಿದ್ದು, ಪುತ್ರಿ ದೀಪಿಕಾ ಅದನ್ನು ಶಾಲೆಗೆ ತೆಗೆದುಕೊಂಡು ಹೋಗಿದ್ದಳು. 12 ಗಂಟೆಗೆ ಶಾಲೆಯಿಂದ ಹೊರಟಿದ್ದರೂ ಇನ್ನೂ ಆಕೆ ಮನೆಗೆ ತಲುಪಲಿಲ್ಲ ಎಂದು ಪೊಲೀಸರಿಗೆ ತಿಳಿಸಿದ ವೆಂಕಟೇಶ್, ಮಗಳು ನಾಪತ್ತೆಯಾಗಿರುವ ಬಗ್ಗೆ ಅಂದು ಸಂಜೆಯೇ ಮೇಲುಕೋಟೆ ಠಾಣೆ ಪೊಲೀಸರಿಗೆ ದೂರು ಸಲ್ಲಿಸಿದ್ದರು.

ಹಂತಕ ದೀಪಿಕಾ ಬಗ್ಗೆ ವಿಚಾರಿಸುತ್ತಲೇ ಇದ್ದ: ದೀಪಿಕಾ ಅವರನ್ನು ಹತ್ಯೆ ಮಾಡಿ ಹೂತು ಹಾಕಿದ ನಂತರವೂ ಗ್ರಾಮದಲ್ಲೇ ಓಡಾಡಿಕೊಂಡಿದ್ದ ನಿತೀಶ್, ದೀಪಿಕಾ ತಂದೆ ವೆಂಕಟೇಶ್ ಅವರಿಗೆ ಕರೆ ಮಾಡಿ 'ಅಪ್ಪಾ, ಅಕ್ಕ ಸಿಕ್ಕಿದ್ರಾ' ಎಂದು ವಿಚಾರಿಸುತ್ತಿದ್ದ. ಇತ್ತ ಪೊಲೀಸರು ದೀಪಿಕಾಗೆ ಬಂದ ಕರೆಗಳ ಬಗ್ಗೆ ಪರಿಶೀಲಿಸುತ್ತಾ, ತಾಂತ್ರಿಕ ತನಿಖೆಯಲ್ಲಿ ತೊಡಗಿದ್ದರೆ, ಅತ್ತ ದೀಪಿಕಾ ಕುಟುಂಬಸ್ಥರು ಆಕೆಯು ಹತ್ಯೆಯಾಗಿರಬಹುದು ಎಂಬ ಬಲವಾದ ಸಂಶಯದಿಂದ ಸ್ಕೂಟರ್ ದೊರೆತ ಸುತ್ತಮುತ್ತ ಹುಡುಕಾಟ ನಡೆಸುತ್ತಿದ್ದರು. ಈ ಮಧ್ಯೆ ಸೋಮವಾರ ಸ್ಕೂಟರ್ ದೊರೆತ ಸ್ಥಳದಿಂದ, ಸುಮಾರು 500 ಮೀಟರ್ ಅಂತರದಲ್ಲಿ ನೊಣಗಳು ಮುತ್ತುತ್ತಿರುವುದನ್ನು ಗಮನಿಸಿದ ದೀಪಿಕಾ ಸಂಬಂಧಿಕರು ಅಲ್ಲಿನ ಮಣ್ಣನ್ನು ಕೈಗಳಿಂದ ತೆರವುಗೊಳಿಸಿದಾಗ ಶವ ಪತ್ತೆಯಾಗಿದೆ.

ಶವ ಸಿಕ್ಕ ಕೂಡಲೇ ನಾಪತ್ತೆ: ದೀಪಿಕಾ ಶವ ಪತ್ತೆಯಾಗಿದೆ ಎಂಬುದು ಗೊತ್ತಾಗುತ್ತಿದ್ದಂತೆಯೇ ನಿತೀಶ್, ನಾಪತ್ತೆಯಾಗಿದ್ದಾನೆ. ಅದೇ ವೇಳೆ ಪೊಲೀಸರ ತಾಂತ್ರಿಕ ತನಿಖೆಯಲ್ಲಿ ಆಕೆಗೆ ಕೊನೆಯದಾಗಿ ಕರೆ ಮಾಡಿದ್ದು ಹಾಗೂ ಶನಿವಾರ ಮಧ್ಯಾಹ್ನ ದೀಪಿಕಾ ಮೊಬೈಲ್ ಸ್ವಿಚ್ ಆಫ್ ಆದ ಸ್ಥಳದಲ್ಲೇ ನಿತೀಶ್ ಮೊಬೈಲ್ ಕಾರ್ಯ ನಿರತವಾಗಿತ್ತು ಎಂಬುದು ಪತ್ತೆಯಾಗಿತ್ತು. ಈ ಹಿನ್ನೆಲೆಯಲ್ಲಿ ಶವವನ್ನು ವಶಪಡಿಸಿಕೊಂಡು ಮಂಡ್ಯ ವಿಮ್ಸ್ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗಾಗಿ ರವಾನಿಸಿದ ಪೊಲೀಸರು, ನಿತೀಶ್ ಬಗ್ಗೆ ವಿಚಾರಣೆಗೆ ಮುಂದಾದ ವೇಳೆ ಆತ, ಗ್ರಾಮದಿಂದ ನಾಪತ್ತೆಯಾಗಿದ್ದ.

ತಂದೆಗೆ ಮೆಸೇಜ್: ನಂತರ ತನ್ನ ತಂದೆಗೆ 'ನಾನು ತಪ್ಪು ಮಾಡಿದ್ದೇನೆ. ನನ್ನನ್ನು ಹುಡುಕಬೇಡಿ. ಅಕ್ಕನಿಗೆ ಮದುವೆ ಮಾಡಿ' ಎಂಬ ಒಕ್ಕಣೆ ಇರುವ ಮೆಸೇಜ್ ರವಾನಿಸಿರುವುದು ಗೊತ್ತಾಗಿದೆ. ದೀಪಿಕಾ ಅವರನ್ನು ಈತನೇ ಹತ್ಯೆಗೈಯ್ದಿರಬಹುದು ಎಂಬುದು ಸಾಂದರ್ಭಿಕ ಸಾಕ್ಷಿಗಳಿಂದ ಮೇಲ್ನೋಟಕ್ಕೆ ತಿಳಿದು ಬಂದ ಹಿನ್ನೆಲೆಯಲ್ಲಿ ಮಂಡ್ಯ ಎಸ್ಪಿ ಯತೀಶ್ ಅವರು, ಶ್ರೀರಂಗಪಟ್ಟಣ ಉಪ ವಿಭಾಗದ ಡಿವೈಎಸ್‌ಪಿ ಮುರಳಿ ನೇತೃತ್ವದಲ್ಲಿ ನಿತೀಶ್ ಬಂಧನಕ್ಕಾಗಿ ವಿಶೇಷ ಪಡೆ ರಚಿಸಿದ್ದರು. ಈ ಪಡೆಯು ಮೊಬೈಲ್ ಟವರ್ ಲೊಕೇಷನ್ ಆಧರಿಸಿ ವಿಜಯನಗರ ಜಿಲ್ಲೆ ಹೊಸಪೇಟೆಯಲ್ಲಿದ್ದ ಆತನನ್ನು ಮಂಗಳವಾರ ರಾತ್ರಿ ವಶಕ್ಕೆ ಪಡೆದು ಬುಧವಾರ ಹಿರಿಯ ಅಧಿಕಾರಿಗಳಿಗೆ ಒಪ್ಪಿಸಿದ್ದಾರೆ.

ಈ ವೇಳೆ ಆತ ತನ್ನೊಂದಿಗೆ ಎರಡು ವರ್ಷದಿಂದ ಅನ್ಯೋನ್ಯವಾಗಿದ್ದ ದೀಪಿಕಾ, ಕಳೆದ 10–15 ದಿನಗಳಿಂದ ತನ್ನನ್ನು ನಿರ್ಲಕ್ಷಿಸುತ್ತಿದ್ದಳು. ತಾನೇ ಮಾತನಾಡಿಸಿದರೂ, ಮಾತನಾಡುತ್ತಿರಲಿಲ್ಲ. ಸರಿಯಾಗಿ ಕರೆಗಳನ್ನು ಸ್ವೀಕರಿಸುತ್ತಿರಲಿಲ್ಲ. ಈ ಕಾರಣದಿಂದಾಗಿ ಆಕೆಯನ್ನು ಹತ್ಯೆ ಮಾಡಿದ್ದಾಗಿ ಪ್ರಾಥಮಿಕ ತನಿಖೆ ವೇಳೆ ಪೊಲೀಸರಿಗೆ ತಿಳಿಸಿದ್ದಾನೆ ಎಂದು ಮಂಡ್ಯ ಎಸ್ಪಿ ಯತೀಶ್ ಅವರು ಮೈಸೂರು ಮಿತ್ರನಿಗೆ ತಿಳಿಸಿದರು. ದೀಪಿಕಾ ಮಾಡುತ್ತಿದ್ದ ರೀಲ್ಸ್‌ಗಳನ್ನು ನಿತೀಶ್‌ನೇ ವೀಡಿಯೋ ರೆಕಾರ್ಡ್ ಮಾಡುತ್ತಿದ್ದ ಎಂಬ ಮಾತುಗಳು ಕೇಳಿ ಬರುತ್ತಿವೆಯಾದರೂ, ಪೊಲೀಸರು ಈ ವಿಚಾರವನ್ನು ಖಚಿತಪಡಿಸಿಲ್ಲ.

ಗ್ಯಾಸ್ ಪೈಪ್‌ಲೈನ್ ಅಳವಡಿಕೆ ಖರ್ಚು ಕಡಿತ

ಸಂಪರ್ಕ ಕಲ್ಪಿಸಿ ಗ್ಯಾಸ್ ಸರಬರಾಜು ಮಾಡಲು ದುಬಾರಿ ವೆಚ್ಚವಾಗಲಿದ್ದು, ಅದನ್ನು ಕಂಪನಿಯು ಗ್ರಾಹಕರಿಗೆ ಹೆಚ್ಚಿನ ದರ ನಿಗದಿಪಡಿಸುವುದು ಅನಿವಾರ್ಯವಾಗುತ್ತದೆ. ಅದರಿಂದ ಜನಸಾಮಾನ್ಯರಿಗೆ ಹೊರೆಯಾಗುವುದನ್ನು ತಪ್ಪಿಸಲು ಸರ್ಕಾರವೇ ರೋಡ್ ಕಟ್ಟಿಂಗ್ ಶುಲ್ಕವನ್ನು 1956 ರಿಂದ 1 ರೂ.ಗೆ ಕಡಿತಗೊಳಿಸಿದೆ ಎಂದು ಪ್ರತಾಪ್ ಸಿಂಹ ತಿಳಿಸಿದರು.

ಅಗೆದ ನೆಲವನ್ನು ಪೈಪ್‌ಲೈನ್ ಅಳವಡಿಸಿದ ನಂತರ ಕಂಪನಿಯೇ ಮುಚ್ಚಿ ಯಥಾವತ್ತಾಗಿ ಡಾಂಬರೀಕರಣ ಮಾಡಬೇಕು, ಒಂದು ವೇಳೆ ತೃಪ್ತಿದಾಯಕವಾಗಿ ರಸ್ತೆ ಮುಚ್ಚದಿದ್ದಲ್ಲಿ ಭದ್ರತಾ ಠೇವಣಿಯ ಶೇ. 50 ರಷ್ಟು ಹಣ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ಎಂಬ ಷರತ್ತಿನ ಮೇಲೆ ಕಾಮಗಾರಿ ಪುನಾರಂಭಿಸಲು ಅನುಮತಿ ನೀಡಿ ಎಂದು ಪ್ರತಾಪ್ ಸಿಂಹ ಅಧಿಕಾರಿಗಳಿಗೆ ಸೂಚಿಸಿದರು.

ಸಿಲಿಂಡರ್‌ಗಳನ್ನು ದುಬಾರಿ ಬೆಲೆ ನೀಡಿ ಖರೀದಿಸಬೇಕಾಗಿದ್ದು, ಮೊದಲ ಅಥವಾ ಎರಡು, ಮೂರನೇ ಮಹಡಿಗಳಿಗೆ ತರಿಸಿಕೊಳ್ಳಲು ಹೆಚ್ಚುವರಿ ಹಣ ಕೊಡಬೇಕಾಗಿದೆ. ಅದರಿಂದ ಮುಕ್ತಿ ಹೊಂದಲು ನೇರವಾಗಿ ಪೈಪ್‌ಲೈನ್ ಮೂಲಕ ಅಡುಗೆ ಅನಿಲ ಪೂರೈಸುವ ಯೋಜನೆಯನ್ನು ಕೇಂದ್ರ ಸರ್ಕಾರ ಜಾರಿಗೊಳಿಸಲು ಮುಂದಾಗಿದ್ದು, ಇದರಿಂದ ಗ್ರಾಹಕರು ಬಳಸಿದ ಗ್ಯಾಸ್‌ಗೆ ಅತೀ ಕಡಿಮೆ ಶುಲ್ಕ ವಿಧಿಸಲಾಗುತ್ತದೆ. ಆದ್ದರಿಂದ ಸಾರ್ವಜನಿಕರಿಗೆ ಅನುಕೂಲವಾಗುವ ಕಾರ್ಯಕ್ಕೆ ಬೆಂಬಲ ನೀಡಬೇಕೆಂದು ಸಂಸದರು ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದರು.

ಶುಲ್ಕ ಕಡಿತಗೊಳಿಸಿ ಅಧಿಸೂಚನೆ ಹೊರಡಿಸಿರುವುದು ಗೆಜೆಟ್‌ನಲ್ಲಿ ಪ್ರಕಟವಾಗಿದೆಯಾದರೂ ಕೌನ್ಸಿಲ್ ಸಭೆಯಲ್ಲಿ ನಿರ್ಣಯ ಕೈಗೊಂಡು ಅನುಷ್ಠಾನ ಮಾಡಲು ಚುನಾಯಿತ ಪ್ರತಿನಿಧಿಗಳು ಇಲ್ಲದಿರುವುದರಿಂದ ಆಡಳಿತಾಧಿಕಾರಿಗಳು ನಿರ್ಣಯ ಕೈಗೊಳ್ಳಲು ನಿಯಮದಂತೆ ಸಾಧ್ಯವಿಲ್ಲ ಎಂದು ಪಾಲಿಕೆ ಆಯುಕ್ತ ಅಶಾದ್ ಉರ್ ರೆಹಮಾನ್ ಷರೀಫ್ ತಿಳಿಸಿದರು. ಅದಕ್ಕೆ ಪ್ರತಿಕ್ರಿಯಿಸಿದ ಪ್ರತಾಪ್ ಸಿಂಹ, ಜನಪ್ರತಿನಿಧಿಗಳಿಲ್ಲದಿದ್ದರೇನು? ಆಡಳಿತಾಧಿಕಾರಿಗಳ ಮೂಲಕವೇ ಸರ್ಕಾರಕ್ಕೆ ಪತ್ರ ಬರೆದು ಅನುಮತಿ ಕೇಳಿ. ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಡಾ.ಅಜಯ್ ನಾಗಭೂಷಣ್ ಜೊತೆ ನಾನೂ ಮಾತನಾಡಿ ಅನುಮತಿ ನೀಡುವಂತೆ ನಿರ್ದೇಶನ ಕೊಡಿಸುತ್ತೇನೆ ಎಂದರು. ಕಂಪನಿಯು ಈಗಾಗಲೇ ಹೆಬ್ಬಾಳು, ಹೂಟಗಳ್ಳಿ, ಕೂರ್ಗಳ್ಳಿ ಕೈಗಾರಿಕಾ ಪ್ರದೇಶ, ರಿಂಗ್ ರಸ್ತೆ, ವಿಜಯನಗರ 2ನೇ ಹಂತ, 3ನೇ ಹಂತ, ಕುವೆಂಪುನಗರ ವಸತಿ ಬಡಾವಣೆಗಳಲ್ಲಿ ಪೈಪ್‌ಲೈನ್ ಅಳವಡಿಸಿ ವಿಜಯನಗರದ 500 ಮನೆಗಳಿಗೆ ಗ್ಯಾಸ್ ಪೂರೈಸಲಾಗುತ್ತಿದೆ. ನಂಜನಗೂಡು, ಕಡಕೊಳ ಕೈಗಾರಿಕಾ ಪ್ರದೇಶಕ್ಕೂ ಪೈಪ್‌ಲೈನ್ ಅಳವಡಿಸುವ ಕಾಮಗಾರಿ ನಡೆಯುತ್ತಿದೆ. ಆದರೆ, ಮೀಟರ್‌ಗೆ 1956 ರೂ. ಶುಲ್ಕ ಪಾವತಿಸಿ ರಸ್ತೆ ಅಗೆದು ಮತ್ತೆ ಮುಚ್ಚುವುದು ದುಬಾರಿಯಾಗುವುದರಿಂದ ನಿಭಾಯಿಸಲಾಗದು ಎಂಬ ಕಾರಣ ಹೇಳಿ ಕಂಪನಿಯವರು ಕಾಮಗಾರಿಯನ್ನು ಸ್ಥಗಿತಗೊಳಿಸಿದೆ ಎಂದು ಅವರು ತಿಳಿಸಿದರು. ಪಾಲಿಕೆ ಉಪ ಆಯುಕ್ತ (ಅಭಿವೃದ್ಧಿ)ರಿಂದ ಸಿಂಧು, ಎಜಿ ಅಂಡ್ ಪಿ ಪ್ರಥಮ್ ಸಂಸ್ಥೆಯ ಚೀಫ್ ಆಪರೇಟಿಂಗ್ ಆಫೀಸರ್ ಚಿರ್‌ದೀಪ್ ದತ್ತ, ಸ್ಥಳೀಯ ಮುಖ್ಯಸ್ಥ ಅರುಣ್‌ನಾಯಕ್ ಇನ್ನಿತರರಿದ್ದರು.

ಅಯೋಧ್ಯೆ ಬಾಲರಾಮನ ದರ್ಶನ

ಪೊಲೀಸರು ಸಂಚಾರ ನಿರ್ವಹಣೆಗಾಗಿ ಹರಸಾಹಸಪಡುತ್ತಿದ್ದಾರೆ. ದಿನದ 24 ಗಂಟೆಯೂ ಅಯೋಧ್ಯೆಯಲ್ಲಿ ಭಕ್ತಸಾಗರವೇ ನೆರೆದಿದೆ. ಅಯೋಧ್ಯೆ ವಿಮಾನ ನಿಲ್ದಾಣ ಮಾತ್ರವಲ್ಲದೆ, ಅಕ್ಕ–ಪಕ್ಕದ ವಿಮಾನ ನಿಲ್ದಾಣಗಳಿಗೆ ಆಗಮಿಸುವ ಭಕ್ತಾದಿಗಳು ಅಲ್ಲಿಂದ ಟ್ಯಾಕ್ಸಿಗಳ ಮೂಲಕ ಅಯೋಧ್ಯೆಗೆ ಬರುತ್ತಿದ್ದು, ಇಲ್ಲಿನ ಖಾಸಗಿ ಹಾಗೂ ಸರ್ಕಾರಿ ಸಾರಿಗೆಗಳ ಆದಾಯ ಮಿತಿ ಮೀರಿ ಹೆಚ್ಚಳವಾಗಿದೆ.

ಭಾರೀ ಭದ್ರತೆ: ಸಾಗರೋಪಾದಿಯಲ್ಲಿ ಭಕ್ತಾದಿಗಳು ಆಗಮಿಸುತ್ತಿರುವುದರಿಂದ ಅಲ್ಲಿನ ಭಕ್ತಾದಿಗಳ ನೂಕು–ನುಗ್ಗಲನ್ನು ನಿಯಂತ್ರಿಸಲು ರಕ್ಷಣಾಪಡೆಗಳು ಹೈರಾಣಾಗುತ್ತಿವೆ. ಸಾವಿರಾರು ಸಂಖ್ಯೆಯಲ್ಲಿ ಉತ್ತರಪ್ರದೇಶ ಪೊಲೀಸರು ಮಾತ್ರವಲ್ಲದೆ ಸಿಆರ್‌ಪಿಎಫ್ ಸೇರಿದಂತೆ ಕೇಂದ್ರೀಯ ಪಡೆಗಳನ್ನೂ ಕೂಡ ಅಯೋಧ್ಯೆಯಲ್ಲಿ ಭದ್ರತೆಗಾಗಿ ನಿಯೋಜಿಸಲಾಗಿದೆ. ರಾಮಮಂದಿರದ ಪ್ರವೇಶ ಹಾಗೂ ನಿರ್ಗಮನಕ್ಕೆ ಪ್ರತ್ಯೇಕ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ. ಸಾಗರೋಪಾದಿಯಲ್ಲಿ ಭಕ್ತಾದಿಗಳು ಆಗಮಿಸುತ್ತಿರುವುದರಿಂದ ಅತೀ ಗಣ್ಯ ವ್ಯಕ್ತಿಗಳು 10 ದಿನಗಳ ಕಾಲ ಅಯೋಧ್ಯೆಗೆ ಬರಬೇಡಿ ಎಂದು ಉತ್ತರಪ್ರದೇಶ ಸರ್ಕಾರ ಮನವಿ ಮಾಡಿಕೊಂಡಿದೆ. ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ಹೊಸದಾಗಿ ಉದ್ಘಾಟನೆಗೊಂಡ ರಾಮಮಂದಿರವು ದೇಶಾದ್ಯಂತ ಭಗವಾನ್ ರಾಮ ಭಕ್ತರಿಗೆ ಪ್ರಮುಖ ಧಾರ್ಮಿಕ ಸ್ಥಳವಾಗಿದೆ. ಕೋಟಿಗಟ್ಟಲೆ ಜನರು ರಾಮ ಮಂದಿರಕ್ಕೆ ಆಗಮಿಸುತ್ತಾರೆ. ಹೀಗೆ ಬರುವ ಭಕ್ತರು ನಗದು ಅಥವಾ ವಸ್ತುವಿನ ರೂಪದಲ್ಲಿ ಉದಾರವಾಗಿ ದೇಣಿಗೆ ನೀಡುವ ನಿರೀಕ್ಷೆಯಿದೆ.

ಭಾರೀ ದೇಣಿಗೆ: ರಾಮಮಂದಿರ ನಿರ್ಮಾಣದ ಘೋಷಣೆಯಾದಾಗಿನಿಂದಲೂ, ಅಯೋಧ್ಯೆಯಲ್ಲಿ ಮಂದಿರದ ನಿರ್ಮಾಣ ಮತ್ತು ನಿರ್ವಹಣೆಯನ್ನು ನೋಡಿಕೊಳ್ಳಲು ರಚಿತವಾದ ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರವು ನಗದು ಮತ್ತು ಸರಕುಗಳ ರೂಪದಲ್ಲಿ ಭಾರಿ ಕಾಣಿಕೆಯನ್ನು ಪಡೆಯುತ್ತಿದೆ. ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಾಣಕ್ಕೆ ಈಗಾಗಲೇ 5,000 ಕೋಟಿ ರೂಪಾಯಿಗೂ ಹೆಚ್ಚು ದೇಣಿಗೆ ಬಂದಿದೆ ಎಂದು ಟ್ರಸ್ಟ್ ಹೇಳಿಕೊಂಡಿದೆ. ಹಲವಾರು ವ್ಯಾಪಾರೋದ್ಯಮಿಗಳು ಮತ್ತು ರಾಜಕೀಯ ಮುಖಂಡರು, ಬಾಲಿವುಡ್ ಸೆಲೆಬ್ರಿಟಿಗಳು ಮತ್ತು ಸಮಾಜದ ಎಲ್ಲಾ ವರ್ಗಗಳ ಜನರು ಅಯೋಧ್ಯೆಯಲ್ಲಿ ರಾಮಮಂದಿರಕ್ಕೆ ಕೊಡುಗೆ ನೀಡಿದ್ದಾರೆ.

ಜನವರಿ 22ರಂದು ಬಾಲರಾಮ ಪ್ರಾಣ ಪ್ರತಿಷ್ಠಾಪನಾ ಸಮಾರಂಭದಲ್ಲಿ ಭಾಗವಹಿಸಿದ ನಂತರ, ರಿಲಯನ್ಸ್ ಇಂಡಸ್ಟ್ರೀಸ್ ಅಧ್ಯಕ್ಷ ಮುಕೇಶ್ ಅಂಬಾನಿ ಮತ್ತು ಅವರ ಕುಟುಂಬ ರಾಮಮಂದಿರಕ್ಕಾಗಿ 2.51 ಕೋಟಿ ರೂ. ನೀಡುವುದಾಗಿ ಘೋಷಿಸಿದೆ.

ಅಯೋಧ್ಯೆ ರಾಮಮಂದಿರಕ್ಕೆ ದೇಣಿಗೆ ನೀಡಲು ಮಾಹಿತಿ: ಪ್ರಪಂಚದಾದ್ಯಂತದ ಜನರು Google Pay ಮತ್ತು BharatPe ನಂತಹ UPI ಅಪ್ಲಿಕೇಶನ್‌ಗಳನ್ನು ಬಳಸಿಕೊಂಡು ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ಗೆ ದೇಣಿಗೆ ಸಲ್ಲಿಸಬಹುದು.

ಅಯೋಧ್ಯೆಯಲ್ಲಿ ರಾಮಮಂದಿರಕ್ಕಾಗಿ ಆನ್‌ಲೈನ್‌ನಲ್ಲಿ ದೇಣಿಗೆ ನೀಡಲು ಬಯಸುವ ಭಕ್ತರು ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ನ ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡಬೇಕು ಮತ್ತು ಪಾವತಿ ಗೇಟ್‌ವೇಗಳು, UPI, NEFT, IMPS, ಬೇಡಿಕೆ ಡ್ರಾಫ್ಟ್ ಮತ್ತು ಪಾವತಿಗಳನ್ನು ಪರಿಶೀಲಿಸಬೇಕು. ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಬ್ಯಾಂಕ್ ಆಫ್ ಬರೋಡಾ, ಪಂಜಾಬ್ ನ್ಯಾಷನಲ್ ಬ್ಯಾಂಕ್‌ನಲ್ಲಿ ದೇಣಿಗೆ ಉದ್ದೇಶಗಳಿಗಾಗಿ ಖಾತೆಗಳನ್ನು ತೆರೆಯಲಾಗಿದೆ. ವಿವರಗಳು– ಖಾತೆ ಹೆಸರು ಮತ್ತು ಸಂಖ್ಯೆ: ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ (42162875158). IFSC ಕೋಡ್: SBIN0000691. ಸ್ವಿಫ್ಟ್ ಕೋಡ್: SBININBB104

ಚೆಸ್ಕಾಂ ಎಂಡಿಗೆ ಮಾತ್ರ ಶಾಕ್!!

ವೇಳೆ ಮೈಕ್ ಕೈಕೊಡುತ್ತದೆ. ಅಥವಾ ವಿದ್ಯುತ್ ನಿಲುಗಡೆಯಾಗುತ್ತದೆ. ಅಂತಹ ಸಂದರ್ಭದಲ್ಲಿ ಈ ಗಣ್ಯರು ಕೆಲ ನಿಮಿಷ ಸಿಡಿಮಿಡಿಗೊಳ್ಳುತ್ತಾರೆ. ಇದೇ ರೀತಿ ವಿರೋಧ ಪಕ್ಷದ ನಾಯಕರ ಕಾರ್ಯಕ್ರಮದಲ್ಲಿ ನಡೆದರೆ ಅವರು ಆಡಳಿತ ಪಕ್ಷದ ವಿರುದ್ಧ ಹರಿಹಾಯುತ್ತಾರೆ. ಇಂತಹ ಘಟನೆಗಳು ನಡೆಯುವುದು ಸಾಮಾನ್ಯ ಕಾರ್ಯಕ್ರಮಗಳಲ್ಲಿ.

ಆದರೆ ಇಂದು ಪಿರಿಯಾಪಟ್ಟಣ ತಾಲೂಕಿನ ಮುತ್ತಿನಮುಳ್ಳಸೋಗೆ ಗ್ರಾಮದ ಬಳಿ ಕಾವೇರಿ ನದಿಯಿಂದ 79 ಗ್ರಾಮಗಳಲ್ಲಿರುವ 150 ಕೆರೆ–ಕಟ್ಟೆಗಳಿಗೆ ನೀರು ತುಂಬಿಸುವ ಯೋಜನೆಯ ಉದ್ಘಾಟನಾ ಕಾರ್ಯಕ್ರಮ ಆಯೋಜಿಸಲಾಗಿತ್ತು. ನಿಗದಿಯಂತೆ ಮುಖ್ಯಮಂತ್ರಿಗಳು ಬಟನ್ ಒತ್ತಿದ ತಕ್ಷಣ ಕಾವೇರಿ ನದಿಯಿಂದ ಅಳವಡಿಸಲಾಗಿದ್ದ ಪೈಪ್‌ಗಳಲ್ಲಿ ನೀರು ಹರಿಯಬೇಕಾಗಿತ್ತು. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬಟನ್ ಅನ್ನು ಎಷ್ಟು ಬಾರಿ ಒತ್ತಿದರೂ ಮೋಟಾರ್ ಆನ್ ಆಗಲಿಲ್ಲ. ಪೈಪ್‌ನಲ್ಲಿ ನೀರಂತೂ ಬಂದಿಲ್ಲ. ಬಟನ್ ಒತ್ತಿದಾಕ್ಷಣ ನೀರು ಹರಿದು ಬರುತ್ತದೆ ಎಂಬ ನಿರೀಕ್ಷೆಯಿಂದ ವೇದಿಕೆಯಲ್ಲಿದ್ದ ಮುಖಂಡರೂ ಸೇರಿದಂತೆ ಸಭಿಕರಲ್ಲಿ ಕೆಲವರು ಚಪ್ಪಾಳೆ ತಟ್ಟಿದ್ದೂ ಆಯಿತು. ಆಗಿದ್ದೇನೆಂದರೆ ಈ ಕಾರ್ಯಕ್ರಮದ ಉದ್ಘಾಟನೆಗೆ ಚೆಸ್ಕಾಂ ಇಲಾಖೆಯಿಂದ ಸಮರ್ಪಕವಾದ ವ್ಯವಸ್ಥೆ ಮಾಡಿರಲಿಲ್ಲ. ಹೀಗಾಗಿ ಮುಖ್ಯಮಂತ್ರಿಗಳು ತೀವ್ರ ಮುಜುಗರಕ್ಕೊಳಪಡಬೇಕಾಯಿತು. ಇದರಿಂದ ಸಿಎಂ ಕೆರಳಿ ಕೆಂಡವಾಗಿದ್ದರು. ಚೆಸ್ಕಾಂ ಎಂಡಿ ಸ್ಥಳದಲ್ಲಿ ಪತ್ತೆಯಿಲ್ಲ. ಇದಾದ ಬಳಿಕ ಮೈಸೂರು ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ ಅವರು ಸಲ್ಲಿಸಿದ ಪ್ರಸ್ತಾವನೆ ಆಧರಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಧೀನ ಕಾರ್ಯದರ್ಶಿ ಉಮಾದೇವಿ ಅವರು ಕರ್ತವ್ಯ ಲೋಪ ಮತ್ತು ಶಿಷ್ಟಾಚಾರ ಉಲ್ಲಂಘನೆ ಆರೋಪದ ಮೇರೆಗೆ ಚೆಸ್ಕಾಂ ಎಂಡಿ ಸಿ.ಎನ್.ಶ್ರೀಧರ್ ಅವರನ್ನು ಅಮಾನತುಪಡಿಸಿ ಆದೇಶ ಹೊರಡಿಸಿದ್ದಾರೆ.

ಮೈಸೂರು ಮಿತ್ರ




ಮೈಸೂರಿನ ಜೆ.ಕೆ. ಟೈರ್ಸ್ ಅಂಡ್ ಇಂಡಸ್ಟ್ರೀಸ್ ಲಿಮಿಟೆಡ್, ವಿಕ್ರಾಂತ್ ಟೈರ್ಸ್ ಪ್ಲಾಂಟ್, ಮೈರಾಡ ಕಾವೇರಿ ಸಂಸ್ಥೆಯ ಸಾಮಾಜಿಕ ಹೊಣೆಗಾರಿಕೆ (ಸಿಎಸ್ಆರ್) ಅಡಿಯಲ್ಲಿ ಚಾಮುಂಡಿಬೆಟ್ಟದ ಪುರಾತನ ಹಿರಿಕೆರೆಯ ಪುನಶ್ಚೇತನ ಹಾಗೂ ನವೀಕರಣ ಕಾಮಗಾರಿಗೆ ನಿವೃತ್ತ ಕಾರ್ಯದರ್ಶಿ ತ.ಮ. ವಿಜಯಭಾಸ್ಕರ್ ಗುದ್ದಲಿಪೂಜೆ ನೆರವೇರಿಸಿದರು. ಜೆ.ಕೆ. ಟೈರ್ಸ್ ಉಪಾಧ್ಯಕ್ಷ ಈಶ್ವರ್‌ರಾವ್, ವ್ಯವಸ್ಥಾಪಕ ನಿರ್ದೇಶಕ ಜಗದೀಶ್, ಮೈರಾಡ ಸಂಸ್ಥೆಯ ಅಶ್ರಫ್ ಉಲ್ ಷರೀಫ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶ್ರೀಮತಿ ನಾಗಮ್ಮ, ಸದಸ್ಯರಾದ ಕೆ. ಭರತ್, ಮಂಜುನಾಥ್, ಶಂಭುಲಿಂಗ, ಅಂಬಿಕಾ, ಸುಜಾತ ವೆಂಕಟೇಶ್, ಪಿಡಿಓ ರೂಪೇಶ್‌ಕುಮಾರ್ ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.



ಮೈಸೂರಿನ ಶ್ರೀ ಮಹಾಲಕ್ಷ್ಮಿ ಕೊಲ್ಲಾಪುರದಮ್ಮ ದೇವಸ್ಥಾನದಲ್ಲಿ ರಾಜೀವ್ ಸ್ನೇಹ ಬಳಗದ ವತಿಯಿಂದ ಅಯೋಧ್ಯೆ ರಾಮಮಂದಿರ ಉದ್ಘಾಟನೆ ಪ್ರಯುಕ್ತ ಪ್ರಸಾದ ವಿತರಿಸಲಾಯಿತು. ಈ ಸಂದರ್ಭದಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಮೈಸೂರು ಮಹಾನಗರ ಪಾಲಿಕೆ ಮಾಜಿ ಸದಸ್ಯ ನಾಗಭೂಷಣ್, ಕಾಂಗ್ರೆಸ್ ನಗರ ಅಧ್ಯಕ್ಷ ಆರ್.ಮೂರ್ತಿ, ಓಬಿಸಿ ಘಟಕದ ಅಧ್ಯಕ್ಷ ನಾಗೇಶ್, 23ನೇ ವಾರ್ಡ್ ಮುಖಂಡ ರಾಜೀವ್, ವಾರ್ಡ್ ಅಧ್ಯಕ್ಷ ಆನಂದ್, ಮಂಜುನಾಥ್, ಪ್ರಚಾರ ಸಮಿತಿ ಅಧ್ಯಕ್ಷ ಶ್ರೀನಿವಾಸ್, ನಾಗರಾಜ್, ಮಂಜುಳಮ್ಮ, ಮಂಗಳಮ್ಮ ಶಾಂತಮ್ಮ, ಲೀಲಾವತಿ, ಜ್ಞಾನೇಶ್, ಹಳೆಬಂಡಿಕೇರಿ ನಿವಾಸಿಗಳು ಉಪಸ್ಥಿತರಿದ್ದರು.

ಕಲ್ಬುರ್ಗಿಯಲ್ಲಿ ಅಂಬೇಡ್ಕರ್ ಪುತ್ಥಳಿಗೆ ಅಪಮಾನ ಖಂಡಿಸಿ ಪ್ರತಿಭಟನೆ



ಮೈಸೂರಿನ ಎಫ್‌ಟಿಎಸ್ ವೃತ್ತದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ದಲಿತ ಮಹಾಸಭಾ ಕಾರ್ಯಕರ್ತರು ಬುಧವಾರ ಪಂಜು ಹಿಡಿದು ಪ್ರತಿಭಟನೆ ನಡೆಸಿದರು.

ಮೈಸೂರು, ಜ.24(ಎಸ್‌ಪಿಎನ್)– ಕಲ್ಬುರ್ಗಿ ಜಿಲ್ಲೆಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಪುತ್ಥಳಿಗೆ ಅಪಮಾನ ಮಾಡಿರುವುದು ಅಕ್ಷಮ್ಯ. ಇದರಲ್ಲಿ ಭಾಗಿಯಾಗಿರುವ ಆರೋಪಿಗಳ ವಿರುದ್ಧ ಕಠಿಣ ಕ್ರಮ ಜರುಗಿಸುವಂತೆ ಒತ್ತಾಯಿಸಿ ಮೈಸೂರು–ಬೆಂಗಳೂರು ರಸ್ತೆಯ ಎಫ್‌ಟಿಎಸ್ ವೃತ್ತದ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಬಳಿ ಡಾ.ಬಿ.ಆರ್.ಅಂಬೇಡ್ಕರ್ ದಲಿತ ಮಹಾಸಭಾ ಕಾರ್ಯಕರ್ತರು ಬುಧವಾರ ಸಂಜೆ ಪಂಜು ಹಿಡಿದು ಪ್ರತಿಭಟನೆ ನಡೆಸಿದರು.


ಇತ್ತೀಚಿನ ದಿನಗಳಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರ ಹಾಗೂ ಪ್ರತಿಮೆಗೆ ಅಪಮಾನ ಮಾಡುತ್ತಿರುವ ಘಟನೆಗಳು ಹೆಚ್ಚಾಗುತ್ತಿವೆ. ಇದನ್ನು ತಡೆಗಟ್ಟಲು ಸಿಸಿಟಿವಿ ಕ್ಯಾಮರಾ ಅಳವಡಿಸಿ ಸೂಕ್ತ ಭದ್ರತೆ ಒದಗಿಸಬೇಕು. ಇದರ ಭದ್ರತಾ ನಿರ್ವಹಣೆಯನ್ನು ಪೊಲೀಸ್ ಇಲಾಖೆಗೆ ವಹಿಸುವಂತೆ ರಾಜ್ಯ ಸರ್ಕಾರವನ್ನು ಪ್ರತಿಭಟನಾಕಾರರು ಒತ್ತಾಯಿಸಿದರು.

ಪ್ರತಿ ತಿಂಗಳು ಆಯಾಯ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರು, ದಲಿತ ಸಮುದಾಯ ವಾಸಿಸುವ ಬಡಾ ವಣೆಗಳಿಗೆ ಭೇಟಿ ನೀಡಿ, ಸಮುದಾಯದ ಕುಂದು–ಕೊರತೆಗಳನ್ನು ಆಲಿಸಿ, ಸ್ಥಳದಲ್ಲೇ ಪರಿಹಾರ ಒದಗಿಸುವುದು ಸರ್ಕಾರದ ಜವಾಬ್ದಾರಿ ಎಂದು ಆಗ್ರಹಿಸಿದರು. ರಾಜ್ಯದ ವಿವಿಧ ಮಹಾನಗರ ಪಾಲಿಕೆ, ನಗರಸಭೆ, ಪಟ್ಟಣ ಪಂಚಾಯತ್‌ಗಳು, ಗ್ರಾಪಂ, ತಾಪಂಗಳು, ನಗರಾಭಿವೃದ್ಧಿ ಪ್ರಾಧಿ ಕಾರಗಳ ವ್ಯಾಪ್ತಿಯಲ್ಲಿ ಎಸ್ಸಿ, ಎಸ್ಟಿ ನೌಕರರು ಮತ್ತು ಸಮುದಾಯದ ಸಮಸ್ಯೆಗಳನ್ನು ಆಲಿಸಿ, ಪರಿಹಾರ ನೀಡಲು ಸಭೆಗಳನ್ನು ನಡೆಸಲು ಸರ್ಕಾರ ಆದೇಶ ನೀಡಬೇಕು ಎಂದು ಒತ್ತಾಯಿಸಿದರು.

ರಾಜ್ಯದಲ್ಲಿ ಈವರೆಗೂ ಅಂಬೇಡ್ಕರ್ ಅವರ ಭಾವಚಿತ್ರ ಹಾಗೂ ಪುತ್ಥಳಿಗಳಿಗೆ ಅಪಮಾನ ಮಾಡಿದ ಪ್ರಕರಣಗಳು ಹಾಗೂ ದಲಿತ ಸಮುದಾಯದ ಮೇಲಿನ ಅತ್ಯಾಚಾರ, ಹಲ್ಲೆ, ಬೆತ್ತಲೆ ಮೆರವಣಿಗೆಯಂತಹ ಪ್ರಕರಣಗಳು ಮತ್ತೊಮ್ಮೆ ರಾಜ್ಯದಲ್ಲಿ ಮರುಕಳಿಸದಂತೆ ರಾಜ್ಯ ಸರ್ಕಾರ ಸೂಕ್ತ ಕ್ರಮ ಜರುಗಿಸಬೇಕು ಎಂದು ತ್ತಾಯಿಸಿದರು.

ಪ್ರತಿಭಟನೆಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ದಲಿತ ಮಹಾಸಭಾ ಅಧ್ಯಕ್ಷ ಪುಟ್ಟರಂಗಸ್ವಾಮಿ, ಸಂಘಟನಾ ಕಾರ್ಯದರ್ಶಿ ಎಸ್. ಮಂಜುನಾಥ್, ಮುಖಂಡರಾದ ಸಿ.ಉದಯ್ ಕುಮಾರ್, ಹರೀಶ್, ವಿಜಯ್, ಗುತ್ತಿಗೆದಾರ ಸುರೇಶ್, ರಾಜೇಶ್, ಯೋಗನರಸಿಂಹ, ಎಸ್.ಶರತ್, ಪ್ರಕಾಶ್, ಕಿರಣ್‌ಕುಮಾರ್, ಅನುಪಮ್ ಉಪಸ್ಥಿತರಿದ್ದರು.

ಮಣಿಪಾಲ್ ಆಸ್ಪತ್ರೆ, ಹೆಚ್‌ಆರ್ ಫೋರಂ ಒಡಂಬಡಿಕೆ: ಹೆಲ್ತ್ ಕಾರ್ಡ್ ಬಿಡುಗಡೆ



ಜಿಲ್ಲಾ ಪತ್ರಕರ್ತರ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಹೆಲ್ತ್‌ಕಾರ್ಡ್ ಬಿಡುಗಡೆಗೊಳಿಸಿದರು.

ಮೈಸೂರು,ಜ.24(ಜಿಎ)–ನಗರದ ವಿವಿಧ ಕಂಪನಿ, ಕಚೇರಿಗಳಲ್ಲಿ ಮಾನವ ಸಂಪನ್ಮೂಲ ಅಧಿಕಾರಿಗಳಾಗಿ ಕೆಲಸ ನಿರ್ವಹಿಸುತ್ತಿರುವ ಎಚ್‌ಆರ್‌ಗಳ ಆರೋಗ್ಯ ಕಾಳಜಿ ಉದ್ದೇಶದಿಂದ ಮೈಸೂರು ಎಚ್.ಆರ್. ಫೋರಂ ಮತ್ತು ಮಣಿಪಾಲ್ ಆಸ್ಪತ್ರೆ ಸಹಯೋಗದಲ್ಲಿ ಬುಧವಾರ ಒಡಂಬಡಿಕೆ ಮಾಡಿಕೊಳ್ಳಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಫೋರಂ ಅಧ್ಯಕ್ಷ ಬಿ.ಎಂ.ಗೌತಮ್ ಹಾಗೂ ಮಣಿಪಾಲ್ ಆಸ್ಪತ್ರೆಯ ನಿರ್ದೇಶಕ ಪ್ರಮೋದ್ ಕುಂದರ್ ಒಡಂಬಡಿಕೆಗೆ ಸಹಿ ಹಾಕಿ, ಹೆಲ್ತ್ ಕಾರ್ಡ್ ಬಿಡುಗಡೆಗೊಳಿಸಿದರು.

ಈ ವೇಳೆ ಬಿ.ಎಂ.ಗೌತಮ್ ಮಾತನಾಡಿ, ಎಚ್‌ಆರ್‌ಗಳು ಅತಿ ಒತ್ತಡದ ನಡುವೆ ಕೆಲಸ ನಿರ್ವಹಿಸುವವರಾಗಿದ್ದಾರೆ. ಹೀಗಾಗಿ ಇವರಿಗೆ ಹೃದಯ ಸಂಬಂಧಿ, ಒತ್ತಡ ಸಂಬಂಧಿ ಸಮಸ್ಯೆಗಳು ಸಾಮಾನ್ಯವಾಗಿ ಕಾಡುತ್ತವೆ. ಆದರೆ ಕಂಪನಿ ಅಥವಾ ಕಚೇರಿಯ ಮೆಡಿಕ್ಲೈಮ್ ಸೌಲಭ್ಯ ಪಡೆಯಲು ಕಡ್ಡಾಯವಾಗಿ ನಿರ್ದಿಷ್ಟ ಅವಧಿ ಒಳರೋಗಿಯಾಗಿ ದಾಖಲಾಗಬೇಕು. ಆದರೆ ಈ ನೂತನ ಸೌಲಭ್ಯದ ಕಾರಣ ಹೊರ ರೋಗಿಗಳಾಗಿದ್ದಾಗಲೂ ಆಸ್ಪತ್ರೆ ವಿವಿಧ ಶುಲ್ಕದಲ್ಲಿ ರಿಯಾಯಿತಿ ನೀಡುತ್ತದೆ. ನೋಂದಣಿ ಸಂಪೂರ್ಣ ಉಚಿತವಾಗಿದ್ದು, ವೇದಿಕೆಯ ಎಲ್ಲ ಸದಸ್ಯರಿಗೆ ಸೌಲಭ್ಯ ದೊರೆಯುತ್ತದೆ ಎಂದರು.

ಪ್ರಮೋದ್ ಕುಂದರ್ ಮಾತನಾಡಿ, ಸಾಮಾಜಿಕ ಕಳಕಳಿ ಹಿನ್ನೆಲೆಯಲ್ಲಿ ಹಾಗೂ ದೊಡ್ಡ ಸಮುದಾಯಕ್ಕೆ ನೆರವಾಗುವ ನಿಟ್ಟಿನಲ್ಲಿ ಆಸ್ಪತ್ರೆ ಈ ರೀತಿ ಒಡಂಬಡಿಕೆ ಮಾಡಿಕೊಂಡಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಫೋರಂನ ಹ್ಯಾರಿಸ್, ಎಂ.ಫಣೀಶ್, ಪಾವನ ಜಗದೀಶ್ ಉಪಸ್ಥಿತರಿದ್ದರು.

ಹುಣಸೂರನ್ನು ಪ್ರತ್ಯೇಕ ಜಿಲ್ಲೆಯಾಗಿ ಘೋಷಿಸುವಂತೆ ವಿಶ್ವನಾಥ್ ಆಗ್ರಹ



ಜಿಲ್ಲಾ ಪತ್ರಕರ್ತರ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ವಿಧಾನಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಮಾತನಾಡಿದರು.

ಮೈಸೂರು,ಜ.24(ಜಿಎ)–ಹುಣಸೂರನ್ನು ಪ್ರತ್ಯೇಕ ಜಿಲ್ಲೆ ಮಾಡಿ ಅದಕ್ಕೆ 'ದೇವರಾಜ ಅರಸು' ಹೆಸರು ನಾಮಕರಣ ಮಾಡಬೇಕೆಂದು ವಿಧಾನಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಆಗ್ರಹಿಸಿದ್ದಾರೆ.

ಮೈಸೂರು ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾಜಿ ಸಿಎಂ ದಿವಂಗತ ಡಿ.ದೇವರಾಜ ಅರಸು ಹುಟ್ಟೂರು ಪ್ರತ್ಯೇಕ ಜಿಲ್ಲೆಯಾದ್ರೆ ಸಾಕಷ್ಟು ಅನುಕೂಲಗಳು ಆಗುತ್ತದೆ. ಕೆಲಸದ ಒತ್ತಡದಿಂದಾಗಿ ಮೈಸೂರು ಜಿಲ್ಲಾಧಿಕಾರಿ ಕಚೇರಿಗೆ, ತಾಲೂಕು ಕೇಂದ್ರಗಳಿಗೆ ಹೋಗಲು ಕಷ್ಟವಾಗುತ್ತಿದೆ. ಕಳೆದ ಆರು ತಿಂಗಳಿಂದ ಜಿಲ್ಲಾಧಿಕಾರಿಗಳು ಯಾವುದೇ ತಾಲೂಕಿಗೂ ಭೇಟಿ ನೀಡಲು ಸಾಧ್ಯವಾಗಿಲ್ಲ. ಇದರಿಂದ ಜನರಿಗೆ ಸಾಕಷ್ಟು ತೊಂದರೆಯಾಗುತ್ತಿದೆ. 6 ತಾಲೂಕುಗಳಿಗೆ ನಾಲ್ಕು ಜನ ಶಾಸಕರಿದ್ದೇವೆ. ಎಲ್ಲಾ ಶಾಸಕರ ಜೊತೆ ಮಾತನಾಡಿದ್ದೇನೆ. ಸಿಎಂ ಜೊತೆಯೂ ಸಹ ಮಾತನಾಡುತ್ತೇನೆ. ಹುಣಸೂರು, ಪಿರಿಯಾಪಟ್ಟಣ, ಎಚ್.ಡಿ.ಕೋಟೆ ರಾಜ್ಯದಲ್ಲೇ ಹೆಚ್ಚು ಸಂಪನ್ಮೂಲ ಹೊಂದಿರುವ ತಾಲೂಕುಗಳಾಗಿದ್ದು, ತಂಬಾಕಿನಿಂದ ನೂರಾರು ಕೋಟಿ ಆದಾಯ ಬರುತ್ತದೆ. ಆರು ತಾಲೂಕುಗಳನ್ನು ಸೇರಿಸಿ ಒಂದು ಪ್ರತ್ಯೇಕ ಜಿಲ್ಲೆ ಮಾಡಲಿ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ನಮ್ಮ ಜಿಲ್ಲೆಯವರೇ ಸಿಎಂ ಆಗಿದ್ದಾರೆ. ಹೀಗಾಗಿ ದೇವರಾಜ ಅರಸು ಅವರ ಹೆಸರು ಅಮರವಾಗಬೇಕು, ಹುಣಸೂರು ತಾಲೂಕು ಪ್ರತ್ಯೇಕ ಜಿಲ್ಲೆಯಾಗಬೇಕು. ಎಚ್.ಡಿ.ಕೋಟೆ, ಪಿರಿಯಾಪಟ್ಟಣ ಹಾಗೂ ಹುಣಸೂರಿನಲ್ಲಿ ಅತಿ ಹೆಚ್ಚು ಬುಡಕಟ್ಟು ಜನಾಂಗದವರು ಇದ್ದಾರೆ. ಅವರ ಕಷ್ಟಗಳಿಗೆ ಜಿಲ್ಲಾಧಿಕಾರಿಗಳು ಸ್ಪಂದಿಸುತ್ತಿಲ್ಲ. ನಾನು ಈ ವಿಚಾರದಲ್ಲಿ ಹೋರಾಟ, ಸಂಘರ್ಷ ಮಾಡುವುದಿಲ್ಲ. ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಹುಣಸೂರು ಪ್ರತ್ಯೇಕ ಜಿಲ್ಲೆ ಮಾಡುತ್ತೇನೆ. ಈಗಾಗಲೇ ದೇಶದಲ್ಲಿ ವ್ಯಕ್ತಿಗಳ ಹೆಸರಿನಲ್ಲಿ ಜಿಲ್ಲೆಗಳನ್ನು ನಾಮಕರಣ ಮಾಡಿರುವ ಅನೇಕ ಉದಾಹರಣೆ ಇದೆ ಎಂದರು.

ನಂತರ ಅಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನೆ ಕುರಿತು ಮಾತನಾಡಿದ ಅವರು, ಬಿಜೆಪಿಯವರು ರಾಮನನ್ನು ಲೋಕಸಭಾ ಚುನಾವಣೆ ಚೀಫ್ ಕ್ಯಾಂಪೇನರ್ ಮಾಡಿಕೊಂಡಿದ್ದಾರೆ. ಇದು ಸರಿಯಲ್ಲ. ರಾಮ ಎಲ್ಲರ ಆಸ್ತಿ. ರಾಮಮಂದಿರ ಉದ್ಘಾಟನೆಯಾಗಿದೆ. ಜನರು ಬಹಳ ಸಂತೋಷವಾಗಿದ್ದಾರೆ. ರಾಮ ಭಾರತೀಯರ ಆರಾಧ್ಯ ದೈವ, ಭಾರತೀಯರ ಅಸ್ಮಿತೆ. ನೀವು ಕೆಲಸ ಮಾಡಿದ್ದೀರಾ ಶಹಭಾಷ್. ಮೋದಿ 500 ವರ್ಷಗಳ ಸಮಸ್ಯೆಯನ್ನ ಬಗೆಹರಿಸಿದ್ದಾರೆ. ಜನರ ಕಷ್ಟಗಳಿಗೆ ಮೋದಿ ಈಗಲಾದರೂ ಸ್ಪಂದಿಸಬೇಕು.

ಚುನಾವಣೆಗೂ ಮುನ್ನ ಪ್ರತಿಯೊಬ್ಬರಿಗೆ 15 ಲಕ್ಷ ಕೊಡುತ್ತೇನೆ ಅಂದಿದ್ರಿ. ಆದಷ್ಟು ಬೇಗ ಹಣವನ್ನ ಹಾಕಿ. ಜನರು ಸಾಕಷ್ಟು ಕಷ್ಟದಲ್ಲಿದ್ದು ಎಲ್ಲಾ ವಸ್ತುಗಳಿಗೆ ಜಿಎಸ್‌ಟಿ ಕಟ್ಟುತ್ತಿದ್ದಾರೆ. ಅತಿ ಹೆಚ್ಚು ಜಿಎಸ್‌ಟಿ ಕಟ್ಟುತ್ತಿರುವ ರಾಜ್ಯಗಳಲ್ಲಿ ಕರ್ನಾಟಕವೂ ಒಂದು. ಆದರೆ, ಅದರ ಪ್ರಯೋಜನ ಪಡೆದುಕೊಳ್ಳಲು ಸಾಧ್ಯವಾಗುತ್ತಿಲ್ಲ. ನೀರವ್ ಮೋದಿ ಅವರಿಂದ ದೇಶಕ್ಕೆ ಲಕ್ಷಾಂತರ ಕೋಟಿ ನಷ್ಟವಾಗಿದೆ. ಅವರನ್ನು ಬಂಧಿಸಿ ಕರೆತರುತ್ತೇನೆ ಎಂದು ಹೇಳಿದ್ದೀರಿ. ಆದರೆ, ಎಲ್ಲಿ ಬಂಧಿಸಿದ್ದೀರಿ? ಎಂದು ಪ್ರಶ್ನಿಸಿದರು.

ಸಂಸತ್‌ಗೆ ನುಗ್ಗಿ ದಾಂದಲೆ ಮಾಡಿದ ವಿದ್ಯಾರ್ಥಿಗಳು ಆರ್‌ಎಸ್‌ಎಸ್, ಎಬಿವಿಪಿ, ಭಜರಂಗದಳದವರ ಅಥವಾ ಬೇರೆ ಯಾವ ಸಂಘಟನೆಯವರು ಎಂದು ಇಂದಿಗೂ ಬಹಿರಂಗಪಡಿಸಿಲ್ಲ. ಇದನ್ನು ಗಮನಿಸಿದರೆ, ಪ್ರಕರಣವನ್ನು ಮುಚ್ಚಿ ಹಾಕುವ ತಂತ್ರ ನಡೆಯುತ್ತಿದೆ ಎಂದು ಅನಿಸುತ್ತಿದೆ. ಸಂಸದ ಪ್ರತಾಪ್ ಸಿಂಹ ಅವರು ತಪ್ಪಿತಸ್ಥರ ಸ್ಥಾನದಲ್ಲಿರುವುದರಿಂದ ಈ ವಿಚಾರವಾಗಿ ಮಾತನಾಡುತ್ತಿಲ್ಲ. ನಾನೂ ಸಂಸದನಾಗಿದ್ದವನು. ಪಾಸ್ ಯಾರಿಗೆ ನೀಡಬೇಕು ಎಂದು ತಿಳಿದಿರುತ್ತದೆ. ಪ್ರತಾಪ್ ಸಿಂಹ ಪಾಸ್‌ಗಳನ್ನು ಆಪ್ತ ಸಹಾಯಕರು ನೀಡಿದ್ದಾರೆ ಎಂದು ತಿರುಚುವ ಕೆಲಸಕ್ಕೆ ಮುಂದಾಗಿದ್ದಾರೆ ಎಂದು ಆರೋಪಿಸಿದರು. ಸುದ್ದಿಗೋಷ್ಠಿಯಲ್ಲಿ ವಕೀಲ ಶಿವಕುಮಾರ್, ಪೈಲ್ವಾನ್ ವಿನಯ್ ಉಪಸ್ಥಿತರಿದ್ದರು.

ಲೋಕಸಭಾ ಚುನಾವಣೆಗೆ ತಾಲೂಕು ಮಟ್ಟದ ಬಿಜೆಪಿ ಪದಾಧಿಕಾರಿಗಳು ಸಂಘಟನಾತ್ಮಕವಾಗಿ ಕೆಲಸ ಮಾಡಬೇಕು: ಎಲ್.ಆರ್.ಮಹದೇವಸ್ವಾಮಿ



ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಬುಧವಾರ ಪಕ್ಷದ ತಾಲೂಕುವಾರು ಪದಾಧಿಕಾರಿಗಳ ಸಭೆಯಲ್ಲಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಮಾತನಾಡಿದರು.

ಮೈಸೂರು, ಜ.24(ಪಿಎಂ)– ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಕರೆಯಂತೆ ತಾಲೂಕು ಮಟ್ಟದ ಮಂಡಲ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಲೋಕಸಭಾ ಚುನಾವಣೆಗಾಗಿ ಬಹಳ ಸಂಘಟನಾತ್ಮಕವಾಗಿ ಕೆಲಸ ಮಾಡಬೇಕು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ ಹೇಳಿದರು.

ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಬುಧವಾರ ಹಮ್ಮಿಕೊಂಡಿದ್ದ ಪಕ್ಷದ ತಾಲೂಕುವಾರು ಪದಾಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಪಕ್ಷದ ಜಿಲ್ಲಾ ಮಟ್ಟದ ಹಿರಿಯ ನಾಯಕರು ಈಗಾಗಲೇ ಹಲವು ಸಲಹೆಗಳನ್ನು ಕೊಟ್ಟಿದ್ದು, ಇದನ್ನು ನಾವೆಲ್ಲರೂ ಪ್ರಾಮಾಣಿಕವಾಗಿ ಪಾಲಿಸಬೇಕು. ಸಂಘಟನಾತ್ಮಕವಾಗಿ ತೊಡಗಿಸಿಕೊಂಡು ಒಗ್ಗಟ್ಟಾಗಿ ಪಕ್ಷದ ಸಂಘಟನೆ ಮಾಡಬೇಕು ಎಂದು ತಿಳಿಸಿದರು.

ಪ್ರತಿ ಮಂಡಲಗಳಲ್ಲಿಯೂ ಸಭೆ ಕರೆಯುವ ಮೂಲಕ ಪದಾಧಿಕಾರಿಗಳ ಸಮ್ಮುಖದಲ್ಲಿ ಲೋಕಸಭಾ ಚುನಾವಣೆಯಲ್ಲಿ ಗೆಲ್ಲಲು ಯಾವ ರೀತಿಯಲ್ಲಿ ಮುನ್ನಡೆಯಬೇಕೆಂಬುದನ್ನು ಚರ್ಚಿಸಿ, ಎಲ್ಲರ ಸಲಹೆಗಳೊಂದಿಗೆ ಹೆಜ್ಜೆ ಹಾಕಬೇಕು ಎಂದು ಹೇಳಿದರು.

ಪಕ್ಷದ ಮುಖಂಡ ಮೈ.ವಿ.ರವಿಶಂಕರ್ ಮಾತನಾಡಿ, ಎಲ್ಲರನ್ನೂ ಒಗ್ಗೂಡಿಸಿಕೊಂಡು ಚುನಾವಣೆಯಲ್ಲಿ ಜವಾಬ್ದಾರಿಗಳನ್ನು ನಿರ್ವಹಿಸಬೇಕೆಂಬ ಸದುದ್ದೇಶವನ್ನು ಜಿಲ್ಲಾಧ್ಯಕ್ಷರು ಹೊಂದಿರುವುದು ಸಂತಸದ ವಿಚಾರ. ಯಾವುದೇ ಸಂದರ್ಭದಲ್ಲಿ ಸಣ್ಣಪುಟ್ಟ ಗೊಂದಲಗಳು ಬೆಳೆಯಲು ಅವಕಾಶ ನೀಡಬಾರದು. ಆ ಮೂಲಕ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಪರವಾಗಿ ಹೋರಾಟ ಮಾಡಬೇಕಿದೆ ಎಂದು ತಿಳಿಸಿದರು.

ಬಿಜೆಪಿ ಮಾಧ್ಯಮ ಪ್ರಮುಖ್ ವಸಂತ್ ಕುಮಾರ್ ಮಾತನಾಡಿ, ಸೋಮವಾರವಷ್ಟೇ ಅಯೋಧ್ಯೆಯಲ್ಲಿ ಶ್ರೀರಾಮನ ಪ್ರಾಣ ಪ್ರತಿಷ್ಠಾಪನೆಯಾಗಿದ್ದು, ಇದಕ್ಕೆ ದೇಶದಾದ್ಯಂತ ಮಾತ್ರವಲ್ಲದೆ, ವಿದೇಶಗಳಲ್ಲೂ ನಿರೀಕ್ಷೆಗೆ ಮೀರಿದ ಮೆಚ್ಚುಗೆ ವ್ಯಕ್ತವಾಗಿದೆ. ಅಯೋಧ್ಯೆ ಶ್ರೀರಾಮ ಮಂದಿರ ರಾಷ್ಟ್ರಾಭಿವೃದ್ಧಿಯ ಸಂಕೇತವಾಗಿದೆ ಎಂದು ಹೇಳಿದರು.

ಶ್ರೀರಾಮನನ್ನು ಕಣ್ತುಂಬಿಕೊಳ್ಳಲು ನಾವೆಲ್ಲರೂ ಅಯೋಧ್ಯೆಗೆ ಹೋಗುವ ಅವಕಾಶವಿದ್ದು, ಮುಂಬರುವ ಫೆ.3ರಂದು ಜಿಲ್ಲಾ ಗ್ರಾಮಾಂತರ ಮಂಡಲದವರೆಲ್ಲರಿಗೂ ಆಹ್ವಾನ ಕೊಡಲಾಗಿದೆ. ನಮ್ಮ ಬಿಜೆಪಿ ಕಾರ್ಯಕರ್ತರಿಗೆ ಮುಂಗಡವಾಗಿ ರೈಲ್ವೆ ರಿಜರ್ವೇಶನ್‌ಗೆ ಅವಕಾಶ ಕಲ್ಪಿಸಲಾಗಿದೆ. ಅಯೋಧ್ಯೆ ತಲುಪಿ ಶ್ರೀರಾಮನ ದರ್ಶನ ಪಡೆದು ಮತ್ತೆ ವಾಪಾಸಾಗುವವರೆಗೂ ಪಕ್ಷ ಜವಾಬ್ದಾರಿ ತೆಗೆದುಕೊಳ್ಳುತ್ತದೆ ಎಂದು ತಿಳಿಸಿದರು.

ಮಾಜಿ ಸಚಿವರಾದ ಸಿ.ಹೆಚ್.ವಿಜಯಶಂಕರ್, ಕೋಟೆ ಎಂ.ಶಿವಣ್ಣ, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷೆ ಮಂಗಳ ಸೋಮಶೇಖರ್, ಪಕ್ಷದ ಮುಖಂಡ ಸುರೇಶ್‌ಬಾಬು ಸೇರಿದಂತೆ ತಾಲೂಕು ಅಧ್ಯಕ್ಷರು, ಪದಾಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

ನಾಳೆಯಿಂದ ಎಜುಕೇಷನ್ ಫೇರ್



ಸುದ್ದಿಗೋಷ್ಠಿಯಲ್ಲಿ ಸುಧಾಕರ ಎಸ್. ಶೆಟ್ಟಿ ಮಾತನಾಡಿದರು.

ಮೈಸೂರು,ಜ.24(ಜಿಎ)–ಸಿಬಿಎಸ್‌ಇ, ಐಸಿಎಸ್‌ಇ, ರಾಜ್ಯ ಖಾಸಗಿ ಶಾಲೆಗಳ ಆಡಳಿತ ಸಂಸ್ಥೆ ವತಿಯಿಂದ ಜ.26 ರಿಂದ 28 ರವರೆಗೆ ಚಿರಾಗ್ ಆಡ್ಸ್ ಸಹಯೋಗದೊಂದಿಗೆ ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ಮೈಸೂರು ಎಜುಕೇಷನ್ ಫೇರ್ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷ ಸುಧಾಕರ ಎಸ್.ಶೆಟ್ಟಿ ತಿಳಿಸಿದರು.

ಮೈಸೂರು ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅಂದು ಸಂಜೆ 5 ಗಂಟೆಗೆ ಸುತ್ತೂರು ಮಠದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಅವರು ಉದ್ಘಾಟಿಸಲಿದ್ದಾರೆ. ಈ ಮೇಳದಲ್ಲಿ ಸುಮಾರು 80 ಮಳಿಗೆ ಇರಲಿದ್ದು, ರಾಜ್ಯದಾದ್ಯಂತದ ಶಾಲೆಗಳು, ಎಂಜಿನಿಯರಿಂಗ್ ಕಾಲೇಜು ಒಳಗೊಂಡಂತೆ ಕೆಜಿಯಿಂದ ಪಿಜಿವರೆಗೆ ತಮ್ಮಲ್ಲಿ ದೊರೆಯುವ ಶಿಕ್ಷಣದ ಮಾಹಿತಿ ನೀಡಲಿವೆ.

ವಿದ್ಯಾರ್ಥಿಗಳಿಗೆ ಹಾಗೂ ಪೋಷಕರಿಗೆ ಉಚಿತ ಪ್ರವೇಶವಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ವಿ. ವೆಂಕಟೇಶ್, ಎಂ.ಎಲ್. ರವೀಂದ್ರ ಸ್ವಾಮಿ, ಮಂಜುನಾಥ ಶ್ರೀವತ್ಸ, ಕೆ.ಎಸ್. ಸ್ವರೂಪಿಣಿ, ವಿವೇಕ್ ಉಪಸ್ಥಿತರಿದ್ದರು.

ಐದು ದಿನದ ಸಂಗೀತೋತ್ಸವಕ್ಕೆ ಚಾಲನೆ

ಸಂಗೀತ, ಕಲೆ, ನೃತ್ಯಾಭ್ಯಾಸ ಜೀವನದ ಭಾಗವಾಗಬೇಕು



ಶ್ರುತಿಮಂಜರಿ ಪ್ರತಿಷ್ಠಾನ ಮತ್ತು ರೋಟರಿ ಪಶ್ಚಿಮ ಮೈಸೂರು ಸಹಯೋಗದೊಂದಿಗೆ ಐದು ದಿನಗಳ 26ನೇ ವಾರ್ಷಿಕ ಸಂಗೀತೋತ್ಸವ ಕಾರ್ಯಕ್ರಮಕ್ಕೆ ಚಾಲನೆ ದೊರಕಿತು.

ಮೈಸೂರು, ಜ.24(ಎಸ್‌ಪಿಎನ್)– ಸಂಗೀತ, ಕಲೆ, ನೃತ್ಯಾಭ್ಯಾಸ ಜೀವನದ ಭಾಗವಾಗಬೇಕು ಎಂದು ಹಿರಿಯ ಕಲಾವಿದ ನವದೆಹಲಿಯ ಪ್ರಸಾರ ಭಾರತಿ ನಿವೃತ್ತ ಉಪ ಮಹಾ ನಿರ್ದೇಶಕ ಡಾ.ಕೆ. ವಾಗೀಶ್ ಅಭಿಪ್ರಾಯಪಟ್ಟರು.

ಮೈಸೂರು ಸರಸ್ವತಿಪುರಂನಲ್ಲಿರುವ ರೋಟರಿ ಪಶ್ಚಿಮ ಸಭಾಂಗಣದಲ್ಲಿ ಶ್ರುತಿಮಂಜರಿ ಪ್ರತಿಷ್ಠಾನ ಮತ್ತು ರೋಟರಿ ಪಶ್ಚಿಮ ಮೈಸೂರು ಸಹಯೋಗದೊಂದಿಗೆ ಐದು ದಿನಗಳ 26ನೇ ವಾರ್ಷಿಕ ಸಂಗೀತೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮೈಸೂರು ಒಡೆಯರ್ ಅವರ ಆಳ್ವಿಕೆಯಲ್ಲಿ ಕಲೆಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಿದ್ದರು, ಮುಂದುವರೆದು ಪ್ರಜಾ ಪ್ರಭುತ್ವದಲ್ಲೂ ಕಲಾ ರಸಿಕರಿಂದ ಶಾಸ್ತ್ರೀಯ ಕಲೆಗಳಿಗೆ ಉತ್ತಮ ಸ್ಪಂದನೆ ಸಿಗುತ್ತಿದೆ. ಈ ಹಿನ್ನೆಲೆಯಲ್ಲಿ ಮೈಸೂರಿಗೆ ಸಾಂಸ್ಕೃತಿಕ ನಗರಿ ಎಂಬ ಬಿರುದು ಬಂದಿದೆ ಎಂದ ಅವರು, ಕಲೆಗಳನ್ನು ಯುವ ಪೀಳಿಗೆಗೆ ಕಲಿಯಲು ಪ್ರೋತ್ಸಾಹಿಸುವುದರಿಂದ ಮುಂದಿನ ಪೀಳಿಗೆಗೂ ಶಾಸ್ತ್ರೀಯ ಕಲೆಗಳ ಉಳಿವಿಗೆ ಸಹಕಾರಿಯಾಗುತ್ತಿದೆ. ಅಲ್ಲದೆ, ಶ್ರುತಿಮಂಜರಿ ಪ್ರತಿಷ್ಠಾನ ಕಳೆದ 25 ವರ್ಷಗಳಿಂದ ವಿವಿಧ ರಾಜ್ಯದ ಹಿರಿಯ ಕಲಾವಿದರಿಗೆ ವೇದಿಕೆ ಒದಗಿಸಿ, ಸಂಗೀತ ಬೆಳವಣಿಗೆಗೆ ಪ್ರೋತ್ಸಾಹ ನೀಡುತ್ತಿರುವುದು ಉತ್ತಮ ಬೆಳವಣಿಗೆ ಎಂದರು.

ವೇದಿಕೆ ಕಾರ್ಯಕ್ರಮದ ನಂತರ ಹಿರಿಯ ಕಲಾವಿದ ಡಾ.ಕೆ.ವಾಗೀಶ್ ಅವರು ಕರ್ನಾಟಕ ಶಾಸ್ತ್ರೀಯ ಸಂಗೀತ ಕಛೇರಿ ನಡೆಸಿಕೊಟ್ಟರು. ಇವರಿಗೆ ವಿದುಷಿ ವೀಣಾ ಸುರೇಶ್(ಪಿಟೀಲು), ವಿದ್ವಾನ್ ಆನೂರು ಅನಂತ ಕೃಷ್ಣಶರ್ಮ (ಮೃದಂಗ), ವಿದ್ವಾನ್ ಸುನಾದ್ ಆನೂರ್ ಖಂಜಿರ ನುಡಿಸಿ ಸಾಥ್ ನೀಡಿದರು. ವೇದಿಕೆಯಲ್ಲಿ ಮೈಸೂರು ವಿವಿ ಲಲಿತಾ ಕಲಾ ವಿಭಾಗದ ಪ್ರಾಧ್ಯಾಪಕಿ ಡಾ.ವೀಣಾ ಸುರೇಶ್, ವಿದುಷಿ ಡಾ.ಆರ್.ಎನ್.ಶ್ರೀಲತಾ, ಕಲಾವಿದರಾದ ಎಂ.ಕೆ.ಸೀತಾರಾಮ್, ಆರ್.ವಾಸುದೇವ, ಕೆ.ಎಸ್. ಸುರೇಶ್, ಬಿ.ಎಸ್.ಗೀತಾ ಉಪಸ್ಥಿತರಿದ್ದರು.

ಗೃಹ ಕಾರ್ಮಿಕರ ಉದ್ಯೋಗ ಭದ್ರತಾ ಕಾನೂನು ಅಂಗೀಕಾರಕ್ಕೆ ಒತ್ತಾಯಿಸಿ ಪ್ರತಿಭಟನೆ



ಗೃಹ ಕಾರ್ಮಿಕರ ವೃತ್ತಿ ಸಂಘಟನೆ ವತಿಯಿಂದ ಬುಧವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು,ಜ.24(ಜಿಎ)–ಕರ್ನಾಟಕದಲ್ಲಿ ಗೃಹ ಕಾರ್ಮಿಕರಿಗೆ ಯೋಗ್ಯ ಕೆಲಸ ಒದಗಿಸಲು ಕಾನೂನು ಅಂಗೀಕರಿಸುವಂತೆ ಒತ್ತಾಯಿಸಿ ಅಖಿಲ ಕರ್ನಾಟಕ ಗೃಹ ಕಾರ್ಮಿಕರ ವೃತ್ತಿ ಸಂಘಟನೆ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಗೃಹ ಕಾರ್ಮಿಕರಿಗೆ ಯೋಗ್ಯವಾದ ಕೆಲಸ ಸಿಗುತ್ತಿಲ್ಲ. ಅಸ್ತಿತ್ವದಲ್ಲಿರುವ ಪರಿಸ್ಥಿತಿಗಳು ಯೋಗ್ಯವಾಗಿಲ್ಲ. ಯಾರಿಗೂ ಉದ್ಯೋಗ ಭದ್ರತೆ ಇಲ್ಲ. ವೇತನ ನೀಡದೆ ಇಚ್ಛೆಯಂತೆ ಅವರನ್ನು ವಜಾ ಮಾಡುತ್ತಿದ್ದಾರೆ. ತಮ್ಮ ಹಕ್ಕುಗಳ ರಕ್ಷಣೆಗೆ ಯಾವುದೇ ಕಾನೂನು ಇಲ್ಲ. ಅಂತರರಾಷ್ಟ್ರೀಯ ಮಟ್ಟದಲ್ಲಿ ಹೆಚ್ಚಿನ ಲಾಬಿ ಮತ್ತು ಒತ್ತಡದ ನಂತರ, ಗೃಹ ಕಾರ್ಮಿಕರ ಸಮಾವೇಶ ನಡೆಸಿ ವೇತನ, ರಜೆ, ಆರೋಗ್ಯ, ಸುರಕ್ಷತೆ, ಸಾಮಾಜಿಕ ಭದ್ರತೆ ಮತ್ತು ಸಾಮಾಜಿಕ ರಕ್ಷಣೆಗೆ ಸಂಬಂಧಿಸಿದ ಮಾನದಂಡಗಳನ್ನು ಅಳವಡಿಸಿಕೊಳ್ಳಲಾಗಿದೆ. ಇದು ಬಾಲಕಾರ್ಮಿಕರು, ಬಂಧಿತ ಕಾರ್ಮಿಕರು ಮತ್ತು ವಲಯದಲ್ಲಿನ ಕಳ್ಳಸಾಗಣೆಯನ್ನು ಕಾನೂನುಬಾಹಿರಗೊಳಿಸುತ್ತದೆ. ಆದರೂ ಇಂದಿಗೂ ಗೃಹಕಾರ್ಮಿಕರ ಸ್ಥಿತಿ ಉತ್ತಮವಾಗಿಲ್ಲ ಎಂದು ಬೇಸರಿಸಿದರು.

ಐಎಲ್‌ಓ ಸಿ189ನ್ನು ಬೆಂಬಲಿಸಿ ವಿಧಾನಸಭೆಯಲ್ಲಿ ಅಂಗೀಕರಿಸಬೇಕು. ಗೃಹ ಕಾರ್ಮಿಕರ ಕಲ್ಯಾಣ ಮಂಡಳಿ ಸ್ಥಾಪಿಸಬೇಕು. ಮಂಡಳಿಗೆ ಪ್ರತಿ ವರ್ಷ ಬಜೆಟ್‌ನಲ್ಲಿ ಅನುದಾನ ನೀಡಬೇಕು. ಪ್ಲೇಸ್‌ಮೆಂಟ್ ಏಜೆನ್ಸಿ ನಿಯಂತ್ರಣ ಕಾನೂನು ಅಂಗೀಕರಿಸಬೇಕು. ತಾರತಮ್ಯ, ಕಿರುಕುಳ, ಕೆಲಸದಿಂದ ಅನಿಯಂತ್ರಿತ ವಜಾ, ಅಪಘಾತ ಪರಿಹಾರದಂತಹ ಕೆಲಸದ ಸಮಸ್ಯೆಗಳನ್ನು ಪರಿಹರಿಸಲು ಅಗತ್ಯ ತಿದ್ದುಪಡಿಗಳ ಮೂಲಕ ಗೃಹ ಕಾರ್ಮಿಕರು ಸೇರಿದಂತೆ ಅಸಂಘಟಿತ ವಲಯದ ಕಾರ್ಮಿಕರನ್ನು ಸೇರಿಸಲು ಕೆಲಸದ ಪರಿಸ್ಥಿತಿಗಳನ್ನು ನಿಯಂತ್ರಿಸುವ ಮತ್ತು ಸಾಮಾಜಿಕ ರಕ್ಷಣೆ ಒದಗಿಸುವ ಅಸ್ತಿತ್ವದಲ್ಲಿರುವ ಕಾರ್ಮಿಕ ಕಾನೂನುಗಳ ವ್ಯಾಪ್ತಿ ವಿಸ್ತರಿಸಬೇಕು. ಗೃಹ ಕಾರ್ಮಿಕರ ವಿರುದ್ಧದ ಕಳ್ಳತನದ ಆರೋಪದ ಪ್ರಕರಣಗಳ ವಿಚಾರಣೆಗೆ ಪ್ರೋಟೋಕಾಲ್ ಸ್ಥಾಪಿಸಲು ಪೊಲೀಸರಿಗೆ ನಿರ್ದೇಶನ ನೀಡಬೇಕು. ಕೆಲಸದ ಸ್ಥಳದಲ್ಲಿ ಮಹಿಳೆಯರ ಲೈಂಗಿಕ ಕಿರುಕುಳ ನಿಷೇಧ ಕಾಯಿದೆ ಸಮಿತಿಯನ್ನು ಸಕ್ರಿಯಗೊಳಿಸಬೇಕು. ಗೃಹ ಕಾರ್ಮಿಕರ ಉದ್ಯೋಗದಾತರನ್ನು ಬಲವಾದ ಕಾನೂನಿನ ಮೂಲಕ ಹೊಣೆಗಾರರನ್ನಾಗಿ ಮಾಡಬೇಕೆಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಅಧ್ಯಕ್ಷೆ ಆಶಾರಾಣಿ, ಜಯಮ್ಮ, ಸತೀಶ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ಬಜೆಟ್‌ನಲ್ಲಿ ರೈತರ ಬೇಡಿಕೆ ಈಡೇರದಿದ್ದರೆ ಫೆ.17ಕ್ಕೆ ವಿಧಾನಸೌಧ ಮುತ್ತಿಗೆ

ರೈತ ಸಂಘಟನೆಗಳ ಒಕ್ಕೂಟ ಎಚ್ಚರಿಕೆ



ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಬುಧವಾರ ಕರ್ನಾಟಕ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಸಭೆ ನಡೆಸಲಾಯಿತು.

ಮೈಸೂರು,ಜ.24(ಜಿಎ)–ಫೆಬ್ರವರಿ 16 ರಂದು ರಾಜ್ಯ ಸರ್ಕಾರ ಮಂಡಿಸಲಿರುವ ಬಜೆಟ್‌ನಲ್ಲಿ ರೈತರ ಸಾಲ ಸಂಪೂರ್ಣ ಮನ್ನಾ, ಭತ್ತ, ರಾಗಿ, ಮೆಕ್ಕೆಜೋಳಕ್ಕೆ ಕ್ವಿಂಟಾಲ್‌ಗೆ 500 ರೂ. ಪ್ರೋತ್ಸಾಹ ಧನ, ಟನ್ ಕಬ್ಬಿಗೆ 4 ಸಾವಿರ ಹಾಗೂ ಪ್ರತಿನಿತ್ಯ 10 ಗಂಟೆ ತ್ರೀ ಫೇಸ್ ವಿದ್ಯುತ್ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸದಿದ್ದಲ್ಲಿ ಫೆಬ್ರವರಿ 17 ರಂದು ಕರ್ನಾಟಕ ರಾಜ್ಯ ರೈತಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ವಿಧಾನಸೌಧಕ್ಕೆ ಮುತ್ತಿಗೆ ಹಾಕಲಾಗುವುದು ಎಂದು ಒಕ್ಕೂಟದ ಸಭೆಯಲ್ಲಿ ತೀರ್ಮಾನಿಸಲಾಯಿತು.

ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಬುಧವಾರ ನಡೆದ ಕರ್ನಾಟಕ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಸಭೆಯ ಬಳಿಕ ಒಕ್ಕೂಟದ ನೂತನ ಅಧ್ಯಕ್ಷ ಬೀರಪ್ಪ ದೇಸನೂರು ಮಾತನಾಡಿ, ರಾಜ್ಯದಲ್ಲಿ ಭೀಕರ ಬರಗಾಲ ಇರುವ ಕಾರಣ ರಾಷ್ಟ್ರೀಕೃತ ಬ್ಯಾಂಕು, ಸಹಕಾರ ಸಂಘ ಇನ್ನಿತರ ಖಾಸಗಿ ಸಂಘ ಸಂಸ್ಥೆಗಳಲ್ಲಿ ರೈತರು ಮಾಡಿರುವ ಸಾಲವನ್ನು ಸರ್ಕಾರ ಬೇಷರತ್ ಆಗಿ ಸಂಪೂರ್ಣ ಮನ್ನಾ ಮಾಡಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ಮುಖಂಡ ಇಂಗಲಕುಪ್ಪೆ ಕೃಷ್ಣೇಗೌಡ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಚುನಾವಣಾ ಪೂರ್ವದಲ್ಲಿ ರೈತರಿಗೆ ನೀಡಿದ ವಾಗ್ದಾನ ಮರೆತಿದೆ. ಇದನ್ನು ನಾವು ಲೋಕಸಭಾ ಚುನಾವಣೆಯಲ್ಲಿ ನೆನಪಿಸುತ್ತೇವೆ. ಅದಕ್ಕೂ ಮುನ್ನ ಅವರು ಎಚ್ಚೆತ್ತುಕೊಂಡು ರೈತರ ಆಶೋತ್ತರಗಳನ್ನು ಈಡೇರಿಸಬೇಕು. ಭತ್ತ, ರಾಗಿ, ಮೆಕ್ಕೆಜೋಳಕ್ಕೆ ಕ್ವಿಂಟಾಲ್‌ಗೆ 500 ರೂ. ಪ್ರೋತ್ಸಾಹ ಧನ ನೀಡಬೇಕು ಎಂದು ಆಗ್ರಹಿಸಿದರು.

ಕೆಆರ್‌ಎಸ್ ಜಲಾಶಯದಲ್ಲಿ ನೀರಿನ ಮಟ್ಟ ಕುಸಿದಿದೆ. ಮಂಡ್ಯ ಭಾಗದ ರೈತರಿಗೆ ಕೃಷಿಗೆ ನೀರಿಲ್ಲ. ಇಂತಹ ಸಂಕಷ್ಟದ ಕಾಲದಲ್ಲಿ ಸರ್ಕಾರ ಯಾವುದೇ ಕಾರಣಕ್ಕೂ ಕಾವೇರಿ ನೀರನ್ನು ತಮಿಳುನಾಡಿಗೆ ಬಿಡಬಾರದು. ಹಾಗೂ ಮೇಕೆದಾಟು ಯೋಜನೆಯನ್ನು ಈ ಕೂಡಲೇ ಕೈಗೆತ್ತಿಕೊಳ್ಳಬೇಕು ಒತ್ತಾಯಿಸಿದರು. ಈ ವೇಳೆ ಒಕ್ಕೂಟದ ಗೌರವಾಧ್ಯಕ್ಷ ಸಿದ್ದನಗೌಡ ಪಾಟೀಲ್, ರೈತ ಹೋರಾಟಗಾರ ದಯಾನಂದ ಸಿ.ಪಾಟೀಲ, ಪ್ರಧಾನ ಕಾರ್ಯದರ್ಶಿ ಸೋಮಶೇಖರ ಮಹದೇವಪ್ಪ ಕೊತ್ತಂಬರಿ, ರಾಜ್ಯ ಮಹಿಳಾ ಘಟಕದ ಅಧ್ಯಕ್ಷೆ ಮಹಾದೇವಿ ಹುಯಿಲಗೋಳ, ಕಾರ್ಯಾಧ್ಯಕ್ಷ ಪಾಟೀಲ್, ರಾಜ್ಯ ಯುವ ಘಟಕದ ಅಧ್ಯಕ್ಷ ಚಂದ್ರಶೇಖರ ಭೋವಿ, ಬಸವನಗೌಡ ಉಪಸ್ಥಿತರಿದ್ದರು.



ನಾಳೆಯಿಂದ ರಾಜಾಸೀಟ್‌ನಲ್ಲಿ ಹೂಗಳ ಚಿತ್ತಾರ

● ಫಲಪುಷ್ಪ ಪ್ರದರ್ಶನಕ್ಕೆ ತೋಟಗಾರಿಕೆ ಇಲಾಖೆ ಸಿದ್ಧತೆ ● ಶಾಲಾ ಮಕ್ಕಳಿಗೆ ಉಚಿತ ಪ್ರವೇಶ

ಮಡಿಕೇರಿ, ಜ.24– ಇಲ್ಲಿನ ಪ್ರಸಿದ್ಧ ಪ್ರವಾಸಿ ತಾಣ ರಾಜಾಸೀಟ್‌ನಲ್ಲಿ ಜ.26 ರಿಂದ 28ರವರೆಗೆ ಫಲಪುಷ್ಪ ಪ್ರದರ್ಶನ ನಡೆಯಲಿದ್ದು, ತೋಟಗಾರಿಕೆ ಇಲಾಖೆ ಅಗತ್ಯ ಸಿದ್ಧತೆ ನಡೆಸುತ್ತಿದೆ.

ಈಗಾಗಲೇ ರಾಜಾಸೀಟ್ ಉದ್ಯಾನದಲ್ಲಿ ಸೇವಂತಿಗೆ, ಸಾಲ್ವಿಯ, ಚೆಂಡು ಹೂ, ಝೀನಿಯಾ, ಡಯಾಂಥಸ್, ಅಸ್ಟರ್, ವಿಂಕಾ ರೋಸಿಯಾ, ಕಾಕ್ಸ್ ಕೋಂಬ್, ಡೇಲಿಯಾ ಸೇರಿದಂತೆ ಒಟ್ಟು 20 ಬಗೆಯ 15 ಸಾವಿರ ಹೂವು ಗಿಡಗಳನ್ನು ಕುಂಡ ಹಾಗೂ ಪಾತಿ ಪದ್ಧತಿಯಲ್ಲಿ ಬೆಳೆಸಲಾಗಿದೆ. ಉದ್ಯಾನದ ಒಳಗೆ ವಿವಿಧ ಬಗೆಯ ಅಲಂಕಾರಿಕ ಹೂ ಕುಂಡಗಳನ್ನು ಸುಂದರವಾಗಿ ಜೋಡಿಸಲಾಗಿದ್ದು, ಫಲಪುಷ್ಪ ಪ್ರದರ್ಶನಕ್ಕೆ ಮೆರುಗು ತುಂಬಲಿದೆ. ಗಣರಾಜ್ಯೋತ್ಸವ, 4ನೇ ಶನಿವಾರ ಹಾಗೂ ಭಾನುವಾರ ರಜೆ ದಿನಗಳಾಗಿರುವ ಹಿನ್ನೆಲೆಯಲ್ಲಿ ಹೆಚ್ಚಿನ ಪ್ರವಾಸಿಗರು ಹಾಗೂ ಸ್ಥಳೀಯರು ಆಗಮಿಸಲಿದ್ದಾರೆ. ಎಲ್ಲಾ ಶಾಲಾ ಮಕ್ಕಳಿಗೆ ಉಚಿತ ಪ್ರವೇಶ ನೀಡಲು ತೋಟಗಾರಿಕೆ ಇಲಾಖೆ ನಿರ್ಧರಿಸಿದೆ.

ಪಾಡಿ ಶ್ರೀ ಇಗ್ಗುತ್ತಪ್ಪ ಕಲಾಕೃತಿ: ಫಲಪುಷ್ಪ ಪ್ರದರ್ಶನದ ಆಕರ್ಷಣೆಯಾಗಿ ಈ ಬಾರಿ ಕೊಡಗಿನ ಕಕ್ಕಬ್ಬೆಯ ಪಾಡಿ ಶ್ರೀ ಇಗ್ಗುತ್ತಪ್ಪ ದೇವಾಲಯದ ಬೃಹತ್ ಕಲಾಕೃತಿಯನ್ನು ಹತ್ತಾರು ಬಣ್ಣದ ಲಕ್ಷಾಂತರ ಹೂವುಗಳಿಂದ ನಿರ್ಮಿಸಲಾಗುತ್ತಿದೆ. 15 ಅಡಿ ಎತ್ತರ, 48 ಅಡಿ ಉದ್ದ, 28 ಅಡಿ ಅಗಲವಾಗಿ ವಿವಿಧ ಪರಿಕರಗಳನ್ನು ಬಳಸಿ, ಪಾಡಿ ಶ್ರೀ ಇಗ್ಗುತ್ತಪ್ಪ ದೇವಾಲಯದ ಕಲಾಕೃತಿಯ ಸಿದ್ಧತೆ ಮಾಡಲಾಗುತ್ತಿದ್ದು, ಹತ್ತಾರು ಕಾರ್ಮಿಕರು ಕೆಲಸ ನಿರ್ವಹಿಸುತ್ತಿದ್ದಾರೆ. ಈ ಕಲಾಕೃತಿಯನ್ನು 5 ಲಕ್ಷ ಪುಷ್ಪಗಳಿಂದ ನಿರ್ಮಿಸಲಾಗುತ್ತಿದ್ದು, ನೋಡುಗರ ಮನಸೂರೆಗೊಳಿಸಲಿದೆ. ವಿವಿಧ ಬಣ್ಣಗಳ ಗುಲಾಬಿ, ಸೇವಂತಿಗೆ, ಆಸ್ಟರ್ ಹೂವುಗಳಿಂದ ಪಾಡಿ ಇಗ್ಗುತ್ತಪ್ಪ ದೇವಾಲಯದ ಕಲಾಕೃತಿ ಸುಂದರವಾಗಿ ಮೂಡಿ ಬರಲಿದೆ ಹೂವುಗಳನ್ನು ಜೋಡಿಸುವ ಕಾರ್ಯ ನಡೆಯಬೇಕಿದ್ದು, ಅದಕ್ಕೆ ತಕ್ಕಂತೆ ಭರದ ತಯಾರಿ ಮಾಡಲಾಗುತ್ತಿದೆ.



ಹೂವಿನ ಕಲಾಕೃತಿಗಳ ಉದ್ಯಾನ: ಇನ್ನು ರಾಜಾಸೀಟ್ ಉದ್ಯಾನದಲ್ಲಿ ಗಣರಾಜ್ಯೋತ್ಸವದ ಅಂಗವಾಗಿ ಯೋಧ, ಪಿರಂಗಿ ಹಾಗೂ ರಾಷ್ಟ್ರಧ್ವಜದ ಕಲಾಕೃತಿ, ಪಾತರಗಿತ್ತಿ, ಅಣಬೆ ಹಾಗೂ ಬಲೂನು ಮಾದರಿಯ ಕಲಾಕೃತಿಗಳು ಬಗೆ ಬಗೆಯ ಹೂವುಗಳಲ್ಲಿ ಮೂಡಿ ಬರಲಿವೆ. ಮಕ್ಕಳಿಗೆ ಮನರಂಜನೆ ನೀಡುವಂತೆ ಚೋಟಾ ಬೀಮ್, ಬಾರ್ಬಿ ಡಾಲ್, ಸ್ಪೈಡರ್ ಮ್ಯಾನ್, ಬ್ಯಾಟ್‌ಮ್ಯಾನ್, ಕಲಾಕೃತಿಗಳನ್ನು ಹೂವಿನಿಂದ ಅಲಂಕರಿಸಿ ಫೋಟೋ ಫ್ರೇಮ್ ಹಾಗೂ ಸೆಲ್ಫಿ ಝೋನ್ ಮಾದರಿಗಳನ್ನು ನಿರ್ಮಿಸಲಾಗುತ್ತಿದೆ.

ವಿವಿಧ ಕ್ಷೇತ್ರಗಳ ಗಣ್ಯರ ಕಲಾಕೃತಿಗಳನ್ನು ಹಣ್ಣು ಮತ್ತು ತರಕಾರಿಗಳಲ್ಲಿ ಕೆತ್ತನೆ ಮಾಡುವ ಮೂಲಕ ಪ್ರದರ್ಶನಕ್ಕೆ ಇಡಲಾಗುತ್ತಿದೆ. ಅಲಂಕಾರಿಕಾ ಗಿಡಗಳಾದ ಬೋನ್ಸಾಯ್, ಇಕಬಾನೆ ಹೂವಿನ ಜೋಡಣೆಗಳು ನೋಡುಗರ ಗಮನ ಸೆಳೆಯಲಿವೆ. ಒಟ್ಟು 13 ಕಲಾಕೃತಿಗಳ ನಿರ್ಮಾಣಕ್ಕೆ ಸೇವಂತಿಗೆ, ಆರ್ಕಿಡ್, ಡೈಸ್ಸಿ ಸೇರಿದಂತೆ ವಿವಿಧ ಹೂವುಗಳನ್ನು ಒಟ್ಟು 8 ಲಕ್ಷ ಸಂಖ್ಯೆಯಲ್ಲಿ ಬಳಸುತ್ತಿರುವುದು ಮತ್ತೊಂದು ವಿಶೇಷವಾಗಿದೆ.

ಗಣ್ಯರ ಉಪಸ್ಥಿತಿಯಲ್ಲಿ ಚಾಲನೆ: ಜ.26 ರಂದು ಫಲಪುಷ್ಪ ಪ್ರದರ್ಶನಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಭೋಸರಾಜು ಚಾಲನೆ ನೀಡಲಿದ್ದು, ಅಂದು ಬೆಳಗೆ 11 ಗಂಟೆಗೆ ನಡೆಯುವ ಕಾರ್ಯಕ್ರಮದಲ್ಲಿ ಸಂಸದ ಪ್ರತಾಪ್ ಸಿಂಹ, ಶಾಸಕರಾದ ಡಾ.ಮಂತರ್ ಗೌಡ, ಎ.ಎಸ್.ಪೊನ್ನಣ್ಣ, ನಗರಸಭಾ ಅಧ್ಯಕ್ಷೆ ಅನಿತಾ ಪೂವಯ್ಯ, ಜಿಲ್ಲಾಧಿಕಾರಿ ವೆಂಕಟರಾಜಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ಬೆಂಗಳೂರು ಲಾಲ್‌ಬಾಗ್ ಕಾರ್ಯನಿರ್ವಾಹಕ ನಿರ್ದೇಶಕ ಡಾ.ಕೆ.ಎಂ.ಪರಶಿವಮೂರ್ತಿ, ಮೈಸೂರು ವಿಭಾಗದ ತೋಟಗಾರಿಕೆ ಇಲಾಖೆ ಜಂಟಿನಿರ್ದೇಶಕ ಡಾ.ಎಚ್.ಎಂ.ನಾಗರಾಜ್, ಜಿಪಂ ಕಾರ್ಯನಿರ್ವಹಣಾಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಎಚ್.ಆರ್. ಯೋಗೇಶ್, ಕಿರಿಯ ಸಹಾಯಕ ನಿರ್ದೇಶಕ ಬಿ.ಎಸ್.ಮುತ್ತಪ್ಪ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

ಗಾಂಧಿ ಮೈದಾನದಲ್ಲಿ 60 ಮಳಿಗೆಗಳು



ನಗರದ ಗಾಂಧಿ ಮೈದಾನದಲ್ಲಿ ವಿವಿಧ 60 ವಸ್ತುಪ್ರದರ್ಶನ ಮಳಿಗೆಯನ್ನು ನಿರ್ಮಿಸಲಾಗುತ್ತಿದ್ದು, ಇದರಲ್ಲಿ 10 ಮಳಿಗೆಯನ್ನು ತೋಟಗಾರಿಕೆ, ಕಾಫಿ ಮಂಡಳಿ, ಕೃಷಿ, ಪಶುಪಾಲನೆ, ಮೀನುಗಾರಿಕೆ, ಹಾಪ್‌ಕಾಮ್ಸ್, ಕೈಗಾರಿಕೆ ವಾಣಿಜ್ಯ ಇಲಾಖೆ ಹಾಗೂ ಇತರೆ ಇಲಾಖೆಗಳಿಗೆ ಕಾಯ್ದಿರಿಸಲಾಗಿದೆ. 50 ಮಳಿಗೆಯಲ್ಲಿ ನರ್ಸರಿ ಗಿಡಗಳ ಮಾರಾಟ, ಕೃಷಿ ಪರಿಕರಗಳ ಪ್ರದರ್ಶನ ಹಾಗೂ ಯಂತ್ರೋಪಕರಣಗಳ ಮಾರಾಟ ಮಳಿಗೆಗಳನ್ನು ತೆರೆಯಲಾಗುವುದು ಎಂದು ಜಿಲ್ಲಾ ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಎಚ್.ಆರ್.ಯೋಗೇಶ್ ತಿಳಿಸಿದ್ದಾರೆ.

ಇದೇ ವೇಳೆ ರೈತರು ಬೆಳೆದಿರುವಂತಹ ವಿಶೇಷ ಹಣ್ಣು, ತರಕಾರಿ, ತೋಟದ ಬೆಳೆಗಳು, ಸಾಂಬಾರು ಬೆಳೆಗಳನ್ನು ಪ್ರದರ್ಶಿಸಲು ಉದ್ದೇಶಿಸಲಾಗಿದೆ. ಅತ್ಯುತ್ತಮ ಪ್ರದರ್ಶನಗಳಿಗೆ ಬಹುಮಾನ ನೀಡಲಾಗುವುದು. ಆಸಕ್ತರು ಜ.25ರಿಂದ ತೋಟಗಾರಿಕೆ ಇಲಾಖೆಯಲ್ಲಿ ಹೆಸರು ನೋಂದಾಯಿಸಿಕೊಳ್ಳಬೇಕು. ತೋಟಗಾರಿಕೆಯಲ್ಲಿ ಆಸಕ್ತಿಯಿರುವ ಮಹಿಳೆಯರಿಗೆ ಹಾಗೂ ಸಾರ್ವಜನಿಕರಿಗೆ ಒಣಹೂ ಜೋಡಣೆ, ಬಿಡಿ ಹೂಗಳ ಜೋಡಣೆ, ಇಕೆಬಾನ, ರಂಗೋಲಿ ಸ್ಪರ್ಧೆಗಳನ್ನು ರಾಜಾಸೀಟ್‌ನ ಒಳಭಾಗದಲ್ಲಿ ಆಯೋಜಿಸಲಾಗಿದೆ. ಆಸಕ್ತರು ಜ.26ರಂದು ಬೆಳಗ್ಗೆ 8 ಗಂಟೆಗೆ ರಾಜಾಸೀಟ್ ಉದ್ಯಾನದಲ್ಲಿ (ಮೊ.ಸಂ: 9448613355) ಹೆಸರನ್ನು ನೋಂದಾಯಿಸಿಕೊಳ್ಳಬಹುದು ಎಂದು ತಿಳಿಸಿದ್ದಾರೆ.

ಪುಣ್ಯ ಪೊನ್ನಮ್ಮ ಮಹಿಳಾ ಕಮಾಂಡರ್



ಮಡಿಕೇರಿ, ಜ.24–ದೆಹಲಿಯಲ್ಲಿ ಜ.26 ರಂದು ನಡೆಯುವ ಗಣರಾಜ್ಯೋತ್ಸವ ಪೆರೇಡ್‌ನಲ್ಲಿ ಮಡಿಕೇರಿ ಮೂಲದ ಪುಣ್ಯ ಪೊನ್ನಮ್ಮ ಎನ್‌ಸಿಸಿಯ ಅಖಿಲ ಭಾರತ ಯುವತಿಯರ ವಿಭಾಗದ ಕಮಾಂಡರ್ ಆಗಿ ಭಾಗವಹಿಸಲಿದ್ದಾರೆ.

ಈಕೆ ಎನ್‌ಸಿಸಿ ಕೆಡೆಟ್ ಆಗಿ ಹಲವಾರು ಕ್ಯಾಂಪ್‌ಗಳಲ್ಲಿ ಪಾಲ್ಗೊಂಡು ಅತ್ಯುತ್ತಮ ಸಾಧನೆ ತೋರಿದ್ದಾಳೆ. ಪ್ರಸ್ತುತ ಬೆಂಗಳೂರಿನ ಕ್ರೈಸ್ಟ್ ವಿಶ್ವವಿದ್ಯಾನಿಲಯದಲ್ಲಿ 3ನೇ ವರ್ಷದ ಕಾನೂನು ಪದವಿ ಶಿಕ್ಷಣ ಪಡೆಯುತ್ತಿದ್ದಾಳೆ. ಪುಣ್ಯ ಪೊನ್ನಮ್ಮ ಮಡಿಕೇರಿ ಗ್ರಾಮಾಂತರ ಠಾಣೆಯ ಪೊಲೀಸ್ ವೃತ್ತ ನಿರೀಕ್ಷಕ ಅನೂಪ್ ಮಾದಪ್ಪ ಮತ್ತು ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜಿನ ಉಪನ್ಯಾಸಕಿ ವಿನಿತಾ ದೇಚಮ್ಮ ದಂಪತಿಯ ಪುತ್ರಿ.

ಹಿಂದೂಪರ ಸಂಘಟನೆ ಕಾರ್ಯಕರ್ತರ ಪ್ರತಿಭಟನೆ

ವಿರಾಜಪೇಟೆ, ಜ.24–ಅಯೋಧ್ಯೆಯ ಬಾಲರಾಮ ಪ್ರಾಣ ಪ್ರತಿಷ್ಠಾಪನೆ ಪ್ರಯುಕ್ತ ಅನುಮತಿ ಪಡೆದು ಪಟ್ಟಣದಲ್ಲಿ ಅಳವಡಿಸಿದ್ದ ಹಿಂದೂಧ್ವಜ ಹಾಗೂ ಫ್ಲೆಕ್ಸ್‌ಗಳನ್ನು ವಶಕ್ಕೆ ಪಡೆಯಲು ಪುರಸಭೆ ಮುಖ್ಯಾಧಿಕಾರಿ ನೋಟಿಸ್ ಜಾರಿಗೊಳಿಸಿದ್ದಾರೆ ಎಂದು ಆರೋಪಿಸಿ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಪುರಸಭೆ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಬಾಲರಾಮ ಪ್ರಾಣ ಪ್ರತಿಷ್ಠಾಪನೆ ಅಂಗವಾಗಿ ವಿರಾಜಪೇಟೆ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಹಾಗೂ ಹಿಂದೂ ಧ್ವಜ ಹಾಗೂ ಫ್ಲೆಕ್ಸ್‌ಗಳನ್ನು ಅಳವಡಿಸಲು ಜ.30 ವರೆಗೆ ಪುರಸಭೆಯಿಂದ ಅನುಮತಿ ಪಡೆಯಲಾಗಿದೆ ಆದರೆ, ಜ.25ರಂದು ಸಿಎಂ ಸಿದ್ದರಾಮಯ್ಯ ವಿರಾಜಪೇಟೆಗೆ ಆಗಮಿಸುವ ಹಿನ್ನೆಲೆಯಲ್ಲಿ ಹಿಂದೂ ಧ್ವಜ, ಫ್ಲೆಕ್ಸ್‌ಗಳನ್ನು ತೆರವುಗೊಳಿಸಬೇಕು. ಇಲ್ಲವಾದಲ್ಲಿ ಧ್ವಜ, ಫ್ಲೆಕ್ಸ್‌ಗಳನ್ನು ವಶಕ್ಕೆ ಪಡೆಯುವುದಾಗಿ ಪುರಸಭೆ ಮುಖ್ಯಾಧಿಕಾರಿ ನೋಟಿಸ್ ಜಾರಿಗೊಳಿಸಿದ್ದಾರೆ. ಇದು ಸರಿಯಾದ ಕ್ರಮವಲ್ಲ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.



ವಿರಾಜಪೇಟೆಯಲ್ಲಿ ಅಳವಡಿಸಿದ್ದ ಹಿಂದೂ ಧ್ವಜ ಹಾಗೂ ಫ್ಲೆಕ್ಸ್‌ಗಳನ್ನು ವಶಕ್ಕೆ ಪಡೆಯಲು ಪುರಸಭೆ ಮುಖ್ಯಾಧಿಕಾರಿ ನೋಟಿಸ್ ಜಾರಿಗೊಳಿಸಿದ್ದಾರೆ ಎಂದು ಆರೋಪಿಸಿ ಹಿಂದೂಪರ ಸಂಘಗಳ ಕಾರ್ಯಕರ್ತರು ಪುರಸಭೆ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಮಾಜಿ ಶಾಸಕ ಕೆ.ಜಿ.ಬೋಪಯ್ಯ ಮಾತನಾಡಿ, ನಾವು ಯಾವ ದೇಶದಲ್ಲಿದ್ದೇವೆ ಎಂದು ಯೋಚನೆ ಮಾಡುವ ಪರಿಸ್ಥಿತಿ ಬಂದಿದೆ. ಬಾಲರಾಮ ಪ್ರಾಣ ಪ್ರತಿಷ್ಠಾಪನೆ ಹಿನ್ನೆಲೆಯಲ್ಲಿ ಹಿಂದೂಗಳು ಪಟ್ಟಣದಲ್ಲಿ ಹಿಂದೂ ಸಂಕೇತದ ಫ್ಲೆಕ್ಸ್‌ಗಳನ್ನು ಅಳವಡಿಸಲಾಗಿದೆ. ಇದಕ್ಕೆ ಹಣ ಕಟ್ಟಿ ಪುರಸಭೆ ಯಿಂದ ಅನುಮತಿ ಪಡೆಯಲಾಗಿದೆ. ಆದರೆ, ಮುಖ್ಯಮಂತ್ರಿ ಆಗಮನ ನೆಪದಲ್ಲಿ ಮುಖ್ಯಾಧಿಕಾರಿ ಬ್ಯಾನರ್ ತೆರವುಗೊಳಿಸುವಂತೆ ನೋಟಿಸ್ ಜಾರಿಗೊಳಿಸಿರುವುದು ಸರಿಯಲ್ಲ ಎಂದು ಆರೋಪಿಸಿದರು.

ಪುರಸಭೆ ಮುಖ್ಯಾಧಿಕಾರಿ ಚಂದ್ರಕುಮಾರ್ ಮಾತನಾಡಿ, ಗುರುವಾರ ಜಿಲ್ಲೆಗೆ ಮುಖ್ಯಮಂತ್ರಿ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಬ್ಯಾನರ್ ಹಾಗೂ ಬಂಟಿಂಗ್ಸ್‌ಗಳ ತೆರವುಗೊಳಿಸುವಂತೆ ನೋಟಿಸ್ ನೀಡಲಾಗಿದೆ ಎಂದರು. ಇದೇ ವೇಳೆ ಮುಖ್ಯಾಧಿಕಾರಿ ಹಾಗೂ ಪ್ರತಿಭಟನಾಕಾರರ ನಡುವೆ ಮಾತಿನ ಚಕಮಕಿ ನಡೆಯಿತು. ಬಳಿಕ ಮುಖ್ಯಾಧಿಕಾರಿ ಬ್ಯಾನರ್ ತೆರವುಗೊಳಿಸಲು ನೀಡಿದ್ದ ಆದೇಶವನ್ನು ಹಿಂಪಡೆದಿರುವುದಾಗಿ ತಿಳಿಸಿದರು. ನಂತರ ಪ್ರತಿಭಟನೆ ಕೈ ಬಿಡಲಾಯಿತು.

ಪ್ರತಿಭಟನೆಯಲ್ಲಿ ಹಿಂದೂ ಮುಖಂಡರಾದ ಮೂಕೊಂಡ ಶಶಿ ಸುಬ್ರಮಣಿ, ಪಟ್ರಪಂಡ ರಘು ನಾಣಯ್ಯ, ಬಜರಂಗದಳದ ಸಂಚಾಲಕ ವಿವೇಕ್ ರೈ, ಬಿಜೆಪಿ ಪ್ರಮುಖರಾದ ಬಲ್ಲಡಿಚಂಡರ, ಟಿ.ಪಿ.ಕೃಷ್ಣ, ಮಧುದೇವಯ್ಯ, ಮಾಳೇಟಿರ ಶ್ರೀನಿವಾಸ್, ವಾಟೇರಿರ ಬೋಪಣ್ಣ, ಆಶಾ ಸುಬ್ಬಯ್ಯ, ಅನಿತಾ ಕುಮಾರ್, ಜೂನಾ ಸುನಿತಾ, ಮಹದೇವ ಮತ್ತಿತರರು ಭಾಗವಹಿಸಿದ್ದರು.

ಇಂದು ಎಸ್ಪಿ ಕಚೇರಿ ಉದ್ಘಾಟನೆ

ಮಡಿಕೇರಿ, ಜ.24–ನೂತನವಾಗಿ ಸುಸಜ್ಜಿತವಾಗಿ ನಿರ್ಮಾಣಗೊಂಡಿರುವ ಕೊಡಗು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯನ್ನು ಜ.25ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಗೃಹ ಸಚಿವ ಜಿ.ಪರಮೇಶ್ವರ್ ಉದ್ಘಾಟಿಸಲಿದ್ದಾರೆ.

ಕಚೇರಿ ಉದ್ಘಾಟನೆ ನಂತರ ನಗರದ ಗಾಂಧಿ ಮೈದಾನದಲ್ಲಿ ನಡೆಯುವ ಸಾರ್ವಜನಿಕ ಸಭೆಯಲ್ಲಿ ಮುಖ್ಯಮಂತ್ರಿ ಮಾತನಾಡಲಿದ್ದು, ಇದೇ ವೇಳೆ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಶಂಕುಸ್ಥಾಪನೆ ಮಾಡಲಿದ್ದಾರೆ ಮತ್ತು ಪೂರ್ಣಗೊಂಡ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ. ಮುಖ್ಯಮಂತ್ರಿಗಳ ಸ್ವಾಗತಕ್ಕೆ ಮಡಿಕೇರಿ ನಗರ ಸಜ್ಜಾಗಿದ್ದು, ಗಾಂಧಿ ಮೈದಾನದಲ್ಲಿ ಸಾವಿರಾರು ಜನರಿಗೆ ಆಸನಗಳ ವ್ಯವಸ್ಥೆ ಮಾಡಲಾಗಿದೆ. ವಾಹನದಟ್ಟಣೆ ಹೆಚ್ಚಾಗಬಹುದು ಎನ್ನುವ ಕಾರಣಕ್ಕೆ ನಗರದ ಜಿಲ್ಲಾ ಕ್ರೀಡಾಂಗಣ, ಜೂನಿಯರ್ ಕಾಲೇಜು ಮೈದಾನ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣ ಮತ್ತು ಶಾಂತಿ ಚರ್ಚ್ ಬಳಿಯ ಮೈದಾನದಲ್ಲಿ ವಾಹನಗಳ ನಿಲುಗಡೆಗೆ ವ್ಯವಸ್ಥೆ ಮಾಡಲಾಗಿದೆ. ಮುಖ್ಯಮಂತ್ರಿಗಳು ಗುರುವಾರ ಬೆಳಗ್ಗೆ ವಿರಾಜಪೇಟೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಲಿದ್ದಾರೆ. ನಂತರ ಮಡಿಕೇರಿಗೆ ಆಗಮಿಸಲಿದ್ದಾರೆ.

ಪೊಲೀಸ್ ಬಂದೋಬಸ್ತ್: ಮುಖ್ಯಮಂತ್ರಿ ಸಿದ್ದರಾಮಯ್ಯ ವಿರಾಜಪೇಟೆ ಹಾಗೂ ಮಡಿಕೇರಿಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ.

ಮಡಿಕೇರಿ ಮತ್ತು ವಿರಾಜಪೇಟೆ ಭಾಗದಲ್ಲಿ ಬಂದೋಬಸ್ತ್‌ಗಾಗಿ ಸುಮಾರು ಒಂದು ಸಾವಿರ ಪೊಲೀಸರನ್ನು ನಿಯೋಜಿಸಲಾಗಿದ್ದು, ಈ ಸಂಬಂಧ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ನಿರ್ದೇಶನದಂತೆ ಮೈತ್ರಿ ಪೊಲೀಸ್ ಸಭಾಂಗಣದಲ್ಲಿ ಪೊಲೀಸ್ ಅಧಿಕಾರಿಗಳ ಸಭೆ ನಡೆಯಿತು. ಮಂಡ್ಯ, ಮೈಸೂರು ಸೇರಿದಂತೆ ವಿವಿಧ ಜಿಲ್ಲೆಗಳಿಂದ ಸುಮಾರು 500 ಪೊಲೀಸರು ಮಡಿಕೇರಿಗೆ ಆಗಮಿಸಿದ್ದಾರೆ. 2023ರಲ್ಲಿ ವಿರೋಧ ಪಕ್ಷದ ನಾಯಕನ ಸ್ಥಾನದಲ್ಲಿದ್ದ ಸಿದ್ದರಾಮಯ್ಯ ಅವರು ಕೊಡಗು ಜಿಲ್ಲೆಗೆ ಬಂದಿದ್ದಾಗ ಅವರ ಕಾರಿನ ಮೇಲೆ ಮೊಟ್ಟೆ ಎಸೆಯಲಾಗಿತ್ತು. ಆದ್ದರಿಂದ ಈ ಬಾರಿ ಪೊಲೀಸ್ ಬಂದೋಬಸ್ತ್ ಬಿಗಿಗೊಳಿಸಲಾಗಿದೆ.

ಅಸೂಯೆಗೆ ಔಷಧಿಯೇ ಇಲ್ಲ: ಸಂತೋಷ್ ಹೆಗ್ಡೆ



ಕೊಳ್ಳೇಗಾಲ ಕೊಂಗವೀರಗೌಡರ ಹಾಸ್ಟೆಲ್‌ನಲ್ಲಿ ಆಯೋಜಿಸಿದ್ದ ವಚನ ಗಾಯನ ಕಾರ್ಯಕ್ರಮದಲ್ಲಿ ಲೋಕಾಯುಕ್ತ ನಿವೃತ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ಅವರನ್ನು ಸನ್ಮಾನಿಸಲಾಯಿತು.

ಕೊಳ್ಳೇಗಾಲ, ಜ.24– ಯುವಪೀಳಿಗೆ ಭ್ರಷ್ಟಾಚಾರ ಮುಕ್ತ ಸಮಾಜಕ್ಕೆ ಮುಂದಾಗುವ ಜೊತೆಗೆ ಮಾನವೀಯತೆ ಮೈಗೂಡಿಸಿಕೊಂಡು ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಬೇಕು ಎಂದು ಲೋಕಾಯುಕ್ತ ನಿವೃತ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ಹೇಳಿದರು.

ಪಟ್ಟಣದ ಕೊಂಗವೀರಗೌಡರ ಹಾಸ್ಟೆಲ್‌ನಲ್ಲಿ ಶ್ರೀ ಶಿವರಾತ್ರೀಶ್ವರ ಸ್ವಾಮೀಜಿ ಜಯಂತಿ ಅಂಗವಾಗಿ ಆಯೋಜಿಸಿದ್ದ ವಚನ ಗಾಯನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಅಸೂಯೆಗೆ ಔಷಧಿಯೇ ಇಲ್ಲ, ಇದು ಗುಣಪಡಿಸಲಾಗದ ವ್ಯಾಧಿ. ಯುವ ಸಮೂಹ ಕಿಂಚಿತ್ತಾದರೂ ಮಾನವೀಯ ಗುಣಗಳ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು. ಮಾಜಿ ಶಾಸಕಿ ಪರಿಮಳಾ ನಾಗಪ್ಪ, ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ನಾಗರಾಜು, ಗುರುಮಲ್ಲೇಶ್ವರ ಮಠದ ಕಾರ್ಯದರ್ಶಿ ವೃಷಬೇಂದ್ರ, ಡಾ.ಶಿವರಾಜಪ್ಪ ಇನ್ನಿತರಿದ್ದರು.

ಕಾರ್ಯಕ್ರಮದಲ್ಲಿ ಲೋಕಾಯುಕ್ತ ನಿವೃತ್ತ ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ಅವರನ್ನು ಸನ್ಮಾನಿಸಲಾಯಿತು.

ಚಾ.ನಗರದಲ್ಲಿ ಗ್ರಾಪಂ ನೌಕರರ ಪ್ರತಿಭಟನೆ

● ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯ ● ಜಿಪಂ ಉಪಕಾರ್ಯದರ್ಶಿ ಲಕ್ಷ್ಮೀಗೆ ಮನವಿ ಸಲ್ಲಿಕೆ

ಚಾಮರಾಜನಗರ, ಜ.24–ಕನಿಷ್ಠ ವೇತನ ಹಾಗೂ ಪಿಂಚಣಿ ನಿಗದಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದ ವತಿಯಿಂದ ನಗರದಲ್ಲಿ ಬುಧವಾರ ಪ್ರತಿಭಟನೆ ನಡೆಸಲಾಯಿತು.

ನಗರದ ಶ್ರೀ ಚಾಮರಾಜೇಶ್ವರ ದೇವಸ್ಥಾನ ಮುಂಭಾಗ ಸಂಘದ ಅಧ್ಯಕ್ಷ ಸಿದ್ದರಾಜು ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು, ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿರಸ್ತೆ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಕೆಲಕಾಲ ಪ್ರತಿಭಟನೆ ನಡೆಸಿ, ಬಳಿಕ ಜಿಪಂ ಉಪ ಕಾರ್ಯದರ್ಶಿ ಲಕ್ಷ್ಮೀ ಹಾಗೂ ಸಂಸದರ ಆಪ್ತಸಹಾಯಕ ಆನಂದ್ ಅವರಿಗೆ ಮನವಿ ಸಲ್ಲಿಸಿದರು.



ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದ ವತಿಯಿಂದ ಚಾಮರಾಜನಗರ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಲಕ್ಷ್ಮೀ ಅವರಿಗೆ ಮನವಿ ಸಲ್ಲಿಸಲಾಯಿತು.

ಸಂಘದ ಜಿಲ್ಲಾಧ್ಯಕ್ಷ ಸಿದ್ದರಾಜು ಮಾತನಾಡಿ, ಗ್ರಾಮ ಪಂಚಾಯಿತಿ ನೌಕರರಿಗೆ ಕನಿಷ್ಠ 31 ಸಾವಿರ ರೂ. ವೇತನ ಹಾಗೂ 6 ಸಾವಿರ ರೂ. ಪಿಂಚಣಿ ನಿಗದಿಪಡಿಸಬೇಕು. ಐಪಿಡಿ ಸಾಲಪ್ಪ ವರದಿಯಂತೆ ಸ್ವಚ್ಛತಾಗಾರರನ್ನು ನೇಮಿಸಬೇಕು. ಸೇವಾ ಹಿರಿತನ ಪರಿಶೀಲಿಸಿ ವೇತನ ಹೆಚ್ಚಳ ಮಾಡಬೇಕು. ತೀವ್ರ ಅನಾರೋಗ್ಯಕ್ಕೆ ತುತ್ತಾದ ನೌಕರರಿಗೆ ಆಸ್ಪತ್ರೆ ವೆಚ್ಚ ಭರಿಸಬೇಕು. ಗುತ್ತಿಗೆ ಮತ್ತು ಹೊರಗುತ್ತಿಗೆ ನೇಮಕಾತಿ ರದ್ದುಗೊಳಿಸಬೇಕು. ಗ್ರಾಪಂಗಳಲ್ಲಿ ಕಾರ್ಯನಿರ್ವಹಿಸುವ ನೌಕರಿಗೆ ವರ್ಗಾವಣೆಗೆ ಅವಕಾಶ ನೀಡಬೇಕು. ನೀರುಗಂಟಿಗಳಿಗೆ ಮಲ್ಟಿಪರ್ಪಸ್ ಎಂದಿರುವುದನ್ನು ಕೈ ಬಿಟ್ಟು ನಿರ್ದಿಷ್ಟ ಕೆಲಸಗಳನ್ನು ನಿಗದಿಪಡಿಸಬೇಕು. ಆದಾಯಕ್ಕೆ ಅನುಗುಣವಾಗಿ ಕರವಸೂಲಿಗಾರರ ಹುದ್ದೆಗಳನ್ನು ನಿಗದಿಗೊಳಿಸಬೇಕು ಎಂದು ಒತ್ತಾಯಿಸಿದರು.

ಅಗತ್ಯ ವಸ್ತುಗಳ ಬೆಲೆ ಏರಿಕೆ ನಿಯಂತ್ರಿಸಬೇಕು. ಶ್ರೀಮಂತರ ಮೇಲಿನ ತೆರಿಗೆ ಹೆಚ್ಚಿಸಿ, ಬಡವರ ಪರ ನೀತಿ ಜಾರಿಗೆ ತರಬೇಕು. ರೈತ ವಿರೋಧಿ ಕೃಷಿ ಕಾಯ್ದೆಗಳನ್ನು ವಾಪಸ್ ಪಡೆಯಬೇಕು. ರೈತ ಬೆಳೆಗಳಿಗೆ ಲಾಭದಾಯಕ ಬೆಂಬಲ ಬೆಲೆ ನೀಡಬೇಕು. ರಸಗೊಬ್ಬರ ಹಾಗೂ ಕೃಷಿ ಹಿಡುವಳಿಗಳಿಗೆ ಸಬ್ಸಿಡಿ ಕಡಿತಗೊಳಿಸುವ ನೀತಿಗಳನ್ನು ಕೈಬಿಡುವುದು. ರೈಲ್ವೆ, ವಿದ್ಯುತ್ ಸೇರಿದಂತೆ ಎಲ್ಲಾ ಕ್ಷೇತ್ರಗಳ ಖಾಸಗೀಕರಣ ಕೈಬಿಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಸಂಘದ ಉಪಾಧ್ಯಕ್ಷರಾದ ಅರ್ಮುಗಂ, ಮಲ್ಲ, ಚಾಮರಾಜನಗರ ತಾಲೂಕು ಅಧ್ಯಕ್ಷ ಕೃಷ್ಣ, ಉಪಾಧ್ಯಕ್ಷ ನಂದೀಶ್, ಕೊಳ್ಳೇಗಾಲ ತಾಲೂಕು ಅಧ್ಯಕ್ಷ ದೊರೆಸ್ವಾಮಿ, ಉಪಾಧ್ಯಕ್ಷ ರೇವಣ್ಣ, ಗುಂಡ್ಲುಪೇಟೆ ತಾಲೂಕು ಅಧ್ಯಕ್ಷ ಮಹೇಂದ್ರ, ಉಪಾಧ್ಯಕ್ಷ ಲೋಕೇಶ್, ಯಳಂದೂರು ತಾಲೂಕು ಅಧ್ಯಕ್ಷ ಕೃಷ್ಣನಾಯಕ, ಉಪಾಧ್ಯಕ್ಷ ಶಂಕರನಾಯಕ, ಮಹದೇವಮ್ಮ, ಪಳನಿಸ್ವಾಮಿ, ಕಿಟ್ಟಿ ಇತರರು ಭಾಗವಹಿಸಿದ್ದರು.

ಇಂದು ರಾಷ್ಟ್ರೀಯ ಮತದಾರರ ದಿನಾಚರಣೆ

ಚಾಮರಾಜನಗರ, ಜ.24–ಚುನಾವಣಾ ಆಯೋಗ, ಜಿಲ್ಲಾಡಳಿತ ಮತ್ತು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ 14ನೇ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮವನ್ನು ಜ.25 ರಂದು ಬೆಳಗ್ಗೆ 10.30ಕ್ಕೆ ನಗರದ ಜಿಲ್ಲಾಡಳಿತ ಭವನದ ಕೆಡಿಪಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶೆ ಬಿ.ಎಸ್.ಭಾರತಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಜಿಲ್ಲಾಧಿಕಾರಿ ಶಿಲ್ಪಾನಾಗ್ ಅಧ್ಯಕ್ಷತೆ ವಹಿಸಲಿದ್ದಾರೆ. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ಶ್ರೀಧರ್, ಎಸ್ಪಿ ಪದ್ಮಿನಿ ಸಾಹು, ಜಿಪಂ ಸಿಇಓ ಆನಂದ್ ಪ್ರಕಾಶ್ ಮೀನಾ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದಾ ಮತ್ತಿತರರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಕೋಟ್ಪಾ ದಾಳಿ: 1700 ರೂ. ದಂಡ ವಸೂಲಿ



ಚಾಮರಾಜನಗರದ ಬಿ.ರಾಚಯ್ಯ ಜೋಡಿರಸ್ತೆ ವ್ಯಾಪ್ತಿ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದಾ ನೇತೃತ್ವದಲ್ಲಿ ಅಂಗಡಿಗಳ ಮೇಲೆ ದಾಳಿ ನಡೆಸಿ, ದಂಡ ವಿಧಿಸಲಾಯಿತು.

ಚಾಮರಾಜನಗರ, ಜ.24– ನಗರದ ಬಿ.ರಾಚಯ್ಯ ಜೋಡಿರಸ್ತೆ ವ್ಯಾಪ್ತಿಯಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದಾ ನೇತೃತ್ವದಲ್ಲಿ ಬುಧವಾರ ಕೋಟ್ಪಾ ದಾಳಿ ನಡೆಸಿ, ಒಟ್ಟು 14 ಪ್ರಕರಣಗಳಲ್ಲಿ 1700 ರೂ. ದಂಡ ವಿಧಿಸಲಾಯಿತು.

ಜಿಲ್ಲಾ ತಂಬಾಕು ನಿಯಂತ್ರಣ ಘಟಕ, ಜಿಲ್ಲಾ ಕಣ್ಗಾವಲು ಘಟಕ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಸಿಗರೇಟು ಮತ್ತು ಇತರೆ ತಂಬಾಕು ಉತ್ಪನ್ನಗಳ ಕಾಯ್ದೆಯನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಉದ್ದೇಶದಿಂದ ಕೋಟ್ಪಾ ತನಿಖಾ ತಂಡದೊಂದಿಗೆ ನಿಯಮ ಉಲ್ಲಂಘಿಸಿ ತಂಬಾಕು ಉತ್ಪನ್ನಗಳ ಮಾರಾಟ ಮಾಡುತ್ತಿದ್ದ ಅಂಗಡಿಗಳು, ಕೋಟ್ಪಾ ಎಚ್ಚರಿಕೆ ನಾಮಫಲಕ ಪ್ರದರ್ಶಿಸದ ಹೋಟೆಲ್, ಬಾರ್ ಅಂಡ್ ರೆಸ್ಟೋರೆಂಟ್, ಟೀ–ಸ್ಟಾಲ್, ಚಿಲ್ಲರೆ ಅಂಗಡಿಗಳ ಮೇಲೆ ದಾಳಿ ನಡೆಸಲಾಯಿತು.

ಶಿಕ್ಷಣ ಸಂಸ್ಥೆಗಳ 100 ಗಜಗಳ ಅಂತರದ ಒಳಗೆ ತಂಬಾಕು ಪದಾರ್ಥಗಳ ಮಾರಾಟ ಮತ್ತು ಸೇವನೆಗೆ ಉತ್ತೇಜನೆ ನೀಡುವ ಅಂಗಡಿಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುತ್ತಿದ್ದ ವ್ಯಕ್ತಿಗಳಿಗೆ ಸ್ಥಳದಲ್ಲೇ ಪ್ರಕರಣ ದಾಖಲಿಸಿ ದಂಡ ವಿಧಿಸಲಾಯಿತು. ಇದೇ ವೇಳೆ ಕರಪತ್ರ ವಿತರಿಸಿ, ತಂಬಾಕು ಸೇವನೆಯಿಂದ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮ ಮತ್ತು ತಂಬಾಕು ನಿಯಂತ್ರಣ ಕಾಯ್ದೆ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಯಿತು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಿರಿಧರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಚಲುವರಾಜು, ಕಾರ್ಮಿಕ ಇಲಾಖೆಯ ಮಹೇಶ್, ಆರೋಗ್ಯ ಇಲಾಖೆಯ ನಿರೀಕ್ಷಣಾಧಿಕಾರಿ ನವೀನ್ ಕುಮಾರ್, ಮಧುಶಂಕರ್, ಜಿಲ್ಲಾ ತಂಬಾಕು ನಿಯಂತ್ರಣ ಘಟಕದ ಜಿಲ್ಲಾ ಸಲಹೆಗಾರರಾದ ಪ್ರಶಾಂತ್, ಸಮಾಜ ಕಾರ್ಯಕರ್ತರಾದ ವೀರಣ್ಣ ದಾಳಿಯ ವೇಳೆ ಹಾಜರಿದ್ದರು.



ಇತ್ತೀಚೆಗೆ ಹುಲಿ ದಾಳಿಗೆ ಮೃತಪಟ್ಟ ರತ್ನಮ್ಮ ಅವರ ಕುಟುಂಬಕ್ಕೆ ಸಾಂತ್ವನ ಹೇಳಲು ಹೆಡಿಯಾಲ ಹೋಬಳಿಯ ಬಳ್ಳೂರುಹುಂಡಿ ಗ್ರಾಮಕ್ಕೆ ಆಗಮಿಸುವ ಮಾರ್ಗಮಧ್ಯೆ ಬೇಗೂರು ಗ್ರಾಮದ ಟಿ.ಬಿ.ಸರ್ಕಲ್ ಬಳಿ ಅರಣ್ಯ ಸಚಿವ ಈಶ್ವರ್ ಬಿ.ಖಂಡ್ರೆ ಹಾಗೂ ಶಾಸಕ ದರ್ಶನ್ ಧ್ರುವನಾರಾಯಣ್ ಅವರನ್ನು ಕಾಂಗ್ರೆಸ್ ಕಾರ್ಯಕರ್ತರು ಸನ್ಮಾನಿಸಿದರು. ಚಾಮುಲ್ ನಿರ್ದೇಶಕ ಎಚ್.ಎಸ್.ನಂಜುಂಡ ಪ್ರಸಾದ್, ಸೋಮಹಳ್ಳಿ ಶಿವನಾಗಪ್ಪ, ಹೊರೆಯಾಲ ನೀಲಕಂಠಪ್ಪ, ಎಪಿಎಂಸಿ ನಿರ್ದೇಶಕ ಆರ್.ಎಸ್. ನಾಗರಾಜು, ರವಿ ಬೆಳಚಲವಾಡಿ ಇದ್ದರು.

ರಾಮಸಮುದ್ರದಲ್ಲಿ ಅಂಬೇಡ್ಕರ್ ಪ್ರತಿಜ್ಞಾವಿಧಿ ಸ್ವೀಕಾರ



ರಾಮಸಮುದ್ರದಲ್ಲಿ ಅಂಬೇಡ್ಕರ್ ಪ್ರತಿಜ್ಞಾವಿಧಿ ಸ್ವೀಕಾರ ಕಾರ್ಯಕ್ರಮ ನಡೆಯಿತು.

ಚಾಮರಾಜನಗರ, ಜ.24– ನಗರದ ರಾಮಸಮುದ್ರದಲ್ಲಿ ಅಂಬೇಡ್ಕರ್ ಯುವಕರ ಸಂಘ, ಬೌದ್ಧ ಉಪಾಸಕರು ಹಾಗೂ ಅಂಬೇಡ್ಕರ್ ಅನುಯಾಯಿಗಳಿಂದ ಡಾ.ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಜ್ಞಾವಿಧಿ ಸ್ವೀಕಾರ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿದ ನಗರಸಭಾ ಸದಸ್ಯ ಆರ್.ಪಿ.ನಂಜುಂಡಸ್ವಾಮಿ ಮಾತನಾಡಿ, ದೇಶದಲ್ಲಿ ಬೇರೆ ಬೇರೆ ಕಾರಣಕ್ಕೆ ಸಂವಿಧಾನ ವಿರೂಪಗೊಳಿಸುವ ಕೆಲಸ ನಡೆಯುತ್ತಿದೆ. ಅದರ ಬಗ್ಗೆ ಬಹುಜನರು ಜಾಗೃತರಾಗಬೇಕು ಎಂದರು. ಬೌದ್ಧ ಉಪಾಸಕ ಸಿದ್ದರಾಜು ಸೋಮವಾರಪೇಟೆ ಮಾತನಾಡಿ, ದೇಶದಲ್ಲಿ ದಾನ, ಧರ್ಮ ಸ್ವೀಕಾರದಲ್ಲೂ ಅಸ್ಪೃಶ್ಯತೆ, ಹಿಂದುತ್ವದ ಹೆಸರಿನಲ್ಲಿ ಮೌಢ್ಯ ತುಂಬುವ ಕೆಲಸ ನಡೆಯುತ್ತಿದೆ. ಇದರಿಂದ ಸಂವಿಧಾನ, ಪ್ರಜಾಪ್ರಭುತ್ವಕ್ಕೆ ಧಕ್ಕೆ ಉಂಟಾಗುತ್ತಿದೆ. ಆಗಾಗಿ ಇಂತಹ ಜಾಗೃತಿ ಕಾರ್ಯಕ್ರಮ ಮೂಲಕ ಸಮುದಾಯಕ್ಕೆ ಬುದ್ಧ, ಅಂಬೇಡ್ಕರ್ ಅವರ ಚಿಂತನೆಗಳನ್ನು ಅಳವಡಿಸಿಕೊಂಡು ಧಮ್ಮ ಮಾರ್ಗದಲ್ಲಿ ಸಾಗಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬೌದ್ಧ ಉಪಾಸಕ ಮಹೇಶ್, ಅಂಬೇಡ್ಕರ್ ಯುವಕ ಸಂಘದ ಅಧ್ಯಕ್ಷ ಸುಹಾಸ್, ಪ್ರಧಾನ ಕಾರ್ಯದರ್ಶಿ ಮನೋಜ್ ಮಸು, ಎನ್‌ಎಸ್‌ಯುಐ ಜಿಲ್ಲಾಧ್ಯಕ್ಷ ಮೋಹನ್ ನಗು, ಅಕ್ಷಯ್ ಕುಮಾರ್, ಬಾಬು ಜೈ ಭೀಮ್ ಆಟೋ ಚಾಲಕರ ಸಂಘದ ಅಜಿತ್, ರವಿ, ಸಿದ್ದು, ರಮೇಶ್, ಪ್ರದೀಪ್ ಇತರರು ಹಾಜರಿದ್ದರು.

ಶ್ರೀನಿವಾಸ್ ನಿಧನ



ಕೊಳ್ಳೇಗಾಲ, ಜ.24–ಪಟ್ಟಣದ ಹೊಸ ಕುರುಬರ ಬೀದಿಯ ನಿವಾಸಿ ಹಾಗೂ ನಿವೃತ್ತ ಎಎಸ್‌ಐ ಶ್ರೀನಿವಾಸ್ (62) ಅನಾರೋಗ್ಯದಿಂದ ಮಂಗಳವಾರ ರಾತ್ರಿ ನಿಧನರಾದರು.

ಮೃತರು ಪತ್ನಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು–ಬಳಗ ಅಗಲಿದ್ದಾರೆ. ಬುಧವಾರ ಮಧ್ಯಾಹ್ನ ಕುರುಬ ಸಮಾಜದ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಗಿರಿಜಮ್ಮ



ಆಲೂರು, ಜ.24–ಚಾಮರಾಜನಗರ ತಾಲೂಕಿನ ಆಲೂರು ಗ್ರಾಮದ ನಿವಾಸಿ ಚಿಕ್ಕಮಲ್ಲಪ್ಪ ಅವರ ಪತ್ನಿ ಗಿರಿಜಮ್ಮ (72) ಅನಾರೋಗ್ಯದಿಂದ ಬುಧವಾರ ಬೆಳಗ್ಗೆ ನಿಧನರಾದರು. ಮೃತರು ಪುತ್ರ, ನಾಲ್ವರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗ ಅಗಲಿದ್ದಾರೆ. ಮೃತರ ತೋಟದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಮೈಸೂರು ಮಿತ್ರ

ಗುರುವಾರ 25 ಜನವರಿ 2024

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

WORK @ HOME
Work from Home ಕಂಪನಿಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡುತ್ತೇವೆ ಕರೆ ಮಾಡಿ ಸರಿಯಾದ Work from Home ಆಯ್ಕೆಮಾಡಿ
8867973998

SITE FOR SALE
30X40, S/F MUDA APPROVED
Sri. Chamundeshwari Layout, Raghavendraswamy Temple Road, Chikkalli, T.N.Pura Road, Mysore
9480084847

NEW HOUSE FOR SALE
40x60 East Facing 4 Bed Rooms (All Attached) As per Vashtu. At 1st Main, 1st stage, Vijayanagar 60ft Road, Mysore.
Price - 3.6 Cr (Slightly Negotiable)
9880718980

SITES FOR SALE
30x40 East face at Dhatri Layout, Yelwala to Srirangapatna Road (Mysore). Rs. 36 Lakhs. Negotiable.
KBL SILICON CITY attached near Infosys (Mysore)
30x40 North-West Corner Rs. 52 Lakhs. Nego.
Mob: 8217538285

ಮನೆ, ಖಾಲಿ ನಿವೇಶನಗಳು ಮಾರಾಟಕ್ಕಿವೆ
1) ಪಾಂಡವಪುರ ತಾ ಜಕ್ಕನಹಳ್ಳಿ ವೃತ್ತದ ಸಮೀಪ (NH150A). ಅಳತೆ (ಎ) ಪೂ–ಪ:40, ಉ–ದ: 50. (ಬಿ) ಪೂ–ಪ: 36, ಉ–ದ: 50. (2) ಪಾಂಡವಪುರ ಟೌನ್, ಕೃಷ್ಣನಗರ. ಅಳತೆ: ಪೂ–ಪ: 48 ; ಉ–ದ: 40. ಸಂಪರ್ಕಿಸಿ:
Mob: 8073589849

ಮನೆ ಮಾರಾಟಕ್ಕಿದೆ
ಜೆ.ಸಿ.ಕಾಲೇಜ್ ರಸ್ತೆಯಲ್ಲಿ ಕಮರ್ಷಿಯಲ್ ಪ್ರಾಪರ್ಟಿ 30x40 ಕೆಳಗೆ ಎರಡು ರೂಂ ಮನೆ ಮೇಲೆ ಮೂರು ರೂಂ ಮನೆ ಬೆಲೆ ಒಂದು ಕೋಟಿ ಐವತ್ತು ಲಕ್ಷ ಮಧ್ಯವರ್ತಿಗಳಿಗೆ ಅವಕಾಶವಿಲ್ಲ
9448406380

ಮನೆ ಕಟ್ಟಲು ಬಯಸುತ್ತೀರಾ? ಮನೆ ನವೀಕರಣ ಮಾಡ ಬಯಸುತ್ತೀರಾ? ತಪ್ಪದನ್ನು ಸಂಪರ್ಕಿಸಿ ಮತ್ತು ಉಚಿತ ವಿವರಗಳನ್ನು ಪಡೆಯಿರಿ
ಆರ್ಯನ್ ಬಿಲ್ಡರ್ಸ್
ಜಯಲಕ್ಷ್ಮೀಪುರಂ, ಮೈಸೂರು
7411659292

HOUSE FOR LEASE
1st Floor Single Bed Room House for Lease with all Modern Facilities Vijayanagar 4th Stage, 1st Phase, next to Ring Road
8660848321

ಹೊಸ ಮನೆ ಮಾರಾಟಕ್ಕಿದೆ
25x30, 3bhk duplex house
ಶ್ರೀ ವಿನಾಯಕ ಗಾರ್ಡನ್ ಸಿಟಿ ಸೆಂಟ್ ಜೋಸೆಫ್ ಸ್ಕೂಲ್ ಹತ್ತಿರ ಇಲವಾಲ ಮೈಸೂರು
9740461780
9945704998

INDUSTRIAL PLOT FOR SALE
80X110, Plot for Sale, 60 feet Road Hebbal Industrial Area Near JK Tyres
8660105902

ಬೇಕಾಗಿದ್ದಾರೆ
ಮೈಸೂರಿನ ಪ್ರತಿಷ್ಠಿತ ಹೋಟೆಲ್ ಮತ್ತು ಆಸ್ಪತ್ರೆಗೆ, ಹೌಸ್‌ಕೀಪಿಂಗ್ ಎಕ್ಸಿಕ್ಯೂಟಿವ್, ಹೌಸ್‌ಕೀಪಿಂಗ್ ಸೂಪರ್‌ವೈಸರ್, ಹೌಸ್‌ಕೀಪಿಂಗ್ ಕೆಲಸಕ್ಕೆ ಮಹಿಳೆಯರು ಮತ್ತು ಪುರುಷರು, ಸೆಕ್ಯೂರಿಟಿ ಗಾರ್ಡ್ಸ್, ಸೆಕ್ಯೂರಿಟಿ ಸೂಪರ್‌ವೈಸರ್ ಕೆಲಸಕ್ಕೆ ಯಾವುದೇ ಶುಲ್ಕ ಇರುವುದಿಲ್ಲ. ಉತ್ತಮ ಸಂಬಳ + ESI + PF. Receptionist, Restaurant Manager, Hospital Marketing Executive.
Call: 9964008146, 8073553033, 7975066539

ಶಿವಶಕ್ತಿ ವೃದ್ಧಾಶ್ರಮ ಚಾರಿಟಬಲ್ ಟ್ರಸ್ಟ್ (ರಿ.)
ನಂ.52, ಟಿ.ಎಸ್.ಕೆ. ಸೆರಿನಿಟಿ, ಬೆಳವಾಡಿ, (ಕೆರೆಯಹತ್ತಿರ) ಮೈಸೂರು. (ಸಮಯ ಬೆ.10 ರಿಂದ ಸಂ.5 ರವರೆಗೆ)
1) 50–60 ವರ್ಷದ ವೃದ್ಧರು ಸಂಸ್ಥೆ ನಿಗಧಿಪಡಿಸಿದ Monthly Fees ಪಾವತಿಸಿ ಉಳಿದುಕೊಳ್ಳಬಹುದು.
2) ಟೆಲಿಕಾಲರ್–1 ಹುದ್ದೆ, (ಮಹಿಳೆ) ಡಿಗ್ರಿ, ಡಿಪ್ಲೊಮೋ & ಕಂಪ್ಯೂಟರ್ ಗೊತ್ತಿರಬೇಕು, (40ವರ್ಷ)
3) ಮಹಿಳಾ ಅಡುಗೆಯವರು– 1 ಹುದ್ದೆ, (40 ವರ್ಷ) ಅನುಭವವಿರುವವರು & ಅಲ್ಲೇ ಉಳಿದುಕೊಳ್ಳುವವರಿಗೆ ಆದ್ಯತೆ (ಸಸ್ಯಾಹಾರಿ & ಮಾಂಸಾಹಾರಿ)
9380840267

Sudarshan Saur SOLAR WATER HEATER
ATTRACTIVE OFFER



ಸೇಲ್ಸ್ & ಸರ್ವೀಸ್
Bajaj Finserv Available
SUNZONE SOLAR SYSTEM
Vishwamanava Double Road, Kuvempunagar, Mysuru
9845175443

SITE FOR SALE GOKULAM
50X75, Commercial Site, MUDA North East Corner, Price - 4.95 Cr
40 Feet Road
8660105902

ನಿರುದ್ಯೋಗಿಗಳಿಗೆ ಸುವರ್ಣಾವಕಾಶ
ಮೈಸೂರು, ಚಾಮರಾಜನಗರ, ಮಂಡ್ಯ, ಹಾಸನ, ರಾಮನಗರ ಭಾಗಗಳಲ್ಲಿ ಸ್ವಯಂ ಉದ್ಯೋಗ ವಯಸ್ಸಿನ ಮಿತಿ ಇಲ್ಲಾ ಗಳಿಸಿ ತಿಂಗಳಿಗೆ 18000 ದಿಂದ 26000
8495843767

CHANGE OF NAME
I, VANSHIKA JOSHAN BATHIJA W/o Joshan Bathija, D/o Deepak. R. Rajani, Residing at B502, Mittal Pride apartment, J.P.Nagar, Mysuru-570008, have changed my name from VANSHIKA JOSHAN BATHIJA to Mrs. HARSHA RAJANI on my own free will sworn in before notary M. ANANTA MURTHY, Mysuru vide affidavit Dated 24-01-24
Sd/- VANSHIKA JOSHAN BATHIJA

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

IMKTA - PRE-SCHOOL TEACHER TRAINING
Diploma Courses for SSLC, PU or any Degree Candidates.
Regular/ Saturday / Correspondence Courses with practical training. www: imkta.in
ALPHA INTERNATIONAL SCHOOL @ Srirampura
Call: 7829937469
ONLINE TRAINING AVAILABLE

ಬೋಳು ತಲೆಯ ಸಮಸ್ಯೆಯೇ?



ಕೃತಕವಾದ ಕೂದಲನ್ನು ಜೋಡಿಸಲಾಗುವುದು
SMART HAIR FIXING
\# 574, 9th Cross, Anikethana Road, Kuvempunagar, Mysuru
MYSURU 9611028523 MANGALURU 9343142258

ವಿಠಲ್ ರಾಡ್ಸ್ ಪ್ರೈವೇಟ್ ಲಿಮಿಟೆಡ್
ಖಾಲಿ ಹುದ್ದೆ: 150+
DATA ENTRY OPERATOR
ಸಂಬಳ 10,000 + 5000 Incentive
ಸಂದರ್ಶನದ ಸಮಯ: 9.30 ರಿಂದ 5.30.
ವಿಳಾಸ: #42, JCK ಇಂಡಸ್ಟ್ರಿಯಲ್ ಪಾರ್ಕ್, ಮೆಟಗಳ್ಳಿ ಪೊಲೀಸ್, ಪ್ರೀತಿ ಗ್ರೆನೈಟ್ ಹತ್ತಿರ, ಕೆ.ಆರ್.ಎಸ್. ರಸ್ತೆ, ಮೈಸೂರು–570 016. ಕರೆ ಮಾಡಿ:
Mob: 8867064586

DTCP SITES FOR SALE
DTCP Sites Rs. 699 per sq.ft., Near Jayapura, H.D. Kote Road, Mysore.
9590491194, 9606783264

ಹೊಸ ಮನೆ ಮಾರಾಟಕ್ಕಿದೆ
30x40 North Face Ground & First Floor Near K.S.R.T.C Layout Iswarya Badavane Near Ring Road, J.P.Nagar, Mysore
9448271349

ಹೊಸ ಮನೆ ಮಾರಾಟಕ್ಕಿದೆ
ಮೈಸೂರಿನ ಹೆಬ್ಬಾಳ್ ಮೊದಲನೇ ಹಂತದ ಲಕ್ಷ್ಮೀಕಾಂತ ನಗರದಲ್ಲಿ 20x30 ಅಳತೆಯ ನಿವೇಶನದಲ್ಲಿ ಪಶ್ಚಿಮ ದಿಕ್ಕಿಗೆ ಇರುವ 4 ವರ್ಷದ Ground + 3 Floors ಮನೆ ಎಲ್ಲಾ ಆಧುನಿಕ ಸೌಕರ್ಯಗಳೊಡನೆ ಮಾರಾಟಕ್ಕಿದೆ ಬೆಲೆ 75 ಲಕ್ಷ (ನೆಗೋಷಿಯಬಲ್)
9980613758
7892354130

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 8880558064

40×60 SITE for SALE
MUDA - NORTH Facing
Rajeev Nagar 1st Stage Near Gupta Store, MYSORE
Rs. 1 Crore
Call : 9845286583
Immediate Settlement

ಸಾಲ / LOANS
* Housing Loan
* Construction Loan
* Mortgage Loan
Loans for MUDA, Corporation & Revenue Property.
77605-98705

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್
Mob: 9591815191

ಉದ್ಯೋಗ ಅವಕಾಶ
ಬಂದ ದಿನವೇ ಕೆಲಸ (ಮಾರ್ಕೆಟಿಂಗ್ ಅಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th SSLC, PUC, ITI, Any Degree ಪಾಸ್ / ಫೇಲ್ ಆದ ಯುವಕ/ ಯುವತಿಯರು ಇಂದೇ ಬೇಕಾಗಿದ್ದಾರೆ. ESI/PF ನೊಂದಿಗೆ ಊಟ ವಸತಿಯಿರುತ್ತದೆ.
ಸಂಬಳ+ಓಟಿ 15,200/- to 86,000/-
7619318801, 9035836473

ಬೇಕಾಗಿದ್ದಾರೆ
P.G ಯಲ್ಲಿ ಉಳಿದುಕೊಂಡು ಕೆಲಸ ಮಾಡಲು ಸಹಾಯಕ ಮಹಿಳೆ ಬೇಕಾಗಿದ್ದಾರೆ.
8970132554

WANTED
40x60 SITE AT VIJAYANAGARA 4th STAGE 2nd PHASE FOR COMMERCIAL USE. OWNERS PL CONTACT / MESSAGE, S. NAGARAJU
6363738196

WE ARE HIRING
Qualified Pharmacist
Qualification: B.Pharma / D.Pharma
RECEPTIONIST
Qualification: Any Degree
NURSING STAFF
Qualification: GNM / ANM / B.Sc.
For more information
Call now: 9972982665
Bhanavi Hospital, Mysore

SITE FOR SALE
36x48
Byrapur New Extension (Thriveninagar) T.Narasipura.
Rs. 2500 per sq.ft. Nego.
No Brokers. Contact:
Mob: 9449067640

SITE FOR SALE
30x40
MUDA Approved. Nirman Promoters, Nirmaan Nagar, Mosambayanahalli Road, Near Kalpavruksha, Raghavendra Swamy Temple, Chikkali, T.Narasipura Road, Mysore.
Rs. 1850 PER SQ.FT.
Mob: 9916939424

ಪ್ರಮಾಣ ಪತ್ರ
ಕೆ.ವಿ. ಶಶಿಧರ್ (ಆಧಾರ್ ಸಂಖ್ಯೆ: 5248 7024 9057), ಮನೆ ನಂ. 51, 1ನೇ ಕ್ರಾಸ್, ವಿಜಯನಗರ 2ನೇ ಹಂತ, ಮಹಾಜನ ಬಡಾವಣೆ, ಮೈಸೂರು–570 017ರಲ್ಲಿ ವಾಸವಾಗಿದ್ದು, ನಾನು ಪ್ರಮಾಣೀಕರಿಸುವುದೇನೆಂದರೆ, ನಮ್ಮ ಮಗ ಪ್ರಿಯದರ್ಶಿನಿ ನರ್ಸಿಂಗ್ ಹೋಮ್, ಮೈಸೂರು, ಇಲ್ಲಿ ದಿನಾಂಕ 24–12–2009ರಂದು ಜನಿಸಿದ್ದು, ನಮ್ಮ ಮಗನ ಜನನ ಪ್ರಮಾಣ ಪತ್ರಿಕೆಯಲ್ಲಿ ನಮೂದಿಸುವ ಸಂದರ್ಭದಲ್ಲಿ ದಿಗಂತ್ ಎಸ್. ಎಂದು ನಮೂದು ಮಾಡಿಸಿದ್ದು, ತದ ನಂತರ ಅವನ ಹೆಸರನ್ನು ಸಂವೇದ್ ಆರ್ಯನ್ ಎಸ್. ಎಂದು ಬದಲಾಯಿಸಿದ್ದು, ಸದ್ಯ ಅವನ ಆಧಾರ್ ಕಾರ್ಡ್ ಮತ್ತು ಜನನ ಪ್ರಮಾಣ ಪತ್ರಿಕೆಯಲ್ಲಿ ಸಂವೇದ್ ಆರ್ಯನ್ ಎಸ್. ಎಂದು ತಿದ್ದುಪಡಿ ಮಾಡಿಸಿರುತ್ತೇನೆ ಎಂದು ಈ ಮೂಲಕ ನೋಟರಿ ಎಸ್.ಎನ್. ಹೇಮಲತಾ ರವರ ಎದುರು ಪ್ರಮಾಣೀಕರಿಸಿರುತ್ತೇನೆ.
ಸಹಿ/– ಕೆ.ವಿ. ಶಶಿಧರ್

CANON & HP
REQUIRED
HARDWARE TECHNICIANS
Contact:
Mob: 8073393505

ತಕ್ಷಣ ಬೇಕಾಗಿದ್ದಾರೆ
ಬೆಂಗಳೂರು ಮತ್ತು ಮೈಸೂರಿನಲ್ಲಿರುವ ಕಂಪನಿ ಆಫೀಸ್ ಕೆಲಸಕ್ಕೆ 7, 10ನೇ, ಡಿಗ್ರಿ ಪಾಸ್/ಫೇಲ್ ಆದ ಗ್ರಾಮೀಣ ಯುವಕ–ಯುವತಿಯರಿಗೆ ವಸತಿಯೂಟದೊಂದಿಗೆ, ಸಂಬಳ: 18,000 ESI, PF ಸೌಲಭ್ಯದೊಂದಿಗೆ ಬಂದ ದಿನವೆ ಕೆಲಸ. ಸಂಪರ್ಕಿಸಿ:
8095109991
8095109998

ಬೇಕಾಗಿದ್ದಾರೆ
ಮೈಸೂರಿನ ಪೆಟ್ರೋಲ್ ಬಂಕ್‌ನಲ್ಲಿ ಕೆಲಸಕ್ಕಾಗಿ ಪುರುಷರು / ಮಹಿಳೆಯರು ಬೇಕಾಗಿದ್ದಾರೆ.
ಸಂಬಳ: 12,000. ಸಂಪರ್ಕಿಸಿ:
Mob: 6361424028

ಕೊಳ್ಳೇಗಾಲದ ಜ್ಯೋತಿಷ್ಯರು
ಜ್ಯೋತಿಷ್ಯ ರತ್ನ ಮೋಡಿ ಮಾಂತ್ರಿಕ ಪಂ॥ ಎಸ್.ಕೆ. ಪ್ರಶಾಂತ್ ಆಚಾರ್ಯ
ಮೊ: 9740947045
ಸ್ತ್ರೀ ಪುರುಷ ಪ್ರೇಮ, ಸಂತಾನ, ವಿವಾಹ, ದಾಂಪತ್ಯ ಸಮಸ್ಯೆ, ನಾಗದೋಷ, ಕುಜದೋಷ, ದುಷ್ಟಶಕ್ತಿ, ಪ್ರೇತಬಾಧೆ, ಸಾಲಬಾಧೆ, ವ್ಯಾಪಾರದಲ್ಲಿ ತೊಂದರೆ ತನ್ನವರೆ ತನಗೆ ಶತ್ರು ನಿಮ್ಮ ಯಾವುದೇ ಗುಪ್ತ ಹಾಗೂ ಕಠಿಣವಾದ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಮಾಡುತ್ತಾರೆ. ಸ್ಥಳ: ಹೋಟೆಲ್ ಗೋವರ್ಧನ, ಡಾ॥ ರಾಜ್‌ಕುಮಾರ್ ಪಾರ್ಕ್ ಹತ್ತಿರ, ಶ್ರೀ ಹರ್ಷ ರಸ್ತೆ (ಹೊಸ ಸುಮಂಗಲಿ ಸಿಲ್ಕ್ಸ್ ಹತ್ತಿರ), ಮೈಸೂರು.

ಕೊಳ್ಳೇಗಾಲದ ಜ್ಯೋತಿಷ್ಯರು
ಪಂ. ಎಸ್. ಕುಮಾರಸ್ವಾಮಿ (ಮೋಡಿ ಮಾಂತ್ರಿಕರು)
MOB: 9880583804
ಇವರು ಕೊಳ್ಳೇಗಾಲದ ಚೌಡಿ, ಭೂತರಾಯ ಅಘೋಚರ ಶಕ್ತಿಯಿಂದ ಸ್ತ್ರೀ ಪುರುಷ ಪ್ರೇಮ, ದಾಂಪತ್ಯ ಸಮಸ್ಯೆ, ಶತ್ರು ದೋಷ, ಸಾಲ ಬಾಧೆ, ಯಾವುದೇ ಸಮಸ್ಯೆಗಳಿಗೆ ಮೋಡಿ ಮಾಂತ್ರಿಕ ಶಕ್ತಿಯಿಂದ ಚೌಡಿ ಮತ್ತು ಭೂತರಾಯನ ಪ್ರಯೋಗದಿಂದ ಎರಡೇ ದಿನದಲ್ಲಿ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ವಿಳಾಸ: ಎಟಿಎಂ ಪಕ್ಕ, ಟಿಕೆಟ್ ಬುಕ್ಕಿಂಗ್ ಕೌಂಟರ್ ಹತ್ತಿರ (ರಿಲಾಯನ್ಸ್ ಮಾಲ್) (ಕೆ.ಎಸ್.ಆರ್.ಟಿ.ಸಿ) ಸಬರ್ಬ್ ಬಸ್ ಸ್ಟ್ಯಾಂಡ್, ಮೈಸೂರು–1

ಸೋಲಾರ್ ವಾಟರ್ ಹೀಟರ್
Solar Water Heater



ಸೇಲ್ಸ್, ಸರ್ವೀಸ್ ರಿಪೇರಿ, ಎಕ್ಸ್‌ಚೇಂಜ್ ಹಾಗೂ ಬಿಡಿ ಭಾಗಗಳಿಗಾಗಿ ಸಂಪರ್ಕಿಸಿ
Vinaykrishna
9611648636

MUDA App Site Kamadhenu Layout, Srirampura
30 x 40
East South Corner Site
Price - 68 Lakhs
Within Ring Road
8660105902

SITES FOR SALE JP Nagar Ring Road
20 x 30 - 17 Lakhs
30 x 40 - 33 Lakhs
Near Gurur Bus Stop, Ramabainagar, Mysore.
DTCP approved (Corporation limits)
1.5 Kms from JP Nagar Ring Road
8660105902

ಬೇಕಾಗಿದ್ದಾರೆ
1) ದೋಸೆ ಭಟ್ಟರು : 21,000
2) ಇಡ್ಲಿ ವಡೆ : 16,000
3) ಕಾಫಿ, ಟೀ ಕೌಂಟರ್ : 15,000
4) ಅಡುಗೆ ಭಟ್ಟರು : 24,000
ಅನುಭವವುಳ್ಳವರಿಗೆ ಆದ್ಯತೆ. ESI, PF ಸೌಲಭ್ಯವಿರುತ್ತದೆ. ಸಂಪರ್ಕಿಸಿ:
9986205777, 9916256503

FOR SALE
1) Commercial 50x80 Bogadi Road.
2) 30x40 Kandaya Layout
3) 20x30 Site Kuvempunagar
4) 30x50 H.D. Kote Road.
5) 10 Guntas farm land KRS Back Water
6) 40x70, Old house Vidyaranyapuram.
PRAKRUTHI PROPERTIES
9538690359, 9035990359

HOUSE FOR SALE
20x40 Duplex house for sale in Vinayaka Enclave, Near J.P. Nagar Ring Road.
33x40 corner site for sale in Sharada Layout (Shrinagar). Contact:
Mob: 9880344263

SITE FOR SALE
30x40, South face, MUDA site, Dattagalli.
Contact:
Mob: 8217042841

Document Lost
I, R. Keshavamurthy, #592, 8th Link Road, Alanahalli Post, Lalithamahal Nagar, Mysore-28, have lost allotment letter of Site No. 1973, Devanur 3rd Stage, Mysore. Finders please contact:
Mob: 9448186982

WANTED
Pharmacist (Fresher & only male) for Jayadeva Hospital, K.R.S. Road, Kumbarakoppal, Mysore. Qualificaton: D.Pharma or B.Pharma. Contact personally with resume. Contact:
Mob: 63642 16261

Rent-Lease-Sale
ಕುವೆಂಪು ನಗರ, ಹೆಬ್ಬಾಳು, ವಿಜಯನಗರ, ಸಿದ್ಧಾರ್ಥನಗರ ಸುತ್ತಮುತ್ತ ಬಾಡಿಗೆ–ಭೋಗ್ಯ–ಸೈಟು ಮನೆ ಕೊಳ್ಳಲು–ಮಾರಲು
7483894889

Aquaguard & Kent Sales and Service
Service Charge: 300/-
9901200444

Ads Posting Job
No Registration Fees
ನಿಮ್ಮ ಮನೆಯಿಂದ ನಿಮ್ಮ ಮೊಬೈಲ್ ಫೋನ್ ಮೂಲಕ ತಿಂಗಳಿಗೆ 20,000/– ರಿಂದ 30,000/– ಗಳಿಸಿ.
9731891409

ಸೈಟು ಬೇಕಾಗಿದೆ
30x40, E/F, N/F, S/F ಕೂಡಲೇ ರಿಜಿಸ್ಟ್ರೇಷನ್ ಮಾಡಿಕೊಳ್ಳುತ್ತೇವೆ. ಸಾತಗಳ್ಳಿ ಬಡಾವಣೆ, RMS ಲೇಔಟ್, ವಿದ್ಯಾಶಂಕರ್ ಲೇಔಟ್ ಪಕ್ಕಾ ದಾಖಲೆಗಳಿರುವವರು ಸಂಪರ್ಕಿಸಿ: ರಿಂಗ್ ರಸ್ತೆ ಒಳಗೆ ಇರುವವರು
9379928884
9880467085

WANTED
STAFF FOR REPUTED HOTEL IN METAGALLI HOUSE KEEPING, STEWARDS, FRONT OFFICE, ELECTRICAL & PLUMBING MAINTENANCE, CAPTAINS WITH ATTRACTIVE SALARY
9945707708

CATERING
SWAADHA SAMPADA CATERING SERVICES-VEG
6363436728

ಬೇಕಾಗಿದ್ದಾರೆ
ಮೈಸೂರಿನ ಆಲನಹಳ್ಳಿ ಬಡಾವಣೆ ಲಲಿತಾದ್ರಿಪುರ ರಸ್ತೆಯಲ್ಲಿ ಇರುವ, ಸಂಸ್ಥೆಗೆ 12 ಗಂಟೆ ಕೆಲಸ ಮಾಡಲು ಹಗಲು ಮತ್ತು ರಾತ್ರಿ ಪುರುಷ ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ. ವೇತನ ತಿಂಗಳಿಗೆ 14000/- ರೂ.ಗಳು ಊಟ, ವಾರದ ರಜೆ, ESI & PF ಇರುತ್ತದೆ. ವಯೋಮಿತಿ 50 ವರ್ಷ ಒಳಗಿರಬೇಕು ಮತ್ತು SSLC ಓದಿರಬೇಕು.
9731976148

ಬೇಕಾಗಿದ್ದಾರೆ
ಕರ್ನಾಟಕದಾದ್ಯಂತ ಮತ್ತು ಮೈಸೂರಿನಾದ್ಯಂತ ಪ್ರಸಿದ್ಧ MNC ಕಂಪನಿಗಳಿಗೆ ಕಂಪನಿ ಕೆಲಸಕ್ಕೆ ಆಫೀಸ್ ಕೆಲಸಕ್ಕೆ ಮತ್ತು ವರ್ಕ್ ಫ್ರಂ ಹೋಂ ಕೆಲಸಕ್ಕೆ ತಕ್ಷಣ ಯುವಕ, ಯುವತಿಯರು ಬೇಕಾಗಿದ್ದಾರೆ. ಯಾವುದೇ ಎಜ್ಯುಕೇಷನ್ ಯಾವುದೇ Age ಲಿಮಿಟ್ ಇಲ್ಲ. Salary (18000 to 38000rs) ಇರುತ್ತದೆ. ಹೆಚ್ಚಿನ ಮಾಹಿತಿಗೆ ಇಂದೆ ಸಂಪರ್ಕಿಸಿ. H.R. Madam
9886365585
8296278130

ತಕ್ಷಣ ಬೇಕಾಗಿದ್ದಾರೆ
ಗೋಕುಲಂ ಮತ್ತು ಕಾಳಿದಾಸ ರಸ್ತೆ ಸುತ್ತಮುತ್ತ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ. ಸಂಬಳ: 14500/- (8 hours) ESI & PF ಸೌಲಭ್ಯವಿರುತ್ತದೆ. ವಿದ್ಯಾರ್ಹತೆ : SSLC ಮೇಲ್ಪಟ್ಟು ವಯೋಮಿತಿ : 55 ವರ್ಷದೊಳಗೆ
9620777819
9620667819

ಬೇಕಾಗಿದೆ
ಹೋಟೆಲ್‌ಗೆ ಬೇಕಾಗಿರುವ Second Hand ಹೋಟೆಲ್ ಸಾಮಾಗ್ರಿಗಳು ಮತ್ತು ಬಂಕರ್ ಟೈಪ್ ಮಂಚಗಳು ಬೇಕಾಗಿದೆ.
9483508822

WANTED IMMEDIATELY
1) Account Assistant (Freshers can also apply)
2) Supervisor
3) Marketing Executives.
9901656307

ಕೆಲಸಕ್ಕೆ ಬೇಕಾಗಿದ್ದಾರೆ
ವಿದ್ಯಾರ್ಹತೆ: 7th, 10th, SSLC, PUC, ITI, Any Degree, Diploma, (Pass or Fail)
ಸ್ಯಾಲರಿ: 18,000-30,000
ಪುರುಷ ಅಭ್ಯರ್ಥಿಗೆ ಮಾತ್ರ ಅವಕಾಶ ತರಬೇತಿ ಸಮಯದಲ್ಲಿ ವೇತನ ಕೊಡಲಾಗುವುದು ಮಯಸ್ಸು 35 Below
9880151303

SITE FOR SALE
30X50 NORTH EAST CORNER SITE FOR SALE NEAR YELWALA MYSORE CLOSE TO NEW KUSHALNAGAR NH.
7348958463
9739111303

1300 sqft available
4th Main, 18th Cross, Ground Floor Any Banks/ Clinic/ Commercial shop ect.
9916851335

ಬೇಕಾಗಿದ್ದಾರೆ
ಕೆಲವು ಗಂಟೆಗಳ ಕಾಲ ವಯಸಾದ ಪುರುಷ ವ್ಯಕ್ತಿಗೆ, ಪುರುಷ ಅಥವ ಹುಡುಗ ಸಹಾಯಕರು ಬೇಕು (ಬೃಂದಾವನ ಬಡಾವಣೆ ಸುತ್ತಲೂ)
8310284504
8762854805

ಈ ತಕ್ಷಣವೇ ಬೇಕಾಗಿದ್ದಾರೆ
ಮೈಸೂರು, ಹೊಬ್ಳಾನ ಕಂಪನಿಯಲ್ಲಿ ಕೆಲಸ ಮಾಡಲು, ಹುಡುಗರು ಹುಡುಗಿಯರು, ಗಂಡಸರು, ಹೆಂಗಸರು, ಟೈಲರುಗಳು ಮತ್ತು ಹೆಲ್ಪರ್‌ಗಳು, ಸೆಕ್ಯೂರಿಟಿ ಗಾರ್ಡುಗಳು, ಡ್ರೈವರುಗಳು, ಐ.ಟಿ.ಐ. (ITI) ಆದವರು ಬೇಕಾಗಿದ್ದಾರೆ. (ESI & PF) ವಾರ ರಜೆ ಇರುತ್ತದೆ.
7795285485
8105249880

ಚಾಮುಂಡೇಶ್ವರಿ ಮ್ಯಾರೇಜ್ ಬ್ಯೂರೋ
Life Partner ಆಗಲು 50 ವರ್ಷ 55 ವರ್ಷ ವಿದವೆಗೆ ವರಬೇಕು (Cast No Bar) ಒಕ್ಕಲಿಗ, ಕುರುಬ, ಮಡಿವಾಳ, ಕುಂಬಾರ, ಕೂರ್ಗಿ, ಬಲಿಜನಾಯ್ಡು ತಮಿಳು, ಲಿಂಗಾಯತ, ಬ್ರಾಹ್ಮಣ, SC ಲೆಫ್ಟ್ Engg. ಹಾಗೂ ಮೊದಲನೆ ಮತ್ತು 2ನೆ ಮರು ಮದುವೆಯಾಗುವ ವಧೂವರರು ಫೋಟೋ ಹಾಗೂ ವಿವರ ವಾಟ್ಸ್‌ಪ್ ಮಾಡಿ ನೇರವಾಗಿ ಭೇಟಿ ಮಾಡಿ
8951241381

HOUSE FOR SALE
Size 20x30 Duplex House Dattagalli IIIrd Stage, Kanakadasa Nagara Mysuru
7996584561
7019323163

ಬೇಕಾಗಿದ್ದಾರೆ
ವೃದ್ಧರು ರೋಗಿಗಳನ್ನು ಆರೈಕೆ ಮಾಡಲು ಯುವಕ/ಯುವತಿಯರು, ಮಹಿಳೆಯರು, ವಿಧವೆ/ವಿಚ್ಛೇದಿತೆಯರು ಹೋಂ ನರ್ಸಿಂಗ್ ಕೆಲಸಕ್ಕಾಗಿ ತಕ್ಷಣ ಬೇಕಾಗಿದ್ದಾರೆ.. ಯಾವುದೇ ರೀತಿಯ ಶುಲ್ಕ ಇರುವುದಿಲ್ಲ (ನಮ್ಮಲ್ಲೇ ಉಳಿದುಕೊಳ್ಳುವವರಿಗೆ ಮಾತ್ರ ಅವಕಾಶ) ಸಂಬಳ ಉಚಿತ ಊಟ ವಸತಿಯೊಂದಿಗೆ 16000 ರಿಂದ 20000 ರವರೆಗೆ
7411304176
7411304177

ಕೆಲಸಕ್ಕೆ ಬೇಕಾಗಿದ್ದಾರೆ
ಕ್ಲೀನಿಂಗ್, ವಾಷಿಂಗ್, ಕಿಚ್ಚನ್ ಅಸಿಸ್ಟೆಂಟ್ ಉತ್ತಮ ಸಂಬಳ, ವಸತಿ ದೊರೆಯುತ್ತದೆ.
ಸ್ಥಳ: ದೇವೇಗೌಡ ಸರ್ಕಲ್ ಬನ್ನೂರು ರಿಂಗ್ ರಸ್ತೆ, ಮೈಸೂರು
8088950055

ಮನೆ ಬಾಡಿಗೆಗೆ
ವಿಜಯನಗರ 2ನೇ ಹಂತ, ಕೆ.ಡಿ.ಸರ್ಕಲ್ ಹತ್ತಿರ, ಮೈಸೂರು. ಉತ್ತರಕ್ಕೆ ಬಾಗಿಲು 25x30 ಅಳತೆ 1 ಹಾಲ್, 2 ಬೆಡ್ ರೂಂ ಅಡುಗೆ ಮನೆ, ಬಾತ್‌ರೂಮ್ ಅಟ್ಯಾಚ್ ಸೋಲಾರ್ ವ್ಯವಸ್ಥೆ ಇಂಡಿಪೆಂಡೆಂಟ್ ಅಡ್ವಾನ್ಸ್ 85000. ಬಾಡಿಗೆ 8500.00 (ಮಧ್ಯವರ್ತಿಗಳಿಗೆ ಅವಕಾಶವಿಲ್ಲ.)
9880359541
9481903626

FOR SALE
FARM LAND WITH AN AREA OF 27 ACRES 16 GUNTAS. HOLENARASIPURA TALUK HASSAN DISTRICT
9845073953
9845016564



ತಕ್ಷಣ ಬೇಕಾಗಿದ್ದಾರೆ
1) ಹೌಸ್ ಕೀಪಿಂಗ್–ಹುಡುಗರು/ ಮಹಿಳೆಯರು (ಒಂಟಿಕೊಪ್ಪಲ್, ಹಿನಕಲ್, ವಿಜಯನಗರ)
2) ಹೌಸ್‌ಕೀಪಿಂಗ್–ಹುಡುಗರು (ರಾತ್ರಿಯ ಪಾಳಿಯಲ್ಲಿ ಕೆಲಸ ಮಾಡಲು) ಒಂಟಿಕೊಪ್ಪಲ್, ವಿಜಯನಗರ
9739166772

ತಕ್ಷಣ ಬೇಕಾಗಿದ್ದಾರೆ
ಮೈಸೂರಿನಿಂದ ನಂಜನಗೂಡಿನ ಕಡಕೊಳ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಸೂಪರ್‌ವೈಸರ್ & ಗಾರ್ಡ್‌ಗಳು ಬೇಕಾಗಿದ್ದಾರೆ. ಕ್ಯಾಬ್ ಹಾಗೂ ಊಟ ತಿಂಡಿ ಸೌಲಭ್ಯವಿರುತ್ತದೆ. ವಿದ್ಯಾರ್ಹತೆ : SSLC ಮೇಲ್ಪಟ್ಟು
ಸಂಬಳ: ಸೂಪರ್‌ವೈಸರ್– 17800/-W/o (8hrs)
ಸಂಬಳ: ಗಾರ್ಡ್– 17300/-W/o (8hrs)
7006635122
9538567819

ಸೈಟುಗಳು ಮಾರಾಟಕ್ಕಿವೆ
ಕೆ.ಆರ್.ನಗರ ಪಟ್ಟಣದ ಮೈಸೂರು–ಹಾಸನ ಮುಖ್ಯ ರಸ್ತೆಗೆ ಹೊಂದಿಕೊಂಡಂತೆ 30x40 ಅಳತೆಯ 4 ಸೈಟುಗಳು ಮಾರಾಟಕ್ಕಿವೆ.
ಆಸಕ್ತರು ಸಂಪರ್ಕಿಸಿ:
8618626897

ಮೈಸೂರು ಮಿತ್ರ
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತು ಗಳು ವಿಶ್ವಾಸಪೂರ್ಣವೇ ಆದರೂ ಅವು ಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸ ಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಸೋಮವಾರ ಗುರುವಾರ ಶನಿವಾರ
ಪ್ರತಿ ಜಾಹೀರಾತಿಗೆ
ರೂ. 630 ಮಾತ್ರ

ಕರ್ನಾಟಕದ ಶಿಲ್ಪಿ ಗಣೇಶ್ ಭಟ್ ಕೆತ್ತನೆಯ 3ನೇ ರಾಮಲಲ್ಲಾ ಮೂರ್ತಿ ಫೋಟೋ ಬಹಿರಂಗ



ಬೆಂಗಳೂರು, ಜ.24– ಅಯೋಧ್ಯೆಯ ರಾಮಮಂದಿರಕ್ಕಾಗಿ ಕೆತ್ತಲಾದ ಮೂರನೇ ರಾಮಲಲ್ಲಾ ವಿಗ್ರಹದ ಫೋಟೋ ಬಹಿರಂಗಗೊಂಡಿದೆ. ಅಯೋಧ್ಯೆಯ ರಾಮ ಮಂದಿರದಲ್ಲಿ ಮೈಸೂರಿನ ಶಿಲ್ಪಿ ಅರುಣ್ ಯೋಗಿರಾಜ್ ಕೆತ್ತಿದ್ದ ರಾಮಲಲ್ಲಾನ ಮೂರ್ತಿಯನ್ನು ಪ್ರತಿಷ್ಠಾಪಿಸಲಾಗಿದೆ. ಎರಡೇ ದಿನದಲ್ಲಿ ಕೋಟಿಗೂ ಹೆಚ್ಚು ಭಕ್ತರು ದೇವರ ದರ್ಶನವನ್ನು ಪಡೆದಿದ್ದಾರೆ. ದೇವರ ದರ್ಶನ ಪಡೆಯಲು ಸಾಗರೋಪಾದಿಯಲ್ಲಿ ಭಕ್ತರು ಆಗಮಿಸುತ್ತಿದ್ದಾರೆ. ಹೀಗಾಗಿ ಈ ಸಂದಣಿಯನ್ನು ನಿಯಂತ್ರಿಸಲು ಸರ್ಕಾರ ಜಿಲ್ಲಾಡಳಿತ ಅಯೋಧ್ಯೆಗೆ ವಾಹನಗಳ ಪ್ರವೇಶವನ್ನು ನಿಷೇಧಿಸಿದೆ.

ರಾಮಲಲ್ಲಾ ಪ್ರಾಣ ಪ್ರತಿಷ್ಠಾಪನೆಯ ನಂತರ ರಾಜಸ್ಥಾನದ ಶಿಲ್ಪಿ ಸತ್ಯನಾರಾಯಣ ಪಾಂಡೆ ಕೆತ್ತಿರುವ ಮೂರ್ತಿಯ ಫೋಟೋವನ್ನು ನಿನ್ನೆ ಬಹಿರಂಗಪಡಿಸಲಾಗಿತ್ತು. ಇದೀಗ ಕರ್ನಾಟಕದ ಶಿಲ್ಪಿ ಗಣೇಶ್ ಭಟ್ ಅವರು ಕೆತ್ತಿರುವ ರಾಮಲಲ್ಲಾ ಮೂರನೇ ಮೂರ್ತಿಯ ಫೋಟೋವನ್ನು ಇದೀಗ ಬಹಿರಂಗಪಡಿಸಲಾಗಿದೆ. ಗಣೇಶ್ ಭಟ್ ಅವರು ಕೃಷ್ಣ ಶಿಲೆಯಲ್ಲೇ ಮೂರ್ತಿಯನ್ನು ಕೆತ್ತಿದ್ದಾರೆ. ಇದರಲ್ಲಿ, ಭಗವಾನ್ ರಾಮನ ಪಾದದ ಒಂದು ಬದಿಯಲ್ಲಿ ಹನುಮಂತನನ್ನು ಇನ್ನೊಂದು ಬದಿಯಲ್ಲಿ ಗರುಡನನ್ನು ಕೆತ್ತಲಾಗಿದೆ. ವಿಗ್ರಹ ಸುತ್ತಲೂ ವಿಷ್ಣುವಿನ ಅವತಾರಗಳನ್ನು ಕೆತ್ತಲಾಗಿದೆ. ಇದರಲ್ಲಿ ವಿಷ್ಣುವಿನ 10 ಅವತಾರಗಳ ಚಿತ್ರ 1– ಮತ್ಸ್ಯ, 2– ಕೂರ್ಮ, 3– ವರಾಹ, 4– ನರಸಿಂಹ, 5– ವಾಮನ್, 6– ಪರಶುರಾಮ, 7– ರಾಮ, 8– ಕೃಷ್ಣ, 9– ಬುದ್ಧ ಮತ್ತು 10ನೇ ಕಲ್ಕಿ ಅವತಾರವನ್ನು ಕಾಣಬಹುದು.

ಶೀಘ್ರ ಮತ್ತೆ ಮೈಸೂರು–ಕೊಚ್ಚಿ ವಿಮಾನ ಹಾರಾಟ



ಮೈಸೂರು, ಜ.24(ಎಂಕೆ)– ಸದ್ಯದಲ್ಲಿಯೇ ಮೈಸೂರು–ಕೇರಳದ ಕೊಚ್ಚಿ ನಡುವೆ ವಿಮಾನ ಹಾರಾಟ ಮರು ಆರಂಭವಾಗಲಿದೆ. ಮೈಸೂರು ಮಂಡಕಳ್ಳಿ ವಿಮಾನ ನಿಲ್ದಾಣದಿಂದ ಈಗಾಗಲೇ ಚೆನ್ನೈ, ಹೈದಾರಾಬಾದ್‌ಗೆ ವಿಮಾನಗಳು ಹಾರಾಟ ನಡೆಸುತ್ತಿದ್ದು, ಮೈಸೂರಿನಿಂದ ಕೊಚ್ಚಿ ಹಾಗೂ ಕೊಚ್ಚಿಯಿಂದ ಮೈಸೂರಿಗೆ ಸದ್ಯದಲ್ಲಿಯೇ ವಿಮಾನ ಹಾರಾಟ ಆರಂಭವಾಗಲಿದೆ. ಕೊಚ್ಚಿ ವಿಮಾನ ನಿಲ್ದಾಣದಲ್ಲಿ ಕೆಲ ಕಾಮಗಾರಿ ಹಿನ್ನೆಲೆಯಲ್ಲಿ ವಿಮಾನ ಹಾರಾಟ ಸ್ಥಗಿತಗೊಳಿಸಲಾಗಿತ್ತು. ಈಗ ಮತ್ತೆ ಕೊಚ್ಚಿಯಿಂದ ವಿಮಾನ ಹಾರಾಟ ಆರಂಭವಾಗಿದ್ದು, ಮೈಸೂರು– ಕೊಚ್ಚಿ, ಕೊಚ್ಚಿ–ಮೈಸೂರು–ತಿರುಪತಿ–ಮೈಸೂರು–ಕೊಚ್ಚಿ ನಡುವೆ ವಿಮಾನ ಹಾರಾಟ ಆರಂಭವಾಗಲಿದೆ ಎನ್ನಲಾಗಿದೆ. ಮೈಸೂರು–ಕೊಚ್ಚಿ ನಡುವೆ ವಿಮಾನ ಹಾರಾಟ ಸಂಬಂಧ ಕೊಚ್ಚಿ ವಿಮಾನ ನಿಲ್ದಾಣದಿಂದ ಪ್ರಕಟಣೆ ಮಾಡಲಾಗಿದೆ ಎನ್ನಲಾಗಿದೆ ಆದರೆ ಮೈಸೂರು ವಿಮಾನ ನಿಲ್ದಾಣಕ್ಕೆ ಯಾವುದೇ ಮಾಹಿತಿ ದೊರೆತಿಲ್ಲ ಎಂದು ಮೈಸೂರಿನ ವಿಮಾನ ನಿಲ್ದಾಣ ನಿರ್ದೇಶಕ ಅನೂಪ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಫೆ.8ರಂದು ವಿಧಾನಸೌಧದ ಮುಂಭಾಗ ಸಿಎಂ ಅವರಿಂದ ರಾಜ್ಯಮಟ್ಟದ ಜನಸ್ಪಂದನಾ



ಬೆಂಗಳೂರು, ಜ. 24–ಮುಖ್ಯಮಂತ್ರಿ ಸಿದ್ದ ರಾಮಯ್ಯ ಅವರು ಫೆಬ್ರವರಿ 8 ರಂದು ವಿಧಾನ ಸೌಧದ ಮುಂಭಾಗದಲ್ಲಿ ರಾಜ್ಯಮಟ್ಟದ ಜನ ಸ್ಪಂದನಾ ಕಾರ್ಯಕ್ರಮವನ್ನು ನಡೆಸಲಿದ್ದು, ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ, ಸ್ಥಳದಲ್ಲಿಯೇ ಪರಿಹಾರ ಸೂಚಿಸಲಿದ್ದಾರೆ.

ಇದಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್, ಇಂದು ಪೂರ್ವಸಿದ್ಧತಾ ಸಭೆ ನಡೆಸಿ, ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ಜನಸ್ಪಂದನಾ ಕಾರ್ಯ ಕ್ರಮವನ್ನು ಅತ್ಯಂತ ವ್ಯವಸ್ಥಿತವಾಗಿ ಆಯೋಜಿಸ ಬೇಕು. ಮುಖ್ಯಮಂತ್ರಿಯವರು ನಡೆಸುತ್ತಿರುವ ಎರಡನೇ ಜನಸ್ಪಂದನಾ ಕಾರ್ಯಕ್ರಮ ಇದಾಗಿದ್ದು, ಎಲ್ಲ ಇಲಾಖೆ ಗಳ ಕಾರ್ಯದರ್ಶಿಗಳು, ಇಲಾಖಾ ಮುಖ್ಯಸ್ಥರು ಹಾಜರಿದ್ದು, ವಿಶೇಷ ಆಸಕ್ತಿ ವಹಿಸಿ ಕುಂದು ಕೊರತೆ ನಿವಾರಣೆಗೆ ಕ್ರಮ ವಹಿಸಬೇಕೆಂದು ತಿಳಿಸಿದರು. ಜನಸ್ಪಂದನಾ ಕಾರ್ಯಕ್ರಮಕ್ಕೆ ಆಗಮಿಸುವ ವಿಶೇಷ ಚೇತನರು, ಹಿರಿಯನಾಗರಿಕರಿಗೆ ವಿಶೇಷ ವ್ಯವಸ್ಥೆಗಳನ್ನು ಮಾಡುವಂತೆ ಸೂಚಿಸಿದರು.

ಸ್ವಚ್ಛತೆ, ಕುಡಿಯುವ ನೀರು, ಲಘು ಉಪಾಹಾರ, ಊಟದ ವ್ಯವಸ್ಥೆಗಳನ್ನು ಮಾಡುವ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಕಳೆದ ಬಾರಿಯ ಜನ ಸ್ಪಂದನಾದಲ್ಲಿ ಸ್ವೀಕರಿಸಿದ ಅರ್ಜಿಗಳ ತ್ವರಿತ ವಿಲೇವಾರಿ ಮಾಡುವ ಬಗ್ಗೆ ಎಲ್ಲ ಇಲಾಖೆಗಳಿಗೆ ಪತ್ರ ಬರೆಯುವುದಾಗಿ ತಿಳಿಸಿದ ಅವರು ಕೆಡಿಪಿ ಸಭೆಯಲ್ಲಿಯೂ ಜನಸ್ಪಂದನಾ ಅರ್ಜಿ ವಿಲೇವಾರಿ ಪ್ರಗತಿ ಪರಿಶೀಲನೆ ನಡೆಸುವಂತೆ ಮುಖ್ಯ ಕಾರ್ಯದರ್ಶಿಗಳಿಗೆ ಮನವಿ ಮಾಡಲಾಗುವುದು ಎಂದು ತಿಳಿಸಿದರು. ಜನ ಸ್ಪಂದನಾಕ್ಕೆ ಆಗಮಿಸುವ ಜನರ ಅನುಕೂಲಕ್ಕಾಗಿ ಮೆಜೆಸ್ಟಿಕ್ ಬಸ್ ನಿಲ್ದಾಣ ಹಾಗೂ ರೈಲ್ವೆ ನಿಲ್ದಾಣಕ್ಕೆ ಉಚಿತ ಬಸ್ ವ್ಯವಸ್ಥೆ ಮಾಡಲು ಸೂಚಿಸಿದರು.

ವಿವಿಧ ಇಲಾಖೆಗಳ ಅರ್ಜಿ ಸ್ವೀಕಾರಕ್ಕೆ ಪ್ರತ್ಯೇಕ ಕೌಂಟರುಗಳನ್ನು ಸ್ಥಾಪಿಸಿ, ಅದಕ್ಕೆ ಅಗತ್ಯವಿರುವ ಎಲ್ಲ ಉಪಕರಣಗಳನ್ನೂ ಒದಗಿಸಲು ಹಾಗೂ ಸಿಬ್ಬಂದಿಯನ್ನೂ ನಿಯೋಜಿಸಲು ಇ–ಆಡಳಿತ ಇಲಾಖೆಗೆ ಸೂಚಿಸಿದರು. ಮನವಿದಾರರ ದೂರುಗಳನ್ನು ಪರಿಶೀಲಿಸಿ, ನಿಗದಿತ ಕೌಂಟರುಗಳಿಗೆ ತೆರಳಲು ಸೂಕ್ತ ಮಾರ್ಗದರ್ಶನ ನೀಡಲು ಪ್ರವೇಶ ದ್ವಾರದಲ್ಲಿಯೇ ಅಧಿಕಾರಿ, ಸಿಬ್ಬಂದಿಗಳ ಫೆಸಿಲಿಟೇಷನ್ ತಂಡವನ್ನು ನಿಯೋಜಿಸುವಂತೆ ನಿರ್ದೇಶನ ನೀಡಿದರು. ಅಂದು ವಿಧಾನಸೌಧದಲ್ಲಿ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಲು ಹಾಗೂ ಸಂಚಾರ ನಿರ್ವಹಣೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಕ್ರಮ ಕೈಗೊಳ್ಳಲು ಪೊಲೀಸ್ ಇಲಾಖೆಗೆ ತಿಳಿಸಿದರು. ಸಭೆಯಲ್ಲಿ ಮುಖ್ಯಮಂತ್ರಿಯವರ ಕಾರ್ಯದರ್ಶಿ ಡಾ. ಕೆ.ವಿ. ತ್ರಿಲೋಕಚಂದ್ರ ಇ–ಆಡಳಿತ ಇಲಾಖೆ ಕಾರ್ಯದರ್ಶಿ ಉಜ್ವಲ್‌ಕುಮಾರ್ ಘೋಷ್, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಕಾರ್ಯದರ್ಶಿ ಅಜಯ್ ನಾಗಭೂಷಣ್ ಮತ್ತು ವಿವಿಧ ಇಲಾಖೆಗಳ ಇತರ ಅಧಿಕಾರಿಗಳು ಭಾಗವಹಿಸಿದ್ದರು.

ಮಕ್ಕಳಿಗೂ ಕಡ್ಡಾಯದ ಹೆಲ್ಮೆಟ್ ಅರಿವು



ಮೈಸೂರಿನ ಸಿದ್ಧಾರ್ಥನಗರದಲ್ಲಿ ಮಕ್ಕಳಿಗೆ ಹೆಲ್ಮೆಟ್ ಹಾಗೂ ಸೇಫ್ಟಿ ಹಾರ್‌ನೆಸ್ ಕುರಿತು ಸಿದ್ಧಾರ್ಥನಗರ ಸಂಚಾರ ಠಾಣೆ ಪೊಲೀಸರಿಂದ ಅರಿವು ಮೂಡಿಸಲಾಯಿತು. ಇನ್ಸ್‌ಪೆಕ್ಟರ್ ಯೋಗೇಶ್, ಸಬ್ ಇನ್ಸ್‌ಪೆಕ್ಟರ್ ಕೆ.ರಘು ಉಪಸ್ಥಿತರಿದ್ದರು.

ಮೈಸೂರು, ಜ.24(ಎಂಕೆ)– ಮೈಸೂರು ನಗರ ಸಂಚಾರ ಪೊಲೀಸ್ ಹಾಗೂ ಸಿದ್ಧಾರ್ಥನಗರ ಸಂಚಾರ ಪೊಲೀಸ್ ಠಾಣೆ ವತಿಯಿಂದ ಒಂಬತ್ತು ತಿಂಗಳ ಮೇಲ್ಪಟ್ಟ ಮಕ್ಕಳಿಗೆ ಹೆಲ್ಮೆಟ್ ಹಾಗೂ ಸೇಫ್ಟಿ ಹಾರ್‌ನೆಸ್ ಕುರಿತು ಅರಿವು ಮೂಡಿಸಲಾಯಿತು.

ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ಮಹಾವೀರ್ ಜೈನ್ ಶಾಲೆ ಹಾಗೂ ಯುರೋ ಕಿಡ್ಸ್ ಕಿಂಡರ್ ಗಾರ್ಡನ್‌ನಲ್ಲಿ ಸಿದ್ಧಾರ್ಥನಗರ ಸಂಚಾರ ಪೊಲೀಸ್ ಠಾಣೆಯಲ್ಲಿ ಇನ್ಸ್‌ಪೆಕ್ಟರ್ ಪಿ.ಯೋಗೇಶ್ ಹಾಗೂ ಸಬ್ ಇನ್ಸ್‌ಪೆಕ್ಟರ್ ಕೆ.ರಘು ನೇತೃತ್ವದಲ್ಲಿ ಅರಿವು ಮೂಡಿಸಲಾಯಿತು. ಪೋಷಕರು ತಮ್ಮ ಮಕ್ಕಳನ್ನು ದ್ವಿಚಕ್ರವಾಹನದಲ್ಲಿ ಕರೆದುಕೊಂಡು ಬರುವಾಗ ಮಕ್ಕಳಿಗೂ ಹೆಲ್ಮೆಟ್ ಹಾಕಬೇಕು. ಪ್ರತಿಯೊಬ್ಬರ ಜೀವ ಅಮೂಲ್ಯವಾದುದ್ದಾಗಿದ್ದು, ಕಡ್ಡಾಯವಾಗಿ ಸಂಚಾರ ನಿಯಮ ಪಾಲಿಸಬೇಕು. ಹಾಗೆಯೇ ಶಾಲೆಗಳಲ್ಲಿ ಸಂಚಾರ ನಿಯಮ, ಹೆಲ್ಮೆಟ್ ಬಳಕೆಯ ಉಪಯುಕ್ತತೆ ಕುರಿತು ಮಕ್ಕಳಿಗೆ ತಿಳಿಸಿಕೊಡಬೇಕು ಎಂದು ಸೂಚಿಸಿದರು. ಸಿಬ್ಬಂದಿಗಳಾದ ತಿಮ್ಮರಾಯಪ್ಪ, ಉಮೇಶ್ ಮತ್ತಿತರರಿದ್ದರು.

ಜ.31ಕ್ಕೆ ಡಾ.ಸಿ.ಎನ್.ಮಂಜುನಾಥ್ ಅಧಿಕಾರಾವಧಿ ಅಂತ್ಯ

ಹೃದಯವಂತರು ಜಯದೇವ ಹೃದ್ರೋಗ ಆಸ್ಪತ್ರೆ ನಿರ್ದೇಶಕರಾಗಲಿ!


ಸಂಸ್ಥೆಯ ನಿರ್ದೇಶಕರ ಹುದ್ದೆಗಾಗಿ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ಬೆಂಗಳೂರಿನ ವೈದ್ಯಕೀಯ ಅಧೀಕ್ಷಕ ಡಾ.ಶ್ರೀನಿವಾಸ್, ಮೈಸೂರು ಆಸ್ಪತ್ರೆಯ ಡಾ. ಕೆ.ಎಸ್.ಸದಾನಂದ ಸೇರಿದಂತೆ ರಾಜ್ಯದ 23 ಹೃದ್ರೋಗ ತಜ್ಞರು ರೇಸ್‌ನಲ್ಲಿದ್ದಾರೆ



ಡಾ.ಸಿ.ಎನ್.ಮಂಜುನಾಥ್



ಮೈಸೂರು ಜಯದೇವ ಹೃದ್ರೋಗ ಆಸ್ಪತ್ರೆ



ಡಾ. ಸದಾನಂದ

ಮೈಸೂರು, ಜ. 24(ಆರ್‌ಕೆ)– ಬಡವ–ಬಲ್ಲಿದರೆಂಬ ಭೇದ–ಭಾವವಿಲ್ಲದೇ ಪ್ರತಿಯೊಬ್ಬ ಹೃದ್ರೋಗಿ ಪಾಲಿಗೂ ಸಂಜೀವಿನಿಯಾಗಿರುವ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯು ಬೆಂಗಳೂರು, ಮೈಸೂರು ಸೇರಿದಂತೆ ರಾಜ್ಯದಾದ್ಯಂತ ಗುಣಾತ್ಮಕ ಆರೋಗ್ಯ ಸೇವೆ ನೀಡುತ್ತಾ ಬರುತ್ತಿದೆ.

ಸಂಸ್ಥೆಯ ನಿರ್ದೇಶಕರಾಗಿ ಅಧಿಕಾರ ಚುಕ್ಕಾಣಿ ಹಿಡಿದು ಜನಸೇವೆಯೇ ಜನಾರ್ಧನ ಸೇವೆ ಎಂದು ಭಾವಿಸಿ ಲಕ್ಷಾಂತರ ಹೃದ್ರೋಗಿಗಳಿಗೆ ಚಿಕಿತ್ಸೆ ನೀಡಿ, ಅಮೂಲ್ಯ ಪ್ರಾಣ ಉಳಿಸಿದ್ದಲ್ಲದೇ ಸಂಸ್ಥೆಯ ಘನತೆಯನ್ನು ಉನ್ನತ ಮಟ್ಟಕ್ಕೇರಿಸುವಲ್ಲಿ ಸರಳ, ಸಜ್ಜನಿಕೆಯ ಡಾ. ಸಿ.ಎನ್. ಮಂಜುನಾಥ್ ಸಾಕಷ್ಟು ಪರಿಶ್ರಮಿಸಿದ್ದರು. ಅವರಿಗೆ ನೀಡಲಾದ ಹೆಚ್ಚುವರಿ ಅಧಿಕಾರಾವಧಿಯು ಇದೇ ಜನವರಿ 31ಕ್ಕೆ ಅಂತ್ಯಗೊಳ್ಳಲಿದೆ.

ರಾಜ್ಯ ರಾಜಧಾನಿ ಬೆಂಗಳೂರು, ಸಾಂಸ್ಕೃತಿಕ ನಗರಿ ಮೈಸೂರಿನ ಸಂಸ್ಥೆಯ ಆಸ್ಪತ್ರೆಗಳನ್ನು ಯಾವುದೇ ಖಾಸಗಿ ಆಸ್ಪತ್ರೆಗಳಿಗೂ ಕಡಿಮೆ ಇಲ್ಲದಂತೆ ಸ್ವಚ್ಛತೆ, ಸೇವೆಯಲ್ಲಿ ಗುಣಮಟ್ಟ ಕಾಯ್ದುಕೊಂಡು ಸಹಸ್ರಾರು ತೆರೆದ ಹೃದಯ ಶಸ್ತ್ರಚಿಕಿತ್ಸೆ, ಆಂಜಿಯೋಗ್ರಾಂ, ಆಂಜಿಯೋಪ್ಲಾಸ್ಟಿ ಪ್ರೊಸೀಜರ್‌ಗಳನ್ನು ಮಾಡಿ, ಲಕ್ಷಾಂತರ ರೋಗಿಗಳ ಹೃದಯ ತಪಾಸಣೆ, ಚಿಕಿತ್ಸೆ, ಸಲಹೆ ನೀಡುವ ಮೂಲಕ ಅಮೂಲ್ಯ ಪ್ರಾಣ ರಕ್ಷಿಸುವಲ್ಲಿ ಡಾ. ಮಂಜುನಾಥ್ ಅವರ ಸೇವೆ ಗಣನೀಯವಾದುದು.

"ಟ್ರೀಟ್‌ಮೆಂಟ್ ಫಸ್ಟ್–ಫೀ ನೆಕ್ಸ್ಟ್" ಪರಿಕಲ್ಪನೆಯೊಂದಿಗೆ ಆಸ್ಪತ್ರೆಗೆ ಬರುವ ಪ್ರತಿಯೊಬ್ಬ ರೋಗಿಗೆ ಮೊದಲು ಆರೋಗ್ಯ ತಪಾಸಣೆ ಮಾಡಿ, ಅಗತ್ಯ ಚಿಕಿತ್ಸೆ ಮೂಲಕ ಡಾ. ಮಂಜುನಾಥ್ ಲಕ್ಷಾಂತರ ಜನರ ಪ್ರಾಣ ಉಳಿಸುವಲ್ಲಿ ಯಶಸ್ವಿಯೂ ಆಗಿದ್ದಾರಲ್ಲದೆ, ಆಸ್ಪತ್ರೆಗಳಲ್ಲಿ ಕೆಲಸ ಮಾಡುವ ತಮ್ಮ ಸಹಪಾಠಿ ವೈದ್ಯರು ಹಾಗೂ ಸಿಬ್ಬಂದಿಯಲ್ಲೂ ಅದೇ ಮನೋಭಾವನೆಯನ್ನು ತುಂಬಿದ್ದಾರೆ. ಚಿಕಿತ್ಸೆ ನೀಡಿ ಪ್ರಾಣಾಪಾಯದಿಂದ ಪಾರು ಮಾಡುವ ಅವರು, ನಂತರವಷ್ಟೇ ಶುಲ್ಕ ಇತ್ಯಾದಿಗಳ ಬಗ್ಗೆ ಗಮನಹರಿಸುತ್ತಾರೆ. ಡಾ. ಮಂಜುನಾಥ್ ಹೃದಯವಂತಿಕೆ ಇನ್ನೊಬ್ಬರ ಹೃದಯ ಮಿಡಿತ ಅರ್ಥ ಮಾಡಿಕೊಂಡು ಸೇವೆ ಮಾಡುವ ಮನೋಭಾವನೆ ಈ ನಾಡಿನ ಲಕ್ಷಾಂತರ ಜನರ ಹೃದಯ ಗೆದ್ದಿದೆ.

ಅವರ ಸರಳತೆ, ಸಜ್ಜನಿಕೆ ಸ್ವಭಾವ, ಇನ್ನೊಬ್ಬರ ನೋವಿಗೆ ಸ್ಪಂದನೆ, ಶಿಸ್ತು–ಸಂಯಮ, ನಾಯಕತ್ವ ಗುಣ, ಆಡಳಿತದಲ್ಲಿ ಪಾರದರ್ಶಕತೆ, ಕರ್ತವ್ಯ ನಿಷ್ಠೆಯು ಜಯದೇವ ಹೃದ್ರೋಗ ಆಸ್ಪತ್ರೆಗಳ ಘನತೆ ಹೆಚ್ಚಿಸಲು ಸಹಕಾರಿಯಾಗಿದೆಯಲ್ಲದೇ, ಸರ್ಕಾರಕ್ಕೂ ಒಳ್ಳೆಯ ಹೆಸರು ತಂದು ಕೊಟ್ಟಿದೆ. ಅದೇ ಕಾರಣಕ್ಕಾಗಿ ಈ ರಾಜ್ಯದಲ್ಲಿ ಹಲವು ಹೃದ್ರೋಗ ತಜ್ಞರಿದ್ದರೂ ಸರ್ಕಾರಗಳು ಅವಧಿ ಮುಕ್ತಾಯವಾದರೂ ಎರಡು ಬಾರಿ ಡಾ.ಸಿ.ಎನ್. ಮಂಜುನಾಥ್ ಅವರು ನಿರ್ದೇಶಕರಾಗಿ ಮುಂದುವರಿಯಲು ಹೆಚ್ಚುವರಿ ಅವಧಿಗೆ ಅವಕಾಶ ನೀಡಿದ್ದನ್ನು ಇಲ್ಲಿ ಸ್ಮರಿಸಬಹುದು.

ಇದೀಗ ಜನವರಿ 31ಕ್ಕೆ ಅವರ ಹೆಚ್ಚುವರಿ ಅವಧಿ ಅಂತ್ಯಗೊಳ್ಳುತ್ತಿರುವುದರಿಂದ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ಮುಂದಿನ ನಿರ್ದೇಶಕರ ಹುದ್ದೆಗೆ ಸರ್ಕಾರ ಅರ್ಜಿ ಆಹ್ವಾನಿಸಿದ್ದು, ಬೆಂಗಳೂರಿನ ಜಯದೇವ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ. ಶ್ರೀನಿವಾಸ್, ಮೈಸೂರು ಆಸ್ಪತ್ರೆಯ ಮೆಡಿಕಲ್ ಸೂಪರಿಂಟೆಂಡೆಂಟ್ ಆಗಿ ಡಾ. ಸಿ.ಎನ್. ಮಂಜುನಾಥ್ ಅವರ ಆಶಯದಂತೆ ಸೇವಾನಿರತ ಹೃದ್ರೋಗ ತಜ್ಞ ಡಾ. ಕೆ.ಎಸ್.ಸದಾನಂದ ಸೇರಿದಂತೆ ಒಟ್ಟು 23 ಮಂದಿ ಹೃದ್ರೋಗ ತಜ್ಞರು ಅರ್ಜಿ ಸಲ್ಲಿಸಿದ್ದಾರೆ. ಡಾ.ಸಿ.ಎನ್. ಮಂಜುನಾಥ್ ನಂತರ ಸಂಸ್ಥೆಯ ಚುಕ್ಕಾಣಿ ಹಿಡಿಯುವವರಿಗೆ ಸೇವಾ ಮನೋಭಾವ, ವೃತ್ತಿ ಬದ್ಧತೆ, ಪಾರದರ್ಶಕತೆ, ಹೃದಯವಂತಿಕೆ ಇರಬೇಕು, ಬಡವ–ಬಲ್ಲಿದ, ಮೇಲು–ಕೀಳು ಎನ್ನದೇ ಜಾತಿಯ ಗೀಳು ಅಂಟಿಸಿಕೊಳ್ಳದೇ ಜನರ ಭಾವನೆಗಳಿಗೆ ಸ್ಪಂದಿಸಿ ರೋಗ ಗುಣಪಡಿಸುವ ಮತ್ತು ಪ್ರಾಣ ಉಳಿಸುವ ಮಿಡಿತ ಹೊಂದಿರುವ ಸಮರ್ಥ ವೈದ್ಯರನ್ನು ಸರ್ಕಾರ ಅವರ ಸೇವಾ ಹಿರಿತನ, ಅರ್ಹತೆ, ವೃತ್ತಿಪರತೆಯನ್ನು ಪರಿಗಣಿಸಿ ನಿರ್ದೇಶಕ ಹುದ್ದೆಗೆ ನೇಮಿಸುವುದೊಳಿತು ಎಂದು ಹಲವರು ತಿಳಿಸಿದ್ದಾರೆ. ಸೇವಾ ಮನೋಭಾವನೆ, ಸಂಸ್ಥೆಯ ಹಿತಕಾಯುವ ಅರ್ಹರಿಗೆ ಆದ್ಯತೆ ನೀಡಿದರೆ ಜನರಿಗೆ ನೈಜ ಸೇವೆ ಸಾಧ್ಯ, ಸರ್ಕಾರಕ್ಕೂ ಒಳ್ಳೆಯ ಹೆಸರು ಬರುತ್ತದೆ. ಡಾ.ಸಿ.ಎನ್. ಮಂಜುನಾಥ್ ಅವರು ಕಾಪಾಡಿಕೊಂಡು ಬಂದ ಸೇವಾ ಶ್ರೇಷ್ಠತೆಯೂ ಮುಂದುವರೆಯುತ್ತದೆ ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

ಒಂದು ವೇಳೆ ಒತ್ತಡಗಳಿಗೆ ಮಣಿದು ಹಣ ಬಲಕ್ಕೋ, ರಾಜಕೀಯ ಕಾರಣಕ್ಕೋ, ಜಾತಿ ಲೆಕ್ಕಾಚಾರ ಇಲ್ಲವೇ ಪ್ರಭಾವಕ್ಕೆ ಕಟ್ಟುಬಿದ್ದು ನಿರ್ದೇಶಕರನ್ನು ನೇಮಿಸಿದ್ದೇ ಆದರೆ, ಜಯದೇವ ಹೃದ್ರೋಗ ಸಂಸ್ಥೆಯ ಸೇವಾ ಗುಣಮಟ್ಟ ಕುಸಿದು, ಕ್ರಮೇಣ ಇತರೆ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗಳಂತಾಗುವ ಅಪಾಯವಿದೆ ಎಂದು ಆತಂಕ ವ್ಯಕ್ತಪಡಿಸುತ್ತಿರುವ ನಾಗರಿಕರು, ಸರ್ಕಾರ ಈ ವಿಷಯದಲ್ಲಿ ಸರ್ಕಾರ ಸೂಕ್ತ ನಿರ್ಧಾರ ಕೈಗೊಳ್ಳುವ ವಿಶ್ವಾಸದಲ್ಲಿದ್ದಾರೆ.

ಡಾ. ಸಿ.ಎನ್. ಮಂಜುನಾಥ್ ಅವರ ಸಲಹೆ, ಮಾರ್ಗದರ್ಶನದಂತೆ ಸೇವಾ ಮನೋಭಾವನೆಯಿಂದ ಮೈಸೂರಿನ ಜಯದೇವ ಹೃದ್ರೋಗ ಆಸ್ಪತ್ರೆಯನ್ನು ಮುನ್ನಡೆಸಿಕೊಂಡು ಹೋಗುತ್ತಿರುವ ಡಾ. ಕೆ.ಎಸ್. ಸದಾನಂದ, ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ನಿರ್ಮಿಸಿದ ಮೈಸೂರಿನ ಜಯದೇವ ಆಸ್ಪತ್ರೆಯ ಪ್ರತಿಷ್ಠೆ ಎತ್ತಿಹಿಡಿಯುವ ವಿಶ್ವಾಸವನ್ನು ಹಲವರು ವ್ಯಕ್ತಪಡಿಸಿದ್ದಾರೆ.

ಪಂಚತಾರಾ ಆಸ್ಪತ್ರೆ ಆಗಬೇಕೆಂಬ ನನ್ನ ಕನಸು ನನಸಾಗಿದೆ: ಡಾ.ಸಿ.ಎನ್.ಮಂಜುನಾಥ್ ಹೆಮ್ಮೆ ನುಡಿ

ಮೈಸೂರು, ಜ. 24(ಆರ್‌ಕೆ)– ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ಆಸ್ಪತ್ರೆಗಳನ್ನು ಪಂಚತಾರಾ ಖಾಸಗಿ ಆಸ್ಪತ್ರೆಗಳಂತೆ ಮಾಡಬೇಕೆಂಬ ನನ್ನ ಕನಸು ನನಸಾಗಿದೆ ಎಂದು ಸಂಸ್ಥೆಯ ನಿರ್ದೇಶಕ ಡಾ. ಸಿ.ಎನ್. ಮಂಜುನಾಥ್ ತಿಳಿಸಿದ್ದಾರೆ. ಜನವರಿ 31ರಂದು ತಮ್ಮ ಅಧಿಕಾರಾವಧಿ ಮುಕ್ತಾಯಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ತಮ್ಮನ್ನು ಸಂಪರ್ಕಿಸಿದ 'ಮೈಸೂರು ಮಿತ್ರ'ನಿಗೆ ಪ್ರತಿಕ್ರಿಯೆ ನೀಡಿದ ಅವರು, ಕಳೆದ 16 ವರ್ಷಗಳಿಂದ ನಾನು ಜಯದೇವ ಆಸ್ಪತ್ರೆ ನಿರ್ದೇಶಕನಾಗಿ ಸೇವೆ ಸಲ್ಲಿಸಲು ಅವಕಾಶ ನೀಡಿದ ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು. 300 ಹಾಸಿಗೆ ಇದ್ದ ಆಸ್ಪತ್ರೆಗಳಲ್ಲೀಗ ಸಾವಿರ ಹಾಸಿಗೆಯ ಸುಸಜ್ಜಿತ ಸೌಲಭ್ಯಗಳಿವೆ. ನನ್ನ ಅವಧಿಯಲ್ಲಿ ಶೇ. 500ರಷ್ಟು ಅಭಿವೃದ್ಧಿಯಾಗಲು ಸರ್ಕಾರ ನೀಡಿದ ಪ್ರೋತ್ಸಾಹ ಕಾರಣ. ದಕ್ಷಿಣ ಏಷ್ಯಾದಲ್ಲೇ ಅತೀ ದೊಡ್ಡ ಹೃದ್ರೋಗ ಸಂಸ್ಥೆಯಾದ ನಮ್ಮ ಆಸ್ಪತ್ರೆಯನ್ನು ಪಂಚತಾರಾ ಖಾಸಗಿ ಆಸ್ಪತ್ರೆಯನ್ನಾಗಿಸಬೇಕೆಂಬ ಕನಸು ನನ್ನದಾಗಿದ್ದು, ಅದು ನನಸಾಗಿದೆ ಎಂದು ಅವರು ನುಡಿದರು. ಈವರೆಗೆ 75 ಲಕ್ಷ ಹೊರರೋಗಿಗಳ ಚಿಕಿತ್ಸೆ 8 ಲಕ್ಷ ಶಸ್ತ್ರಚಿಕಿತ್ಸೆ ಮಾಡಿದ್ದೇವೆ. 2010ರಲ್ಲಿ ಮೈಸೂರು ಆಸ್ಪತ್ರೆ ಆರಂಭಿಸಿದೆವು. ಬೆಂಗಳೂರಿನ ಮಲ್ಲೇಶ್ವರಂ, ಇಎಸ್‌ಐ ಆಸ್ಪತ್ರೆಗಳಲ್ಲೂ ಸಂಸ್ಥೆಯ ಘಟಕ ತೆರೆದಿದ್ದೇವೆ. ಕಲ್ಯಾಣ ಕರ್ನಾಟಕದ ಕಲಬುರ್ಗಿಯಲ್ಲಿ ನಿರ್ಮಿಸುತ್ತಿರುವ ಜಯದೇವ ಆಸ್ಪತ್ರೆ ಕಟ್ಟಡ ಕಾಮಗಾರಿ 2024ರ ಏಪ್ರಿಲ್‌ನಲ್ಲಿ ಪೂರ್ಣಗೊಳ್ಳಲಿದೆ. ಆಸ್ಪತ್ರೆಗೆ ನಿಜವಾದ ವಿಐಪಿಗಳೆಂದರೆ ಬಡ ರೋಗಿಗಳು. ಅತೀ ಹೆಚ್ಚು ಹೃದ್ರೋಗ ತಜ್ಞರನ್ನು ಹೊಂದಿರುವ ಆಸ್ಪತ್ರೆ ನಮ್ಮದಾಗಿರುವುದು ನನಗೆ ತೃಪ್ತಿ ತಂದಿದೆ ಎಂದು ಡಾ. ಮಂಜುನಾಥ್ ಮನದಾಳದಿಂದ ನುಡಿದರು. ನನ್ನ ಅವಧಿ ಮುಗಿಯುತ್ತಿದೆ. ಮುಂದುವರಿಸುವಂತೆ ಒತ್ತಾಯ ಮಾಡುವ ಜಾಯಮಾನ ನನ್ನದಲ್ಲ. ಅದನ್ನು ನಿರ್ಧರಿಸುವುದು ಸರ್ಕಾರಕ್ಕೆ ಬಿಟ್ಟದ್ದು, ಈಗಾಗಲೇ ಹೊಸ ನಿರ್ದೇಶಕರ ನೇಮಕ ಮಾಡುವ ಪ್ರಕ್ರಿಯೆ ನಡೆಯುತ್ತಿದೆ. ಒಟ್ಟಾರೆ ಉತ್ತಮ ಸೇವಾ ಮನೋಭಾವನೆ ಇರುವ ನಿರ್ದೇಶಕರು ಸಂಸ್ಥೆಯ ಚುಕ್ಕಾಣಿ ಹಿಡಿದು ಬಡರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಿ, ಜನರ ಪ್ರಾಣ ಉಳಿಸುವಂತಾದರೆ ನಮ್ಮ ಪ್ರಯತ್ನ ಸಾರ್ಥಕವಾಗುತ್ತದೆ ಎಂದು ಅವರು ತಿಳಿಸಿದರು.

ಲೋಕಸಭಾ ಚುನಾವಣೆಯಲ್ಲಿ ಏಕಾಂಗಿ ಸ್ಪರ್ಧೆ: ಮಮತಾ ಘೋಷಣೆ

'ಇಂಡಿಯಾ' ಒಕ್ಕೂಟದಲ್ಲಿ ಸೀಟು ಹಂಚಿಕೆ ವಿಷಯದಲ್ಲಿ ಒಡಕು



ಮಮತಾ ಬ್ಯಾನರ್ಜಿ

ಕೊಲ್ಕೋತಾ: ವಿರೋಧ ಪಕ್ಷಗಳ ಇಂಡಿಯಾ ಮೈತ್ರಿಕೂಟಕ್ಕೆ ಭಾರೀ ಹಿನ್ನಡೆಯಾಗಿದ್ದು, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಪಶ್ಚಿಮ ಬಂಗಾಳದಲ್ಲಿ ತೃಣಮೂಲ ಕಾಂಗ್ರೆಸ್ ಪಕ್ಷವು ಏಕಾಂಗಿಯಾಗಿ ಸ್ಪರ್ಧಿಸಲಿದೆ ಎಂದು ಘೋಷಿಸಿದ್ದಾರೆ.

ಇಂಡಿಯಾ ಮೈತ್ರಿಕೂಟದ ಪ್ರಮುಖ ಪಕ್ಷವಾದ ಕಾಂಗ್ರೆಸ್‌ನೊಂದಿಗಿನ ಸೀಟು ಹಂಚಿಕೆ ಮಾತುಕತೆಯು ವಿಫಲಗೊಂಡಿರುವುದರಿಂದ ಮಮತಾ ಬ್ಯಾನರ್ಜಿ ಮಹತ್ವದ ಲೋಕಸಭಾ ಚುನಾವಣೆಯಲ್ಲಿ ಏಕಾಂಗಿಯಾಗಿ ಸ್ಪರ್ಧಿಸುವ ನಿರ್ಧಾರವನ್ನು ಕೈಗೊಂಡಿದ್ದಾರೆ ಎಂದು ಹೇಳಲಾಗಿದೆ.

ನಾನು ಅವರಿಗೆ ನೀಡಿದ ಎಲ್ಲ ಪ್ರಸ್ತಾವನೆಗಳನ್ನೂ ಅವರು ತಿರಸ್ಕರಿಸಿದ್ದಾರೆ. ಹೀಗಾಗಿ ನಾವು ಪಶ್ಚಿಮ ಬಂಗಾಳದಲ್ಲಿ ಏಕಾಂಗಿಯಾಗಿ ಸ್ಪರ್ಧಿಸುವ ನಿರ್ಧಾರಕ್ಕೆ ಬಂದಿದ್ದೇವೆ ಎಂದು ಮಮತಾ ಬ್ಯಾನರ್ಜಿ ಸ್ಪಷ್ಟಪಡಿಸಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ನಡೆಯಲಿರುವ ಕಾಂಗ್ರೆಸ್ ಪಕ್ಷದ ಭಾರತ್ ಜೋಡೊ ನ್ಯಾಯ ಯಾತ್ರೆಯ ಯೋಜನೆಯ ಕುರಿತು ಕಾಂಗ್ರೆಸ್ ತನಗೆ ಮಾಹಿತಿಯನ್ನೇ ನೀಡಿಲ್ಲ ಎಂದೂ ಟಿಎಂಸಿ ವರಿಷ್ಠೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸೌಜನ್ಯಕ್ಕಾದರೂ ಅವರು ಪಶ್ಚಿಮ ಬಂಗಾಳದಲ್ಲಿನ ಯಾತ್ರೆ ಕುರಿತು ನನಗೆ ಮಾಹಿತಿ ನೀಡಿಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದ್ದಾರೆ. ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಆಡಳಿತಾರೂಢ ಬಿಜೆಪಿಯ ವಿರುದ್ಧ ಐಕ್ಯತಾ ರಂಗವನ್ನು ರಚಿಸುವ ವಿರೋಧ ಪಕ್ಷಗಳ ಪ್ರಯತ್ನಕ್ಕೆ ಮಮತಾ ಬ್ಯಾನರ್ಜಿ ನಿರ್ಧಾರದಿಂದ ತೀವ್ರ ಧಕ್ಕೆಯಾಗಿದೆ.

ತೃಣಮೂಲ ಕಾಂಗ್ರೆಸ್ ಬಂಗಾಳದ 42 ಲೋಕಸಭಾ ಸ್ಥಾನಗಳಿಗೆ ತನ್ನ ಸ್ವಂತ ಬಲದ ಮೇಲೆ ಚುನಾವಣೆಯನ್ನು ಎದುರಿಸಲಿದೆ ಮತ್ತು ಫಲಿತಾಂಶಗಳು ಪ್ರಕಟವಾದ ನಂತರವೇ ಕಾಂಗ್ರೆಸ್ ಜೊತೆ ಪ್ಯಾನ್–ಇಂಡಿಯಾ ಮೈತ್ರಿಯನ್ನು ಪರಿಗಣಿಸುತ್ತದೆ ಎಂದು ಮಮತಾ ತಿಳಿಸಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ ಯಾವುದೇ ಮೈತ್ರಿ ಇಲ್ಲ. ಇಂಡಿಯಾ ಮೈತ್ರಿ ಒಕ್ಕೂಟ ಇತರ ರಾಜ್ಯಗಳಲ್ಲಿ ಆಯಾ ಪಕ್ಷಗಳ ನೇತೃತ್ವದಲ್ಲಿ ನಡೆಯಲಿದೆ. ಆದರೆ ಪಶ್ಚಿಮ ಬಂಗಾಳದಲ್ಲಿ ಯಾವುದೇ ಮೈತ್ರಿ ಇಲ್ಲ. ಇಂಡಿಯಾ ಒಕ್ಕೂಟದ ಯಾವುದೇ ನಿಯಮಗಳು, ಮಾರ್ಗಸೂಚಿಗಳು ಪಶ್ಚಿಮ ಬಂಗಾಳಕ್ಕೆ ಅನ್ವಯವಾಗುವುದಿಲ್ಲ ಎಂದು ಮಮತಾ ಬ್ಯಾನರ್ಜಿ ಸ್ಪಷ್ಟಪಡಿಸಿದ್ದಾರೆ.

ಇದರ ಜೊತೆಗೆ ಕಾಂಗ್ರೆಸ್‌ಗೆ ಮತ್ತೊಂದು ಶಾಕ್ ನೀಡಿದ್ದಾರೆ. ಇಂಡಿಯಾ ಮೈತ್ರಿ ಒಕ್ಕೂಟದ ಕುರಿತು ಲೋಕಸಭೆ ಚುನಾವಣೆ ಫಲಿತಾಂಶದ ಬಳಿಕ ನಿರ್ಧರಿಸಲಾಗುತ್ತದೆ ಎಂದಿದ್ದಾರೆ. ಈ ಮೂಲಕ ಮೈತ್ರಿ ಪರವಾಗಿ ಫಲಿತಾಂಶ ಬಂದರೆ, ಅಥವಾ ಮೈತ್ರಿ ಒಕ್ಕೂಟಕ್ಕೆ ಸರ್ಕಾರ ರಚನೆಗೆ ತಮ್ಮ ಅವಶ್ಯಕತೆ ಇದ್ದರೆ, ಮೈತ್ರಿ ಭಾಗವಾಗುವ ಹೊಸ ಸೂತ್ರ ಘೋಷಿಸಿದ್ದಾರೆ.

ಮಲ್ಲಿಕಾರ್ಜುನ ಖರ್ಗೆ ಆಪ್ತ ಬಿಜೆಪಿ ಸೇರ್ಪಡೆ



ಬೆಂಗಳೂರು, ಜ.24– ಮಲ್ಲಿಕಾರ್ಜುನ ಖರ್ಗೆ ಅವರ ಆಪ್ತ ಕಾಂಗ್ರೆಸ್ ತೊರೆದು ಬಿಜೆಪಿ ಸೇರ್ಪಡೆಯಾಗಿದ್ದಾರೆ. ಖರ್ಗೆ ಅವರ ಅತ್ಯಾಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದ ನಿವೃತ್ತ ಕೆಎಎಸ್ ಅಧಿಕಾರಿ ರುದ್ರಯ್ಯ ಕಾಂಗ್ರೆಸ್ ತೊರೆದು ಬಿಜೆಪಿ ಸೇರಿದ್ದಾರೆ.

ಲೋಕಸಭೆ ಚುನಾವಣೆಗೆ ದೇಶದಲ್ಲಿ ಅಖಾಡ ಸಿದ್ಧವಾಗುತ್ತಿದೆ. ಈ ಬಾರಿ ಶತಾಯಗತಾಯ ಬಿಜೆಪಿಯನ್ನು ಹಣಿಯಲು ವಿರೋಧ ಪಕ್ಷಗಳು ಒಂದಾಗಿ ಇಂಡಿಯಾ ಮೈತ್ರಿಕೂಟ ರಚಿಸಿಕೊಂಡಿವೆ. ಈ ಮೈತ್ರಿಕೂಟದ ಅಧ್ಯಕ್ಷರನ್ನಾಗಿ ಮಲ್ಲಿಕಾರ್ಜುನ ಖರ್ಗೆಯವರನ್ನು ಆಯ್ಕೆ ಮಾಡಲಾಗಿದೆ. ಆದರೆ ಮಲ್ಲಿಕಾರ್ಜುನ್ ಖರ್ಗೆ ಅವರಿಗೆ ತವರು ಕ್ಷೇತ್ರದಲ್ಲೇ ಬಿಗ್ ಶಾಕ್ ನೀಡಲಾಗಿದೆ. ಅದು ಮಲ್ಲಿಕಾರ್ಜುನ್ ಖರ್ಗೆ ಅವರ ಆಪ್ತ ಕಾಂಗ್ರೆಸ್ ತೊರೆದು ಬಿಜೆಪಿ ಸೇರ್ಪಡೆಯಾಗಿದ್ದಾರೆ. ಬುಧವಾರ ಬೆಳಿಗ್ಗೆ 11.30ಕ್ಕೆ ಮಲ್ಲೇಶ್ವರಂನಲ್ಲಿರುವ ಜಗನ್ನಾಥ ಭವನದಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮತ್ತು ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ್ ನೇತೃತ್ವದಲ್ಲಿ ಬಿಜೆಪಿ ಸೇರ್ಪಡೆಯಾಗಿದ್ದಾರೆ. ಈ ವೇಳೆ ಸಂಸದ ಎಸ್. ಮುನಿಸ್ವಾಮಿ, ಶಾಸಕ ಡಾ.ಶಿವರಾಜ್ ಪಾಟೀಲ್ ಮತ್ತು ವಿಧಾನಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ಉಪಸ್ಥಿತರಿದ್ದರು.

ದಲಿತ ಸಮುದಾಯದ ನಾಯಕರಾಗಿರುವ ರುದ್ರಯ್ಯ ಅವರು ನೀರಾವರಿ ಇಲಾಖೆಯಲ್ಲಿ ಹಿರಿಯ ಅಧಿಕಾರಿಯಾಗಿ ಸೇವೆ ಸಲ್ಲಿಸಿದ್ದರು. ನಿವೃತ್ತಿ ಬಳಿಕ ಕಾಂಗ್ರೆಸ್ ಸೇರ್ಪಡೆಯಾಗಿದ್ದರು. 2023ರ ವಿಧಾನಸಭಾ ಚುನಾವಣೆ ವೇಳೆ ಲಿಂಗಸಗೂರು ಕ್ಷೇತ್ರದಿಂದ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿಯಾಗಿದ್ದರು. ಆದರೆ ಟಿಕೆಟ್ ಸಿಗದ ಹಿನ್ನೆಲೆಯಲ್ಲಿ ಪಕ್ಷೇತರರಾಗಿ ಸ್ಪರ್ಧಿಸಿದ್ದರು. ಇನ್ನು ತಮಗೆ ಟಿಕೆಟ್ ತಪ್ಪಲು ಮಲ್ಲಿಕಾರ್ಜುನ್ ಖರ್ಗೆ ಅವರೇ ಕಾರಣ ಎಂದು ಕಾಂಗ್ರೆಸ್ ತೊರೆಯಲು ನಿರ್ಧರಿಸಿದ್ದಾರೆ ಮಾತುಗಳು ಕೇಳಿಬಂದಿದ್ದವು. ಆದರೆ ಯಾವ ಪಕ್ಷಕ್ಕೆ ಸೇರುತ್ತಾರೆ ಎಂಬುವುದು ಖಚಿತಪಡಿಸಿರಲಿಲ್ಲ. ಇದೀಗ ಕಮಲ ಪಾಳಯ ಸೇರಿದ್ದಾರೆ.

ಅಹವಾಲು ಸಲ್ಲಿಸುವ ತರಾತುರಿ: ಸಿಎಂ ಸಿದ್ದರಾಮಯ್ಯ ನಿವಾಸದಲ್ಲಿ ನೂಕುನುಗ್ಗಲು



ಮೈಸೂರು, ಜ.24(ಎಂಕೆ)– ನಿಗಮ ಮಂಡಳಿಗಳಲ್ಲಿ ಸ್ಥಾನ, ವರ್ಗಾವಣೆ, ಅನುದಾನ ಬಿಡುಗಡೆ, ಬಾಕಿ ಬಿಲ್ ಬಿಡುಗಡೆ ಸೇರಿದಂತೆ ಹಲವು ಬೇಡಿಕೆಗಳಿಗಾಗಿ ಸ್ಥಳೀಯ ಶಾಸಕರು, ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಮುಖ್ಯಮಂತ್ರಿ ನಿವಾಸಕ್ಕೆ ಬುಧವಾರ ಸಂಜೆ ಮುಗಿ ಬಿದ್ದಿದ್ದರಿಂದ ಭಾರೀ ನೂಕುನುಗ್ಗಲು ಉಂಟಾಯಿತು.

ಮೈಸೂರಿನ ಶಾರದಾದೇವಿ ನಗರದಲ್ಲಿರುವ ತಮ್ಮ ನಿವಾಸಕ್ಕೆ ಸಂಜೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮಿಸುತ್ತಿದ್ದಂತೆ ತಮ್ಮ ಮನವಿ ಪತ್ರಗಳನ್ನು ಹಿಡಿದು ಕಾದಿದ್ದ ಸಾವಿರಾರು ಮಂದಿ ಏಕಾಏಕಿ ಮುಗಿಬಿದ್ದರು. ಇದರಿಂದ ಗಂಟೆಗೂ ಹೆಚ್ಚು ಕಾಲ ಗೊಂದಲದ ವಾತಾವರಣ ಸೃಷ್ಟಿಯಾಯಿತಲ್ಲದೆ ತಳ್ಳಾಡುತ್ತಿದ್ದವರನ್ನು ನಿಯಂತ್ರಿಸಲು ಪೊಲೀಸರು ಹರಸಾಹಸವನ್ನೇ ಮಾಡಬೇಕಾಯಿತು.

ಅಹವಾಲು ಸ್ವೀಕಾರ: ನಿವಾಸದಲ್ಲಿ ತಮ್ಮ ರೂಂನಲ್ಲಿ ಸಾಕಷ್ಟು ಜನರ ಅಹವಾಲು ಸ್ವೀಕರಿಸಿದ ಸಿಎಂ ಸಿದ್ದರಾಮಯ್ಯ ಬೇಡಿಕೆ ಈಡೇರಿಸುವ ಭರವಸೆ ನೀಡಿದರು. ಹಾಗೆಯೇ ಮೈಸೂರು ನಗರದಲ್ಲಿ ಕಾನೂನು–ಸುವ್ಯವಸ್ಥೆ, ಜಿಲ್ಲಾಡಳಿತದ ಕಾರ್ಯವೈಖರಿ ಬಗ್ಗೆಯೂ ವಿಚಾರಿಸಿದರು. ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ, ಕೆ.ಆರ್.ನಗರ ಶಾಸಕ ರವಿಶಂಕರ್, ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಮಾಜಿ ಶಾಸಕರಾದ ಎಂ.ಕೆ.ಸೋಮಶೇಖರ್, ಹೆಚ್.ಪಿ. ಮಂಜುನಾಥ್, ಕಾಂಗ್ರೆಸ್ ಮುಖಂಡರಾದ ಕೆ.ಮರೀಗೌಡ, ಕೃಷ್ಣಕುಮಾರ್ ಸಾಗರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಇನ್ನೆರಡು ದಿನದಲ್ಲಿ ಪಟ್ಟಿ ಬಿಡುಗಡೆ: ನಿಗಮ ಮಂಡಳಿಗಳ ಅಧ್ಯಕ್ಷರ ಪಟ್ಟಿ ಈಗಾಗಲೇ ಅಂತಿಮವಾಗಿದ್ದು, ಇನ್ನೆರಡು ದಿನಗಳಲ್ಲಿ ಪ್ರಕಟಿಸುವ ಸಾಧ್ಯತೆ ಇದೆ ಎಂದು ಕೆಲ ಮುಖಂಡರು 'ಮೈಸೂರು ಮಿತ್ರ'ನಿಗೆ ತಿಳಿಸಿದರು. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ಅಧ್ಯಕ್ಷರಾಗಿ ಕೆ. ಮರೀಗೌಡ ಅವರನ್ನು ನೇಮಕ ಮಾಡಲಾಗಿದೆ ಎಂದು ಕೆಲವರು ಮಾತ ನಾಡಿಕೊಳ್ಳುತ್ತಿದ್ದರು. ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದಿಂದ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಸ್ಥಾನ ಆಕಾಂಕ್ಷಿಯಾಗಿರುವ ಕೃಷ್ಣ ಕುಮಾರ್ ಸಾಗರ್, ನಿಗಮ ಮಂಡಳಿಗಳ ಅಧ್ಯಕ್ಷರ ಪಟ್ಟಿ ಈಗಾಗಲೇ ಅಂತಿಮವಾಗಿದೆ. ಕಡೇ ಹಂತದಲ್ಲಿ ಯಾವ ರೀತಿ ಬದಲಾವಣೆಯಾಗು ವುದೋ ಗೊತ್ತಿಲ್ಲ. ಸದ್ಯದಲ್ಲಿಯೇ ಪ್ರಕಟವಾಗಲಿದೆ ಎಂದರು.

ಮಾತಿನ ಚಕಮಕಿ: ಸಿಎಂ ನಿವಾಸದೊಳಗೆ ನಡೆದ ಬಾರೀ ನೂಕಾಟ–ತಳ್ಳಾಟದಲ್ಲಿ ಕೆಲವರು ಪೊಲೀಸರೊಂದಿಗೆ ಮಾತಿನ ಚಕಮಕಿ ನಡೆಸಿದರು. ಮತ್ತೆ ಕೆಲ ಕಾರ್ಯಕರ್ತರು ತಮ್ಮರೊಡನೆಯೇ ಜಗಳಕ್ಕೆ ಬಿದ್ದ ಘಟನೆಯೂ ನಡೆಯಿತು. ಸಂಜೆ 5.30 ರಿಂದ ರಾತ್ರಿ 8 ಗಂಟೆಗೆ ವರೆಗೆ ಅಹವಾಲು ಸ್ವೀಕರಿಸಿದ ಸಿಎಂ, ನಂತರ ಖಾಸಗಿ ಕಾರ್ಯಕ್ರಮವೊಂದಕ್ಕೆ ತೆರಳಿದರು.

150 ಕೆರೆಗಳಿಗೆ ನೀರು ತುಂಬಿಸುವ ಮಹತ್ವದ ಯೋಜನೆಗೆ

ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ

ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸುವುದು ನಮ್ಮ ಸರ್ಕಾರದ ಆದ್ಯತೆ: ಸಿದ್ದರಾಮಯ್ಯ



ಪಿರಿಯಾಪಟ್ಟಣ ತಾಲೂಕಿನ ಮುತ್ತಿನ ಮುಳ್ಳುಸೋಗೆ ಗ್ರಾಮದ ಬಳಿ 79 ಗ್ರಾಮಗಳ 150 ಕೆರೆ–ಕಟ್ಟೆಗಳಿಗೆ ನೀರು ತುಂಬಿಸುವ ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು.

ಬೈಲಕುಪ್ಪೆ, ಜ.24–ಕುಡಿಯುವ ನೀರಿನ ಸಮಸ್ಯೆ ನಿವಾರಿಸಲು ಇಡೀ ರಾಜ್ಯದಲ್ಲಿ ಕೆರೆಗಳಿಗೆ ನೀರು ತುಂಬಿಸುವ ಕಾರ್ಯ ಮಾಡಲಾಗುತ್ತಿದೆ. ಇದರಿಂದ ಅಂತರ್ಜಲ ಮಟ್ಟ ಸುಧಾರಿಸಿ, ಜನ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಬಗೆಹರಿಯುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಪಿರಿಯಾಪಟ್ಟಣ ತಾಲೂಕಿನ ಕೊಪ್ಪ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಪಿರಿಯಾಪಟ್ಟಣ ತಾಲೂಕಿನ ಮುತ್ತಿನ ಮುಳ್ಳುಸೋಗೆ ಗ್ರಾಮದ ಬಳಿ ಕಾವೇರಿ ನದಿಯಿಂದ ನೀರೆತ್ತಿ 79 ಗ್ರಾಮಗಳ 150 ಕೆರೆ–ಕಟ್ಟೆಗಳಿಗೆ ನೀರು ತುಂಬಿಸುವ ಯೋಜನೆಗೆ ಚಾಲನೆ ನೀಡಿ ಅವರು ಮಾತನಾಡಿದರು. 2017ರಲ್ಲಿ ನಾನು ಈ ಯೋಜನೆಗೆ ಚಾಲನೆ ನೀಡಿದ್ದೆ. ಪಿರಿಯಾಪಟ್ಟಣ ತಾಲೂಕಿನ ಅನೇಕ ಗ್ರಾಮಗಳಲ್ಲಿ ಕುಡಿಯುವ ನೀರಿಗೆ ತೊಂದರೆ ಇದೆ. ಈ ಯೋಜನೆಯಿಂದ 150 ಕೆರೆಗಳಿಗೆ ನೀರು ತುಂಬಿಸುವುದರಿಂದ ಅಂತರ್ಜಲ ಮಟ್ಟ ಸುಧಾರಿಸಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಯುತ್ತದೆ. ಇದರಿಂದ 79 ಗ್ರಾಮಗಳ 93 ಸಾವಿರ ಜನರಿಗೆ ಅನುಕೂಲವಾಗಲಿದೆ ಎಂದು ಅವರು ಹೇಳಿದರು.

ನಮ್ಮ ಸರ್ಕಾರ ನುಡಿದಂತೆ ನಡೆದಿದೆ. ನಾವು ನೀರಾವರಿ ಯೋಜನೆಗೆ ಪ್ರತಿ ವರ್ಷ 10 ಸಾವಿರ ಕೋಟಿ ಖರ್ಚು ಮಾಡುವುದಾಗಿ ವಾಗ್ದಾನ ಮಾಡಿದ್ದೆವು, ಅದರಂತೆ 5 ವರ್ಷಗಳಲ್ಲಿ 56 ಸಾವಿರ ಕೋಟಿ ಖರ್ಚು ಮಾಡಿದೆವು. ರಾಜ್ಯದ 223 ತಾಲೂಕುಗಳಲ್ಲಿ ಈಗ ಬರಗಾಲ ಇದೆ. ಆದರೂ ಜನರಿಗೆ ನೀರಿನ ಸಮಸ್ಯೆ ಆಗದಂತೆ ಕಾರ್ಯ ನಿರ್ವಹಿಸಿದ್ದೇವೆ. ಬರ ಪರಿಹಾರ ನೀಡುವಂತೆ ಕೇಂದ್ರಕ್ಕೆ ಮನವಿ ಸಲ್ಲಿಸಿದ್ದೇವೆ. ಆದರೆ ಇನ್ನೂ ಪರಿಹಾರ ಬಿಡುಗಡೆ ಆಗಿಲ್ಲ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಎಲ್ಲಾ ಧರ್ಮದ, ಎಲ್ಲಾ ಜಾತಿಯ ಜನರು ಒಂದು ಕುಟುಂಬದಂತೆ ಇರಬೇಕು. ಚುನಾವಣಾ ಪೂರ್ವದಲ್ಲಿ ಘೋಷಣೆ ಮಾಡಿದ್ದ ಐದು ಗ್ಯಾರಂಟಿಗಳನ್ನು ಜಾರಿಗೆ ತಂದಿದ್ದೇವೆ. ಈ ಗ್ಯಾರಂಟಿಗಳಿಗೆ 38 ಸಾವಿರ ಕೋಟಿ ಹಾಗೂ ಮುಂದಿನ ವರ್ಷದಲ್ಲಿ 58 ಸಾವಿರ ಕೋಟಿ ರೂಗಳನ್ನು ಖರ್ಚು ಮಾಡುತ್ತೇವೆ. 4.5 ಕೋಟಿ ಜನರಿಗೆ ಪ್ರತಿ ತಿಂಗಳು 4 ರಿಂದ 5 ಸಾವಿರ ಮೌಲ್ಯದ ಸೌಲಭ್ಯಗಳು ಸಿಗುತ್ತಿವೆ ಎಂದು ಅವರು ತಮ್ಮ ಸರ್ಕಾರದ ಕೊಡುಗೆಗಳನ್ನು ವಿವರಿಸಿದರು.

ಇಡೀ ದೇಶಕ್ಕೆ ಮಾದರಿ: ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಇಡೀ ದೇಶಕ್ಕೆ ಮಾದರಿಯಾದ ಯೋಜನೆಗಳ ರೂಪಿಸಿದ್ದೇವೆ. ಕೆರೆಗಳಿಗೆ ನೀರು ತುಂಬಿಸಿ ಅಂತರ್ಜಲ ಹೆಚ್ಚಿಸುವ ಕೆಲಸವನ್ನು ಮಾಡುತ್ತಿದ್ದೇವೆ. ರೈತರಿಗೆ ಯಾವುದೇ ಸಂಬಳ, ರಜೆ, ಪ್ರಮೋಷನ್, ಪಿಂಚಣಿ ಇಲ್ಲ. ಆದ್ದರಿಂದ ಅವರು ಬೆಳೆ ಬೆಳೆಯಲು ನೀರನ್ನು ನೀಡಿದರೆ ಉತ್ತಮ ಬೆಳೆಗಳನ್ನು ಬೆಳೆದು ಉತ್ತಮ ಜೀವನ ನಡೆಸಲು ಸಹಕಾರಿಯಾಗುತ್ತದೆ. ನಮ್ಮ ಸರ್ಕಾರ ರೈತ ಪರವಾದ ಸರ್ಕಾರ. ನಾವು ಚುನಾವಣೆಗೂ ಮುಂಚೆ ನೀಡಿದ್ದ ಐದು ಗ್ಯಾರಂಟಿಗಳನ್ನು ಜಾರಿಗೆ ತಂದು ನುಡಿದಂತೆ ನಡೆದಿದ್ದೇವೆ ಎಂದು ನುಡಿದರು.

ಇಂದು ಮಹಿಳೆಯರು ಸರ್ಕಾರಿ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣ ಮಾಡುತ್ತಿದ್ದಾರೆ. ಪ್ರತಿ ಮನೆಗೆ 200 ಯುನಿಟ್‌ವರೆಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ. 1.6 ಕೋಟಿ ಮಹಿಳೆಯರಿಗೆ ಪ್ರತಿ ತಿಂಗಳು 2000 ರೂ. ನೀಡಲಾಗುತ್ತಿದೆ. ಪ್ರತಿ ಬಿಪಿಎಲ್ ಕುಟುಂಬಗಳ ಪ್ರತಿ ಸದಸ್ಯರಿಗೆ 5 ಕೆಜಿ ಅಕ್ಕಿ ಹಾಗೂ 5 ಕೆಜಿ ಅಕ್ಕಿಗೆ ಹಣವನ್ನು ನೀಡಲಾಗುತ್ತಿದೆ. ಪದವಿ ಓದಿರುವ ನಿರುದ್ಯೋಗಿ ವಿದ್ಯಾರ್ಥಿಗಳಿಗೆ ಪ್ರತಿ ಮಾಹೆ 3000 ರೂ ಹಾಗೂ ಡಿಪ್ಲೊಮಾ ಮಾಡಿರುವವರಿಗೆ ಮಾಸಿಕ 1500 ರೂ.ಗಳನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು.

ನಮ್ಮ ಸರ್ಕಾರ ಕನ್ನಡಕ್ಕೆ ಹೆಚ್ಚಿನ ಒತ್ತು ನೀಡುತ್ತಿದೆ. ಕನ್ನಡದಲ್ಲಿ ನಾಮಫಲಕಗಳನ್ನು ಹಾಕುವಂತೆ ಆದೇಶ ಮಾಡಲಾಗಿದೆ. ಮೇಕೆದಾಟು ಯೋಜನೆಯನ್ನು ಜಾರಿಗೆ ತರಲು ಪಾದಯಾತ್ರೆಯನ್ನು ಮಾಡಿದೆವು. ಈ ಪ್ರಕರಣ ಸುಪ್ರೀಂಕೋರ್ಟ್‌ನಲ್ಲಿ ಇದೆ. ನಮ್ಮ ನೀರು ನಮ್ಮ ಹಕ್ಕು. ಈ ಬಗ್ಗೆ ಹೋರಾಟ ಮಾಡುತ್ತೇವೆ ಎಂದರು.

ವರ್ಷಕ್ಕೆ 2 ಕೋಟಿ ಉದ್ಯೋಗ ಕೊಡ್ತೀವಿ ಅಂದ ನರೇಂದ್ರ ಮೋದಿ ಕೆಲ್ಸ ಕೊಟ್ರಾ: ಈಗ ವೈಫಲ್ಯ ಮುಚ್ಚಿಕೊಳ್ಳಲು ಶ್ರೀರಾಮನ ಮುಂದಿಡ್ತಿದ್ದಾರೆ

● ಮುಖ್ಯಮಂತ್ರಿ ಸಿದ್ದರಾಮಯ್ಯ ಟೀಕಾಪ್ರಹಾರ ● ಮಹಾತ್ಮಗಾಂಧಿ ಹೇಳಿದ ರಘುಪತಿ ರಾಘವ ರಾಜಾರಾಮನನ್ನು ನಾವು ಪೂಜಿಸುತ್ತೇವೆ

ಬೈಲಕುಪ್ಪೆ,ಜ.24– ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಮಾಡ್ತೀವಿ ಎಂದಿದ್ದ ಪ್ರಧಾನಿ ನರೇಂದ್ರಮೋದಿ ಸಂಪೂರ್ಣ ವಿಫಲರಾಗಿದ್ದಾರೆ. ಹತ್ತು ವರ್ಷದಲ್ಲಿ 20 ಕೋಟಿ ಉದ್ಯೋಗ ಕೊಡಬೇಕಿತ್ತು. ಅದು ಆಗಲಿಲ್ಲ. ಈ ವೈಫಲ್ಯ ಮುಚ್ಚಿಕೊಳ್ಳಲು ಶ್ರೀರಾಮನನ್ನು ಮುಂದಿಡುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಲೇವಡಿ ಮಾಡಿದ್ದಾರೆ.

ಪಿರಿಯಾಪಟ್ಟಣ ತಾಲೂಕಿನ 79 ಗ್ರಾಮಗಳ 150 ಕೆರೆ–ಕಟ್ಟೆಗಳಿಗೆ ಕಾವೇರಿ ನದಿಯಿಂದ ನೀರು ತುಂಬಿಸುವ ಯೋಜನೆಯನ್ನು ಮುತ್ತಿನಮುಳ್ಳುಸೋಗೆಯಲ್ಲಿ ಉದ್ಘಾಟಿಸಿ, ಮಾತನಾಡಿದರು. ಮಹಾತ್ಮಗಾಂಧಿ ಹೇಳಿದ ರಘು ಪತಿ ರಾಘವ ರಾಜಾ ರಾಮನನ್ನು ನಾವು ಪೂಜಿಸುತ್ತೇವೆ, ಭಜಿಸುತ್ತೇವೆ. ಜನ ದ್ರೋಹವನ್ನು ಬಚ್ಚಿಟ್ಟುಕೊಳ್ಳಲು ಶ್ರೀರಾಮನನ್ನು ಮುಂದಿಟ್ಟು ರಾಜಕೀಯ ಮಾಡುತ್ತಿರುವ ಬಿಜೆಪಿಯನ್ನು ಬೆಂಬಲಿಸಬೇಡಿ ಎಂದು ಕರೆ ನೀಡಿದರು.

ರಾಜ್ಯದ ಜನ ಪ್ರತಾಪ್ ಸಿಂಹ ಸೇರಿ 25 ಮಂದಿ ಎಂಪಿಗಳನ್ನು ಗೆಲ್ಲಿಸಿದರು. ಒಬ್ಬೇ ಒಬ್ಬ ಬಿಜೆಪಿ ಸಂಸದರು ರಾಜ್ಯಕ್ಕೆ ಒಂದೇ ಒಂದು ರೂಪಾಯಿ ಬರ ಪರಿಹಾರ ತರಲಿಲ್ಲ. ಮಿಸ್ಟರ್ ಪ್ರತಾಪ್ ಸಿಂಹ, ಏಕೆ ಒಂದೇ ಒಂದು ರೂಪಾಯಿ ತರಲಿಲ್ಲ. ಇಷ್ಟು ಎಂಪಿಗಳಿದ್ದು ನಾಚಿಕೆ ಆಗುವುದಿಲ್ಲವೇ ನಿಮಗೆ ಎಂದು ಖಾರವಾಗಿ ಪ್ರಶ್ನಿಸಿದರು.

ದೇವೇಗೌಡರು ಈಗ ಪ್ರಧಾನಿ ಮೋದಿ ಮತ್ತು ಬಿಜೆಪಿ ಜತೆ ತಮ್ಮ ಅಸ್ತಿತ್ವಕ್ಕಾಗಿ ಹೊಂದಾಣಿಕೆ ಮಾಡಿಕೊಂಡಿದ್ದಾರೆ. ಪ್ರಧಾನಿಗೆ ಹೇಳಿ ರಾಜ್ಯದ ಪಾಲಿನ ಬರ ಪರಿಹಾರವನ್ನು ದೊರಕಿಸಿ ಕೊಡಲಿ. ಜಾತ್ಯತೀತ ಎಂದು ಪಕ್ಷದ ಹೆಸರಿಟ್ಟುಕೊಂಡು ಈಗ ಬಿಜೆಪಿ ಜತೆ ಹೊಂದಾಣಿಕೆ ಮಾಡಿಕೊಂಡಿದ್ದಾರೆ ಎಂದು ಸಿಎಂ ಲೇವಡಿ ಮಾಡಿದರು.

ಅಧ್ಯಕ್ಷತೆ ವಹಿಸಿದ್ದ ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್ ಮಾತನಾಡಿ, ಇಂದು ಉದ್ಘಾಟನೆ ಮಾಡಿದ ಕೆರೆಗಳಿಗೆ ನೀರು ತುಂಬಿಸುವ ಕಾರ್ಯಕ್ರಮ ಈ ತಾಲೂಕಿಗೆ ಹೆಚ್ಚು ಉಪಯೋಗವಾಗುತ್ತದೆ. ಈ ಯೋಜನೆಯನ್ನು 2017ರಲ್ಲಿ ಅಂದೂ ಮುಖ್ಯಮಂತ್ರಿಗಳಾಗಿದ್ದ ಸಿದ್ದರಾಮಯ್ಯ ಅವರು ಅನುಮೋದನೆ ನೀಡಿ ಶಂಕುಸ್ಥಾಪನೆ ಮಾಡಿದ್ದರು. ಇಂದು ಈ ಯೋಜನೆ ಅವರೇ ಉದ್ಘಾಟಿಸಿದ್ದಾರೆ. 150 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯಿಂದ ತಾಲೂಕಿನ ಬರ ಕಡಿಮೆಯಾಗಲಿದೆ ಎಂದರು.

ಮೊದಲಿಗೆ ಸಂವಿಧಾನ ಪೀಠಿಕೆಯ ಪ್ರತಿಜ್ಞಾವಿಧಿಯನ್ನು ಬೋಧಿಸಲಾಯಿತು. ಸರ್ಕಾರದ ಹಲವು ಯೋಜನೆಗಳ ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ, ಸಣ್ಣ ನೀರಾವರಿ ಸಚಿವ ಬೋಸರಾಜು, ಶಾಸಕರಾದ ಕೆ.ಹರೀಶ್‌ಗೌಡ, ಡಿ.ರವಿಶಂಕರ್, ಮಂತರ್‌ಗೌಡ, ವಿಧಾನಪರಿಷತ್ ಸದಸ್ಯರಾದ ಡಿ.ತಿಮ್ಮಯ್ಯ, ಮರಿತಿಬ್ಬೇಗೌಡ, ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ.ಗಾಯತ್ರಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಹಾಲು ಉತ್ಪಾದಕರ ಸಂಘದ ಉಪಾಧ್ಯಕ್ಷನ ಕೊಲೆ ಪ್ರಕರಣ: ಕಾರ್ಯದರ್ಶಿ ಬಂಧನ

ನಂಜನಗೂಡು : ಹಾಲು ಉತ್ಪಾದಕರಿಗೆ ನೀಡಬೇಕಾದ ಹಣ ಪಾವತಿಸುವಂತೆ ಬುದ್ಧಿವಾದ ಹೇಳಿದ ಉಪಾಧ್ಯಕ್ಷನ ಮೇಲೆ ಹಲ್ಲೆ ನಡೆಸಿ ಸಾವಿಗೆ ಕಾರಣನಾದ ಕಾರ್ಯದರ್ಶಿಯನ್ನು ಹುಲ್ಲಹಳ್ಳಿ ಠಾಣೆ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.


ಬಂಧಿತ ಶಿವು

ನಂಜನಗೂಡು ತಾಲೂಕಿನ ಇಬ್ಜಾಲ ಗ್ರಾಮದ ಹಾಲು ಉತ್ಪಾದಕರ ಸಂಘದ ಕಾರ್ಯದರ್ಶಿ ಶಿವು ಬಂಧಿತ ಆರೋಪಿ. ಹಾಲು ಉತ್ಪಾದಕರಿಗೆ ಹಣ ನೀಡದೆ ಸತಾಯಿಸುತ್ತಿದ್ದ ಕಾರ್ಯದರ್ಶಿ ಶಿವುಗೆ ಉಪಾಧ್ಯಕ್ಷ ಮಹದೇವನಾಯಕ ಬುದ್ಧಿವಾದ ಹೇಳಿದ್ದರು. ಹಾಲು ಉತ್ಪಾದಕರ ಸಹಕಾರ ಸಂಘದ ಕಟ್ಟಡದ ಬಳಿ ಶಿವು ತಾಯಿ ರವಿಯಮ್ಮಗೆ ವಿಚಾರ ತಿಳಿಸಿ ಹಣ ಪಾವತಿಸುವಂತೆ ಹೇಳಿದ್ದರು. ಈ ವೇಳೆ ಶಿವು ಹಾಗೂ ಮಹದೇವನಾಯಕ ನಡುವೆ ಮಾತಿನ ಚಕಮಕಿ ನಡೆದಿತ್ತು. ಮಹದೇವನಾಯಕನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದ ಶಿವು ನಾಪತ್ತೆಯಾಗಿದ್ದ. ಇನ್ನು ಹಲ್ಲೆಗೊಳಗಾಗಿ ಚಿಕಿತ್ಸೆ ಫಲಕಾರಿಯಾಗದೆ ಮಹದೇವನಾಯಕ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದರು.

ಪತಿಯ ಸಾವಿಗೆ ಶಿವು ಕಾರಣ ಎಂದು ಮಹದೇವನಾಯಕ ಪತ್ನಿ ಹುಲ್ಲಹಳ್ಳಿ ಠಾಣೆಗೆ ದೂರು ನೀಡಿ ತಾಯಿ ಹಾಗೂ ಮಗನ ವಿರುದ್ಧ ಪ್ರಕರಣ ದಾಖಲಿಸಿದ್ದರು. ಹುಲ್ಲಹಳ್ಳಿ ಪೊಲೀಸರು ನಾಪತ್ತೆಯಾಗಿದ್ದ ಕಾರ್ಯದರ್ಶಿ ಶಿವುನನ್ನು ಬಂಧಿಸಿದ್ದಾರೆ.

ರೆಸ್ಟೋರೆಂಟ್ ಕಿಟಕಿಗೆ ನೇಣು ಬಿಗಿದು ವ್ಯಕ್ತಿ ಆತ್ಮಹತ್ಯೆ

ಹುಣಸೂರು,ಜ24– ರೆಸ್ಟೋರೆಂಟ್ ಕಿಟಕಿಗೆ ನೇಣುಬಿಗಿದುಕೊಂಡು ವ್ಯಕ್ತಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಬಿಳಿಕೆರೆಯಲ್ಲಿ ಸಂಭವಿಸಿದೆ. ಕೆ.ಆರ್.ನಗರ ತಾಲೂಕಿನ ಬಸವಾಪುರ ಗ್ರಾಮದ ನಿವಾಸಿ ಮಹದೇವ್ (50) ಮೃತ ವ್ಯಕ್ತಿ. ಮಹದೇಶ್ವರ ದೇವಸ್ಥಾನದ ರಸ್ತೆಯಲ್ಲಿರುವ ರೆಸ್ಟೋರೆಂಟ್ ಕಿಟಕಿಗೆ ನೇಣು ಬಿಗಿದ ಸ್ಥಿತಿಯಲ್ಲಿ ಮಹದೇವ್ ಮೃತದೇಹ ಪತ್ತೆಯಾಗಿದೆ.

ಇದನ್ನ ಕಂಡ ದೇವಸ್ಥಾನದ ಅರ್ಚಕರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಮೃತ ಮಹದೇವ್ ಗಾರೆ ಕೆಲಸ ಮಾಡಿಕೊಂಡಿದ್ದನೆಂದು ಹೇಳಲಾಗಿದೆ. ಕೆಲವು ವರ್ಷಗಳಿಂದ ತನ್ನ ಮನೆಗೆ ತೆರಳಿಲ್ಲವೆಂದು ತಿಳಿದು ಬಂದಿದೆ. ಮದ್ಯವ್ಯಸನಿಯಾಗಿದ್ದ ಮಹದೇವ್ ನೇಣಿಗೆ ಶರಣಾಗಿದ್ದಾನೆ. ಮಹದೇವ್ ಸಾವಿಗೆ ನಿಖರ ಕಾರಣ ತಿಳಿದು ಬಂದಿಲ್ಲ. ಬಿಳಿಕೆರೆ ಠಾಣೆ ಪೊಲೀಸರು ಪರಿಶೀಲನೆ ನಡೆಸುತ್ತಿದ್ದಾರೆ.

ಮಕ್ಕಳಿಗೆ ಶಿಕ್ಷಣದೊಂದಿಗೆ ಸಂಸ್ಕಾರ ಕಲಿಸಿ



ಎನ್‌ಕೆಎಫ್ ಪಬ್ಲಿಕ್ ಶಾಲೆಯ 15ನೇ ವರ್ಷದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ವಿವಿಧ ಆಟೋಟ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ಬಹುಮಾನ ವಿತರಿಸಲಾಯಿತು.

ತಿ.ನರಸೀಪುರ, ಜ.24– ಸ್ಪರ್ಧಾತ್ಮಕ ಯುಗದಲ್ಲಿ ಉದ್ಯೋಗಕ್ಕೆ ಪ್ರತಿಯೊಬ್ಬರಿಗೂ ಶಿಕ್ಷಣದ ಅಗತ್ಯವಿದ್ದು, ಉದ್ಯೋಗಸ್ಥ ವ್ಯಕ್ತಿಗೆ ಭವಿಷ್ಯದ ಬದುಕಿಗೆ ಸಂಸ್ಕಾರದ ಅಗತ್ಯವೂ ಇರುವುದರಿಂದ ಮಕ್ಕಳಿಗೆ ಶಿಕ್ಷಣದೊಂದಿಗೆ ಸಂಸ್ಕಾರವನ್ನು ಕಲಿಸಬೇಕು ಎಂದು ವಾಟಾಳು ಮಠದ ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ ಶಿಕ್ಷಕರಿಗೆ ಕರೆ ನೀಡಿದರು.

ಪಟ್ಟಣದ ಟಿಎಪಿಸಿಎಂಎಸ್ ಆವರಣದಲ್ಲಿ ನಡೆದ ಎನ್‌ಕೆಎಫ್ ಪಬ್ಲಿಕ್ ಶಾಲೆಯ 15ನೇ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜಾಗತೀಕರಣದ ಪ್ರಭಾವದಿಂದ ಶಿಕ್ಷಣದಲ್ಲೂ ಪೈಪೋಟಿ ಹೆಚ್ಚುತ್ತಿರುವುದರಿಂದ ಕಲಿಕೆಗಷ್ಟೇ ಪ್ರಾಮುಖ್ಯತೆ ಕೊಡುವ ವಿದ್ಯಾರ್ಥಿಗಳು ಮಾನವೀಯ ಮೌಲ್ಯಗಳ ವಿಚಾರಗಳ ಬಗ್ಗೆ ಅಲಕ್ಷ್ಯವನ್ನು ತೋರುತ್ತಿರುವುದರಿಂದ ಸಂಸ್ಕಾರ ಎಂಬುದು ಇಂದಿನ ಮಕ್ಕಳಲ್ಲಿ ಕ್ಷೀಣಿಸುತ್ತಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಕಳೆದ ಒಂದೂವರೆ ದಶಕದಿಂದ ಫೌಂಡೇಶನ್ ಟ್ರಸ್ಟ್‌ನ ಮೂಲಕ ಸಾಮಾಜಿಕ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಗ್ರಾಮೀಣ ಪ್ರದೇಶಗಳ ಮಕ್ಕಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡಲು ಶಿಕ್ಷಣ ಸಂಸ್ಥೆಯನ್ನು ಆರಂಭಿಸಿರುವ ಎನ್.ಕೆ ಫರೀದ್ ಅವರು ಸರ್ವ ಧರ್ಮಗಳನ್ನ ಗೌರವಿಸಿ, ಮಕ್ಕಳಿಗೂ ಮೌಲ್ಯಗಳು ಮತ್ತು ಸಂಸ್ಕಾರವನ್ನು ಕಲಿಸುವ ಕಾಯಕವನ್ನು ಪ್ರಾಮಾಣಿಕವಾಗಿ ಮಾಡುತ್ತಿದ್ದಾರೆ. ಅವರ ವ್ಯಕ್ತಿತ್ವವನ್ನು ಹತ್ತಿರದಿಂದ ನೋಡಿ, ಗೌರವಿಸಿ ಅವರ ಶಾಲೆಯ ಎಲ್ಲಾ ಕಾರ್ಯಕ್ಕೂ ಸಂಪೂರ್ಣ ಸಹಕಾರವನ್ನು ನೀಡುತ್ತಿದ್ದೇನೆ ಎಂದು ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿಯವರು ತಿಳಿಸಿದರು.

ಶಾಲೆಯ ಸಂಸ್ಥಾಪಕ, ಎನ್‌ಕೆಎಫ್ ಫೌಂಡೇಶನ್ ಟ್ರಸ್ಟ್‌ನ ಅಧ್ಯಕ್ಷ ಎನ್.ಕೆ. ಫರೀದ್ ಮಾತನಾಡಿ, ಸರ್ವ ಜನಾಂಗದ ಶಾಂತಿಯ ತೋಟದಂತಿರುವ ನಮ್ಮ ನಾಡಿನಲ್ಲಿ ಮಕ್ಕಳಿಗೆ ಜಾತಿ ಮತ್ತು ಧರ್ಮದ ಹೊರತಾದ ಶಿಕ್ಷಣವನ್ನು ನೀಡಬೇಕು. ವೈಜ್ಞಾನಿಕತೆ ಮತ್ತು ವೈಚಾರಿಕತೆಯ ಬಗ್ಗೆ ಅರಿವು ಮೂಡಬೇಕು. ನೆಲದ ಐತಿಹಾಸಿಕ ಮಹತ್ವವನ್ನು ಮಕ್ಕಳು ತಿಳಿಯಬೇಕು ಎಂಬ ಉದ್ದೇಶದಿಂದಲೇ ನಮ್ಮ ಶಾಲೆಯ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಶೋಭಾ ಮಾತನಾಡಿದರು. ಕಾರ್ಯಕ್ರಮದಲ್ಲಿ ಸಾಹಿತಿ, ಪತ್ರಕರ್ತ ಬನ್ನೂರು ಕೆ.ರಾಜು ಹಾಗೂ ಶರಣರ ಭಜನಕಾರ ಬಿಲಿಗೆರೆಹುಂಡಿ ಮಹದೇವಸ್ವಾಮಿ ಅವರನ್ನು ಸನ್ಮಾನಿಸಲಾಯಿತು. ಶಾಲಾ ಮಡಿಯನ್ನ ಮಂಡಿಸಿದ ಬಳಿಕ ವಾರ್ಷಿಕೋತ್ಸವ ಪೂರ್ವದಲ್ಲಿ ಮಕ್ಕಳಿಗೆ ಹಮ್ಮಿಕೊಂಡಿದ್ದ ವಿವಿಧ ಕ್ರೀಡಾಕೂಟಗಳಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಪುರಸಭೆ ಮುಖ್ಯಾಧಿಕಾರಿ ಬಿ.ಕೆ.ವಸಂತ ಕುಮಾರಿ, ಸದಸ್ಯರಾದ ಟಿ.ಎಂ. ನಂಜುಂಡಸ್ವಾಮಿ, ಎನ್.ಸೋಮಣ್ಣ ಬಾದಾಮಿ ಮಂಜು, ಸಿ.ಪ್ರಕಾಶ್, ಎಸ್.ಕೆ.ಕಿರಣ್, ಎಲ್.ಮಂಜುನಾಥ್, ಗ್ರಾಪಂ ಮಾಜಿ ಸದಸ್ಯ ಹೇಮಂತ ಕುಮಾರ್, ಶ್ರೀಕಂಠ, ರಜತಗೌಡ, ಎನ್ಕೆಫ್ ಶಾಲೆಯ ಅಧ್ಯಕ್ಷ ಅಹಮದ್ ಸಯೀದ್, ಕಾರ್ಯದರ್ಶಿ ಜಹರಾ ಸುಲ್ತಾನ, ಆಫ್ರೀನ್, ಮೊಹಮ್ಮದ್ ಇಮ್ರಾನ್, ಉಸ್ಮಾನೆ ಘನಿ, ಸಹ ಶಿಕ್ಷಕರಾದ ಅಶ್ವಿನಿ, ಗೀತಾ, ರೇಖಾ, ಶಿಲ್ಪಶ್ರೀ, ಶೈಲ, ರಶ್ಮಿ, ಅನಿತಾ, ನೂರ್ ಹಾಜಿರಾ, ಸ್ವರ್ಣಲತಾ, ರಜಿಯಾ ಸುಲ್ತಾನ ಹಾಜರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಗುಂಟೂರು ಖಾರಂ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕಾಟೇರ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಹನುಮಾನ್(ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕಾಟೇರ (ಕ)	4 ಪ್ರದರ್ಶನಗಳು
ಗಾಯಿತ್ರಿ	
ರಂಗಸಮುದ್ರ (ಕ)	4 ಪ್ರದರ್ಶನಗಳು
ರಾಜಕಮಲ್	
ಫೈಟರ್ (ಇ)	4 ಪ್ರದರ್ಶನಗಳು
ಸಂಗಂ	
ಹನುಮಾನ್ (ಕ)	4 ಪ್ರದರ್ಶನಗಳು
ಲಿಡೋ	
ಹನುಮಾನ್ (ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
ಅಯಲನ್ (ತ)	4 ಪ್ರದರ್ಶನಗಳು
ಪ್ರಭಾ	
ಗುಂಟೂರು ಖಾರಂ(ತೆ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
DRC CINEMAS
ದೂ : 4240422/4241800

ಸ್ಕ್ರೀನ್ 1	ಗುಂಟೂರು ಕಾರಂ (ತೆ): ಬೆ.9.05ಕ್ಕೆ, ಮ.3.50ಕ್ಕೆ, ಕಾಟೇರ (ಕ): ಮ.12.15ಕ್ಕೆ, ರಾ.7ಕ್ಕೆ, ರಾ.10.25ಕ್ಕೆ.
ಸ್ಕ್ರೀನ್ 2	ಅಯಲಾನ್ (ತ): ಬೆ.10ಕ್ಕೆ, ಸಂ.4.05ಕ್ಕೆ, ಮೇರಿ ಕ್ರಿಸ್‌ಮಸ್ (ತ): ಮ.1.10ಕ್ಕೆ, ಮೇರಿ ಕ್ರಿಸ್‌ಮಸ್ (ಹಿಂ): ರಾ.7.15ಕ್ಕೆ, ಅಬ್ರಾಹಂ ಓಜ್ಲರ್ (ಮ): ರಾ.10.20ಕ್ಕೆ.
ಸ್ಕ್ರೀನ್ 3	ಕ್ಯಾಪ್ಟನ್ ಮಿಲ್ಲರ್ (ಕ): ಬೆ.9.55ಕ್ಕೆ, ಕ್ಯಾಪ್ಟನ್ ಮಿಲ್ಲರ್ (ತ): ಮ.1ಕ್ಕೆ, ರಾ.10.20ಕ್ಕೆ, ಹನುಮಾನ್ (ತೆ): ಸಂ.4.05ಕ್ಕೆ, ರಾ.7.10ಕ್ಕೆ.
ಸ್ಕ್ರೀನ್ 4	ಕಾಟೇರ (ಕ): ಬೆ.9.35ಕ್ಕೆ, ಗುಂಟೂರು ಕಾರಂ (ತೆ): ಮ.1ಕ್ಕೆ, ರಾ.7.15ಕ್ಕೆ, ರಾ.10.25ಕ್ಕೆ, ಕ್ಯಾಪ್ಟನ್ ಮಿಲ್ಲರ್ (ತ): ಸಂ.4.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಗುಂಟೂರು ಕಾರಂ (ತೆ): ಬೆ.9ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ರಾ.7ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	ಮೇರಿ ಕ್ರಿಸ್‌ಮಸ್ (ಹಿಂ): ಬೆ.8.55ಕ್ಕೆ, ಕಾಟೇರ (ಕ): ಬೆ.11.50ಕ್ಕೆ, ಸಂ.6.50ಕ್ಕೆ, ರಾ.10.30ಕ್ಕೆ, ಅಯಲಾನ್ (ತ): ಮ.3.30ಕ್ಕೆ.
ಸ್ಕ್ರೀನ್ 3	ಕಾಟೇರ (ಕ): ಬೆ.8.50ಕ್ಕೆ, ಕ್ಯಾಪ್ಟನ್ ಮಿಲ್ಲರ್ (ತ): ಮ.12.25ಕ್ಕೆ, ರಾ.10.10ಕ್ಕೆ, ಕ್ಯಾಪ್ಟನ್ ಮಿಲ್ಲರ್ (ಕ): ಮ.3.45ಕ್ಕೆ, ಮೇರಿ ಕ್ರಿಸ್‌ಮಸ್ (ಹಿಂ): ರಾ.7.05ಕ್ಕೆ.
ಸ್ಕ್ರೀನ್ 4	ಸೈಂಧವ್ (ತೆ): ಬೆ.9.10ಕ್ಕೆ, ಮ.3.35ಕ್ಕೆ, ಹನುಮಾನ್ (ತೆ): ಮ.12.10ಕ್ಕೆ, ರಾ.10ಕ್ಕೆ, ಅಯಲಾನ್ (ತ): ಸಂ.6.40ಕ್ಕೆ.

ಮೈಸೂರು ವಿಷನ್ ಸಿನಿಮಾ
MVC
ದೂ : 0821–2973519

ಸ್ಕ್ರೀನ್ 1	ಪಾರ್ಕಿಂಗ್ (ಕ): ಬೆ.10.35ಕ್ಕೆ, ಸಪ್ತ ಸಾಗರದಾಚೆ ಎಲ್ಲೋ 2 (ಕ): ಮ.1.10ಕ್ಕೆ, ಬ್ಯಾಡ್ ಮ್ಯಾನರ್ಸ್ (ಕ): ಸಂ.4ಕ್ಕೆ, ಅರ್ಧಂಬರ್ಧ ಪ್ರೇಮ ಕಥೆ (ಕ): ಸಂ.6.35ಕ್ಕೆ, ಅನ್ನಪೂರ್ಣಿ (ತ): ರಾ.9.15ಕ್ಕೆ.
ಸ್ಕ್ರೀನ್ 2	ಅನಿಮಲ್ (ಹಿಂ): ಬೆ.10ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ಮ.1.45ಕ್ಕೆ.
ಸ್ಕ್ರೀನ್ 3	ಸ್ಯಾಮ್ ಬಹದ್ದೂರ್ (ಹಿಂ): ಬೆ.10.10ಕ್ಕೆ, ಸಂ.4.50ಕ್ಕೆ, ಅನಿಮಲ್ (ಹಿಂ): ಮ.1.05ಕ್ಕೆ, ರಾ.7.45ಕ್ಕೆ.
ಸ್ಕ್ರೀನ್ 4	ಸಪ್ತ ಸಾಗರದಾಚೆ ಎಲ್ಲೋ 2 (ಕ): ಬೆ.10.45ಕ್ಕೆ, ಅನಿಮಲ್ (ಹಿಂ): ಮ.2.40ಕ್ಕೆ, ನೆಪೋಲಿಯನ್ (ಇಂ): ಸಂ.6.25ಕ್ಕೆ, ಸ್ಯಾಮ್ ಬಹದ್ದೂರ್ (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಅಕ್ವಾಮ್ಯಾನ್ ಅಂಡ್ ಲಾಸ್ಟ್ ಕಿಂಗ್‌ಡಮ್ (3ಡಿ)(ಇಂ): ಬೆ.9.35ಕ್ಕೆ, ಮ.3.55ಕ್ಕೆ, ರಾ.10ಕ್ಕೆ, ಡಂಕಿ (ಹಿಂ): ಬೆ.9ಕ್ಕೆ, ಬೆ.11.40ಕ್ಕೆ, ಮ.12.20ಕ್ಕೆ, ಮ.3.40ಕ್ಕೆ, ಸಂ.6.40ಕ್ಕೆ, ರಾ.7ಕ್ಕೆ, ರಾ.10.20ಕ್ಕೆ, ನೆರು (ಮ): ರಾ.10.10ಕ್ಕೆ, ಸಲಾರ್ –1 (ಮ): ಸಂ.6.35ಕ್ಕೆ, ಸಲಾರ್–1 (ಹಿಂ): ಮ.2.50ಕ್ಕೆ, ಸಂ.5.55ಕ್ಕೆ, ರಾ.10ಕ್ಕೆ, ಸಲಾರ್–1 (ಕ): ಬೆ.8.05ಕ್ಕೆ, ಬೆ.11.15ಕ್ಕೆ, ಮ.3ಕ್ಕೆ, ಸಂ.6.25ಕ್ಕೆ, ಸಲಾರ್– 1(ತೆ): ಬೆ.7.10ಕ್ಕೆ, ಬೆ.7.40ಕ್ಕೆ, ಬೆ.8.10ಕ್ಕೆ, ರಾ.10.45ಕ್ಕೆ, ಬೆ.11.45ಕ್ಕೆ, ಮ.12.20ಕ್ಕೆ, ಮ.3.20ಕ್ಕೆ, ಮ.2.20ಕ್ಕೆ, ಸಂ.6.55ಕ್ಕೆ, ರಾ.9.30ಕ್ಕೆ, ರಾ.10.30ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪ ಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಶ್ರೀ ತ್ರಿಪುರ ಸುಂದರಿ ಅಮ್ಮನವರ ಬಂಡಿ ಭಾವಣಿ ಉದ್ಘಾಟನೆ


ಕಳಸಾರೋಹಣದ ಜತೆಗೆ ಲೋಕಾರ್ಪಣೆಗೊಂಡ ತ್ರಿಪುರ ಸುಂದರಿ ಅಮ್ಮನವರ ದೇವಸ್ಥಾನ.

ಮೂಗೂರು, ಜ.24– ಸುಮಾರು 90 ವರ್ಷಗಳ ಇತಿಹಾಸ ಹೊಂದಿರುವ ಶ್ರೀ ತ್ರಿಪುರ ಸುಂದರಿ ಅಮ್ಮನವರ ಬಂಡಿ ಭಾವಣಿಯನ್ನು ಅಯೋಧ್ಯೆ ಬಲರಾಮ ಪ್ರತಿಷ್ಠಾಪನೆ ದಿನದಂದು ಪೂಜ್ಯ ಶ್ರೀಗಳ ಸಾನ್ನಿಧ್ಯದಲ್ಲಿ ಕಳಸಾರೋಹಣದ ಜತೆಗೆ ಲೋಕಾರ್ಪಣೆ ಮಾಡಿದ್ದು ಭಕ್ತರಲ್ಲಿನ ಸಂಭ್ರಮವನ್ನು ಹೆಚ್ಚಿಸಿದೆ.

ಧಾರ್ಮಿಕ ಪಾರಂಪರಿಕ ಐತಿಹಾಸಿಕ ಮಂಟಪವಾದ ಮೂಗೂರಿನ ಶ್ರೀ ತ್ರಿಪುರ ಸುಂದರಿ ಅಮ್ಮನವರ ಬಂಡಿ ಮಂಟಪವು ದುರಸ್ತಿ ಕಾಣದೆ ಶಿಥಿಲಗೊಂಡ ಹಿನ್ನೆಲೆಯಲ್ಲಿ ಮೂಗೂರು ದಾನಿಗಳು ಮಂಟಪಕ್ಕೆ ಕಾಯಕಲ್ಪ ನೀಡಿ ಧಾರ್ಮಿಕ ಪೂಜಾ ವಿಧಾನದೊಂದಿಗೆ ಕಳಸಾರೋಹಣ ಕಾರ್ಯ ನೆರವೇರಿಸಿ ಪರಮ ಪೂಜ್ಯ ಶ್ರೀಗಳ ಸಾನ್ನಿಧ್ಯದಲ್ಲಿ ಲೋಕಾರ್ಪಣೆ ಮಾಡಿದ್ದಾರೆ.

ಇದಕ್ಕೂ ಮುನ್ನ ಆಗ್ರೋದಕ ಸಮೇತ ಯಾಗಶಾಲಾ ಪ್ರವೇಶದೊಂದಿಗೆ ಪೂಜಾ ಕುಣಿತ ವಾದ್ಯ ಗೋಷ್ಠಿಯ ಮೂಲಕ ಹೆಣ್ಣು ಮಕ್ಕಳು ಪಂಚ ಕಳಸ ಹೊತ್ತು ತಂದ ನಂತರ ಮಂಟಪದಲ್ಲಿ ಹೋಮ ವಿಶೇಷಪೂಜೆ ಹವನಗಳು ಸಾಂಗಿಕವಾಗಿ ನಡೆಯಿತು. ನಂತರ ಬಂಡಿ ಮಂಟಪದ ಬಳಿ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಿತು. ಈ ಸಂದರ್ಭದಲ್ಲಿ ಗ್ರಾಮಸ್ಥರು ಹಾಜರಿದ್ದರು.

ಇಂದು ಮೂಗೂರು ಬಂಡಿ ಜಾತ್ರೆ : ಗ್ರಾಮದ ಶ್ರೀ ತ್ರಿಪುರ ಸುಂದರಿ ಅಮ್ಮನವರ ಬಂಡಿ ಜಾತ್ರೆ ಇಂದಿನಿಂದ ಆರಂಭಗೊಂಡಿದ್ದು ಮಧ್ಯಾಹ್ನ 12ಕ್ಕೆ ದೇಗುಲದಿಂದ ಬಂಡಿ ಮಂಟಪಕ್ಕೆ ರುದ್ರಾಕ್ಷಿ ಮಂಟಪದ ಮೂಲಕ ಉತ್ಸವ ಹೊರಟು 1 ಗಂಟೆಗೆ ಮೊದಲ ಬಂಡಿ ಜಾತ್ರೆ ನಡೆಯಲಿದೆ.

ಸುತ್ತೂರು ಜಾತ್ರಾ ರಥಕ್ಕೆ ಭವ್ಯ ಸ್ವಾಗತ



ಸರಗೂರು, ಜ.24– ಶ್ರೀ ಸುತ್ತೂರು ಕ್ಷೇತ್ರದಲ್ಲಿ ಫೆ.6ರಿಂದ 11 ರವರೆಗೆ ನಡೆಯುವ ಸುತ್ತೂರು ಜಾತ್ರಾ ಮಹೋತ್ಸವ ಅಂಗವಾಗಿ ಶ್ರೀ ಸುತ್ತೂರು ಕ್ಷೇತ್ರದಿಂದ ಸರಗೂರು ತಾಲೂಕಿಗೆ ಆಗಮಿಸಿದ ಪ್ರಚಾರ ರಥವನ್ನು ಹಂಚೀಪುರ ಮಠದ ಚನ್ನಬಸವಸ್ವಾಮಿ, ದಡದಹಳ್ಳಿ ಮಠದ ಷಡಕ್ಷರಿಸ್ವಾಮಿ, ಪಡುವಲು ವಿರಕ್ತ ಮಠದ ಮಹದೇವಸ್ವಾಮಿ ಸೇರಿದಂತೆ ವೀರಶೈವ ಲಿಂಗಾಯತ ಸಮಾಜದ ಶರಣ ಶರಣೆಯರು, ಮುಖಂಡರು ಆತ್ಮೀಯವಾಗಿ ಬರಮಾಡಿಕೊಂಡರು ರಥಕ್ಕೆ ಪುಷ್ಪಾರ್ಚನೆ ಮಾಡಿ ದೀಪಬೆಳಗಿಸಿ ಪೂಜೆ ಸಲ್ಲಿಸಿ ಸಿಹಿ ವಿತರಣೆ ಮಾಡಲಾಯಿತು.

ಅಖಿಲ ಭಾರತ ವೀರಶೈವ ಲಿಂಗಾಯತ ತಾಲೂಕು ಅಧ್ಯಕ್ಷ ಡಿ.ಜಿ.ಶಿವರಾಜು, ಸ್ನೇಹಸ್ತೀ ಸಮಾಜದ ಅಧ್ಯಕ್ಷೆ ಸುಧಾ ಮೃತ್ಯುಂಜಯಪ್ಪ, ಟೌನ್‌ಅಧ್ಯಕ್ಷ ಎಸ್.ಎನ್.ಮೋಹನ್‌ಕುಮಾರ್, ಶ್ರೀಕಂಠಸ್ವಾಮಿ, ಮುಖಂಡರಾದ ಹಂಚೀಪುರ ಗಣಪತಿ, ಮಹದೇವಸ್ವಾಮಿ, ಶಿವಪ್ಪಾಜಿ, ಬಸಪ್ಪಣ್ಣ, ಗುರುಸ್ವಾಮಿ, ಸಿದ್ದಪ್ಪ ಬ್ಯಂಗೀಶ್, ಪ್ರತಾಪ್, ದಯಾಶಂಕರ್, ಪಪಂ ಸದಸ್ಯ ವೀರೇಶ್, ಜೆಎಸ್‌ಎಸ್ ಶಾಲಾ ಮುಖ್ಯಶಿಕ್ಷಕರಾದ ಅಂಜುಮನ್‌ಪಾಷ, ಗಂಗಾದರಯ್ಯ, ಮಹದೇವಸ್ವಾಮಿ, ಕೃಷ್ಣಮೂರ್ತಿ, ಜೆಎಸ್‌ಎಸ್ ಶಿಕ್ಷಣ ಸಂಸ್ಥೆ ಶಿಕ್ಷಕವೃಂದ ಇನ್ನಿತರರು ಇದ್ದರು.

ನಂ.ಗೂಡು ದೇವಸ್ಥಾನದ ಬಳಿ 75 ಕೊಠಡಿಗಳ ಅತಿಥಿಗೃಹ ನಿರ್ಮಾಣ ರದ್ದು

ಇರುವ ಕಟ್ಟಡಗಳನ್ನೇ ಉನ್ನತೀಕರಣಗೊಳಿಸಲು ನಿರ್ಧಾರ : ಶಾಸಕ ದರ್ಶನ್‌ಧ್ರುವನಾರಾಯಣ್

ನಂಜನಗೂಡು, ಜ.24– ದೇವಾಲಯದ ಆವರಣದಲ್ಲಿ ಸ್ಥಳಾವಕಾಶದ ಕೊರತೆಯಿರುವುದರಿಂದ 75 ಕೊಠಡಿಗಳ ಅತಿಥಿ ಗೃಹ ಮತ್ತು ವಿಐಪಿ ಕೊಠಡಿಗಳ ನಿರ್ಮಾಣ ಮಾಡಲು ಕಷ್ಟ, ಆದ್ದರಿಂದ ಉದ್ದೇಶಿತ ಕಾಮಗಾರಿಯನ್ನು ರದ್ದುಗೊಳಿಸಿ ಇರುವ ಕಟ್ಟಡಗಳನ್ನೇ ಉನ್ನತೀಕರಣಗೊಳಿಸಿ ಮರುಜೀವ ನೀಡಲಾಗುವುದು ಎಂದು ಶಾಸಕ ದರ್ಶನ್‌ಧ್ರುವನಾರಾಯಣ್ ತಿಳಿಸಿದ್ದಾರೆ.

ಶ್ರೀಕಂಠೇಶ್ವರ ದೇವಾಲಯದ ದಾಸೋಹ ಭವನದಲ್ಲಿ ದೇವಾಲಯದ ಅಭಿವೃದ್ಧಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಆವರಣದಲ್ಲಿ 75 ಕೊಠಡಿಗಳ ಅತಿಥಿಗೃಹ, ವಿಐಪಿ ಅತಿಥಿಗೃಹ, ಡಾರ್ಮಿಟರಿ ಕಟ್ಟಡವನ್ನು ನಿರ್ಮಿಸಲು ಉದ್ದೇಶಿಸಲಾಗಿತ್ತು. ದೇವಾಲಯ 13 ಎಕರೆ 5 ಗುಂಟೆ ವ್ಯಾಪ್ತಿಗೆ ಒಳಪಟ್ಟಿದ್ದು, ಉಳಿದಿರುವುದು 23 ಗುಂಟೆ ಜಾಗ ಮಾತ್ರ. ಆದ್ದರಿಂದ ಈ ಜಾಗದಲ್ಲಿ ಸ್ಥಳಾವಕಾಶದ ಕೊರತೆ ಹಿನ್ನೆಲೆ ಈ ಉದ್ದೇಶಿತ ಕಾಮಗಾರಿಗಳನ್ನು ನಡೆಸುವುದು ಕಷ್ಟ, ಈಗಾಗಲೇ ಗಿರಿಜಾ ಕಲ್ಯಾಣ ಮಂಟಪದಲ್ಲಿ 24 ಕೊಠಡಿಗಳಿದ್ದು ಡಾರ್ಮಿಟರಿಯಲ್ಲಿ 32 ಕೊಠಡಿಗಳ ವ್ಯವಸ್ಥೆಯಿರುತ್ತದೆ. ಈ ಕೊಠಡಿಗಳ ನಿರ್ವಹಣೆ ಮಾಡದೆ ಭಕ್ತರು ಉಳಿದುಕೊಳ್ಳದೆ ಖಾಲಿ ಬಿದ್ದಿವೆ. ಜೊತೆಗೆ ವಿಐಪಿ ಅತಿಥಿ ಗೃಹವೂ ಕೂಡ ಉಪಯೋಗವಾಗದೆ ಉಳಿದಿದೆ. ಆದ್ದರಿಂದ ಈ ಹಳೆಯ ಕಟ್ಟಡಗಳಿಗೆ ಹೈಟೆಕ್ ಸ್ಪರ್ಶ ನೀಡಿ ಉನ್ನತೀಕರಿಸುವ ಮೂಲಕ ಕಟ್ಟಡಗಳಿಗೆ ಮರುಜೀವ ನೀಡಿ ಸಾರ್ವಜನಿಕರಿಗೆ ಉಪಯೋಗವಾಗುವಂತೆ ಕ್ರಮಕೈಗೊಳ್ಳಲಾಗಿದೆ ಎಂದರು.

ಖಾಲಿ ಹುದ್ದೆ ಭರ್ತಿ ಮಾಡಿ: ದೇವಾಲಯದಲ್ಲಿ 58 ಹುದ್ದೆಗಳು ಖಾಲಿ ಹುದ್ದೆಗಳಿದ್ದು ಅವುಗಳನ್ನು ಭರ್ತಿ ಮಾಡಲು ಕ್ರಮವಹಿಸುವಂತೆ ದೇವಾಲಯದ ಆಡಳಿತಾಧಿಕಾರಿ ಜಗದೀಶ್ ಅವರಿಗೆ ಸೂಚನೆ ನೀಡಿದರಲ್ಲದೆ. ಕೆಲಸ ಮಾಡುತ್ತಿರುವ ಕೆಲವು ನೌಕರರು ಕೆಲಸ ನಿರ್ವಹಿಸದೆ ಬರಿ ಸಹಿ ಮಾಡಿ ಸಂಬಳ ಪಡೆಯುತ್ತಿರುವ ಬಗ್ಗೆ ದೂರು ಕೇಳಿ ಬಂದಿದೆ ಆದ್ದರಿಂದ ನಾಳೆಯೇ ಎಲ್ಲಾ ನೌಕರರ ಸಭೆ ಕರೆದು ದೇವಾಲಯದ ನೌಕರರು ಯಾವ ಕೆಲಸಕ್ಕೆ ನಿಯೋಜನೆಗೊಂಡಿರುತ್ತಾರೋ ಆ ಕೆಲಸವನ್ನು ಸಮರ್ಪಕವಾಗಿ, ಜವಾಬ್ದಾರಿಯಿಂದ ನಿರ್ವಹಣೆ ಮಾಡುವಂತೆ ಸೂಚನೆ ನೀಡುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿರು.

ಸ್ವಚ್ಛತೆ ಕಾಪಾಡಿ: ದೇವಾಲಯದ ಆವರಣದಲ್ಲಿ ಹೆಚ್ಚುವರಿ ಡಸ್ಟ್‌ಬಿನ್ ಅಳವಡಿಸಿ ಸ್ವಚ್ಛತೆ ಕಾಪಾಡಲು ಮುಂದಾಗಬೇಕು. ಜೊತೆಗೆ ಯುಜಿಡಿ ವ್ಯವಸ್ಥೆ ಸರಿಪಡಿಸಿ ಸ್ವಚ್ಛತೆ ಕಾಪಾಡಿಕೊಳ್ಳುವುದರ ಜೊತೆಗೆ ನದಿಗೆ ಅಶುದ್ಧ ನೀರು ಸೇರ್ಪಡೆಗೊಳ್ಳದಂತೆ ಹೊಸದಾಗಿ ಶುದ್ಧೀಕರಣ ಘಟಕ ನಿರ್ಮಿಸಲು ಯೋಜನೆ ಸಿದ್ಧಪಡಿಸುವಂತೆ ನಗರಸಭೆ, ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಭಕ್ತಾದಿಗಳಿಗೆ ಮೂಲ ಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಕಪಿಲಾ ನದಿಯ ಸೋಪಾನಕಟ್ಟೆ ಅಭಿವೃದ್ಧಿಗೆ ಈಗಾಗಲೇ ಯೋಜನೆ ಸಿದ್ಧಪಡಿಸುವಂತೆ ಸೂಚಿಸಲಾಗಿದೆ ಮತ್ತು ಸೋಪಾನಕಟ್ಟೆಯ ಬಳಿ ನೀರು ಹರಿದು ಹೋಗುವಂತೆ ಮಾಡಿ ಸ್ವಚ್ಛತೆ ಕಾಪಾಡಿಕೊಳ್ಳಲು ಸುತ್ತೂರು ಮಠದ ಬಳಿ ನಿರ್ಮಿಸಿರುವಂತೆ ಚೆಕ್‌ಡ್ಯಾಂ ನಿರ್ಮಿಸಲಾಗುವುದು ಮತ್ತು ಹೈಟೆಕ್ ಶೌಚಾಲಯ ನಿರ್ಮಿಸಿ, ಬಟ್ಟೆ ಬದಲಿಸುವ ಜಾಗವನ್ನು ನಿರ್ಮಿಸಲಾಗುವುದು.


ದಾಸೋಹ ಭವನದಲ್ಲಿ ದೇವಾಲಯದ ಅಭಿವೃದ್ಧಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡುತ್ತಿರುವ ಶಾಸಕ ದರ್ಶನ್ ಧ್ರುವನಾರಾಯಣ್.

ಸಭೆಯಲ್ಲಿ ದೇವಾಲಯದ ಇಓ ಜಗದೀಶ್ ಕುಮಾರ್, ಉಪ ಆಡಳಿತಾಧಿಕಾರಿ ಸತೀಶ್, ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ನಗರಸಭಾ ಸದಸ್ಯರಾದ ಯೋಗೀಶ್, ಸೆಸ್ಕಾಂ ವಿಭಾಗೀಯ ಕಾರ್ಯ ನಿರ್ವಾಹಕ ಇಂಜಿನಿಯರ್ ಆನಂದ್, ಎಇಇ ಕಿರಣ್‌ಕುಮಾರ್, ಕೆಆರ್‌ಐಡಿಎಲ್‌ನ ಕಾರ್ಯನಿರ್ವಾಹಕ ಇಂಜಿನಿಯರ್ ತಿಪ್ಪಾರೆಡ್ಡಿ, ಕಂದಾಯಾಧಿಕಾರಿ ರಾಜು ಸೇರಿದಂತೆ ಹಲವಾರು ಪ್ರಮುಖರು ಇದ್ದರು.

ಮೈಸೂರು ಫೆಸ್ಟ್‌ಗೆ ಮಾನಸಗಂಗೋತ್ರಿ ಸಜ್ಜು; ತಳಿರು ತೋರಣಗಳಿಂದ ಶೃಂಗಾರ





ಮೈಸೂರು ಫೆಸ್ಟ್ ಹಿನ್ನೆಲೆಯಲ್ಲಿ ತಳಿರು ತೋರಣಗಳಿಂದ ಶೃಂಗಾರಗೊಂಡ ಮೈಸೂರಿನ ಮಾನಸಗಂಗೋತ್ರಿ ಆವರಣ. ಮತ್ತೊಂದು ಚಿತ್ರದಲ್ಲಿ ಫುಡ್ ಸ್ಟಾಲ್‌ಗಳನ್ನು ಸ್ಥಾಪಿಸಿರುವುದು. ಕೊನೆಯ ಚಿತ್ರದಲ್ಲಿ ಪ್ರವಾಸೋದ್ಯಮ ಇಲಾಖೆ ಜಂಟಿ ನಿರ್ದೇಶಕಿ ಎಂ.ಕೆ.ಸವಿತಾ ಹಾಗೂ ಅಧಿಕಾರಿಗಳು ಸಿದ್ಧತೆಗಳನ್ನು ಪರಿಶೀಲಿಸುತ್ತಿರುವುದನ್ನು ಕಾಣಬಹುದು.

ಮೈಸೂರು,ಜ.24(ಪಿಎಂ)– ಸಂಗೀತ, ಹಾಸ್ಯ ಸೇರಿದಂತೆ ಭರಪೂರ ಮನರಂಜನೆ ನೀಡುವ 'ಮೈಸೂರು ಫೆಸ್ಟ್'ಗೆ ಮೈಸೂರಿನ ಮಾನಸ ಗಂಗೋತ್ರಿ ಆವರಣ ಸಜ್ಜಾಗುತ್ತಿದ್ದು, ಈಗಾಗಲೇ ಕಾರ್ಯಕ್ರಮ ನಡೆಯುವ ಸ್ಥಳಗಳು ತಳಿರು ತೋರಣಗಳಿಂದ ಶೃಂಗಾರಗೊಂಡಿವೆ.

ಇಲ್ಲಿನ ಬಯಲು ರಂಗಮಂದಿರ ಹಾಗೂ ಕ್ಲಾಕ್ ಟವರ್ ಆವರಣ ಸೇರಿದಂತೆ ವಿವಿಧ ಸ್ಥಳಗಳಲ್ಲಿ ಮಳಿಗೆಗಳ ನಿರ್ಮಾಣ, ತಾತ್ಕಾಲಿಕ ಶೌಚಾಲಯದ ವ್ಯವಸ್ಥೆಯನ್ನು ಮಾಡಲಾಗಿದ್ದು, ಅಂತಿಮ ಹಂತದ ವ್ಯವಸ್ಥೆ ಭರದಿಂದ ಸಾಗಿದೆ. ಪ್ರವಾಸೋದ್ಯಮ ಇಲಾಖೆ, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಜಂಟಿ ಆಶ್ರಯದಲ್ಲಿ ಜ.26ರಿಂದ 28ರವರೆಗೆ ಈ ಮೈಸೂರು ಉತ್ಸವ ನಡೆಯಲಿದೆ. ಬುಧವಾರ ಸ್ಥಳಕ್ಕೆ ಭೇಟಿ ನೀಡಿ ಎಲ್ಲಾ ವ್ಯವಸ್ಥೆಗಳನ್ನು ಪರಿಶೀಲಿಸಿದ ಪ್ರವಾಸೋದ್ಯಮ ಇಲಾಖೆ ಜಂಟಿ ನಿರ್ದೇಶಕಿ ಎಂ.ಕೆ.ಸವಿತಾ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿ, ಕ್ಲಾಕ್ ಟವರ್ ಸಮೀಪದ ಆಟದ ಮೈದಾನದಲ್ಲಿ ಸುಮಾರು 40 ಫುಡ್ ಸ್ಟಾಲ್ ಸ್ಥಾಪಿಸಲಾಗಿದೆ. ಮೈಸೂರು ಸ್ಥಳೀಯ ಉತ್ಪನ್ನಗಳ ರಿಯಾಯಿತಿ ಮಾರಾಟ ಮತ್ತು ಪ್ರದರ್ಶನಕ್ಕಾಗಿ 40 ಮಳಿಗೆಗಳನ್ನು ನಿರ್ಮಾಣ ಮಾಡಲಾಗಿದೆ (ಫ್ಲೀ ಮಾರ್ಕೆಟ್). ಚಿತ್ರಸಂಜೆಗಾಗಿ 100 ಮಳಿಗೆಗಳನ್ನು ನಿರ್ಮಿಸಲಾಗಿದೆ. ಬ್ಯಾಕ್‌ಡ್ರಾಪ್ ಹಾಗೂ ಲೈಟಿಂಗ್ಸ್ ವ್ಯವಸ್ಥೆಗಳನ್ನು ನಾಳೆ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು.

ಕ್ಲಾಕ್ ಟವರ್ ಮುಂಭಾಗ ಬೆಳಗ್ಗೆ 11ರಿಂದ ಸಂಜೆ 5ರವರೆಗೆ ವಿವಿಧ ಕಲಾತಂಡಗಳಿಂದ ಕಾರ್ಯಕ್ರಮ ಇರಲಿದ್ದು, ಬಯಲು ರಂಗಮಂದಿರದಲ್ಲಿ ಜನವರಿ 27 ಮತ್ತು 28ರ ಸಂಜೆ 'ಸಾಂಸ್ಕೃತಿಕ ವೈಭವ' ಶೀರ್ಷಿಕೆಯಡಿ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಕಾರ್ಯಕ್ರಮಗಳು ನಡೆಯುವ ಪ್ರತಿಯೊಂದು ಸ್ಥಳಗಳಲ್ಲಿ ಕಸದಬುಟ್ಟಿಗಳನ್ನು ಇಟ್ಟು, ಸ್ವಚ್ಛತೆಗೆ ಹೆಚ್ಚಿನ ಕಾಳಜಿ ವಹಿಸಲಾಗುತ್ತಿದೆ. ಬಹುತೇಕ ಎಲ್ಲಾ ಸಿದ್ಧತೆಗಳು ಪೂರ್ಣಗೊಂಡಿವೆ. ಸಾರ್ವಜನಿಕರು ಮೈಸೂರು ಫೆಸ್ಟ್‌ಗೆ ಉಚಿತವಾಗಿ ಭೇಟಿ ನೀಡಬಹುದು. ಉತ್ಪನ್ನಗಳು ರಿಯಾಯಿತಿ ದರದಲ್ಲಿ ದೊರೆಯಲಿವೆ ಎಂದು ಅವರು ಮಾಹಿತಿ ನೀಡಿದರು.

ಚೀನಾದಿಂದ ಬೆಂಗಳೂರಿನತ್ತ ಹೊರಟ ಚಾಲಕರಹಿತ ಮೆಟ್ರೋ

ಬೆಂಗಳೂರು, ಜ.24– ಚಾಲಕ ರಹಿತ ಮೆಟ್ರೋ ರೈಲು ಬೆಂಗಳೂರಿನಲ್ಲಿ ಆರಂಭಗೊಳ್ಳುತ್ತಿದೆ. ಇದರೊಂದಿಗೆ ನಮ್ಮ ಮೆಟ್ರೋ ಹಳದಿ ಕಾರಿಡಾರ್ ಹೊಸ ಇತಿಹಾಸ ರಚಿಸಲು ಸಜ್ಜಾಗಿದೆ. ಬೆಂಗಳೂರಿನ ಎಲೆಕ್ಟ್ರಾನಿಕ್ಸ್ ಸಿಟಿಗೆ ಮೊದಲ ಚಾಲಕ ರಹಿತ ರೈಲು ಚೀನಾದಿಂದ ಹೊರಟಿದೆ. ಬೆಂಗಳೂರು ಮೆಟ್ರೋ ರೈಲು ಕಾರ್ಪೊರೇಷನ್ ಲಿಮಿಟೆಡ್ ಅಧಿಕಾರಿಗಳು ಎಲೆಕ್ಟ್ರಾನಿಕ್ಸ್ ಸಿಟಿ ಮೆಟ್ರೋಗೆ ಮೊದಲ 6 ಬೋಗಿಗಳ ರೈಲನ್ನು ಜ.20ರಂದು ಹಡಗಿಗೆ ಲೋಡ್ ಮಾಡಲಾಗಿದ್ದು, ಹಡಗು ಮೆಟ್ರೋ ರೈಲು ಹೊತ್ತು ಸದ್ಯ ಚೆನ್ನೈನತ್ತ ತೆರಳುತ್ತಿದೆ.

ಇದು 2024ರ ಮಧ್ಯ ಅಥವಾ ಫೆಬ್ರವರಿ ಅಂತ್ಯದ ವೇಳೆಗೆ ಚೆನ್ನೈ ಬಂದರಿಗೆ ಆಗಮಿಸುವ ನಿರೀಕ್ಷೆಯಿದೆ. ನಂತರ ಚೆನ್ನೈನಿಂದ ರಸ್ತೆ ಮೂಲಕ ಬೆಂಗಳೂರಿನ ಹೆಬ್ಬಗೋಡಿ ಡಿಪೋಗೆ ಸಾಗಿಸಲಾಗುತ್ತದೆ. ಈ ಚಾಲಕ ರಹಿತ ಮೆಟ್ರೋ ರೈಲಿಗೆ ಅತ್ಯಾಧುನಿಕ ತಂತ್ರಜ್ಞಾನವನ್ನು ಜೋಡಣೆ ಮಾಡಿದ ಬಳಿಕ ಎಲೆಕ್ಟ್ರಾನಿಕ್ಸ್ ಸಿಟಿ–ಆರ್‌ವಿ ರಸ್ತೆಗೆ ಸಂಪರ್ಕಿಸುವ 19 ಕಿ.ಮೀ. ಹಳದಿ ಮಾರ್ಗದಲ್ಲಿ ಓಡಾಡಲಿದ್ದು, ಸೆಪ್ಟೆಂಬರ್ ವೇಳೆಗೆ ಕಾರ್ಯನಿರ್ವಹಿಸುವ ನಿರೀಕ್ಷೆಯಿದೆ. ಬಿಎಂಆರ್‌ಸಿಎಲ್ ಅಧಿಕಾರಿಗಳ ತಂಡವು ಫ್ಯಾಕ್ಟರಿ ಪರೀಕ್ಷೆಗಳಿಗಾಗಿ ಚೀನಾಕ್ಕೆ ಭೇಟಿ ನೀಡಿತ್ತು. ಇದು ಚೀನಾದ ಕಸ್ಟಮ್ಸ್ ಕಳುಹಿಸುವ ಮೊದಲು ತಪಾಸಣೆ ನಡೆಸಿತು. ಒಮ್ಮೆ ಬೆಂಗಳೂರಿಗೆ ತಲುಪಿದರೆ ಸುಮಾರು 3 ತಿಂಗಳ ಕಾಲ ಪ್ರಯೋಗಗಳನ್ನು ನಡೆಸಲಾಗುತ್ತದೆ. ಡಿಟಿಜಿ (ದೂರ–ಹೋಗಲು) ಸಿಗ್ನಲಿಂಗ್ ವ್ಯವಸ್ಥೆಯೊಂದಿಗೆ ಮೆಟ್ರೋ ಕಾರಿಡಾರ್‌ಗಳಿಗೆ ಇನ್ನೂ ಒಂದು ರೈಲು ಚೀನಾದಿಂದ ಬರಲಿದೆ.

ರೈಲಿನ ವಿಶೇಷತೆ: ಚಾಲಕ ಇರದಿದ್ದರೂ ಈಗಾಗಲೇ ಅಳವಡಿಸಲಾದ ಪ್ರೋಗ್ರಾಂ ಆಧಾರದ ಮೇಲೆ ರೈಲು ಸಂಚರಿಸಲಿದೆ. ರೈಲಿನ ಸಂಚಾರವನ್ನು ಕಂಟ್ರೋಲ್ ರೂಮ್‌ನಲ್ಲಿ ನಿಗಾ ವಹಿಸಲಾಗುತ್ತದೆ. ಚಾಲಕ ಇಲ್ಲದೇ ಈ ಮೆಟ್ರೋ ಗಂಟೆಗೆ 80 ಕಿ.ಮೀ. ವೇಗದಲ್ಲಿ ಚಲಿಸಲಿದೆ. 25 ಕೆವಿ ಸಾಮರ್ಥ್ಯದ ವಿದ್ಯುತ್ ಸಹಾಯದಿಂದ ಈ ರೈಲು ಸಂಚರಿಸುತ್ತದೆ.

STAR OF MYSORE

SPECIAL ISSUE

Star of Mysore is completing 46 years of service on 16th February 2024 and entering 47th year of publication. As in the past, this year too we will be publishing a Special Issue.

We request our advertisers and patrons to release their advertisements before 12th February to facilitate printing as per schedule.

HEAD OFFICE
0821-2496520 (5-LINES)
Ad Dept. - 0821-2496522 / 23
Email : ad@starofmysore.com

Maria G. Fernandes
Advt. Manager: 94485-25060
Joy Anthony Dove
Sr. Executive-Ad Sales
89516-68960
Prema
Sr. Executive Advertising
98805-49879

K.R. Circle Office : 0821-2431774
D.D. Urs Road Office : 0821-2428695
Kodagu Office : 97314-69871
Mandya Office : 87629-60325
Chamarajanagar : 92422-65657
Nanjangud :
98805-09200 / 99016-02226
T.N. Pura : 94483-05750
Hassan : 94484-01175
Bengaluru : 98440-46761